2009 - 2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬ || ಬೆಂಗಳೂರು, ಗುರುವಾರ, ಅಕ್ಟೋಬರ್ ೨೦, ೨೦೧೧ (ಆಶ್ವಯುಜ ೨೮, ಶಕ ವರ್ಷ ೧೯೩೩) || ಸಂಚಿಕೆ ೪೧

ವಿಷಯಸೂಚಿ

ವಿಶೇಷ ರಾಜ್ಯಪತ್ರಗಳು

ದಿನಾಂಕ 20-10-2011

ವಿಶೇಷ ರಾಜ್ಯಪತ್ರ ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ ಮತ್ತು ದಿನಾಂಕ
809	08-09-2011	ಸಂಖ್ಯೆ: ಲೋಇ:98:ಇಎಪಿ:2011, ಬೆಂಗಳೂರು, ದಿನಾಂಕ: 8.9.2011
811	09-09-2011	ಸಂಖ್ಯೆ : ಸಿಐ 380 ಎಸ್‌ಪಿಕ್ಯೂ 2010, ಬೆಂಗಳೂರು, ದಿನಾಂಕ : 9ನೇ ಸೆಪ್ಟೆಂಬರ್, 2011
812	12-09-2011	No. FD 29 CSL 2010, Bangalore, dated:12-09-2011
813	13-09-2011	ಸಂಖ್ಯೆ : ಸಿಐ 225 ಎಸ್‌ಪಿಕ್ಯೂ 2010, ಬೆಂಗಳೂರು, ದಿನಾಂಕ : 12ನೇ ಸೆಪ್ಟೆಂಬರ್, 2011
814	13-09-2011	ಸಂಖ್ಯೆ: ಸಿಆಸುಇ 09 ಚುವಿಸ 2011, ಬೆಂಗಳೂರು, ದಿನಾಂಕ: 13ನೇ ಸೆಪ್ಟೆಂಬರ್, 2011
815	13-09-2011	ಸಂಖ್ಯೆ: ಲೋಇ:131:ಇಎಪಿ:2011, ಬೆಂಗಳೂರು, ದಿನಾಂಕ: 13.9.2011
816	13-09-2011	ಸಂಖ್ಯೆ: ಲೋಇ : 104 : ಇಎಪಿ : 2011, ಬೆಂಗಳೂರು, ದಿನಾಂಕ: 13.9.2011
817	14-09-2011	ಸಂಖ್ಯೆ: ಕಾಇ 54 ಎಲ್‌ಎಂಡಬ್ಲ್ಯೂ 2010, ಬೆಂಗಳೂರು, ದಿನಾಂಕ: 14-09-2011
818	14-09-2011	ಸಂಖ್ಯೆ: ಕಾಇ 66 ಎಲ್‌ಎಂಡಬ್ಲ್ಯೂ 2010, ಬೆಂಗಳೂರು, ದಿನಾಂಕ: 14-09-2011
819	14-09-2011	ಸಂಖ್ಯೆ: ಕಾಇ 68 ಎಲ್‌ಎಂಡಬ್ಲ್ಯೂ 2010, ಬೆಂಗಳೂರು, ದಿನಾಂಕ: 14-09-2011
820	14-09-2011	ಸಂಖ್ಯೆ: ಕಾಇ 72 ಎಲ್‌ಎಂಡಬ್ಲ್ಯೂ 2010, ಬೆಂಗಳೂರು, ದಿನಾಂಕ: 14-09-2011
821	14-09-2011	ಸಂಖ್ಯೆ: ಕಾಇ 11 ಎಲ್‌ಎಂಡಬ್ಲ್ಯೂ 2009, ಬೆಂಗಳೂರು, ದಿನಾಂಕ: 14-09-2011
822	14-09-2011	ಸಂಖ್ಯೆ: ಕಾಇ 94 ಎಲ್‌ಎಂಡಬ್ಲ್ಯೂ 2009, ಬೆಂಗಳೂರು, ದಿನಾಂಕ: 14-09-2011
823	14-09-2011	ಸಂಖ್ಯೆ: ಕಾಇ 65 ಎಲ್‌ಎಂಡಬ್ಲ್ಯೂ 2010, ಬೆಂಗಳೂರು, ದಿನಾಂಕ: 14-09-2011
824	14-09-2011	ಸಂಖ್ಯೆ: ಸಾರಿಇ 18 ಸಾಇನಿ 2011, ಬೆಂಗಳೂರು, ದಿನಾಂಕ: 14-09-2011
826	15-09-2011	ಸಂಖ್ಯೆ: ಸಿಆಸುಇ 26 ಸೇಇವಿ 2011, ಬೆಂಗಳೂರು, ದಿನಾಂಕ: 26.7.2011
827	16-09-2011	ಸಂಖ್ಯೆ: ಗ್ರಾಅಪ: 213 :ಉಖಾಯೋ 2009, ಬೆಂಗಳೂರು, ದಿನಾಂಕ: 15-09-2011
828	16-09-2011	No. ED 60 TPU 2010, Bangalore, dated 16th September, 2011
830	17-09-2011	No. Sa Ri E 196 Sa E Se 2011, Bangalore, Date: 17-9-2011
831	17-09-2011	ಸಂಖ್ಯೆ : ಸಿಐ 339 ಎಸ್‌ಪಿಕ್ಯೂ 2011, ಬೆಂಗಳೂರು, ದಿನಾಂಕ : 15ನೇ ಸೆಪ್ಟೆಂಬರ್, 2011

ವಿಶೇಷ ರಾಜ್ಯಪತ್ರ ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ ಮತ್ತು ದಿನಾಂಕ
832	17-09-2011	ಸಂಖ್ಯೆ : ಸಿಐ 352 ಎಸ್‌ಪಿಕ್ಯೂ 2011, ಬೆಂಗಳೂರು, ದಿನಾಂಕ : 15ನೇ ಸೆಪ್ಟೆಂಬರ್, 2011
833	17-09-2011	ಸಂಖ್ಯೆ : ಸಿಐ 478 ಎಸ್‌ಪಿಕ್ಯೂ 2010, ಬೆಂಗಳೂರು, ದಿನಾಂಕ : 16ನೇ ಸೆಪ್ಟೆಂಬರ್, 2011
834	17-09-2011	ಸಂಖ್ಯೆ: ಸಿಆಸುಇ 53 ಸೇವನೆ 2008, ಬೆಂಗಳೂರು, ದಿನಾಂಕ: 16.09.2011
835	17-09-2011	ಸಂಖ್ಯೆ : ಸಿಐ 324 ಎಸ್‌ಪಿಕ್ಯೂ 2011, ಬೆಂಗಳೂರು, ದಿನಾಂಕ : 17ನೇ ಸೆಪ್ಟೆಂಬರ್, 2011
836	19-09-2011	ಸಂಖ್ಯೆ : ಸಿಐ 340 ಎಸ್‌ಪಿಕ್ಯೂ 2011, ಬೆಂಗಳೂರು, ದಿನಾಂಕ : 19ನೇ ಸೆಪ್ಟೆಂಬರ್, 2011
837	19-09-2011	ಸಂಖ್ಯೆ : ಸಿಐ 340 ಎಸ್‌ಪಿಕ್ಯೂ 2011, ಬೆಂಗಳೂರು, ದಿನಾಂಕ : 19ನೇ ಸೆಪ್ಟೆಂಬರ್, 2011
838	20-09-2011	No. BMRCL/MD/PS/2011-12/111, Bangalore, Dated: 20.09.2011
839	21-09-2011	No. 3/4/ID/2011/SDR(KT), Dated: 20th September, 2011
840	21-09-2011	No. FD 12 CEX 2011, Bangalore, dated: 21-09-2011
843	21-09-2011	ಸಂಖ್ಯೆ: CVC-19/2010-11, ಬೆಂಗಳೂರು, ದಿನಾಂಕ: 21–09–2011
845	21-09-2011	No. DPAR 26 SCR 2011, Bangalore, dated: 21.09.2011
846	21-09-2011	ಸಂಖ್ಯೆ: ಕೃಮಾಇ:02:ಚುನಾವಣೆ:2011, ಬೆಂಗಳೂರು, ದಿನಾಂಕ: 20.09.2011
847	21-09-2011	ಸಂಖ್ಯೆ: CVC-19/2010-11, ಬೆಂಗಳೂರು, ದಿನಾಂಕ: 21–09–2011
848	22-09-2011	No. DPAR 63 SCR 2011, Bangalore, dated: 21.09.2011
849	23-09-2011	No. Sa Ri E 169 Sa E Pa 2008, Bangalore, Date: 23-9-2011
850	26-09-2011	No. DPAR 171 SLU 2011, Bangalore, Dated: 26th September, 2011
853	28-09-2011	No. SAMVYASHAE 8 SHASANA 2010, Bangalore, Dated: 28.09.2011

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು.

http//www.gazette.kar.nic.in

೨೦೧೧-೨೦೧೨ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪರಿಷ್ಕೃತ ಚಂದಾ ದರ

ಕ್ರಮ ಸಂಖ್ಯೆ	ರಾಜ್ಯಪತ್ರದ ಭಾಗಗಳು	ಪ್ರತಿ ಒಂದಕ್ಕೆ ರೂ. ಪೈ.	ವಾರ್ಷಿಕ ಚಂದಾ ದರ ರೂ. ಪೈ.
1.	ಭಾಗ – 1	21-00	831-00
2.	ಭಾಗ – 2	5-00	182-00
3.	ಭಾಗ – 3	10-00	411-00
4.	ಭಾಗ – 4	3-00	109-00
5.	ಭಾಗ – 4ಎ	11-00	435-00
6.	ಭಾಗ – 5	22-00	879-00
7.	ಭಾಗ – 6 (ಬೆಂಗಳೂರು)........	9-00	363-00
8.	ಭಾಗ – 6ಎ (ಮೈಸೂರು)........	25-00	964-00
9.	ಭಾಗ – 6ಬಿ (ಧಾರವಾಡ)........	45-00	1763-00
10.	ಭಾಗ – 6ಸಿ (ಗುಲ್ಬರ್ಗ)........	29-00	1162-00
11.	ಸಂಪೂರ್ಣ ಕರ್ನಾಟಕ ರಾಜ್ಯಪತ್ರ ಕ್ರ.ಸ. 1 ರಿಂದ 7 .... (ಭಾಗ-1 ರಿಂದ 6) ವಿಶೇಷ ರಾಜ್ಯಪತ್ರವನ್ನು ಹೊರತುಪಡಿಸಿ	81-00	3210-00
12.	ವಿಶೇಷ ರಾಜ್ಯಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆಯಿರಿ ಮತ್ತು ಸರ್ಕಾರಿ ಪುಸ್ತಕ ಮಳಿಗೆಗಳಲ್ಲಿ ಮಾರಾಟಕ್ಕೆ ಲಭ್ಯವಿರುತ್ತವೆ.		

೨೦೧೧-೨೦೧೨ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪ್ರಕಟಣೆ ದರ

ಕ್ರಮ ಸಂಖ್ಯೆ	ಪ್ರಕಟಣೆ ದರಗಳು		ಮೊತ್ತ ರೂ. ಪೈ.
1.	ಸ್ಥಳೀಯ / ಸ್ಥಾನಿಕ ಸಂಸ್ಥೆ ಮತ್ತು ಸರ್ಕಾರದ ಇಲಾಖೆ ಎ-4 ಅಳತೆಯ ಪ್ರತಿ ಪುಟಕ್ಕೆ	...	500-00
2.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	11-00
3.	ಖಾಸಗಿ ಸಂಸ್ಥೆ ಮತ್ತು ವಾಣಿಜ್ಯಕ್ಕೆ ಸಂಬಂಧಿಸಿದಂತೆ (ಕೆಪಿಟಿಸಿಎಲ್, ಕೆಎಸ್‌ಆರ್‌ಟಿಸಿ ತರಹ ಇತ್ಯಾದಿ ಪ್ರತಿ ಪುಟಕ್ಕೆ)	...	750-00
4.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	16-50
5.	ಅರ್ಧ ಪುಟಕ್ಕೆ ಅಥವಾ ಕಾಲು ಪುಟಕ್ಕೆ ಬರುವ ವಿಷಯ	...	½ ಅಥವಾ ¼ ಪುಟಕ್ಕೆ ದರ ನಿಗಧಿ
6.	ಕಾಲು ಪುಟಕ್ಕಿಂತ ಕಡಿಮೆ ಇರುವ ವಿಷಯಕ್ಕೆ	...	ಕ್ರಮ ಸಂಖ್ಯೆ 1 ಮತ್ತು 3 ಕ್ರಮ ಸಂಖ್ಯೆ 2 ಮತ್ತು 4ರಲ್ಲಿ ನಮೂದಿಸಿರುವಂತೆ ಪ್ರತಿ ಸಾಲಿಗೆ ದರ ನಿಗದಿಪಡಿಸಿರುವುದು
7.	ಹೆಚ್ಚಾಗಿ ಬೇಕಾಗಿರುವ ಪ್ರತಿ ಹಾಳೆಯ ಬೆಲೆ (ಮುದ್ರಿಸಿರುವ ಹಾಳೆಯ ಅಳತೆಯನ್ನು ನಿರೂಪಿಸಿ)	...	1-00

ಸೂಚನೆ :- 1. ಚಂದಾ ಹಣದ / ಪ್ರಕಟಣಾ ವೆಚ್ಚದ ಮೊತ್ತವನ್ನು **"0058 ಲೇಖನ ಸಾಮಗ್ರಿ ಮತ್ತು ಮುದ್ರಣ (1) ರಾಜ್ಯಪತ್ರ ಮತ್ತು ಇತರ ಪ್ರಕಟಣಾ ವೆಚ್ಚಗಳು"** ಖಜಾನೆಗೆ ಸಲ್ಲಿಸಿ, ಮೂಲ ಚಲನನ್ನು ಮುಂದಿನ ಕ್ರಮಕ್ಕಾಗಿ ಈ ಕಛೇರಿಗೆ ಕಳುಹಿಸಬೇಕು.

2. ಭಾಗ VI-ಎ, VI-ಬಿ, VI-ಸಿ ಗಳನ್ನು ಅನುಕ್ರಮವಾಗಿ ಮೈಸೂರು, ಧಾರವಾಡ ಮತ್ತು ಗುಲ್ಬರ್ಗಾದ ಶಾಖಾ ಮುದ್ರಣಾಲಯಗಳಿಂದ ಪಡೆಯಬಹುದು.

3. ಕರ್ನಾಟಕ ರಾಜ್ಯಪತ್ರಕ್ಕಾಗಿ ಈ ಕೆಳಕಂಡ ವಿಳಾಸದಲ್ಲಿ ಪತ್ರ ವ್ಯವಹರಿಸತಕ್ಕದ್ದು.

ಸಂಕಲನಾಧಿಕಾರಿಗಳು,
ಕರ್ನಾಟಕ ರಾಜ್ಯಪತ್ರ,
ಸರ್ಕಾರಿ ಹೊರವಲಯ ಮುದ್ರಣಾಲಯ,
ಮೈಸೂರು ರಸ್ತೆ, ಬೆಂಗಳೂರು-59

ಮುದ್ರಕರು :-ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು-59

WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಅಕ್ಟೋಬರ್ ೨೦, ೨೦೧೧ (ಆಶ್ವಯುಜ ೨೮, ಶಕ ವರ್ಷ ೧೯೩೩)	ಸಂಚಿಕೆ ೪೧

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಇ. ಯರ್ರಿಸ್ವಾಮಿ, ಪಿ.ಎಸ್.ಐ. ಅನವಟ್ಟಿ ಪೊಲೀಸ್ ಠಾಣೆ, ಶಿವಮೊಗ್ಗ ಜಿಲ್ಲೆ ಇವರ ಖಾಯಂ ಪೂರ್ವ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ : ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ : 134/ಸಿಬ್ಬಂದಿ-6/05/ಸಿಓಪಿ/2009, ದಿನಾಂಕ : 21-10-2010 ಮತ್ತು 10-11-2010.

ಪ್ರಸ್ತಾವನೆ :

ಶ್ರೀ ಇ. ಯರ್ರಿಸ್ವಾಮಿ, ಪಿ.ಎಸ್.ಐ., ಅನವಟ್ಟಿ ಪೊಲೀಸ್ ಠಾಣೆ, ಶಿವಮೊಗ್ಗ ಜಿಲ್ಲೆ ರವರು ಪಿ.ಎಸ್.ಐ. ಆಗಿ ದಿನಾಂಕ: 1-9-2005 ರಂದು ನೇಮಕಗೊಂಡು, ಬುನಾದಿ ತರಬೇತಿಯಲ್ಲಿ ಉತ್ತೀರ್ಣರಾಗಿರುತ್ತಾರೆ. ಸದರಿಯವರ 2 1/2 ವರ್ಷಗಳ ಖಾಯಂ ಪೂರ್ವ ಅವಧಿಯು ದಿನಾಂಕ : 29-2-2008ಕ್ಕೆ ಪೂರ್ಣಗೊಳ್ಳುತ್ತದೆ. ಆದರೆ, ಈ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದೆ ಇದ್ದುದರಿಂದ ನೇಮಕಾತಿ ಪ್ರಾಧಿಕಾರಕ್ಕೆ ಒಳಪಟ್ಟಂತೆ ಐಜಿಪಿ, ಪೂರ್ವ ವಲಯ, ದಾವಣಗೆರೆ ರವರು ಕೆ.ಸಿ.ಎಸ್. (ಪ್ರೊಬೇಷನ್) ನಿಯಮಗಳು, 1977ರ ನಿಯಮ 4(1) (ii) ರನ್ವಯ 1 ವರ್ಷ 3 ತಿಂಗಳು ಅಂದರೆ ದಿನಾಂಕ : 1-3-2008 ರಿಂದ 31-5-2009 ರವರೆಗೆ ಖಾಯಂಪೂರ್ವ ಅವಧಿಯನ್ನು ವಿಸ್ತರಿಸಿರುತ್ತಾರೆ. ನಂತರ ಎಸ್.ಪಿ, ಶಿವಮೊಗ್ಗ ಜಿಲ್ಲೆ ರವರು ಆದೇಶ ಸಂಖ್ಯೆ : ಸಿಬ್ಬಂದಿ-5/ಶಿಕ್ಷೆ/21/09, ದಿನಾಂಕ : 3-6-2009ರಲ್ಲಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ಭವಿಷ್ಯದ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ಒಂದು ವರ್ಷ ಕಾಲ ಮುಂದೂಡಿರುತ್ತಾರೆ. ಸದರಿ ಚಾಲ್ತಿ ಶಿಕ್ಷೆಯು ದಿನಾಂಕ : 1-9-2010 ಕ್ಕೆ ಪೂರ್ಣಗೊಂಡಿರುತ್ತಾರೆ. ಈ ಅವಧಿಯಲ್ಲಿ ಸದರಿಯವರ ಸೇವೆಯು ತೃಪ್ತಿಕರವಾಗಿದ್ದು ಕರ್ನಾಟಕ ಸಿವಿಲ್ ಸೇವಾ (ಪರಿವೀಕ್ಷಣೆ) ನಿಯಮಗಳು, 1977ರ ನಿಯಮ 4 ಮತ್ತು 5(1) ರನ್ವಯ ಸದರಿಯವರು ಹೊಂದಿರುವ ಹುದ್ದೆಯ ಕಾರ್ಯಭಾರವನ್ನು ನಿರ್ವಹಿಸಲು ಸಮರ್ಥರಾಗಿರುತ್ತಾರೆ ಎಂದು ವರದಿ ಮಾಡಿದ್ದು, ಸದರಿ ಪಿ.ಎಸ್.ಐ. ರವರ ಖಾಯಂಪೂರ್ವ ಅವಧಿಯ ಕೆ.ಸಿ.ಎಸ್. ನಿಯಮಗಳು, 1977ರ ನಿಯಮ 4(1) (i) ರನ್ವಯ ದಿನಾಂಕ : 31-8-2010 ರವರೆಗೆ ವಿಸ್ತರಿಸುವಂತೆ ಡಿಜಿಪಿ ರವರ ಮೇಲೆ ಓದಲಾದ ಪತ್ರಗಳಲ್ಲಿ ಕೋರಲಾಗಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 301 ಪೊಸಇ 2010, ಬೆಂಗಳೂರು, ದಿನಾಂಕ : 20-7-2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನರಿ) ನಿಯಮಾವಳಿಗಳು, 1977ರ ನಿಯಮ 4(1) (i) ರನ್ವಯ ಶ್ರೀ ಇ. ಯರ್ರಿಸ್ವಾಮಿ, ಪಿ.ಎಸ್.ಐ., ಅನವಟ್ಟಿ ಪೊಲೀಸ್ ಠಾಣೆ, ಶಿವಮೊಗ್ಗ ಜಿಲ್ಲೆ ರವರ ಖಾಯಂ ಪೂರ್ವ ಅವಧಿಯನ್ನು ದಿನಾಂಕ : 1-6-2009 ರಿಂದ 31-8-2010 ರವರೆಗೆ ಅಂತಿಮವಾಗಿ ವಿಸ್ತರಿಸಿ ಸರ್ಕಾರವು ಆದೇಶಿಸಿದೆ.

ವಿಸ್ತರಿಸಿದ ಪರಿವೀಕ್ಷಣಾ ಅವಧಿಗೆ ಕ.ನಾಸೇ (ಪರಿವೀಕ್ಷಣೆ) ನಿಯಮಗಳು 1977ರ ನಿಯಮ 10ರ ಪ್ರಕಾರ ವಾರ್ಷಿಕ ವೇತನ ಬಡ್ತಿಗಳನ್ನು ನೀಡುವಂತಿಲ್ಲ. ಕಾಲ್ಪನಿಕವಾಗಿ ವಾರ್ಷಿಕ ವೇತನ ಬಡ್ತಿಗಳನ್ನು ಬಿಡುಗಡೆ ಮಾಡಿ ವೇತನವನ್ನು ನಿಗದಿಪಡಿಸುವುದು. ಹೀಗೆ ನಿಗಧಿಪಡಿಸಿದ ವೇತನದ ಬಾಕಿಯನ್ನು ನೀಡಲು ಅವಕಾಶವಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎಸ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ

ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು).

ಪಿ.ಆರ್. ನಂ. 1851

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ವೈ.ಕೆ. ಕುಟ್ರೆ, ಎ.ಪಿ.ಸಿ., ಡಿ.ಎ.ಆರ್. ಬೆಳಗಾವಿ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಳಗಾವಿ, ಇವರ ಆದೇಶ ಸಂಖ್ಯೆ : ಸಿಬ್ಬಂದಿ(2)/ಇವಿ/16/2006 (ಓ.ಬಿ. ಸಂಖ್ಯೆ 620/2007) ದಿನಾಂಕ : 19-6-07.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ : ಅಪೀಲು/172/ಉವ/2007, ದಿನಾಂಕ : 15-12-2007.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 3-3-2010.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)/89/2009-10, ದಿನಾಂಕ : 12-5-2011.

ಪ್ರಸ್ತಾವನೆ :

ಶ್ರೀ ವೈ.ಕೆ. ಕುಟ್ರೆ, ಎ.ಪಿ.ಸಿ., ಸಿ.ಎ.ಆರ್., ಬೆಳಗಾವಿ, ಇವರು (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಘೋರ ನಿರ್ಲಕ್ಷತೆ, ಬೇಜವಾಬ್ದಾರಿತನ ಪ್ರದರ್ಶಿಸಿದ ಕಾರಣದ ಮೇಲೆ ಇನ್ನೊರ್ವ ಸಿಬ್ಬಂದಿಯೊಂದಿಗೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರ ರೊಂದಿಗೆ 8ರಡಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

1. ದಿನಾಂಕ : 11-8-2006 ರಂದು ಶಿಕ್ಷಾ ಬಂದಿ ಖೈದಿ ಸಂ. 00072 ಯಲ್ಲಪ್ಪ ಕುರುಬರ ಸಾ: ಹಾನಗಲ ಈತನನ್ನು ಹುನಗುಂದದ ಸಿಜೆಎಮ್ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಲಯಕ್ಕೆ ಹಾಜರಪಡಿಸಿ ಅಲ್ಲಿಂದ ಕರೆದುಕೊಂಡು ಬರುವಾಗ ನೇರವಾಗಿ ಅವನಿಗೆ ಹುನಗುಂದದಿಂದ ಬೆಳಗಾವಿಗೆ ಕರದುಕೊಂಡು ಬರದೆ, ಹುನಗುಂದದಿಂದ ಇಳಕಲ್, ಇಳಕಲ್‌ನಿಂದ ಹುಬ್ಬಳ್ಳಿ ಹಾಗೂ ಹುಬ್ಬಳ್ಳಿಯಿಂದ ಬೆಳಗಾವಿಗೆ ಕರೆದುಕೊಂಡು ಬಂದು ನೀವು ನಿಮ್ಮ ಬೆಂಗಾವಲು ಕರ್ತವ್ಯದಲ್ಲಿ ಚ್ಯುತಿ ಎಸಗಿರುತ್ತೀರಿ.
2. ಇದು ಅಲ್ಲದೇ, ಹುನಗುಂದದಿಂದ ಸದರಿ ಖೈದಿ ಸಂ. 00072 ಯಲ್ಲಪ್ಪ ಕುರಬರ ಸಾ: ಹಾನಗಲ ಈತನಿಗೆ ಬೆಂಗಾವಲಿನಲ್ಲಿ ಕರೆದುಕೊಂಡು ಬರುವಾಗ ಹುನಗುಂದದಿಂದ ಗದಗವರೆಗೆ ಆತನ ಸಹ ಖೈದಿ ಹಣಮಂತ ಸಾ: ಬಾಗಲಕೋಟ ಈತನಿಗೆ ಸಂಗಡ ಬರಲು ಹಾಗೂ ಅವನ ಮನೆಯವರ ಕಡೆಯಿಂದ ರೂ. 500/- ಹಣ ಪಡೆದುಕೊಳ್ಳಲು ಅನುವು ಮಾಡಿಕೊಟ್ಟು ನೀವು ನಿಮ್ಮ ಬೆಂಗಾವಲು ಕರ್ತವ್ಯದಲ್ಲಿ ನಿಷ್ಕಾಳಜಿತನ ಹಾಗೂ ಬೇಜವಾಬ್ದಾರಿತನವನ್ನು ಪ್ರದರ್ಶಿಸಿರುವಿರಿ.
3. ಸದರ ಶಿಕ್ಷಾಬಂದಿ ಖೈದಿಯನ್ನು ಬೆಂಗಾವಲಿನಲ್ಲಿ ನಿಯಮದ ಮೇರೆಗೆ ಬಸ್ಸಿನಲ್ಲಿ ನಿಮ್ಮ ಪಕ್ಕದಲ್ಲಿ ಕೂಡ್ರಿಸಿಕೊಂಡುಬರದೆ ಇಳಕಲ್‌ದಿಂದ ಹುಬ್ಬಳ್ಳಿಗೆ ಬರುವಾಗ ಶಿಕ್ಷಾಬಂದಿ ಖೈದಿಯನ್ನು ಒಂದು ಸೀಟಿನ ಕೊನೆಯಲ್ಲಿ ಅದೆ ಸೀಟಿನ ಇನ್ನೊಂದು ಕೊನೆಯಲ್ಲಿ ಒಬ್ಬರು ಮತ್ತು ಹಿಂದಿನ ಸೀಟಿನಲ್ಲಿ ಒಬ್ಬರು, ಹೀಗೆ ಆರೋಪಿಯನ್ನು ಬಿಟ್ಟು ಬೇರೆಬೇರೆಯಾಗಿ ಕುಳಿತುಕೊಂಡು ಸದರ ಖೈದಿಗೆ ಆತನ ಮುಂದಿನ ಆಸನದಲ್ಲಿ ಕುಳಿತ ವ್ಯಕ್ತಿಯ ಜೇಬಿನಿಂದ ರೂ. 10,000/-ಗಳನ್ನು ಕಳ್ಳತನ ಮಾಡಲು ಅನುವು ಮಾಡಿಕೊಟ್ಟು, ನಿಮಗೆ ನಿಯೋಜಿಸಿದ ಬೆಂಗಾವಲು ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸದೇ ನಿಮ್ಮ ಕರ್ತವ್ಯದಲ್ಲಿ ಘೋರ ನಿಷ್ಕಾಳಜಿತನ ಹಾಗೂ ಬೇಜವಾಬ್ದಾರಿತನವನ್ನು ಪ್ರದರ್ಶಿಸಿರುವಿರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ : 19-6-07ರ ಆದೇಶದಲ್ಲಿ ಅರ್ಜಿದಾರರ ವೇತನವನ್ನು ಎ.ಪಿ.ಸಿ. ಹುದ್ದೆಯ ಕನಿಷ್ಠ ಮೂಲ ವೇತನಕ್ಕೆ ಇಳಿಸಲಾಗಿದೆ. ಹೊಸದಾಗಿ ವೇತನ ಬಡ್ತಿಗಳನ್ನು ಗಳಿಸುವುದು ದಿನಾಂಕ : 24-9-2006 ರಿಂದ 31-3-2007ರ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ : 15-12-2007ರ ಆದೇಶದಲ್ಲಿ ಶಿಸ್ತು ಪ್ರಾಧಿಕಾರದ ದಂಡನಾದೇಶವು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 59(1)(ಬಿ) ಗೆ ವ್ಯತಿರಿಕ್ತವಾಗಿರುವುದರಿಂದ ಶಿಸ್ತು ಪ್ರಾಧಿಕಾರದ ದಂಡನಾದೇಶವನ್ನು ಮಾರ್ಪಡಿಸಿ ಇವರ ವಾರ್ಷಿಕ ವೇತನ ಬಡ್ತಿಯನ್ನು ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ಪರಿಣಾಮ ಬೀರುವಂತೆ 2 ವರ್ಷಗಳ ಕಾಲ ಮುಂದೂಡುವ ದಂಡನೆಯನ್ನು ವಿಧಿಸಿ, ದಿನಾಂಕ : 24-9-06 ರಿಂದ 31-3-07ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೇ ಪರಿಗಣಿಸಲಾಗಿದೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 41 ಪೊಸಿಅ 2010, ಬೆಂಗಳೂರು, ದಿನಾಂಕ : 19-7-2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ವೈ.ಕೆ. ಕುಟ್ರೆ, ಎ.ಪಿ.ಸಿ., ಡಿ.ಎ.ಆರ್., ಬೆಳಗಾವಿ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು).

ಪಿ.ಆರ್. ನಂ. 1852

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಬಿ.ಎಂ. ಪ್ರಕಾಶ, ಸಿ.ಪಿ.ಸಿ., ಬೆಟ್ಟದಾಪುರ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಇವರ ಆದೇಶ ಸಂಖ್ಯೆ : ಡಿಇ/02/06-07 (ಓ.ಬಿ. 32/07-08) ದಿನಾಂಕ : 18-04-2007.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ : ಅಪೀಲು (14)/2007-08 ದಿನಾಂಕ : 22-06-2007.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 11-01-2011.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ : ಅಪೀಲು(2)/81/2010-11 ದಿನಾಂಕ : 04-03-2011.

ಪ್ರಸ್ತಾವನೆ :

ಶ್ರೀ ಬಿ.ಎಂ.ಪ್ರಕಾಶ, ಇವರು ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪಿ.ಸಿ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕೆಲವು ವ್ಯಕ್ತಿಗಳ ಮೇಲೆ ಹಲ್ಲೆ ಮಾಡಿರುವ ಆರೋಪದ ಮೇಲೆ ಮೊ.ಸಂ. 48/06 ಕಲಂ 143, 147, 448, 341, 324, 323 ರೆ/ವಿ 149 ಐಪಿಸಿ ರಡಿ ಪ್ರಕರಣ ದಾಖಲಾಗಿದ್ದರಿಂದ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

"ಇವರು ದಿನಾಂಕ 02-04-2006 ರಂದು ಶ್ರೀಮತಿ ನಿಂಗರಾಜಮ್ಮ ಮತ್ತು ಇತರರ ಜೊತೆಯಲ್ಲಿ ಶ್ರೀಮತಿ ಮನೋನ್ಮಣಿ ರವರ ಮನೆಗೆ ಹೋಗಿ ಗಲಾಟೆ ಮಾಡಿ ಮನೋನ್ಮಣಿ ಮತ್ತು ಹರೀಶರವರ ಮೇಲೆ ಹಲ್ಲೆ ಮಾಡಿರುವ ಬಗ್ಗೆ ಇವರ ವಿರುದ್ಧ ಹುಣಸೂರು ಪಟ್ಟಣ ಠಾಣೆ ಮೊ.ಸಂ. 48/06 ಕಲಂ 143, 147, 448, 341, 324, 323 ರೆ/ವಿ 149 ಐಪಿಸಿ ಪ್ರಕರಣ ದಾಖಲಾಗಿರುವ ಬಗ್ಗೆ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗು ಜಿಲ್ಲಾ ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ : 18-04-2007ರ ಆದೇಶದಲ್ಲಿ ಅರ್ಜಿದಾರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ, ಇವರ ದಿನಾಂಕ : 04-04-2006 ರಿಂದ 21-05-2006ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ : (2)ರಲ್ಲಿ ಓದಲಾದ ದಿನಾಂಕ : 22-06-2007ರ ಆದೇಶದಲ್ಲಿ ಶಿಸ್ತು ಪ್ರಾಧಿಕಾರದ ದಂಡನಾದೇಶವನ್ನು ಮಾರ್ಪಡಿಸಿ ಇವರನ್ನು ಪುನರ್ ನೇಮಕ ಮಾಡಲಾಗಿದೆ. ಇವರ ವೇತನವನ್ನು ಪಿ.ಸಿ., ಹುದ್ದೆಯ ವೇತನ ಶ್ರೇಣಿಯ ಕನಿಷ್ಠ ಮಟ್ಟಕ್ಕೆ 5 ವರ್ಷಗಳ ಅವಧಿಗೆ ಇಳಿಸುವ ದಂಡನೆಯನ್ನು ವಿಧಿಸಿ, ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಹಾಗೂ ಕರ್ತವ್ಯದಿಂದ ಹೊರಗುಳಿದ ಅವಧಿಯನ್ನು "ಡೈಸ್‌ನಾನ್" ಎಂದು ಪರಿಗಣಿಸಲಾಗಿದೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷ್ಯತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 7 ಪೊಸಿಅ 2011, ಬೆಂಗಳೂರು, ದಿನಾಂಕ : 20-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಬಿ.ಎಂ. ಪ್ರಕಾಶ, ಸಿ.ಪಿ.ಸಿ., ಬೆಟ್ಟದಾಪುರ ಪೊಲೀಸ್ ಠಾಣೆ, ಮೈಸೂರು ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 1853

ಒಳಾಡಳಿತ ಸಚಿವಾಲಯ

ವಿಷಯ : ಶ್ರೀಯುತರಾದ ಟಿ.ಸಿ. ಅಪ್ಪಾಜಿ, ಎ.ಎಸ್.ಐ., ಕೆ.ಎಂ.ದೊಡ್ಡಿ ಪೊಲೀಸ್ ಠಾಣೆ ಮತ್ತು ಎಂ.ಪಿ. ಮಂಜುನಾಥ, ಸಿ.ಪಿ.ಸಿ., ಮಂಡ್ಯ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ, ಇವರುಗಳು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಡಿ.ಜಿ. ಮತ್ತು ಐ.ಜಿ.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ : ಅಪೀಲು(1)04/2008-09 (ಓ.ಬಿ. 14/2010) ದಿನಾಂಕ : 08-07-2010.
2. ಅರ್ಜಿದಾರರುಗಳ ಮೇಲ್ಮನವಿ ಅರ್ಜಿ ದಿನಾಂಕ : 15-10-2010 ಮತ್ತು 08-12-2010.
3. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ : ಅಪೀಲು(1)04/2008-09 ದಿನಾಂಕ : 19-05-2011.

ಪ್ರಸ್ತಾವನೆ :

ಶ್ರೀಯುತರಾದ ಟಿ.ಸಿ. ಅಪ್ಪಾಜಿ, ಎ.ಎಸ್.ಐ., ಹಾಗೂ ಎಂ.ಪಿ. ಮಂಜುನಾಥ, ಸಿ.ಪಿ.ಸಿ. ಇವರುಗಳು ಮಂಡ್ಯ ಜಿಲ್ಲೆ, ಕೆರಗೋಡು ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಅತೀವ ನಿರ್ಲಕ್ಷ್ಯತನ, ಬೇಜವಾಬ್ದಾರಿತನ ಹಾಗೂ ದುರ್ನಡತೆ ಪ್ರದರ್ಶಿಸಿದ ಕಾರಣದ ಮೇಲೆ ಇನ್ನೋರ್ವ ಅಧಿಕಾರಿಯೊಂದಿಗೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ಮತ್ತು 8 ರಡಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

ಶ್ರೀ ಟಿ.ಸಿ. ಅಪ್ಪಾಜಿ, ಎ.ಎಸ್.ಐ., ರವರ ಮೇಲಿನ ಆರೋಪ :

" ಆ.ಪೊ.ಅ.-2 ಆದ ನೀವು ಕೆರಗೋಡು ಪೊಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ದಿನಾಂಕ : 28-08-2007 ರಂದು ಠಾಣೆಯಲ್ಲಿ ಮೊ.ನಂ. 118/08 ಕಲಂ ಹೆಂಗಸು ಕಾಣೆಯಾಗಿದ್ದಾಳೆಂದು ಪ್ರಕರಣ ದಾಖಲಾಗಿದ್ದು, ಸದರಿ ಪ್ರಕರಣದ ಫಿರ್ಯಾದುದಾರರಿಂದ ಪ್ರಕರಣವನ್ನು ದಾಖಲಿಸಲು ಹಣ ವೆಚ್ಚವಾಗುತ್ತದೆ ಎಂದು ಹೇಳಿ 5,000/- ರೂ.ಗಳನ್ನು ಲಂಚವಾಗಿ ಸ್ವೀಕರಿಸಿರುತ್ತೀರಿ. ಒಬ್ಬ ಜವಾಬ್ದಾರಿಯುತ ಪೊಲೀಸ್ ಅಧಿಕಾರಿಯಾದ ನೀವು ಪ್ರಾಮಾಣಿಕವಾಗಿ ಕರ್ತವ್ಯವನ್ನು ನಿರ್ವಹಿಸದೆ ಅತೀವವಾದ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ.

ಶ್ರೀ ಎಂ.ಪಿ. ಮಂಜುನಾಥ, ಸಿ.ಪಿ.ಸಿ., 27 ರವರ ಮೇಲಿನ ಆರೋಪ :

ಆ.ಪೊ.ಅ.-3 ಆದ ನೀವು ಕೆರಗೋಡು ಪೊಲೀಸ್ ಠಾಣೆಯಲ್ಲಿ ಆ.ಪೊ.ಅ.-1 ರವರ ಜೀಪ್‌ನ ಚಾಲಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ನಿಮ್ಮ ಕರ್ತವ್ಯಕ್ಕೆ ಸಂಬಂಧಪಡದೇ ಇದ್ದರು ಕೂಡ ದಿನಾಂಕ : 28-08-2007 ರಂದು ಠಾಣೆಗೆ ದೂರು ನೀಡಲು ಬಂದಂತಹ ಮೊ.ನಂ. 118/08 ಕಲಂ ಹೆಂಗಸು ಕಾಣೆಯಾಗಿದ್ದಾರೆ ಪ್ರಕರಣದ ಫಿರ್ಯಾದುದಾರರಾದ ಶ್ರೀ ಭಕ್ತೇಶ್ ರವರನ್ನು ಪುಸಲಾಯಿಸಿ ಹಾಗೂ ತಮ್ಮ ಹೆಂಡತಿ ಕಾಣೆಯಾಗಿರುವ ಬಗ್ಗೆ ತಮ್ಮ ಮೇಲೆಯೂ ಸಹ ಕೇಸು ಹಾಕುತ್ತಾರೆಂದು ಬೆದರಿಸಿ, ಪ್ರಕರಣವನ್ನು ದಾಖಲು ಮಾಡಲು ಹಣ ವೆಚ್ಚವಾಗುತ್ತದೆಂದು ತಿಳಿಸಿ ಆ.ಪೊ.ಅ.-2 ರವರಿಗೆ ಅದೇ ದಿನ 5,000/- ರೂ.ಗಳನ್ನು ಲಂಚವಾಗಿ ಕೊಡಿಸಿದ್ದೂ ಅಲ್ಲದೆ, ನಂತರದ ದಿನಗಳಲ್ಲಿ ಸದರಿ ಫಿರ್ಯಾದುದಾರರೊಡನೆ ಸಂಪರ್ಕವನ್ನಿಟ್ಟುಕೊಂಡು ಪ್ರಕರಣವನ್ನು ಪತ್ತೆ ಮಾಡಿಸಿಕೊಡಲು ಆ.ಪೊ.ಅ.-1 ರವರಿಗೆ ಹಣ ನೀಡಬೇಕೆಂದು ತಿಳಿಸಿ ಫಿರ್ಯಾದುದಾರರ ಮೇಲೆ ಒತ್ತಡ ತಂದು ಅವರಿಂದ ಒಟ್ಟು 25,000/- ರೂ.ಗಳನ್ನು 7-8 ಕಂತುಗಳಲ್ಲಿ ಪಡೆದುಕೊಂಡಿದ್ದಿರಿ. ಪುನಃ ಈ ಪ್ರಕರಣದ ಪತ್ತೆಗೆ ಬೆಂಗಳೂರಿಗೆ ಹೋಗಲು ಸರ್ಕಾರಿ ಜೀಪ್‌ನ್ನು ರಿಪೇರಿ ಮಾಡಿಸಬೇಕೆಂದೂ ಹೇಳಿ ಅದಕ್ಕೆ 1000/- ರೂ.ಗಳನ್ನು ಕೊಡಬೇಕೆಂದು ಒತ್ತಾಯಿಸಿ ಹಣವನ್ನು ಪಡೆದಿರುತ್ತೀರಿ ಒಟ್ಟು 31,000/- ರೂ.ಗಳನ್ನು ಶ್ರೀ ಭಕ್ತೇಶ್ ರವರಿಂದ ವಸೂಲಿ ಮಾಡಿ ಕರ್ತವ್ಯದಲ್ಲಿ ಅತೀವ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ.

ಎಂದು ನಿಮ್ಮಗಳ ಮೇಲೆ ಅತೀವ ದುರ್ನಡತೆ, ಅಶಿಸ್ತು ಮತ್ತು ಕರ್ತವ್ಯಲೋಪ ತೋರ್ಪಡಿಸಿರುತ್ತೀರೆಂದು ದೋಷಾರೋಪಣೆ ಹೊರಿಸಲಾಗಿದೆ.

ಮೇಲ್ಕಂಡ ಆರೋಪದ ಮೇಲೆ ಜಂಟಿ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗು ಡಿ.ಜಿ ಮತ್ತು ಐ.ಜಿ.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ : 08-07-2010ರ ಆದೇಶದಲ್ಲಿ ಶ್ರೀ ಟಿ.ಸಿ. ಅಪ್ಪಾಜಿ, ಎ.ಎಸ್.ಐ., ಮತ್ತು ಶ್ರೀ ಎಂ.ಪಿ. ಮಂಜುನಾಥ, ಸಿ.ಪಿ.ಸಿ. ಇವರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಎರಡು ವರ್ಷಗಳ ಕಾಲ ಅವರ ಮುಂದಿನ ವಾರ್ಷಿಕ ವೇತನ ಬಡ್ತಿಗೆ ಧಕ್ಕೆಯಾಗುವಂತೆ ಮುಂದೂಡಲಾಗಿದೆ.

ಈ ಆದೇಶದ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಸದರಿ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರುಗಳು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ದುರ್ನಡತೆ ಹಾಗೂ

ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 193 ಪೊಸಿಅ 2010, ಬೆಂಗಳೂರು, ದಿನಾಂಕ : 20-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀಯುತರಾದ ಟಿ.ಸಿ. ಅಪ್ಪಾಜಿ, ಎ.ಎಸ್.ಐ., ಕೆ.ಎಂ.ದೊಡ್ಡಿ ಪೊಲೀಸ್ ಠಾಣೆ ಮತ್ತು ಎಂ.ಪಿ. ಮಂಜುನಾಥ, ಸಿ.ಪಿ.ಸಿ., ಮಂಡ್ಯ ಪೊಲೀಸ್ ಠಾಣೆ, ಮಂಡ್ಯ ಜಿಲ್ಲೆ, ಇವರುಗಳು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1854 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಪಿ. ರುದ್ರಮುನಿ, ಆರ್.ಪಿ.ಎಸ್.ಐ. (ನಿವೃತ್ತ) ಅರಸೀಕೆರೆ ರೈಲ್ವೆ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಹಾಗೂ ಡೆಪ್ಯೂಟಿ ಇನ್‌ಸ್ಪೆಕ್ಟರ್ ಜನರಲ್ ಆಫ್ ಪೊಲೀಸ್ (ರೈಲ್ವೇಸ್) ಬೆಂಗಳೂರು, ಇವರ ಆದೇಶ ಸಂಖ್ಯೆ : ಡಿಇ-6/2009-10 ದಿನಾಂಕ : 25-11-2009.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ರೈಲ್ವೇಸ್, ಬೆಂಗಳೂರು, ಇವರ ಆದೇಶ ಸಂಖ್ಯೆ : 88/ಐಜಿಪಿ/ರೈ/ಡಿಇ/2009-10 ದಿನಾಂಕ : 07-05-2010.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 07-06-2010.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ : ಅಪೀಲು(2)/26/2010-11 ದಿನಾಂಕ : 23-09-2010.

ಪ್ರಸ್ತಾವನೆ :

ಶ್ರೀ ಪಿ.ರುದ್ರಮುನಿ, ಇವರು ಅರಸೀಕೆರೆ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ತೀವ್ರತರವಾದ ದುರ್ನಡತೆ, ನಿರ್ಲಕ್ಷ್ಯತನ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

"ಶ್ರೀ ಪಿ. ರುದ್ರಮುನಿ, ಆರ್.ಪಿ.ಎಸ್.ಐ. ಅರಸೀಕೆರೆ, ರೇ.ಪೊ. ಠಾಣೆ, ರವರೇ ನೀವು ದಿನಾಂಕ : 23-08-2008 ರಂದು ಇಂಟರ್‌ಸಿಟಿ ರೈಲು ಗಾಡಿಯಲ್ಲಿ ಪ್ರಯಾಣಿಸಿದ ಅಂಬಿಕಾ ತಂದೆ ಈರಯ್ಯ ರವರ ಮೊಬೈಲ್ ತಿಪಟೂರು ರೈಲ್ವೆ ನಿಲ್ದಾಣದಲ್ಲಿ ಕಳುವಾಗಿದ್ದು, ಅನುಮಾನಾಸ್ಪದ 4 ಜನ ಪಿಕ್‌ಪಾಕೇಟ್ ಹೆಂಗಸರನ್ನು ಆರ್.ಪಿ.ಸಿ. 628 ದಿನೇಶ ರವರು ಅರಸೀಕೆರೆ ಠಾಣೆಗೆ ಹಾಜರುಪಡಿಸಿದ್ದು, ಸದರಿ ಆರೋಪಿತರನ್ನು ತಪಾಸಣೆ ಮಾಡಿದಾಗ ಅವರ ಬಳಿ ಒಂದು ನೋಕಿಯಾ ಮೊಬೈಲ್ ಮತ್ತು ನಗದು ಹಣ ರೂ. 1000/- ದೊರಕಿದ್ದು, ಸದರಿ ವಿಷಯವನ್ನು ನೀವು ಶಿವಮೊಗ್ಗ ಬಂದೋಬಸ್ತ್‌ನಲ್ಲಿರುವಾಗ ತಿಳಿಸಿದ್ದು, ಹಾಗೂ ಕಲಂ 109 ಸಿ.ಆರ್.ಪಿ.ಸಿ. ಕೇಸು ದಾಖಲು ಮಾಡಲು ತಿಳಿಸಿದ್ದು, ಅದರಂತೆ ಕ್ರಮ ಕೈಕೊಳ್ಳುವಾಗ, ಬಂದೋಬಸ್ತ್ ಮುಗಿಸಿ ಠಾಣೆಗೆ ವಾಪಸ್ಸು ಬಂದು, ಆರೋಪಿತ ಮಹಿಳೆಯರನ್ನು ವಿಚಾರಣೆ ಮಾಡಿ ಅವರಿಂದ ಒಂದು ಮೊಬೈಲ್ ಹಾಗೂ 1000/- ನಗದು ಹಣವನ್ನು ಪಡೆದುಕೊಂಡು ಅವರ ವಿರುದ್ಧ ಕೇಸು ಹಾಕದೆ ಹಾಗೇ ಬಿಟ್ಟು ಕಳಿಸಿರುತ್ತೀರಿ. ಮೊಬೈಲ್ ಕಳೆದುಕೊಂಡ ಕುಮಾರಿ ಅಂಬಿಕಾ ರವರಿಗೆ ಮೊಬೈಲ್ ಹಿಂದಿರುಗಿಸಿ, ಆರೋಪಿಗಳಿಂದ ವಶಪಡಿಸಿಕೊಂಡ 1000/- ನಗದು ಹಣವನ್ನು ನಿಮ್ಮ ಬಳಿಯೆ ಇಟ್ಟುಕೊಂಡು ಹಣ ದುರುಪಯೋಗ ಪಡಿಸಿಕೊಂಡಿರುತ್ತೀರಿ. ಆರೋಪಿತರ ವಿರುದ್ಧ ಯಾವುದೇ ಪ್ರಕರಣ ದಾಖಲಿಸದೆ ಬಿಟ್ಟು ಕಳಿಸಿರುವುದು ನಿಮ್ಮ ಕರ್ತವ್ಯದಲ್ಲಿ ತೀವ್ರತರವಾದ ಲೋಪವೆಸಗಿರುತ್ತೀರಿ. ಹಾಗೂ ಈ ಹಿಂದೆ 2007ರ ಆಗಸ್ಟ್ ತಿಂಗಳಲ್ಲಿ ಕಳ್ಳತನ ಮಾಡುವ 4 ಜನ ಆರೋಪಿಗಳನ್ನು ಆರ್.ಪಿ.ಸಿ. 129 ರವರು ಠಾಣೆಗೆ ತಂದು ಹಾಜರುಪಡಿಸಿದ್ದು, ಆರೋಪಿತರು ಕದ್ದ ಮಾಲನ್ನು ತೋರಿಸುತ್ತೇವೆ ಎಂದರೂ ಅವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳದೆ ಕಲಂ 109 ಸಿ.ಆರ್.ಪಿ.ಸಿ. ರೀತ್ಯಾ ಪ್ರಕರಣ ದಾಖಲಿಸಿರುತ್ತೀರಿ. ಅಪರಾಧ ಪ್ರಕರಣಗಳನ್ನು ಪತ್ತೆ ಮಾಡುವಲ್ಲಿ ಸಂಪೂರ್ಣ ವಿಫಲರಾಗಿರುತ್ತೀರಿ. ಇದು ನಿಮ್ಮ ಕರ್ತವ್ಯದಲ್ಲಿ ತೀವ್ರತರವಾದ ನಿರ್ಲಕ್ಷ್ಯತನ ಹಾಗೂ ಅತೀವ ಲೋಪವನ್ನು ಪ್ರದರ್ಶಿಸಿರುತ್ತೀರಿ.

2. ಅರಸೀಕೆರೆ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಆರ್.ಪಿ.ಸಿ.-460 ಕುಮಾರಿ ಶ್ವೇತಾ ಹಾಗೂ ಸ್ವೀಪರ್ ಶ್ರೀಮತಿ ರತ್ನಮ್ಮ ರವರು ಕರ್ತವ್ಯದಲ್ಲಿರುವಾಗ ಯಾರು ಇಲ್ಲದ ವೇಳೆಯಲ್ಲಿ ಮೈ-ಕೈ ಮುಟ್ಟುವುದು, ತೋಳನ್ನು ಹಿಡಿದು ಕೆನ್ನೆಯನ್ನು ಚಿವುಟುವುದು, ಬೆನ್ನ ಮೇಲೆ ಕೈಯಿಂದ ಸವರುವುದು, ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತವಾಗಿ ಮತ್ತು ಅಸಭ್ಯವಾಗಿ ವರ್ತಿಸುವುದು ಮಹಿಳಾ ಪಿ.ಸಿ.ಗೆ ಉದ್ದೇಶಪೂರ್ವಕವಾಗಿ ರಾತ್ರಿ ಪಾಳಿಗೆ ಹಾಕುವುದು. ಅಪರಾಧ ಸಭೆಯಲ್ಲಿ ಸಾರ್ವಜನಿಕರ ಮತ್ತು ಮಹಿಳೆಯರ ಜೊತೆ ಸೌಜನ್ಯದಿಂದ ವರ್ತಿಸುವಂತೆ ಮೇಲಾಧಿಕಾರಿಗಳು ತಿಳುವಳಿಕೆ ನೀಡಿದ್ದು, ಸೂಚನೆಯನ್ನು ಪಾಲಿಸದೆ ಠಾಣೆಯ ಮಹಿಳಾ ಸಿಬ್ಬಂದಿಯವರಿಗೆ ಲೈಂಗಿಕ ಕಿರುಕುಳ ನೀಡಿ ಅವರ ಜೊತೆ ಅಸಭ್ಯವಾಗಿ ವರ್ತಿಸಿ, ತೀವ್ರತರವಾದ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಇವರ ವಿರುದ್ಧದ ಎರಡು ಆರೋಪಗಳಲ್ಲಿ ಮೊದಲನೆ ಆರೋಪವು ಸಾಬೀತಾಗಿಲ್ಲವೆಂದು ಎರಡನೇ ಆರೋಪವು ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗೂ ಡೆಪ್ಯೂಟಿ ಇನ್‌ಸ್ಪೆಕ್ಟರ್ ಜನರಲ್ ಆಫ್ ಪೊಲೀಸ್ (ರೈಲ್ವೇಸ್) ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ : 25-11-2009ರ ಆದೇಶದಲ್ಲಿ ಅರ್ಜಿದಾರರನ್ನು ಇವರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಲಾದ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ರೈಲ್ವೇಸ್, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ : (2)ರಲ್ಲಿ ಓದಲಾದ ದಿನಾಂಕ : 07-05-2010ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಅರ್ಜಿದಾರರ ವಿರುದ್ಧದ ಮಹಿಳಾ ಸಿಬ್ಬಂದಿಗಳಿಗೆ ಲೈಂಗಿಕ ಕಿರುಕುಳ ನೀಡಿ ಅವರ ಜೊತೆ ಅಸಭ್ಯವಾಗಿ ವರ್ತಿಸಿ ತೀವ್ರತರವಾದ ದುರ್ನಡತೆಯನ್ನು ಪ್ರದರ್ಶಿಸಿರುವ ಆಪಾದನೆಯು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿದೆ. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷ್ಯತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಪರಿಷ್ಕರಣ ಮೇಲ್ಮನವಿಯನ್ನು ತಿರಸ್ಕರಿಸಲು ತೀರ್ಮಾನಿಸಿದೆ ಹಾಗೂ ಶಿಸ್ತು ಪ್ರಾಧಿಕಾರವು ದಿನಾಂಕ : 25-11-2009ರ ಆದೇಶದಲ್ಲಿ ಅರ್ಜಿದಾರರನ್ನು ಕಡ್ಡಾಯ ನಿವೃತ್ತಿಗೊಳಿಸಿರುವುದು ಕ.ನಾ.ಸೇ.ನಿ. ನಿಯಮ 285ರಡಿ ಎಂದು ನಮೂದಿಸಿರುವುದನ್ನು ಗಮನಿಸಲಾಗಿದೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 97 ಪೊಸಿಅ 2010, ಬೆಂಗಳೂರು, ದಿನಾಂಕ : 19-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮ 1963ರ ನಿಯಮ 23(1)(ಬಿ)(ii) ರಡಿಯಲ್ಲಿ ಕಡ್ಡಾಯ ನಿವೃತ್ತಿಗೊಳಿಸಿ, ಶಿಸ್ತು ಪ್ರಾಧಿಕಾರವು ವಿಧಿಸಿರುವ ದಂಡನೆಯನ್ನು ಸ್ಥಿರೀಕರಿಸಿ ಶ್ರೀ ಪಿ. ರುದ್ರಮುನಿ, ಆರ್.ಪಿ.ಎಸ್.ಐ. (ನಿವೃತ್ತ) ಅರಸೀಕೆರೆ ರೈಲ್ವೆ ಪೊಲೀಸ್ ಠಾಣೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 1855

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಪಿ.ವಿ. ಜೈನಾಪುರ, 6ನೇ ಅಪರ ಸರ್ಕಾರಿ ಅಭಿಯೋಜಕರು (ನಿವೃತ್ತ), ಬೆಂಗಳೂರು ನಗರ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247 (ಎ)(1)ರ ಸೌಲಭ್ಯಕ್ಕೆ ಪರಿಗಣಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ-1 ಸಂ : ಲಾ 15 ಪಿಪಿಇ 83, ದಿನಾಂಕ : 05-04-1984.
2. ಸರ್ಕಾರದ ಆದೇಶ ಸಂಖ್ಯೆ : ಲಾ 173 ಪಿಪಿಇ 84, ದಿನಾಂಕ : 04/06-09-1984.
3. ಸದರಿ ಅಧಿಕಾರಿಯವರ ಮನವಿ ದಿನಾಂಕ : 10-07-2008.
4. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂ : ಡಿಪಿಎನ್/ಲೆಕ್ಕ-1/134/2008-09, ದಿನಾಂಕ : 19-08-2008.

ಪ್ರಸ್ತಾವನೆ :

ಮೇಲೆ (4)ರಲ್ಲಿ ಓದಲಾದ ದಿನಾಂಕ : 19-08-2008ರ ಪತ್ರದಲ್ಲಿ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರುರವರು ಮೇಲೆ (1)ರಲ್ಲಿ ಓದಲಾದ ದಿನಾಂಕ : 05-04-1984ರ ಸರ್ಕಾರದ ಅಧಿಸೂಚನೆಯ ಕ್ರ.ಸಂ. 4ರ ಅನ್ವಯ ಶ್ರೀ ಪಿ.ವಿ. ಜೈನಾಪುರ, 6ನೇ ಅಪರ ಸರ್ಕಾರಿ ಅಭಿಯೋಜಕರು (ನಿವೃತ್ತ), ಬೆಂಗಳೂರು ನಗರ ಇವರು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗೆ ನೇರ ನೇಮಕಾತಿ ಹೊಂದಿ, ದಿನಾಂಕ : 18-04-1984ರ ಪೂರ್ವಾಹ್ನ ಹುದ್ದೆಯ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಮೇಲೆ (2)ರಲ್ಲಿ ಓದಲಾದ ದಿನಾಂಕ : 04/06-09-1984ರ ಸರ್ಕಾರದ ಆದೇಶದನ್ವಯ ಸದರಿ ನಿವೃತ್ತ ಅಧಿಕಾರಿಯ ಜನ್ಮ ದಿನಾಂಕವನ್ನು 05-03-1951 ಎಂದು ಒಪ್ಪಲಾಗಿದೆ. ಮೇಲೆ (3)ರಲ್ಲಿ ಓದಲಾದ ಮನವಿಯಲ್ಲಿ ಸದರಿ ಅಧಿಕಾರಿಯವರು 33 ವರ್ಷ 1 ತಿಂಗಳು 13 ದಿನಗಳ ವಯಸ್ಸಿನಲ್ಲಿ ಸರ್ಕಾರಿ ಸೇವೆಗೆ ಸೇರಿದಂತೆ ಆಗುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247(ಎ)(1) ರನ್ವಯ ಮೂರು ಹೆಚ್ಚುವರಿ ಅರ್ಹತಾದಾಯಕ ಸೇವೆಯ ಸೇರ್ಪಡೆಗೆ ಸೌಲಭ್ಯಕ್ಕೆ ಅವರು ಅರ್ಹರಿದ್ದು, ಪರಿಗಣಿಸುವಂತೆ ಕೋರಿರುತ್ತಾರೆ. ಸದರಿ ನಿಯಮಾನುಸಾರ ಶ್ರೀ ಪಿ.ವಿ. ಜೈನಾಪುರ ಇವರ ನಿವೃತ್ತಿ ವೇತನ ಸೌಲಭ್ಯಕ್ಕೆ ಮಾತ್ರ ಮೂರು ವರ್ಷಗಳ ಹೆಚ್ಚುವರಿ ಅರ್ಹತಾದಾಯಕ ಸೇವೆಯ ಸೇರ್ಪಡೆಗೆ ಆದೇಶವನ್ನು ಹೊರಡಿಸುವಂತೆ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 378 ಪಿಪಿಇ 2008, ಬೆಂಗಳೂರು, ದಿನಾಂಕ : 19-07-2011

ಮೇಲಿನ ವಿವರಗಳ ಹಿನ್ನೆಲೆಯಲ್ಲಿ, ಶ್ರೀ ಪಿ.ವಿ. ಜೈನಾಪುರ, 6ನೇ ಅಪರ ಸರ್ಕಾರಿ ಅಭಿಯೋಜಕರು (ನಿವೃತ್ತ), ಬೆಂಗಳೂರು ನಗರ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ)(1)ರ ರೀತ್ಯ ಮೂರು ವರ್ಷಗಳ ಅಧಿಕ ಸೇವಾವಧಿಯನ್ನು ಅವರ ನಿವೃತ್ತಿ ವೇತನ ಸೌಲಭ್ಯಗಳಿಗೆ ಮಾತ್ರ ಹೆಚ್ಚುವರಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಆದೇಶಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ : ಆಇ 695 ಸೇ-3/2011, ದಿನಾಂಕ : 20-06-2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಹೆಚ್.ಕೆ. ನಿಂಗಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು-ಬಿ)

ಪಿ.ಆರ್. 1856

ನಗರಾಭಿವೃದ್ಧಿ ಸಚಿವಾಲಯ

ವಿಷಯ : ಬಿ.ಎಂ.ಐ.ಸಿ.ಎ.ಪಿ.ಎ. ಕಛೇರಿಯಲ್ಲಿ ಮಂಜೂರಾಗಿರುವ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ : 27-02-2011ರಿಂದ ಮುಂದುವರೆಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ನಅಇ 149 ಎಂಐಬಿ 2000, ದಿನಾಂಕ : 27-02-2000.
2. ಸರ್ಕಾರದ ಆದೇಶ ಸಂಖ್ಯೆ : ನಅಇ 02 ನಯೋಸೇ 2009, ದಿನಾಂಕ : 10-02-2009.
3. ಸರ್ಕಾರದ ಆದೇಶ ಸಂಖ್ಯೆ : ನಅಇ 110 ನಯೋಸೇ 2010, ದಿನಾಂಕ : 30-07-2010.
4. ಏಕ ಕಡತ ಸಂಖ್ಯೆ : ಬಿಎಂಐಸಿಎಪಿಎ/1/ಕಮುಂ/2011, ದಿನಾಂಕ : 15-02-2011.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಆದೇಶದಲ್ಲಿ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಸ್ಥಳೀಯ ಯೋಜನಾ ಪ್ರಾಧಿಕಾರಕ್ಕೆ ಒಟ್ಟು 8 ವಿವಿಧ ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜಿಸಿ ಕಾಲಕಾಲಕ್ಕೆ ಮುಂದುವರೆಸುತ್ತಾ, ಓದಲಾದ (2) ಮತ್ತು (3) ರಲ್ಲಿ ಒಂದು ವರ್ಷದವರೆಗೆ ಮುಂದುವರಿಸಲಾಗಿತ್ತು.

ಮುಂದುವರಿದಂತೆ, ಮೇಲೆ ಓದಲಾದ (4)ರ ಏಕ ಕಡತ ಸಂಖ್ಯೆ : ಬಿಎಂಐಸಿಎಪಿಎ/1/ಕಮುಂ/2011, ದಿನಾಂಕ : 15-02-2011ರ ಪ್ರಸ್ತಾವನೆಯಲ್ಲಿ ಸದರಿ ಪ್ರಾಧಿಕಾರವನ್ನು ಕೆ.ಟಿ.ಸಿ.ಪಿ. ಕಾಯ್ದೆಯಡಿಯಲ್ಲಿ ರಚಿಸಿರುವುದರಿಂದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಭಿವೃದ್ಧಿಗಳಿಗೂ ಪ್ರಾಧಿಕಾರದ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುವುದರಿಂದ ಸದರಿ ಎಲ್ಲಾ 8 ಹುದ್ದೆಗಳನ್ನು 3 ವರ್ಷದ ಅವಧಿಗೆ ಅಥವಾ ಬಿಎಂಐಸಿಎಪಿಎ ದ ಕಾರ್ಯವು ಮುಕ್ತಾಯವಾಗುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ದಿನಾಂಕ : 27-02-2011ರಿಂದ ಮುಂದುವರಿಸುವಂತೆ ಸರ್ಕಾರವನ್ನು ಸದಸ್ಯ ಕಾರ್ಯದರ್ಶಿ, ಬಿಎಂಐಸಿಎಪಿಎ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 34 ನಯೋಸೇ 2011, ಬೆಂಗಳೂರು, ದಿನಾಂಕ : 16-07-2011

ಸರ್ಕಾರದ ಆದೇಶ ಸಂಖ್ಯೆ : ನಅಇ 286 ಅಪ್ರಾ 2007, ದಿನಾಂಕ : 30-05-2007ರಲ್ಲಿ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಸ್ಥಳೀಯ ಯೋಜನಾ ಪ್ರಾಧಿಕಾರ ಹಾಗೂ ಬೆಂಗಳೂರು ವಿಭಾಗದ ನಗರ ಯೋಜನೆಗೆ ಸಂಬಂಧಿಸಿದ ಯೋಜನಾ ಪ್ರಾಧಿಕಾರದ ಕೆಲಸವನ್ನು ನಿರ್ವಹಿಸಲು ತಾತ್ಕಾಲಿಕವಾಗಿ ಮುಂದುವರೆಸಲಾದ ಒಟ್ಟು 8 ವಿವಿಧ ವೃಂದದ ಹುದ್ದೆಗಳನ್ನು ಸದರಿ ಆದೇಶದಲ್ಲಿ ನಮೂದಿಸಲಾದ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ದಿನಾಂಕ : 27-02-2011 ರಿಂದ ಪುನಃ ಒಂದು ವರ್ಷದ ಅವಧಿಗೆ ಅಥವಾ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಸ್ಥಳೀಯ ಯೋಜನಾ ಪ್ರಾಧಿಕಾರ ಕಾರ್ಯ ಮುಕ್ತಾಯವಾಗುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ತಾತ್ಕಾಲಿಕವಾಗಿ ಮುಂದುವರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಸಿ.ಟಿ. ನಾರಾಯಣಸ್ವಾಮಿ
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 1857

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಜಾಗೃತ ಸಮಿತಿಯ ಅಧ್ಯಕ್ಷರನ್ನು ನಾಮನಿರ್ದೇಶಿಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ. 16/ಯೋಉಮಾ/2010 ದಿನಾಂಕ 18-01-2010.
2. ಮಾನ್ಯ ಸಚಿವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಟಿಪ್ಪಣಿ ಸಂಖ್ಯೆ: ಗ್ರಾಅಪರಾ/ಆ/ಕಾ/2699/2011 ದಿನಾಂಕ 28-06-2011.
3. ಮಾನ್ಯ ಶಾಸಕರು ಬೆಂಗಳೂರು ದಕ್ಷಿಣ ಕ್ಷೇತ್ರ ರವರು ಮಾನ್ಯ ಸಚಿವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಗೆ ಬರೆದಿರುವ ಪತ್ರ ದಿನಾಂಕ 25-06-2011.

ಪ್ರಸ್ತಾವನೆ :

ಪಂಚಾಯತ್ ರಾಜ್ ಸಂಸ್ಥೆಗಳಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳ ಪರಿಶೀಲನೆ ಮಾಡಲು ಉಲ್ಲೇಖ (1)ರ ಆದೇಶದ ಮೂಲಕ ವಿಧಾನ ಸಭಾ ಕ್ಷೇತ್ರವಾರು ಜಾಗೃತ ಸಮಿತಿಯನ್ನು ರಚಿಸಲಾಗಿದೆ. ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರವಾರು ಜಾಗೃತ ಸಮಿತಿಗೆ ಹಾಲಿ ಅಧ್ಯಕ್ಷರಾದ ಸ್ಥಳೀಯ ಶಾಸಕರು, ಬೆಂಗಳೂರು ದಕ್ಷಿಣ ಕ್ಷೇತ್ರ ರವರು ಉಲ್ಲೇಖ (3)ರ ಪತ್ರದಲ್ಲಿ ಅವರ ಬದಲಿಗೆ ಶ್ರೀ ವೈ.ಆರ್. ಹರೀಶ್ ಬಿನ್ ಶ್ರೀ ರಾಮಚಂದ್ರರೆಡ್ಡಿ,

ಯಾರಂಡಹಳ್ಳಿ ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರನ್ನು ಸದರಿ ಸಮಿತಿಗೆ ಅಧ್ಯಕ್ಷರನ್ನಾಗಿ ನಾಮನಿರ್ದೇಶನ ಮಾಡಲು ಕೋರಿದ್ದು, ಇದನ್ನು ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಒಪ್ಪಿದ್ದು, ಸನ್ಮಾನ್ಯ ಮುಖ್ಯಮಂತ್ರಿಯವರು ಈ ಕೋರಿಕೆಯನ್ನು ಅನುಮೋದಿಸಿರುತ್ತಾರೆ. ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಜಾಗೃತ ಸಮಿತಿಗೆ ಬದಲಿ ಅಧ್ಯಕ್ಷರನ್ನು ನಾಮನಿರ್ದೇಶಿಸಲು ಸರ್ಕಾರವು ನಿರ್ದೇಶಿಸಿರುವುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 16 ಯೋಉಮಾ 2010, ಬೆಂಗಳೂರು, ದಿನಾಂಕ : 22-07-2011.

ಉಲ್ಲೇಖ (1)ರ ಆದೇಶದ ಮೂಲಕ ರಚಿಸಲಾಗಿರುವ ವಿಧಾನ ಸಭಾ ಕ್ಷೇತ್ರವಾರು ಜಾಗೃತ ಸಮಿತಿಗೆ ಸಂಬಂಧಿಸಿದಂತೆ, ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಜಾಗೃತ ಸಮಿತಿಗೆ ಸ್ಥಳೀಯ ಶಾಸಕರ ಬದಲಿಗೆ ಶ್ರೀ ವೈ.ಆರ್. ಹರೀಶ್ ಬಿನ್. ಶ್ರೀ ರಾಮಚಂದ್ರರೆಡ್ಡಿ ಯಾರಂಡಹಳ್ಳಿ ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ಬೆಂಗಳೂರು ನಗರ ಜಿಲ್ಲೆ ಇವರನ್ನು ಅಧ್ಯಕ್ಷರನ್ನಾಗಿ ನಾಮನಿರ್ದೇಶಿಸಲಾಗಿದೆ. ಸದರಿ ಆದೇಶವು ತಕ್ಷಣದಿಂದ ಅನ್ವಯಿಸಲಿದ್ದು ಹಾಲಿ ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಶಾಸಕರ ಅವಧಿಯವರೆಗೆ ಅಥವಾ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಸ್ವರ್ಣಲತ ಎಂ. ಭಂಡಾರೆ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪಿ.ಆರ್. 1860

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ, ಬ.ಬಾಗೇವಾಡಿ ತಾಲ್ಲೂಕು ಮಲಘಾಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 02-06-2011ರ ಪತ್ರ ಸಂಖ್ಯೆ: ಮುಇಂ/ಸನೀ(ಉ)/ಭೂಸ್ವಾಪ್ರ/2011-12/2985.

ಪ್ರಸ್ತಾವನೆ :

ಬಿಜಾಪುರ ಜಿಲ್ಲೆ, ಬ.ಬಾಗೇವಾಡಿ ತಾಲ್ಲೂಕು ಮಲಘಾಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಮಲಘಾಣ ಮತ್ತು ಕಲಕುರ್ಕಿ ಗ್ರಾಮಗಳ ಜಮೀನುಗಳಿಗೆ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ 02-06-2011ರ ಪತ್ರದಲ್ಲಿ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 04-09-1997.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಮ ಘೋಷಿಸಿದ ದಿನಾಂಕ 21-12-1999.

ಭೂಸ್ವಾಧೀನಾಧಿಕಾರಿಗಳ ಐತೀರ್ಪಿನಂತೆ ಪರಿಹಾರ ಪಡೆದ ಭೂಮಾಲೀಕರು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಬಿಜಾಪುರ ಸಿವಿಲ್ ನ್ಯಾಯಾಲಯದಲ್ಲಿ (ಹಿರಿಯ ವಿಭಾಗ) ಎಲ್.ಎ.ಸಿ. ಪ್ರಕರಣಗಳನ್ನು ದಾಖಲಿಸಿದ್ದು, ನ್ಯಾಯಾಲಯವು ಎಲ್.ಎ.ಸಿ. ಸಂಖ್ಯೆ: 147/2000 ರಲ್ಲಿ ಪ್ರತಿ ಎಕರೆಗೆ ರೂ.72,600/-ಗಳನ್ನು, 150/2000 ಮತ್ತು 151/2000ರಲ್ಲಿ ಪ್ರತಿ ಎಕರೆಗೆ ರೂ. 79,000/-ಗಳನ್ನು ನಿಗದಿಪಡಿಸಿದೆ. ಇದಕ್ಕೂ ತೃಪ್ತರಾಗದ ಭೂಮಾಲೀಕರು ಉಚ್ಚ ನ್ಯಾಯಾಲಯದಲ್ಲಿ ಎಂ.ಎಫ್.ಎ. ಸಂಖ್ಯೆ:2444, 2446 ಮತ್ತು 2448/07ನ್ನು ದಾಖಲಿಸಿರುತ್ತಾರೆ. ಉಚ್ಚ ನ್ಯಾಯಾಲಯವು ಪ್ರತಿ ಎಕರೆಗೆ ರೂ. 79,000/- ಗಳಿಂದ ರೂ. 1,14,000/-ಗಳಿಗೆ ಹೆಚ್ಚಿಸಿ ಇತರೆ ಸವಲತ್ತುಗಳೊಂದಿಗೆ ಪಾವತಿಸುವಂತೆ ಆದೇಶಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯು ಪತ್ರ ಸಂಖ್ಯೆ: ಲಾ 805 ಎಲ್.ಬಿ.ಎಸ್ 2010, ದಿನಾಂಕ 21-10-2010, ಲಾ 792 ಎಲ್.ಬಿ.ಎಸ್. 2010, ದಿನಾಂಕ 04-10-2010 ಮತ್ತು ಲಾ 898 ಎಲ್.ಬಿ.ಎಸ್. 2010, ದಿನಾಂಕ 02-12-2010ರ ಪತ್ರಗಳಲ್ಲಿ ಅಭಿಪ್ರಾಯ ನೀಡಿದೆ.

ಪಾವತಿಸಬೇಕಾದ ಪರಿಹಾರ ಮೊತ್ತದ ವಿವರ ಕೆಳಕಂಡಂತಿದೆ:

ಕ್ರ ಸಂ.	ಎಲ್ಎಸಿ	ಎಂಎಫ್ಎ	ಗ್ರಾಮ	ಸ.ನಂ.	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	147/2000	2444/07	ಮಲಘಾಣ	16/1+2,	1-37	188485
2	150/2000	2446/07	ಕಲಗುರ್ಕಿ	375/2/3	4-12	122912
3	151/2000	2448/07	ಕಲಗುರ್ಕಿ	375/2/1	1-13	203124
	ಒಟ್ಟು					514521

ಸರ್ಕಾರದ ಆದೇಶ ಸಂಖ್ಯೆ : ಸನೀಇ 66 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ : 25ನೇ ಜುಲೈ 2011.

ಬಿಜಾಪುರ ಜಿಲ್ಲೆ, ಬ.ಬಾಗೇವಾಡಿ ತಾಲ್ಲೂಕು ಮಲಘಾಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಮಲಘಾಣ ಮತ್ತು ಕಲಕುರ್ಕಿ ಗ್ರಾಮಕ್ಕೆ ಸೇರಿದ ವಿವಿಧ ಸರ್ವೆ ನಂಬರ್‌ಗಳ ಜಮೀನುಗಳಿಗೆ ಉಚ್ಚ ನ್ಯಾಯಾಲಯವು ಎಂ.ಎಫ್.ಎ. ಪ್ರಕರಣಗಳಲ್ಲಿ ನೀಡಿರುವ

ಶೀರ್ಷಿನಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ. 5,14,521–00 ಗಳನ್ನು (ಐದು ಲಕ್ಷದ ಹದಿನಾಲ್ಕು ಸಾವಿರದ ಐನೂರು ಇಪ್ಪತ್ತೊಂದು ರೂ.ಗಳು ಮಾತ್ರ) ಪಾವತಿಸಲು ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2011–12ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ರೂ.5,14,521/– ಗಳನ್ನು ಹಂಚಿಕೆ ಮಾಡಿ, ಬಿಡುಗಡೆ ಮಾಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20–10–2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರ ದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಕೆ.ಸಿ. ಸಿದ್ದಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ,
ಪಿ.ಆರ್. 1861 ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಐ.ಎ. ಪತ್ತೇಪೂರ, ನಿವೃತ್ತ, ಎ.ಹೆಚ್.ಸಿ., ಡಿ.ಎ.ಆರ್., ಬಿಜಾಪುರ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬಿಜಾಪುರ, ಇವರ ಆದೇಶ ಸಂಖ್ಯೆ ಸಿಬ್ಬಂದಿ (3)/ಪಿಆರ್8/2007 ದಿನಾಂಕ 28–02–2009.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರ ಆದೇಶ ಸಂಖ್ಯೆ: ಅಪೀಲು/22/ಉವ/2009 ದಿನಾಂಕ 14–12–2009.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ 18–10–2010.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಅಪೀಲು(2)/64/2010–11 ದಿನಾಂಕ 31–03–2011.

ಪ್ರಸ್ತಾವನೆ :

ಶ್ರೀ ಐ.ಎ. ಪತ್ತೇಪೂರ, ಇವರು ಜಿಲ್ಲಾ ಸಶಸ್ತ್ರ ಪಡೆ, ಬಿಜಾಪುರದಲ್ಲಿ ಎ.ಹೆಚ್.ಸಿ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ಘೋರ ದುರ್ನಡತೆಯನ್ನು ಪ್ರದರ್ಶಿಸಿ ಇಲಾಖೆಯ ಘನತೆಗೆ ಕುಂದುಂಟು ಮಾಡಿರುವುದರಿಂದ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:

1) ನೀವು ಶ್ರೀ ಐ.ಎ. ಪತ್ತೇಪೂರ, ಎ.ಹೆಚ್.ಸಿ., ಬಕ್ಕಲ್ ನಂಬರ್: 6, ಡಿ.ಎ.ಆರ್., ಬಿಜಾಪುರದಲ್ಲಿ ಸೇವೆ ಸಲ್ಲಿಸುತ್ತಿದ್ದೀರಿ. ನಿಮಗೆ ದಿನಾಂಕ 28–8–2007 ರಂದು ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಗಾರ್ಡ್ ಕಮಾಂಡರ್ ಕರ್ತವ್ಯಕ್ಕೆ ನೇಮಿಸಲಾಗಿದ್ದು ನೀವು ಆ ದಿವಸ ಪಹರೆ ಗಾರ್ಡ್ ಪುಸ್ತಕದಲ್ಲಿ ಬೆಳಿಗ್ಗೆ 9 ಗಂಟೆಗೆ ಸಹಿ ಮಾಡಿ ನಂತರ ಹೇಳದೇ ಕೇಳದೇ ಕರ್ತವ್ಯಕ್ಕೆ ಅನಧಿಕೃತವಾಗಿ ಅಮಾನತ್ತಿನ ಆದೇಶ ಜಾರಿಯಾಗುವವರೆಗೂ ಅಂದರೆ ದಿನಾಂಕ 01–10–2007ರ ವರೆಗೆ ಗೈರು ಹಾಜರಾಗಿದ್ದು ಅದೆ.

2) ನೀವು ದಿನಾಂಕ 28–08–2007 ರಂದು ಬೆಳಿಗ್ಗೆ 11–00 ಗಂಟೆಯಿಂದ 12–00 ಗಂಟೆಯ ಅವಧಿಯಲ್ಲಿ ನಿಮ್ಮದು ಬಿಜಾಪುರ ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಗಾರ್ಡ್ ಕಮಾಂಡರ್ ಅಂತಾ ಕರ್ತವ್ಯ ಇದ್ದ ಬಗ್ಗೆ ಗೊತ್ತಿದ್ದರೂ ಸಹ ಬಿಜಾಪುರದ ಹಕೀಮ ಚೌಕದ ಹತ್ತಿರ ಸಮವಸ್ತ್ರದಲ್ಲಿ ಅನಾವಶ್ಯಕವಾಗಿ ಇದ್ದು 1) ಭೀಮತಿ ಯದುರಾಯ ಜಯವಾಡಗಿ, ಸಾ: ಮುದನಾಳ ತಾ: ಮುದ್ದೇಬಿಹಾಳ 2) ಬಾಶಾಸಾಬ ಪಿಂಜಾರ. ಸಾ: ಕೈ ತಂಗಡಗಿ ತಾ: ಮುದ್ದೇಬಿಹಾಳ ರವರುಗಳು ಬಿಜಾಪುರದಲ್ಲಿ ಬಸ್‌ಸ್ಟ್ಯಾಂಡ್ ಕಡೆಗೆ ಹೊರಟಿದ್ದ ಆಟೋ ರಿಕ್ಷಾಕ್ಕೆ ಕೈ ಮಾಡಿ ನಿಲ್ಲಿಸಿ ನೀವು ಆಟೋ ರಿಕ್ಷಾದಲ್ಲಿ ಹತ್ತಿ ಕುಳಿತಿದ್ದು ನಂತರ ನೀವು ಸದರ ಭೀಮಶಿಗೆ ಅವರ ಹತ್ತಿರ ಇದ್ದ ಪ್ಲಾಸ್ಟಿಕ್ ಚೀಲದಲ್ಲಿ ಏನಿದೆ ಅಂತಾ ಕೇಳಿ ನಿನಗೆ ಜೈಲಿಗೆ ಕಳಿಹಿಸುತ್ತೀನಿ ಅಂತಾ ಬೆದರಿಸಿ ಅವರ ಕೈಯಲ್ಲಿದ್ದ ರೂ. 60,000–00 ಹಣದ ಪ್ಲಾಸ್ಟಿಕ್ ಚೀಲವನ್ನು ಜೋರಾವರಿಯಿಂದಾ ಕಸಿದುಕೊಂಡು ಸ್ವಲ್ಪ ಮುಂದು ಹೋಗಿ ಸದರ ಭೀಮಶಿಯನ್ನು ಆಟೋ ರಿಕ್ಷಾದಿಂದಾ ಬೆದರಿಸಿ ಕೆಳಗೆ ಇಳಿಸಿ ಈ ರೀತಿ ನೀವು ಒಬ್ಬ ಪೊಲೀಸ್ ಅಧಿಕಾರಿಯಾಗಿ ಹಣ ದೋಚಲು ಇನ್ನಿತರ ಆರೋಪಿತರಾದ 1) ಬಾಶಾಸಾಬ ಪಿಂಜಾರ ಸಾ: ತಂಗಡಗಿ ತಾ: ಮುದ್ದೇಬಿಹಾಳ 2) ದಾದಾಮೀಯಾ ಅಬ್ದುಲ್‌ಖಾದರ ಪಠಾಣ ಸಾ: ಬಾಗಲಕೋಟ ಹಾಗೂ 3) ಇನ್ನೊಬ್ಬನೊಂದಿಗೆ ಕೂಡಿಕೊಂಡು ಹೊಂಚುಹಾಕಿ ಮೋಸ ಮಾಡಿ ಹಣವನ್ನು ದೋಚಿಕೊಂಡು ಹೋಗಿದ್ದು ಅದೆ. ಈ ಬಗ್ಗೆ ನೀವು ಗೋಲಗುಮ್ಮಟ ಪಿ.ಎಸ್. ಬಿಜಾಪುರದಲ್ಲಿ ದಾಖಲಾದ ಸಿಆರ್ ನಂಬರ್ 171/2007 ಕಲಂ

392, 120(ಬಿ), 420 ಸಹ 34 ಐಪಿಸಿ ನೇದ್ದರಲ್ಲಿ ಆರೋಪಿಗಳಾಗಿದ್ದು ಅದೆ. ಈ ಮೂಲಕ ನೀವು ಪೋಲೀಸ್ ಇಲಾಖೆಯಲ್ಲಿ ಇದ್ದುಕೊಂಡು ಘೋರ ದುರ್ನಡತೆಯನ್ನು ಪ್ರದರ್ಶಿಸಿ ಪೊಲೀಸ್ ಇಲಾಖೆಯ ಘನತೆಗೆ ಕುಂದುಂಟು ಮಾಡಿದ್ದು ಆದೆ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಬಿಜಾಪುರ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 28-02-2009ರ ಆದೇಶದಲ್ಲಿ ಅರ್ಜಿದಾರರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಲಾಗಿದೆ ದಿನಾಂಕ: 28-08-2007 ರಿಂದ 10-03-2008ರ ವರೆಗಿನ ಅಮಾನತ್ತಿನ ಅವಧಿಯನ್ನು ಅಮಾನತ್ತೆಂದೆ ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 14-12-2009ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅತೀವ ನಿರ್ಲಕ್ಷ್ಯತೆ, ಘೋರ ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 162 ಪೊಸಿಅ 2010, ಬೆಂಗಳೂರು, ದಿನಾಂಕ : 25-07-2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಐ.ಎ. ಪತ್ತೇಪೂರ, ನಿವೃತ್ತ ಎ.ಹೆಚ್.ಸಿ., ಡಿ.ಎ.ಆರ್., ಬಿಜಾಪುರ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1862 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಎಂ.ಸಿ. ದಶರಥಮೂರ್ತಿ, ಪಿ.ಐ., ಕೇಂದ್ರ ವೃತ್ತ, ದಾವಣಗೆರೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :

1. ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ದಾವಣಗೆರೆ, ಇವರ ಆದೇಶ ಸಂಖ್ಯೆ ಸಿಬ್ಬಂದಿ 5/ಪಿಆರ್/15/2010 (ಓ.ಬಿ. 461/2010) ದಿನಾಂಕ 28-04-2010.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ, ಇವರ ಆದೇಶ ಸಂಖ್ಯೆ: 29/ಅಪೀಲು/ಸಿಬ್ಬಂದಿ(2)2010-11 (ಓ.ಬಿ. ಸಂಖ್ಯೆ: 158/2010-11) ದಿನಾಂಕ 09-09-2010.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ 23-11-2010.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ: ಸಿಬಿ(8)/94/2010-11 ದಿನಾಂಕ 03-03-2011.

ಪ್ರಸ್ತಾವನೆ :

ಶ್ರೀ ಎಂ.ಸಿ. ದಶರಥಮೂರ್ತಿ, ಪಿ.ಐ., ಇವರು ದಾವಣಗೆರೆ ಕೇಂದ್ರ ವೃತ್ತದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಮತ್ತು ಮೇಲಧಿಕಾರಿಗಳ ಆದೇಶವನ್ನು ಉಲ್ಲಂಘಿಸಿ ದುರ್ನಡತೆ ಪ್ರದರ್ಶಿಸಿದ ಕಾರಣದ ಮೇಲೆ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 7ರಡಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ:

"ಮಹಿಳಾ ಪೊಲೀಸ್ ಠಾಣೆಯಲ್ಲಿ ದಾಖಲಾದ ಘೋರ ಅಪರಾಧ ಪ್ರಕರಣಗಳ ಬಗ್ಗೆ ಶೀಘ್ರ ತನಿಖೆ ನಡೆಸುವಲ್ಲಿ ಹಾಗೂ ಸಂಬಂಧಿಸಿದ ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸುವಲ್ಲಿ ತೋರಿದ ನಿರ್ಲಕ್ಷ್ಯತನ ಹಾಗೂ ಬೇಜವಾಬ್ದಾರಿತನ ಆರೋಪಗಳು."

ನೀವು ದಾವಣಗೆರೆ ಕೇಂದ್ರ ವೃತ್ತ ನಿರೀಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಈ ಕಚೇರಿಯಲ್ಲಿ ನಡೆದ ಎಲ್ಲಾ ಮಾಸಿಕ ಅಪರಾಧ ಸಭೆಗಳಲ್ಲಿ ಪ್ರಕರಣಗಳ ತನಿಖೆ ಮತ್ತು ಆರೋಪಿಗಳನ್ನು ದಸ್ತಗಿರಿ ಮಾಡುವ ಬಗ್ಗೆ ಸಲಹೆ, ಸೂಚನೆಗಳನ್ನು ನೀಡಲಾಗಿದ್ದು, ನಿಮ್ಮ ಮೇಲಧಿಕಾರಿಗಳ ಆದೇಶಗಳನ್ನು ಚಾಚೂ ತಪ್ಪದೇ ಪಾಲಿಸುವುದು ಮತ್ತು ಇಲಾಖೆಯ ನಿಯಮಾವಳಿಗಳಿಗೆ ಬದ್ಧರಾಗಿದ್ದುಕೊಂಡು ಅವುಗಳ ಚೌಕಟ್ಟಿನಲ್ಲಿಯೇ ಕರ್ತವ್ಯ ನಿರ್ವಹಿಸುವುದು

ನಿಮ್ಮ ಆದ್ಯ ಕರ್ತವ್ಯವಾಗಿರುತ್ತದೆ. ಆದರೂ ಸಹ ನೀವು ಕ್ರಮವಾಗಿ ದಿನಾಂಕ: 24-11-2009 ಮತ್ತು 17-01-2010 ರಂದು ದಾಖಲಾದ ಮಹಿಳಾ ಪೊಲೀಸ್ ಠಾಣೆ ಗುನ್ನೆ ನಂ: 44/2009 ಮತ್ತು 04/2010 ಕಲಂ 498(ಎ), 506 ಐಪಿಸಿ ಮತ್ತು 3 ಮತ್ತು 4 ಡಿ.ಪಿ. ಆಕ್ಟ್, 1961 ರೀತ್ಯದ ಘೋರ ಅಪರಾಧ ಪ್ರಕರಣದಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಶೀಘ್ರವಾಗಿ ತನಿಖೆ ನಡೆಸಿ ಸಂಬಂಧಪಟ್ಟ ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸದೆ, ಆರೋಪಿಗಳು ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಪಡೆಯಲು ಅನುಕೂಲವಾಗುವಂತೆ ವರ್ತಿಸಿ ಆರೋಪಿಗಳನ್ನು ದಸ್ತಗಿರಿ ಮಾಡುವ ಕರ್ತವ್ಯದಲ್ಲಿ ನಿರ್ಲಿಪ್ತರಾಗಿದ್ದುಕೊಂಡು ನಿಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯತೆಯನ್ನು ಮತ್ತು ಮೇಲಧಿಕಾರಿಗಳ ಆದೇಶಗಳನ್ನು ಉಲ್ಲಂಘಿಸಿ ದುರ್ನಡತೆಯನ್ನು ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ದಾವಣಗೆರೆ, ಇವರು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ 28-04-2010ರ ಆದೇಶದಲ್ಲಿ ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ಭವಿಷ್ಯದ ವೇತನ ಬಡ್ತಿಗಳ ಮೇಲೆ ಪರಿಣಾಮ ಬೀರದಂತೆ ಮೂರು (3) ತಿಂಗಳ ಕಾಲ ಮುಂದೂಡಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಪೂರ್ವ ವಲಯ, ದಾವಣಗೆರೆ, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 09-09-2010ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಮೇಲಧಿಕಾರಿಗಳ ಆದೇಶವನ್ನು ಉಲ್ಲಂಘಿಸಿ ದುರ್ನಡತೆಯನ್ನು ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 185 ಪೊಸಿಅ 2010, ಬೆಂಗಳೂರು, ದಿನಾಂಕ : 25-07-2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ.ಸಿ. ದಶರಥಮೂರ್ತಿ, ಪಿ.ಐ., ಕೇಂದ್ರ ವೃತ್ತ, ದಾವಣಗೆರೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 1863

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಹೆಚ್.ಡಿ. ನಾಗರಾಜ, ಹೆಚ್.ಸಿ., ಗಂಡಸಿ ಪೊಲೀಸ್ ಠಾಣೆ, ಹಾಸನ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿ ಅರ್ಜಿ ಕುರಿತು ಅಂತಿಮ ಆದೇಶ.

ಓದಲಾಗಿದೆ :
1. ಶಿಸ್ತು ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಹಾಸನ ಜಿಲ್ಲೆ, ಇವರ ಆದೇಶ ಸಂಖ್ಯೆ : ಸಿಬ್ಬಂದಿ (1)/ಇವಿ/21/2008-09 (ಓ.ಬಿ. 33/2010, ದಿನಾಂಕ 28-6-2010.
2. ಮೇಲ್ಮನವಿ ಪ್ರಾಧಿಕಾರ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರ ಆದೇಶ ಸಂಖ್ಯೆ : ಅಪೀಲು (38)/2010-11, (ಓ.ಬಿ. ಸಂಖ್ಯೆ : 41/2010-11) ದಿನಾಂಕ 04-11-2010.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ 28-01-2011.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ : ಅಪೀಲು (2) /87/2010-11, ದಿನಾಂಕ 29-04-2011.

ಪ್ರಸ್ತಾವನೆ :

ಶ್ರೀ ಹೆಚ್.ಡಿ. ನಾಗರಾಜ, ಹೆಚ್.ಸಿ., ಇವರು ಗಂಡಸಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಕರ್ತವ್ಯದಲ್ಲಿ ದುರ್ನಡತೆ ಹಾಗೂ ಅಶಿಸ್ತು ಪ್ರದರ್ಶಿಸಿ ಕರ್ತವ್ಯಲೋಪವೆಸಗಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6 ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

"ದಿನಾಂಕ 21-01-2009 ರಂದು ಸುತ್ತೂರು ಜಾತ್ರೆಗೆ ಹೆಚ್.ಡಿ. ನಾಗರಾಜ್, ಸಿ.ಹೆಚ್.ಸಿ. 49, ಗಂಡಸಿ ಪೊಲೀಸ್ ಠಾಣೆ ಹಾಗೂ ಸಿಪಿಸಿ 696 ರವರನ್ನು ಪಿ.ಎಸ್.ಐ., ರವರು ಬಂದೋಬಸ್ತ್ ಕರ್ತವ್ಯಕ್ಕೆ ನೇಮಕ ಮಾಡಿದ್ದಾಗ ಪಿ.ಎಸ್.ಐ. ರವರಿಗೆ ಸೂಳೆ ಮಕ್ಕಳು ನನ್ನ ಹೆಸರನ್ನು ಸೂಚಿಸಿದ್ದು, ಎಂದು ಬೈದು ಏಕವಚನದಲ್ಲಿ ಸೂಳೆ

ಮಕ್ಕಳಾ ಮಾತು ಕೇಳುವುದಿಲ್ಲವೆಂದು ಅವಾಚ್ಯ ಶಬ್ದಗಳಿಂದ ಬೈದು ಠಾಣೆಯ ಹೊರ ಭಾಗಕ್ಕೆ ಬಂದು ಸಾರ್ವಜನಿಕವಾಗಿ ಪಿ.ಎಸ್.ಐ. ರವರಿಗೆ ಮತ್ತು ಠಾಣಾ ಬರಹಗಾರರಿಗೆ ಅವಾಚ್ಯವಾಗಿ ಬೈದು, ಸಮಜಾಯಿಷಿ ಕೇಳಿ ಜ್ಞಾಪನ ನೀಡಿದಾಗ ಜ್ಞಾಪನವನ್ನು ತೆಗೆದುಕೊಳ್ಳದೇ ನಿರಾಕರಿಸಿ ದುರ್ನಡತೆ ಪ್ರದರ್ಶಿಸಿದ್ದು, ದಿನಾಂಕ 13-01-2009 ರಂದು ರಾತ್ರಿ ಸರ್ಕಾರಿ ಕರ್ತವ್ಯಕ್ಕೆ ಕೊಟ್ಟಿರುವ ಗಂಡಸಿ ಠಾಣೆಯ ದೂರವಾಣಿಯನ್ನು ತಮ್ಮ ಸ್ವಂತಕ್ಕೆ ದುರುಪಯೋಗಪಡಿಸಿಕೊಂಡಿದ್ದು ಮೇಲಾಧಿಕಾರಿ ಪಿ.ಎಸ್.ಐ. ರವರೊಡನೆ ದುರ್ನಡತೆಯಿಂದ ಹಾಗೂ ಉದ್ಧಟತನದಿಂದ ನಡೆದುಕೊಂಡು ಅಶಿಸ್ತು ಪ್ರದರ್ಶಿಸಿ ಕರ್ತವ್ಯಲೋಪವೆಸಗಿರುತ್ತಾರೆಂದು ಆರೋಪ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆ.ಪೊ.ಅ. ರವರ ವಿರುದ್ಧದ ಪ್ರಮುಖ ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ಹಾಸನ ಜಿಲ್ಲೆ, ಇವರು ಮೇಲ್ಕಂಡ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ 28.6.10ರ ಆದೇಶದಲ್ಲಿ ಅರ್ಜಿದಾರರ ಮುಂದಿನ ವಾರ್ಷಿಕ ವೇತನ ಬಡ್ತಿಯನ್ನು ತದನಂತರದ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗುವಂತೆ ಎರಡು ವರ್ಷಗಳ ಕಾಲ ಮುಂದೂಡಲಾಗಿದೆ. ದಿನಾಂಕ 05-2-2009 ರಿಂದ 23-3-2009 ರ ವರೆಗಿನ ಅಮಾನತ್ತಿನ ಅವಧಿಯನ್ನು ಜೀವನಾಧಾರ ಭತ್ಯಕ್ಕೆ ಸಮಗೊಳಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ದಕ್ಷಿಣ ವಲಯ, ಮೈಸೂರು, ಇವರು ಮೇಲೆ ಕ್ರಮ ಸಂಖ್ಯೆ : (2) ರಲ್ಲಿ ಓದಲಾದ ದಿನಾಂಕ 04-11-2010ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ, ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಸದರಿ ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿ ಪರಿಗಣಿಸುವಂತಹ ಯಾವುದೇ ಸಮರ್ಥನೀಯ ಹೊಸ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅತೀವ ನಿರ್ಲಕ್ಷತೆ, ದುರ್ನಡತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಒಇ 13 ಪೊಸಿಅ 2011, ಬೆಂಗಳೂರು, ದಿನಾಂಕ 22ನೇ ಜುಲೈ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಹೆಚ್.ಡಿ. ನಾಗರಾಜ, ಹೆಚ್.ಸಿ., ಗಂಡಸಿ ಪೊಲೀಸ್ ಠಾಣೆ, ಹಾಸನ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ.ಎನ್. ರವಿಪ್ರಕಾಶ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ.
(ಪೊಲೀಸ್ ಸೇವೆಗಳು).

ಪಿ.ಆರ್.ನಂ. 1864

ಕಂದಾಯ ಸಚಿವಾಲಯ

ವಿಷಯ : ಶ್ರೀ ಆರ್. ರಂಗಸ್ವಾಮಯ್ಯ, ಹಿಂದಿನ ತಹಶೀಲ್ದಾರ್, ಚಿಕ್ಕಮಗಳೂರು ತಾಲ್ಲೂಕು ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಹಾಗೂ ಮಂಡನಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ : 1. ಕಾರಣ ಕೇಳುವ ನೋಟೀಸು ದಿನಾಂಕ 11-08-2010.
2. ಶ್ರೀ ಆರ್. ರಂಗಸ್ವಾಮಯ್ಯ ಇವರ ಲಿಖಿತ ಹೇಳಿಕೆ ದಿನಾಂಕ 31-08-2009.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಸಂಖ್ಯೆ (1)ರಲ್ಲಿ, ಶ್ರೀ ಆರ್. ರಂಗಸ್ವಾಮಯ್ಯ, ಹಿಂದಿನ ತಹಶೀಲ್ದಾರ್, ಚಿಕ್ಕಮಗಳೂರು ತಾಲ್ಲೂಕು ಕಛೇರಿಯಲ್ಲಿ ತಹಶೀಲ್ದಾರ್‌ರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಚಿಕ್ಕಮಗಳೂರು ತಾಲ್ಲೂಕು, ಲಕ್ಯಾ ಹೋಬಳಿ, ಹಿರೇಗೌಜ ಗ್ರಾಮದ ಸರ್ವೆ ನಂ. 148/3ಎ1 ರಲ್ಲಿ 2.35 ಎಕರೆ ಖುಷ್ಕಿ ಜಮೀನಿನ ಹದ್ದುಬಸ್ತು ಅಳತೆಗೆ ಸಂಬಂಧಿಸಿದಂತೆ 0.18 ಗುಂಟೆ ಜಮೀನನ್ನು ಬಾಜುದಾರರಾದ ಶ್ರೀ ಹೆಚ್.ಎಸ್. ಶೇಖರಪ್ಪ ಬಿನ್ ಹೆಚ್.ಎ. ಸಿದ್ದೇಗೌಡ ಇವರು ಒತ್ತುವರಿ ಮಾಡಿರುವುದನ್ನು ಮೋಜಣಿದಾರರು ಗುರುತಿಸಿರುವಂತೆ ಸದರಿ ಜಾಗವನ್ನು ಅರ್ಜಿದಾರರಾದ ಶ್ರೀ ಸದಾಶಿವ ಬಿನ್ ಪುಟ್ಟಪ್ಪ ಇವರಿಗೆ ಬಿಡಿಸಿ ಕೊಡಲು ಹಿಡುವಳಿ ಜಮೀನಿನ ಒತ್ತುವರಿ ಬಿಡಿಸಲು ಅಧಿಕಾರವಿಲ್ಲದಿದ್ದರೂ ಠಾಣಾಧಿಕಾರಿಗಳು, ಸಖ್ರಾಯಪಟ್ಟಣ ಪೋಲೀಸ್ ಠಾಣೆ ಇವರಿಗೆ ದಿನಾಂಕ 29-04-2008 ರಂದು ಪತ್ರ ಬರೆದು ಕರ್ತವ್ಯ ಲೋಪವೆಸಗಿರುತ್ತೀರೆಂದು ವರದಿ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರಲ್ಲಿ, ಶ್ರೀ ಆರ್. ರಂಗಸ್ವಾಮಯ್ಯ, ಹಿಂದಿನ ತಹಶೀಲ್ದಾರ್, ಚಿಕ್ಕಮಗಳೂರು ಇವರ ಮನವಿಯಲ್ಲಿ ಅನುಬಂಧ-1-4 ರಲ್ಲಿ ಮಾಡಿರುವ ಆರೋಪಗಳಿಗೆ ಲಿಖಿತ ಉತ್ತರವನ್ನು ನೀಡಿ, ಆರೋಪಗಳನ್ನು ಒಪ್ಪಿಕೊಂಡಿರುತ್ತಾರೆ ಆರೋಪದಿಂದ ದೋಷಮುಕ್ತನಾಗಿ ಮಾಡಬೇಕೆಂದು ಕೋರಿರುತ್ತಾರೆ.

ಮೇಲೆ ವಿವರಿಸಿದಂತೆ ಪ್ರಕರಣದಲ್ಲಿನ ಸತ್ಯಾಸತ್ಯತೆಯನ್ನು ತಿಳಿದುಕೊಂಡು ನಿರ್ಣಯ ತೆಗೆದುಕೊಳ್ಳುವ ಸಲುವಾಗಿ ಶ್ರೀ ಆರ್. ರಂಗಸ್ವಾಮಯ್ಯ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ಸುಭಾಷ್ ಟಿ. ಗೋಗಿ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ನಂ. 45(ಹಳೆಯ ನಂ. 369, 8ನೇ ಕ್ರಾಸ್, 2ನೇ ಬ್ಲಾಕ್, ಆರ್‌ಎಂವಿ 2ನೇ ಸ್ಟೇಜ್, (60 ಅಡಿ ರಸ್ತೆ) ಬೆಂಗಳೂರು-94. ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಅಪರ ಜಿಲ್ಲಾಧಿಕಾರಿ ಚಿಕ್ಕಮಗಳೂರು ಜಿಲ್ಲೆ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲು ತೀರ್ಮಾನಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 556 ಎಎಸ್‌ಡಿ 2009, ಬೆಂಗಳೂರು, ದಿನಾಂಕ 18ನೇ ಜುಲೈ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಆರ್. ರಂಗಸ್ವಾಮಯ್ಯ, ಹಿಂದಿನ ತಹಶೀಲ್ದಾರ್, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 13ರಡಿಯಲ್ಲಿ ಶ್ರೀ ಸುಭಾಷ್ ಟಿ. ಗೋಗಿ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ನಂ. 45 (ಹಳೆಯ ನಂ. 369, 8ನೇ ಕ್ರಾಸ್, 2ನೇ ಬ್ಲಾಕ್, ಆರ್‌ಎಂವಿ 2ನೇ ಸ್ಟೇಜ್, (60 ಅಡಿ ರಸ್ತೆ) ಬೆಂಗಳೂರು-94. ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11(5) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಅಪರ ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಈ ಪ್ರಕರಣದ ವಿಚಾರಣೆಯನ್ನು ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಕಛೇರಿಯ ಆವರಣದಲ್ಲಿ ಅಥವಾ ಅವರು ಗುರುತಿಸಿ ನಿಗದಿಪಡಿಸಿದ ಸ್ಥಳದಲ್ಲಿ ನಡೆಸತಕ್ಕದ್ದು. ಈ ಉದ್ದೇಶಕ್ಕಾಗಿ ಲಭ್ಯವಿರುವ ಕಛೇರಿಗಳಲ್ಲಿ ವಿಚಾರಣಾಧಿಕಾರಿಗಳಿಗೆ ಸ್ಥಳಾವಕಾಶ ಮಾಡುವುದು ಹಾಗೂ ಸಂಬಂಧಿಸಿದ ಕಛೇರಿಯಲ್ಲಿ ಲಭ್ಯವಿರುವ ಶೀಘ್ರಲಿಪಿಗಾರರ/ಬೆರಳಚ್ಚುಗಾರರ ಸಹಾಯವನ್ನು ಹಾಗೂ ಲೇಖನ ಸಾಮಗ್ರಿಗಳನ್ನು ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಒದಗಿಸತಕ್ಕದ್ದು.

ಈ ಪ್ರಕರಣದ ವಿಚಾರಣೆಗಾಗಿ ವಿಚಾರಣಾಧಿಕಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 22 ಸೇಇವಿ 2007 ದಿನಾಂಕ 11-04-2008 ರನ್ವಯ ರೂ.8,000/- (ಎಂಟು ಸಾವಿರ ರೂ.ಗಳು ಮಾತ್ರ) ಗಳ ಸಂಚಿತ ಸಂಭಾವನೆಯನ್ನು ಹಾಗೂ ರೂ. 1,500/- (ಒಂದು ಸಾವಿರ ಐನೂರು ರೂ.ಗಳು ಮಾತ್ರ)ಗಳ ವಾಹನ ಭತ್ಯೆ (ಕನ್ವೇಯನ್ಸ್ ಅಲೋಯನ್ಸ್) ಅನ್ನು ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರು ಪಾವತಿ ಮಾಡತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಮೇಲ್ಕಂಡ ನಿಯಮಗಳ ನಿಯಮ 13 ಮತ್ತು 11 (ಎ) ರಲ್ಲಿನ ವಿಧಿವಿಧಾನವನ್ನು ಅನುಸರಿಸಿ, ಜರುಗಿಸಿ, ವಿಚಾರಣಾ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎನ್. ಗೋಪಾಲಯ್ಯ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಸೇವೆಗಳು-3).

ಪಿ.ಆರ್.ನಂ. 1865

ಇಂಧನ ಸಚಿವಾಲಯ

ವಿಷಯ : M/S. L.K. Power Corporation Ltd ಇವರ ಪ್ರಾರಂಭವಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಮದ್ದೂರು ಕಿರು ಜಲ ವಿದ್ಯುತ್ ಯೋಜನೆಗೆ ಮಾಡಿಕೊಳ್ಳಲು ಕಾಲಾವಕಾಶ ವಿಸ್ತರಣೆ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 148 ಪಿಪಿಸಿ 89, (2) ದಿನಾಂಕ 14-03-1990.
2. ಸರ್ಕಾರಿ ಆದೇಶ ಸಂಖ್ಯೆ : ಇಂಇ 205 ಎನ್‌ಸಿಇ 2002, ದಿನಾಂಕ 28-05-2004.
3. ಸರ್ಕಾರಿ ಆದೇಶ ಸಂಖ್ಯೆ : ಇಎನ್ 144 ಎನ್‌ಸಿಇ 2009, ದಿನಾಂಕ 25-06-2009.
4. ಅಭಿವೃದ್ಧಿದಾರರ ಪತ್ರ ದಿನಾಂಕ 10-7-2010 ಮತ್ತು 04-7-2011.
5. ಸರ್ಕಾರದ ಪತ್ರ ಸಂಖ್ಯೆ ಇಎನ್ 335 ಎನ್‌ಸಿಇ 2010, ದಿನಾಂಕ 06-08-2010 ಮತ್ತು 05.07.2011.
6. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಎಸ್‌ಹೆಚ್-ಮದ್ದೂರು-ಎಂಹೆಚ್‌ಎಸ್/2011/1994, ದಿನಾಂಕ 07-07-2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಆದೇಶದಲ್ಲಿ ಮೆ॥ ಎಲ್.ಕೆ. ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಈ ಕೆಳಗೆ ವಿವರಿಸಿರುವಂತೆ 2.00 ಮೆ.ವ್ಯಾ. ಸಾಮರ್ಥ್ಯದ ಮದ್ದೂರು ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಕಿರು ಜಲ ವಿದ್ಯುತ್ ಯೋಜನೆ ಹೆಸರು	ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ	ಯೋಜನೆಯ ಸ್ಥಳ	ಸಾಮರ್ಥ್ಯ (ಮೆಗಾ ವ್ಯಾಟ್‌ನಲ್ಲಿ)
ಮದ್ದೂರು	ಪಿಡಬ್ಲ್ಯುಡಿ 148 ಪಿಪಿಸಿ 89 (2) ದಿನಾಂಕ 14-3-1990	ಮಂಡ್ಯ ಜಿಲ್ಲೆಯ ಮಂಡ್ಯ ತಾಲ್ಲೂಕಿನ ಹುಲಿವಾನ ಗ್ರಾಮದ ಮದ್ದೂರು ಬ್ರಾಂಚ್ ಕೆನಾಲ್‌ನ ವಿಶ್ವೇಶ್ವರಯ್ಯ ಕಾಲುವೆಗೆ ಅಡ್ಡಲಾಗಿ	2.00

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಆದೇಶದಲ್ಲಿ ಮೇಲ್ಕಂಡ ಕಿರು ಜಲ ವಿದ್ಯುತ್ ಯೋಜನೆ ಹಂಚಿಕೆಯಾಗಿ ಬಹಳ ವರ್ಷಗಳು ಕಳೆದಿದ್ದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಅಭಿವೃದ್ಧಿದಾರರು ಪ್ರಗತಿ ಸಾಧಿಸಿರುವುದಿಲ್ಲವೆಂದು ಯೋಜನೆಯ ಹಂಚಿಕೆ ಆದೇಶವನ್ನು ರದ್ದುಪಡಿಸಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಆದೇಶದಲ್ಲಿ ಮೆ॥ ಎಲ್.ಕೆ. ಪವರ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ ರದ್ದುಪಡಿಸಲಾಗಿರುವ 2.00 ಮೆ.ವ್ಯಾ. ಸಾಮರ್ಥ್ಯದ ಮದ್ದೂರು ಕಿರು ಜಲ ವಿದ್ಯುತ್ ಯೋಜನೆಯನ್ನು ಆದೇಶ ಹೊರಡಿಸಿದ ಒಂದು ವರ್ಷದೊಳಗಾಗಿ ಅನುಷ್ಠಾನಗೊಳಿಸಿ ವಿದ್ಯುತ್ ಉತ್ಪಾದನೆ ಪ್ರಾರಂಭಿಸತಕ್ಕದೆಂಬ ಷರತ್ತಿಗೊಳಪಟ್ಟು ಪೂರ್ವಸ್ಥಿತಿಗೆ ತರಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (4)ರ ಪತ್ರಗಳಲ್ಲಿ ಅಭಿವೃದ್ಧಿದಾರರು ಕಾಲಾವಕಾಶವನ್ನು ವಿಸ್ತರಿಸಲು ಕೋರಿರುವ ಹಿನ್ನೆಲೆಯಲ್ಲಿ ಓದಲಾದ ಕ್ರಮ ಸಂಖ್ಯೆ (5)ರ ಪತ್ರಗಳಲ್ಲಿ ಕ್ರೆಡಲ್‌ನ ವ್ಯವಸ್ಥಾಪಕ ನಿರ್ದೇಶಕರ ವರದಿಯನ್ನು ಕೋರಲಾಗಿತ್ತು.

ಓದಲಾದ (6)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರು ಮೆ॥ ಎಲ್.ಕೆ. ಪವರ್ ಕಾರ್ಪೋರೇಷನ್ ಲಿಮಿಟೆಡ್, ಇವರ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಮದ್ದೂರು ಕಿರು ಜಲ ವಿದ್ಯುತ್ ಯೋಜನೆಯು ದಿನಾಂಕ 05–04–2011 ರಂದು ಕಮಿಷನ್ ಆಗಿದ್ದು ದಿನಾಂಕ 24–6–2011 ರವರೆಗೆ ಕಾಲಾವಕಾಶ ವಿಸ್ತರಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲಿನ ಶಿಫಾರಸ್ಸನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಎನ್ 335 ಎನ್‌ಸಿಇ 2010, ಬೆಂಗಳೂರು, ದಿನಾಂಕ 26ನೇ ಜುಲೈ 2011

ಮೆ॥ ಎಲ್.ಕೆ. ಪವರ್ ಕಾರ್ಪೋರೇಷನ್ ಲಿಮಿಟೆಡ್, ಇವರ ಮಂಡ್ಯ ಜಿಲ್ಲೆಯ, ಮಂಡ್ಯ ತಾಲ್ಲೂಕಿನ, ಹುಲಿವಾನ ಗ್ರಾಮದ, ಮದ್ದೂರು ಬ್ರಾಂಚ್ ಕೆನಾಲ್‌ನ ವಿಶ್ವೇಶ್ವರಯ್ಯ ಕಾಲುವೆಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಪ್ರಾರಂಭವಾಗಿರುವ ಮದ್ದೂರು ಕಿರು ಜಲ ವಿದ್ಯುತ್ ಯೋಜನೆಗೆ ಕಾಲಾವಕಾಶ ಮೀರಿ ಬಳಸಿಕೊಂಡಿರುವ ಹಾಗೂ 15.8.2011 ರವರೆಗಿನ ಅವಧಿಯನ್ನು ಅನುಮೋದಿಸಲಾಗಿದೆ.

ಸದರಿ ಆದೇಶವನ್ನು ರದ್ದುಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಓದಲಾದ (1)ರ ಹಂಚಿಕೆ ಆದೇಶದ ಇತರ ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸುರೇಶ್ ಬಿ. ಕೃಷ್ಣಪ್ಪನವರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಪಿ.ಆರ್.ನಂ. 1866

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ವಿಷಯ : ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನಲ್ಲಿ ನಡೆಯುತ್ತಿರುವ ಬಾಲಕಿಯರ ವಸತಿ ನಿಲಯವನ್ನು ತುಮಕೂರು ನಗರಕ್ಕೆ ಸ್ಥಳಾಂತರಿಸುವ ಕುರಿತು.

ಓದಲಾಗಿದೆ :
1. ಆದೇಶ ಸಂಖ್ಯೆ : ಮಮಇ 72 ಮಭಾಬ 2007, ದಿನಾಂಕ 16–08–2007.
2. ಆದೇಶ ಸಂಖ್ಯೆ : ಮಮಇ 171 ಮಭಾಬ 2007, ದಿನಾಂಕ 22–10–2007.
3. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಪ್ರಸ್ತಾವನೆಯ ಸಂ. ಮಮಅಇ/ಮಕವಿ/ಭಾವನಿ/ಪ್ರವನೆ/07–08/11–12, ದಿನಾಂಕ 27–04–2011 ಮತ್ತು ದಿನಾಂಕ 08.07.2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಾಂಕ (1)ರ ಆದೇಶದಲ್ಲಿ 6ನೇ ತರಗತಿಯಿಂದ ನಂತರದ ತರಗತಿಗಳ ಬಾಲಕಿಯರ ವಸತಿ ನಿಲಯಗಳನ್ನು ಹತ್ತು ಜಿಲ್ಲೆಗಳ ತಾಲ್ಲೂಕುಗಳಲ್ಲಿ ಮತ್ತು ಮೆಟ್ರಿಕ್ ನಂತರದ ನಂತರದ ತರಗತಿಗಳ ಬಾಲಕಿಯರ ವಸತಿ ನಿಲಯಗಳನ್ನು 8 ಜಿಲ್ಲೆಗಳ ತಾಲ್ಲೂಕುಗಳಲ್ಲಿ ಪ್ರಾರಂಭಿಸಲು ತಲಾ ಒಂದು ವಸತಿ ನಿಲಯಕ್ಕೆ ಸಂಭವಿಸಬಹುದಾದ ಅಂದಾಜು ವೆಚ್ಚದ ಮಿತಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ಆದೇಶದಲ್ಲಿ ವಿದ್ಯಾರ್ಥಿನಿಯರು 6ನೇ ಮತ್ತು ನಂತರದ ತರಗತಿಗಳಲ್ಲಿ ವ್ಯಾಸಂಗವನ್ನು ಮುಂದುವರೆಸಲು ಶಾಂತಿ ನಿಕೇತನ ಎಜುಕೇಷನ್ ಅಂಡ್ ಸೋಷಿಯಲ್ ವೆಲ್‌ಫೇರ್ ಸೊಸೈಟಿ, ತುಮಕೂರು ಇವರು ತುಮಕೂರು ಜಿಲ್ಲೆಯ ಕುಣಿಗಲ್‌ನಲ್ಲಿ 2007–08 ನೇ ಸಾಲಿನಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಮಮಇ 72 ಮಭಾಬ 2007, ದಿನಾಂಕ 16–08–2007 ರಲ್ಲಿ ನಿಗದಿಪಡಿಸಿರುವ ಷರತ್ತಿಗೊಳಪಟ್ಟು ಮತ್ತು 50 ವಿದ್ಯಾರ್ಥಿನಿಯರ ನಿರ್ವಹಣೆಗಾಗಿ ಗರಿಷ್ಠ ರೂ. 6,02,500/– ಮೊತ್ತದ ಮಿತಿಗೊಳಪಟ್ಟು ಬಾಲಕಿಯರ ವಸತಿ ನಿಲಯವನ್ನು ಚಾಲ್ತಿಯಲ್ಲಿರುವ ಸೂಚನೆ ಮತ್ತು ಆದೇಶವನ್ನು ಪಾಲಿಸುವ ಷರತ್ತಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ನಿರ್ದೇಶಕರ ಪ್ರಸ್ತಾವನೆಯಲ್ಲಿ, ಶಾಂತಿ ನಿಕೇತನ ಎಜುಕೇಷನ್ ಅಂಡ್ ಸೋಷಿಯಲ್ ವೆಲ್‌ಫೇರ್ ಸೊಸೈಟಿ (ರಿ), ತುಮಕೂರು ಈ ಸಂಸ್ಥೆಯು ಕುಣಿಗಲ್‌ನಲ್ಲಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯವನ್ನು ನಡೆಸುತ್ತಿದ್ದು, ಕುಣಿಗಲ್‌ನಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಇಲಾಖೆಯಿಂದ ಬಾಲಕಿಯರ ವಸತಿ ನಿಲಯಗಳನ್ನು ನಡೆಸುತ್ತಿರುವುದರಿಂದ ಸಂಸ್ಥೆಯು ನಡೆಸುತ್ತಿರುವ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರ ಕೊರತೆಯಿರುತ್ತದೆ. ತುಮಕೂರು ನಗರದಲ್ಲಿ ಮೆಟ್ರಿಕ್ ನಂತರದ ಹೆಚ್ಚಿನ ಶಾಲೆಗಳು, ವೃತ್ತಿ ಶಿಕ್ಷಣ ತರಬೇತಿ ಕೇಂದ್ರಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಇರುವುದರಿಂದ ವಸತಿ ನಿಲಯವನ್ನು ಕುಣಿಗಲ್‌ನಿಂದ ತುಮಕೂರು ನಗರಕ್ಕೆ ವರ್ಗಾಯಿಸಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಮಮಇ 92 ಮಭಾಬ 2011, ಬೆಂಗಳೂರು, ದಿನಾಂಕ 27ನೇ ಜುಲೈ 2011

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಶಾಂತಿ ನಿಕೇತನ ಎಜುಕೇಷನ್ ಅಂಡ್ ಸೋಷಿಯಲ್ ವೆಲ್‌ಫೇರ್ ಸೊಸೈಟಿ (ರಿ), ತುಮಕೂರು ಈ ಸಂಸ್ಥೆಯು ಕುಣಿಗಲ್‌ನಲ್ಲಿ ನಡೆಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯವನ್ನು ತುಮಕೂರು ನಗರಕ್ಕೆ ಸ್ಥಳಾಂತರಿಸಲು ಅನುಮತಿ ನೀಡಲಾಗಿದೆ.

ಈ ಹಿಂದಿನ ಆದೇಶದಲ್ಲಿ ವಿಧಿಸಿದ್ದ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್.ಎನ್. ಕೃಷ್ಣಕುಮಾರ್,

ಸರ್ಕಾರದ ಅಧೀನ ಕಾರ್ಯದರ್ಶಿ-1,

ಪಿ.ಆರ್.ನಂ. 1867

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಕನ್ನಡ ಹಾಗೂ ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯ

ವಿಷಯ : ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಹಾಗೂ ಪರಂಪರೆ ಇಲಾಖೆಗೆ ನಗರ ವಿನ್ಯಾಸಕರು ಮತ್ತು ವಾಸ್ತು ಶಿಲ್ಪ ಸಂರಕ್ಷಕರ ಹುದ್ದೆಗೆ ನೀಡುತ್ತಿರುವ ಸಂಚಿತ ವೇತನವನ್ನು ಹೆಚ್ಚಿಸುವ ಬಗ್ಗೆ ಹಾಗೂ ಬಾಹ್ಯ ಮೂಲದ ಮೂಲಕ ನೇಮಕಾತಿ ಮಾಡಿಕೊಳ್ಳುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಸಂಕಇ 95 ಕೆಎಂಯು 2004, ದಿನಾಂಕ 26-08-2004.
2. ಸರ್ಕಾರದ ಆದೇಶ ಸಂಖ್ಯೆ : ಸಂಕಇ 219 ಕೆಎಂಯು 2005, ದಿನಾಂಕ 29-10-2005.
3. ಸರ್ಕಾರದ ಆದೇಶ ಸಂಖ್ಯೆ : ಸಂಕಇ 31 ಕೆಎಂಯು 2006, ದಿನಾಂಕ 19-01-2007.
4. ಸರ್ಕಾರದ ಆದೇಶ ಸಂಖ್ಯೆ : ಸಂಕಇ 228 ಕೆಎಂಯು 2010, ದಿನಾಂಕ 15-12-2010.
5. ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ರವರ ದಿನಾಂಕ 15.04.2011 ರಂದು ಕೊನೆಗೊಂಡ ಪತ್ರ ಸಂಖ್ಯೆ ಆಪ್ರಾಸಂಪ / ಸಂರಕ್ಷಕರ ಹುದ್ದೆ / 2011-12/19.

ಪ್ರಸ್ತಾವನೆ :

ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ನಗರ ವಿನ್ಯಾಸಕರು ಮತ್ತು ವಾಸ್ತು ಶಿಲ್ಪ ಸಂರಕ್ಷಕರ ಹುದ್ದೆಗಾಗಿ ತಲಾ ಒಬ್ಬರು ಅಭ್ಯರ್ಥಿಗಳನ್ನು ಬಾಹ್ಯ ಮೂಲದಿಂದ ಮಾಸಿಕ ಸಂಚಿತ ವೇತನದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಅನುಮತಿ ನೀಡಲಾಗಿತ್ತು. ಈ ಎರಡೂ ಹುದ್ದೆಗಳನ್ನು ಆಯ್ಕೆ ಮಾಡಿ ಭರ್ತಿ ಮಾಡಿಕೊಳ್ಳಲು ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಆ ಮೇರೆಗೆ ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ನಗರ ವಿನ್ಯಾಸಕರು ಮತ್ತು ವಾಸ್ತು ಶಿಲ್ಪ ಸಂರಕ್ಷಕರ ಹುದ್ದೆಗೆ ಮಾಸಿಕ ಸಂಚಿತ ವೇತನ ರೂ.16,000/- ಆಧಾರದ ಮೇಲೆ ಬಾಹ್ಯ ಮೂಲದ ಮೂಲಕ ಶ್ರೀ ಹೆಚ್.ಡಿ. ನಾಗೇಶ್, ಮೈಸೂರು ಮತ್ತು ಶ್ರೀ ಜಿ.ಎಸ್.ವಿ. ಸೂರ್ಯನಾರಾಯಣ ಮೂರ್ತಿ, ಹೈದರಾಬಾದ್ ಇವರುಗಳನ್ನು ಷರತ್ತು ನಿಬಂಧನೆಗೊಳಪಟ್ಟು ಮೇಲೆ ಓದಲಾದ (3)ರ ಸರ್ಕಾರಿ ಆದೇಶದಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿತ್ತು. ತದನಂತರ ಸದರಿ ಹುದ್ದೆಗಳನ್ನು ದಿನಾಂಕ 19-1-2008 ರಿಂದ 19-1-2011 ರವರೆಗೆ ಮೂರು ವರ್ಷಗಳ ಅವಧಿಗೆ ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ ಮುಂದುವರೆಸಲಾಗಿತ್ತು. ನಗರ ವಿನ್ಯಾಸಕರು ಮತ್ತು ವಾಸ್ತು ಶಿಲ್ಪ ಸಂರಕ್ಷಕರ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಸೂಕ್ತ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಮತ್ತು ಅವರುಗಳ ಮಾಸಿಕ ಸಂಚಿತ ವೇತನವನ್ನು ರೂ.16,000.00 ರಿಂದ 25,000-00 ಕ್ಕೆ ಹೆಚ್ಚಿಸಲು ಹಾಗೂ ದಿನಾಂಕ 19-01-2011 ರಿಂದ 3 ವರ್ಷ ಅವಧಿಗೆ ಮುಂದುವರಿಸಲು ಮೇಲೆ ಓದಲಾದ (5)ರ ಪತ್ರದಲ್ಲಿ ಆಯುಕ್ತರು ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 228 ಕೆಎಂಯು 2010, ಬೆಂಗಳೂರು, ದಿನಾಂಕ 26ನೇ ಜುಲೈ 2011

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಸೃಜಿಸಲಾಗಿರುವ ನಗರ ವಿನ್ಯಾಸಕರು ಮತ್ತು ವಾಸ್ತು ಶಿಲ್ಪ ಸಂರಕ್ಷಕರ ತಲಾ ಒಂದೊಂದು ಹುದ್ದೆಯನ್ನು ದಿನಾಂಕ 19-01-2011 ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಿದೆ. ಸದರಿ ಹುದ್ದೆಗಳ ಮಾಸಿಕ ಸಂಚಿತ ವೇತನವನ್ನು ರೂ.16,000.00 ರಿಂದ 20,000-00 ಗಳಿಗೆ ಹೆಚ್ಚಿಸಿದೆ ಹಾಗೂ ಪ್ರಯಾಣ ಭತ್ಯ/ದಿನ ಭತ್ಯ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ಆದೇಶಿಸಿದೆ. ಈ ಹುದ್ದೆಗೆ ಅಭ್ಯರ್ಥಿಗಳನ್ನು ಬಾಹ್ಯ ಮೂಲದಿಂದ ನೇಮಕಾತಿ ಮಾಡಲು ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆ.ಇ. 458 ವೆಚ್ಚ-7/2011, ದಿನಾಂಕ 04-07-2011 ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ಗೀತಾಕುಮಾರಿ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್.ನಂ. 1868

ಕನ್ನಡ ಹಾಗೂ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

(ಆಡಳಿತ ಕನ್ನಡ)

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಸಕ್ಕರೆ ಇಲಾಖೆಯಲ್ಲಿ ಹೆಚ್ಚಿನ ಹೊಸ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ : ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಇವರ ಪತ್ರ ಸಂಖ್ಯೆ : ಡಿಐಸ್‌ಕೆ/ ಸಿಬ್ಬಂದಿ/7/2010-11, ದಿನಾಂಕ 21-6-2010, 30-9-2010 ಮತ್ತು 22-2-2011.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರಗಳಲ್ಲಿ ಸಕ್ಕರೆ ನಿರ್ದೇಶನಾಲಯವು 1973 ರಲ್ಲಿ ಸ್ಥಾಪಿತವಾಗಿದ್ದು, ಆಗ ರಾಜ್ಯದಲ್ಲಿ ಕೇವಲ 16 ಸಕ್ಕರೆ ಕಾರ್ಖಾನೆಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಸಕ್ಕರೆ ನಿರ್ದೇಶನಾಲಯದ ವೃಂದ ಬಲ ಗ್ರೂಪ್-ಎ ರಿಂದ ಗ್ರೂಪ್-ಡಿ ವರೆಗೆ ಒಟ್ಟು 23 ಹುದ್ದೆಗಳು ಮಾತ್ರ ಸೃಷ್ಟಿಯಾಗಿರುತ್ತದೆ. ನಂತರ 1973 ರಿಂದ 2010 ನೇ ಸಾಲಿನವರೆಗೆ ವಿವಿಧ ಅವಧಿಗಳಲ್ಲಿ ಸಹಕಾರ/ಜಂಟಿ ವಲಯ/ಸಾರ್ವಜನಿಕ ವಲಯ ಹಾಗೂ ಖಾಸಗಿ ವಲಯಗಳಲ್ಲಿ ಒಟ್ಟು 63 ಸಕ್ಕರೆ ಕಾರ್ಖಾನೆಗಳು ಸ್ಥಾಪಿತವಾಗಿದ್ದು, ಸಕ್ಕರೆ ನಿರ್ದೇಶನಾಲಯದಲ್ಲಿ ಮಾತ್ರ ಯಾವುದೇ ಹೊಸ ಹುದ್ದೆಗಳ ಸೃಷ್ಟಿಯಾಗದೇ 63 ಸಕ್ಕರೆ ಕಾರ್ಖಾನೆಗಳ ಕಾರ್ಯಚಟುವಟಿಕೆಗಳ ಮೇಲ್ವಿಚಾರಣೆಯನ್ನು ನೋಡಿಕೊಳ್ಳುತ್ತಿರುವುದು ವಾಸ್ತವಿಕವಾಗಿ ಕಷ್ಟಸಾಧ್ಯವಾಗಿದೆ. ಪ್ರಸ್ತುತ ಕಬ್ಬು ಅಭಿವೃದ್ಧಿ ಆಯುಕ್ತಾಲಯ ಹಾಗೂ ಸಕ್ಕರೆ ನಿರ್ದೇಶನಾಲಯದ ಕೇಂದ್ರ ಕಛೇರಿ ಬೆಂಗಳೂರಿನಲ್ಲಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಇದರ ವಲಯ ಕಛೇರಿಗಳು ಯಾವುದೇ ವಿಭಾಗದ ಮಟ್ಟದಲ್ಲಾಗಲೀ ಅಥವಾ ಜಿಲ್ಲಾ ಮಟ್ಟದಲ್ಲಾಗಲೀ ಇರುವುದಿಲ್ಲ. ಇತ್ತೀಚೆಗೆ ರಾಜ್ಯದ 8-10 ಜಿಲ್ಲೆಗಳಲ್ಲಿ ಕಬ್ಬಿನ ಉತ್ಪಾದನೆ ಅಧಿಕವಾಗಿದ್ದು, ಸುಮಾರು 250 ಲಕ್ಷ ಟನ್ ಸಕ್ಕರೆ ಕಾರ್ಖಾನೆಗಳಲ್ಲಿ ನುರಿಸಲ್ಪಡುತ್ತಿದೆ. ಸಕ್ಕರೆ ಉದ್ಯಮದಿಂದ ವಾರ್ಷಿಕವಾಗಿ ರೂ.10,000/- ಕೋಟಿಗಳ ಬೃಹತ್ ವಹಿವಾಟು ಆಗುತ್ತಿದ್ದು, ಉತ್ಪಾದನೆಯ ಆಧಾರದ ಮೇಲೆ ಕರ್ನಾಟಕವು ರಾಷ್ಟ್ರದಲ್ಲಿ 3ನೇ ಸ್ಥಾನದಲ್ಲಿದೆ. ಆದರೂ ಕರ್ನಾಟಕದಲ್ಲಿ ಕೇಂದ್ರ ಕಛೇರಿ ಮಾತ್ರ ಇದ್ದು, ಜಿಲ್ಲಾ ಮಟ್ಟದಲ್ಲಿ ಬೇರೆ ಇಲಾಖೆಗಳನ್ನು ಅವಲಂಬಿಸಿ ಕೆಲಸ ನಿರ್ವಹಿಸಬೇಕಾಗಿರುವುದರಿಂದ ಸಕ್ಕರೆ ಇಲಾಖೆಯಲ್ಲಿ ಹೊಸ ಕಛೇರಿ/ಹುದ್ದೆಗಳ ಸೃಜನೆಗೆ ಮಂಜೂರಾತಿ ನೀಡಿ ಆದೇಶ ಹೊರಡಿಸುವಂತೆ ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಸರ್ಕಾರವನ್ನು ಕೋರಿರುತ್ತಾರೆ.

ಅಲ್ಲದೆ, ಮಾನ್ಯ ಮುಖ್ಯಮಂತ್ರಿಗಳು ತಮ್ಮ 2010-11ರ ಆಯವ್ಯಯ ಭಾಷಣದಲ್ಲಿ ಕಬ್ಬಿನ ಬೆಳೆಯ ಅಭಿವೃದ್ಧಿ ಮತ್ತು ಸಂಸ್ಕರಣೆಗೆ ವ್ಯವಸ್ಥೆ ಮಾಡಲು ಸಕ್ಕರೆ ಇಲಾಖೆಯನ್ನು ಹೆಚ್ಚಿನ ಸಿಬ್ಬಂದಿಯೊಡನೆ ಬಲಪಡಿಸುವುದಾಗಿ ಘೋಷಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಐ 51 ಎಸ್‌ಜಿಎಫ್ 2010, ಬೆಂಗಳೂರು, ದಿನಾಂಕ 28ನೇ ಜುಲೈ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸಕ್ಕರೆ ಇಲಾಖೆಯಲ್ಲಿ ಈ ಕೆಳಕಂಡ ಹುದ್ದೆಗಳ ಸೃಜನೆಗೆ ಸರ್ಕಾರದ ಮಂಜೂರಾತಿ ನೀಡಿದೆ.

ಕ್ರಮ ಸಂಖ್ಯೆ	ಪದನಾಮ	ಹುದ್ದೆಗಳ ಸಂಖ್ಯೆ	ವೇತನ ಶ್ರೇಣಿ (ರೂ.)	ಷರಾ
ಅ. ಸಕ್ಕರೆ ನಿರ್ದೇಶನಾಲಯ				
1.	ಜಂಟಿ ನಿರ್ದೇಶಕರು (ಕಬ್ಬು ಅಭಿವೃದ್ಧಿ)	1	20025-28275	ಕೃಷಿ ಇಲಾಖೆಯಿಂದ ನಿಯೋಜನೆ ಮೇಲೆ
2.	ಜಂಟಿ ನಿರ್ದೇಶಕರು (ಸಕ್ಕರೆ ತಂತ್ರಜ್ಞಾನ)	1	20025-28275	
3.	ಸಹಾಯಕ ನಿರ್ದೇಶಕರು (ಸಕ್ಕರೆ)	1	11400-21600	
4.	ಕಛೇರಿ ಅಧೀಕ್ಷಕರು	1	10000-18180	
ಆ. ಕ್ಷೇತ್ರ ಹಂತ				
1.	ಸಹಾಯಕ ಕಬ್ಬು ಅಭಿವೃದ್ಧಿ ಅಧಿಕಾರಿ	6	11400-21600	(ಬೆಳಗಾಂ, ಚಿಕ್ಕೋಡಿ, ಬಿಜಾಪುರ, ಬಾಗಲಕೋಟೆ, ಬೀದರ್ ಮತ್ತು ಮಂಡ್ಯ) ಕೃಷಿ ಇಲಾಖೆಯಿಂದ ನಿಯೋಜನೆ ಮೇಲೆ ತೆಗೆದುಕೊಳ್ಳುವುದು ಮತ್ತು ಆಯಾ ಜಿಲ್ಲೆಯ ಜಂಟಿ ನಿರ್ದೇಶಕರು (ಕೃಷಿ) ಇವರ ಆಡಳಿತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವುದು.
2.	ಪ್ರಥಮ ದರ್ಜೆ ಸಹಾಯಕರು ಅಥವಾ ದ್ವಿತೀಯ ದರ್ಜೆ ಸಹಾಯಕರು	6	7275-13350 (ಪ್ರ.ದ.ಸ.) 5800-10500 (ದ್ವಿ.ದ.ಸ.)	
ಒಟ್ಟು		16		

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ/2182/ವೆಚ್ಚ-1/2010, ದಿನಾಂಕ 25-6-2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಶಿವಶಂಕರ ನಾಯಕ್ ಎಲ್.
ಪೀಠಾಧಿಕಾರಿ (ಸಕ್ಕರೆ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಪಿ.ಆರ್.ನಂ. 1869

ಸಹಕಾರ ಸಚಿವಾಲಯ

ವಿಷಯ : 2011-12ನೇ ಸಾಲಿನಲ್ಲಿ ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಯೋಜನೆಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಹಣ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ : ಸಹಕಾರ ಸಂಘಗಳ ಅಪರ ನಿಬಂಧಕರು (ಬಳಕೆ ಮತ್ತು ಮಾರಾಟ) ಇವರ ಪತ್ರ ಸಂಖ್ಯೆ : ಆರ್‌ಸಿಎಸ್/ಯಶಸ್ವಿನಿ/22/2011-12, ದಿನಾಂಕ 07-06-2011.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ಸಹಕಾರ ಸಂಘಗಳ ಅಪರ ನಿಬಂಧಕರು (ಬಳಕೆ ಮತ್ತು ಮಾರಾಟ) ಇವರು 2011-12 ನೇ ಸಾಲಿನ ಅಂದರೆ ಜೂನ್ 2011ರ ಮಾಹೆಯಿಂದ ಯಶಸ್ವಿನಿ ಫಲಾನುಭವಿಗಳು ಯೋಜನೆಯ ಸೌಲಭ್ಯವನ್ನು ಪಡೆಯುತ್ತಿರುವುದರಿಂದ 2011-12ನೇ ಸಾಲಿಗೆ ಯೋಜನೆಯ ಅನುಷ್ಠಾನಕ್ಕಾಗಿ ಆಯವ್ಯಯದಲ್ಲಿ ಕಲ್ಪಿಸಲಾದ ರೂ. 36.00 ಕೋಟಿ ಅನುದಾನದಲ್ಲಿ ಪೈಕಿ ಮೊದಲ ಕಂತಿನ ಹಣ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. 2010-11ನೇ ಸಾಲಿನಲ್ಲಿ ಯೋಜನೆಯಡಿಯಲ್ಲಿ ಮೇ 2011ರ ಅಂತ್ಯಕ್ಕೆ 67,479 ಫಲಾನುಭವಿಗಳಿಗೆ ರೂ.52.33 ಕೋಟಿ ವೆಚ್ಚ ಆಗಿರುತ್ತದೆ. ಆದ್ದರಿಂದ 2010-11ನೇ ಸಾಲಿನಲ್ಲಿ ಯಶಸ್ವಿನಿ ಯೋಜನೆಯಡಿಯಲ್ಲಿ ನೆಟ್‌ವರ್ಕ್ ಆಸ್ಪತ್ರೆಗಳಿಗೆ ಪಾವತಿಸಲು ಬಾಕಿ ಇರುವ ಹಣ ಪಾವತಿಗೆ ಅನುಕೂಲವಾಗುವಂತೆ 2011-12ನೇ ಸಾಲಿನ ಅನುದಾನದ ಪೈಕಿ ರೂ. 10.00 ಕೋಟಿಗಳನ್ನು ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿರುತ್ತದೆ.

ಆದುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 244 ಸಿಎಲ್‌ಎಸ್ 2011, ಬೆಂಗಳೂರು, ದಿನಾಂಕ 19ನೇ ಜುಲೈ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಯೋಜನೆಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುವಾಗುವಂತೆ ರೂ. 10.00 ಕೋಟಿಗಳನ್ನು (ರೂಪಾಯಿ ಹತ್ತು ಕೋಟಿಗಳು ಮಾತ್ರ) ಮೊದಲನೇ ಕಂತಾಗಿ ಲೆಕ್ಕಶೀರ್ಷಿಕೆ "2425-00-108-0-57 ಯೋಜನೆ – 059 ಇತರೆ ಖರ್ಚು" ಅಡಿ ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

ಈ ಮೊತ್ತವನ್ನು ಹಣ ಸ್ವೀಕೃತಿ ರಸೀದಿ ಮೇಲೆ ಸಹಕಾರ ಸಂಘಗಳ ನಿಬಂಧಕರ ಮೇಲು ರುಜುವಿನೊಂದಿಗೆ ಸಹಕಾರ ಸಂಘಗಳ ಅಪರ ನಿಬಂಧಕರು (ಬಳಕೆ ಮತ್ತು ಮಾರಾಟ) ಇವರಿಗೆ ಖಜಾನೆಯಿಂದ ಡ್ರಾ ಮಾಡಿ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಲ್ಲಿರುವ ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಟ್ರಸ್ಟಿನ ಖಾತೆಗೆ ಜಮಾ ಮಾಡಲು ಅಧಿಕಾರ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 302-ವೆಚ್ಚ-2/2011, ದಿನಾಂಕ 14-07-2011 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಆರ್.ಎಸ್. ನೂಲಿ,
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

ಪಿ.ಆರ್.ನಂ. 1870

ಸಹಕಾರ ಸಚಿವಾಲಯ

ವಿಷಯ : 2010-11ನೇ ವರ್ಷದಲ್ಲಿ ಪತ್ತಿನ ಸಹಕಾರಿ ಸಂಸ್ಥೆಗಳ ಮೂಲಕ ಶೇಕಡಾ 3ರ ಬಡ್ಡಿ ದರದಲ್ಲಿ ಅಲ್ಪಾವಧಿ ಕೃಷಿ ಸಾಲಗಳನ್ನು ನೀಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಸಿಒ 69 ಸಿಎಲ್‌ಎಸ್ 2010, ದಿನಾಂಕ 22-04-2010
2. ಸರ್ಕಾರದ ಆದೇಶ ಸಂಖ್ಯೆ: ಸಿಒ 219 ಸಿಎಲ್‌ಎಸ್ 210 (ಭಾ-1) ದಿನಾಂಕ 16-03-2011.
3. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಸಿಆರ್‌ಡಿ/03/ಕೆಆರ್‌ಎಫ್/2008-09, ದಿನಾಂಕ 25-01-2011.

ಪ್ರಸ್ತಾವನೆ :

ಉಲ್ಲೇಖ (2)ರ ಸರ್ಕಾರಿ ಆದೇಶದ ಮೇರೆಗೆ ಮೂರು ಹಂತಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳು ಅಲ್ಪಾವಧಿ ಕೃಷಿ ಸಾಲಗಳ ಮೇಲೆ ವಿಧಿಸಬಹುದಾದ ಗರಿಷ್ಠ ಪ್ರಮಾಣದ ಬಡ್ಡಿ ದರಗಳನ್ನು ನಿಗಧಿಪಡಿಸಿ 2009-10ನೇ ಸಾಲಿಗೆ ಸಂಬಂಧಪಟ್ಟಂತೆ ಮಾರ್ಗದರ್ಶಿ ಸೂಚನೆಗಳನ್ನು ತಿದ್ದುಪಡಿ ಮಾಡಿ ಆದೇಶ ಹೊರಡಿಸಲಾಗಿದೆ. ಇದೇ ಪದ್ಧತಿಯನ್ನು 2010-11ನೇ ಸಾಲಿಗೆ ಮುಂದುವರೆಸುವುದು ಯುಕ್ತವೆಂದು ತೀರ್ಮಾನಿಸಲಾಗಿದೆ. ಆದುದರಿಂದ 2010-11ನೇ ಸಾಲಿನಲ್ಲಿ ಪತ್ತಿನ ಸಹಕಾರ ಸಂಸ್ಥೆಗಳ ಮೂಲಕ ಶೇಕಡಾ 3ರ ಬಡ್ಡಿ ದರದಲ್ಲಿ ಅಲ್ಪಾವಧಿ ಕೃಷಿ ಸಾಲಗಳನ್ನು ನೀಡುವ ಬಗ್ಗೆ ಹೊರಡಿಸಲಾದ ಸರ್ಕಾರದ ಉಲ್ಲೇಖ (1)ರ ಆದೇಶದಲ್ಲಿನ ಷರತ್ತು 4 ಅನ್ನು ಬದಲಾಯಿಸಲು ತೀರ್ಮಾನಿಸಲಾಗಿದೆ.

ಅದುದರಿಂದ ಈ ಕೆಳಕಂಡಂತೆ ಆದೇಶಿಸಿದೆ

ಸರ್ಕಾರದ ಆದೇಶ ಸಂಖ್ಯೆ: ಸಿಒ 219 ಸಿಎಲ್‌ಎಸ್ 2010(ಭಾ-1), ಬೆಂಗಳೂರು, ದಿನಾಂಕ : 20-07-2011

ಪ್ರಸ್ತಾವನೆಯಲ್ಲಿ ವಿವರಿಸಲಾದ ಪರಿಸ್ಥಿತಿಯಲ್ಲಿ ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿನ ಷರತ್ತು ಸಂಖ್ಯೆ 4 ಅನ್ನು 2010-11ನೇ ವರ್ಷಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಬದಲಾಯಿಸಿದ್ದು ಅದರಂತೆ ಓದಿಕೊಳ್ಳತಕ್ಕದ್ದು.

"ಈ ಯೋಜನೆಯಡಿ ರೈತರಿಗೆ ಪ್ರಾಥಮಿಕ ಹಂತದಲ್ಲಿ ಪತ್ತಿನ ಸಹಕಾರಿ ಸಂಸ್ಥೆಗಳು ಒದಗಿಸುವ ಸಾಲಗಳ ವಸೂಲಾತಿ ಆಧಾರದ ಮೇಲೆ ನಿಗದಿತ ಪ್ರಮಾಣದ ಬಡ್ಡಿ ಸಹಾಯಧನವನ್ನು ಸರ್ಕಾರವು ಸಂಬಂಧಪಟ್ಟ ಪಟ್ಟಣ ಸಹಕಾರ ಬ್ಯಾಂಕುಗಳಿಗೆ, ಜಿಲ್ಲಾ ಕೇಂದ್ರ ಸಹಕಾರ (ಡಿ.ಸಿ.ಸಿ.) ಬ್ಯಾಂಕುಗಳಿಗೆ ಮತ್ತು ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ (ಕಸ್ಕಾರ್ಡ್) ಬ್ಯಾಂಕಿಗೆ ಒದಗಿಸುತ್ತದೆ."

ಅ) ಮೂರು ಹಂತಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳು ಈ ಕೆಳಗೆ ಸೂಚಿಸಿದಂತೆ ಮಾತ್ರ ಗರಿಷ್ಠ ಬಡ್ಡಿ ದರಗಳನ್ನು ವಿಧಿಸತಕ್ಕದ್ದು.

i) ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಗೆ ನೀಡುತ್ತಿರುವ ಅಲ್ಪಾವಧಿ ಕೃಷಿ ಸಾಲಗಳ ಮೇಲೆ ಶೇ. 4.65ರ ಬಡ್ಡಿ ವಿಧಿಸತಕ್ಕದ್ದು.

ii) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ನೀಡುತ್ತಿರುವ ಅಲ್ಪಾವಧಿ ಕೃಷಿ ಸಾಲಗಳ ಮೇಲೆ ಯಾವುದೇ ಬಡ್ಡಿ ದರಗಳನ್ನು ವಿಧಿಸತಕ್ಕದ್ದಲ್ಲ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಸರ್ಕಾರಗಳಿಂದ ದೊರೆಯುವ ಬಡ್ಡಿ ಸಹಾಯಧನವನ್ನು ಆಯಾ ಬ್ಯಾಂಕುಗಳು ತಾವು ನೀಡಿದ ಅಲ್ಪಾವಧಿ ಕೃಷಿ ಸಾಲಗಳಿಗೆ ಮಾತ್ರ ಜಮಾ ಪಡೆಯತಕ್ಕದ್ದು.

iii) ಒಂದು ವೇಳೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ತಮ್ಮ ಸಂಪನ್ಮೂಲಗಳನ್ನು ಅಲ್ಪಾವಧಿ ಕೃಷಿ ಸಾಲಗಳಲ್ಲಿ ತೊಡಗಿಸಿದಾಗ ಅಂತಹ ಸಾಲಗಳ ಮೇಲೆ ರಾಜ್ಯ/ಕೇಂದ್ರ ಸರ್ಕಾರಗಳಿಂದ ದೊರೆಯುವ ಬಡ್ಡಿ ಸಹಾಯಧನವನ್ನು ಜಿಲ್ಲಾ ಬ್ಯಾಂಕುಗಳು ಆಯಾ ಸಂಘಗಳಿಗೆ ವರ್ಗಾಯಿಸತಕ್ಕದ್ದು.

iv) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ತಮ್ಮ ಸದಸ್ಯರಿಗೆ ನೀಡುವ ಅಲ್ಪಾವಧಿ ಕೃಷಿ ಸಾಲಗಳ ಮೇಲೆ ಶೇ. 3ರ ಬಡ್ಡಿದರ ವಿಧಿಸತಕ್ಕದ್ದು.

v) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ತಾವು ನೀಡುವ ಕೃಷಿ ಅಲ್ಪಾವಧಿ ಸಾಲಗಳ ಮರುಪಾವತಿ ಆಧಾರದ ಮೇಲೆ ರಾಜ್ಯ ಸರ್ಕಾರವು ಗೊತ್ತುಪಡಿಸಿದ ದರದಲ್ಲಿ ಹಾಗೂ ವಿಧಿಸಿದ ನಿಬಂಧನೆಗಳಿಗೊಳಪಟ್ಟು ಬಡ್ಡಿ ಸಹಾಯಧನದ ಬಿಲ್ಲುಗಳನ್ನು ತ್ರೈಮಾಸಿಕವಾಗಿ ತಯಾರಿಸತಕ್ಕದ್ದು.

vi) ತ್ರೈಮಾಸಿಕ ಮುಗಿದ ಒಂದು ತಿಂಗಳೊಳಗಾಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಬಿಲ್ಲುಗಳನ್ನು ಸಿದ್ಧಪಡಿಸಿ ನಿಬಂಧಕರಿಗೆ ಸಲ್ಲಿಸುವ ಹೊಣೆಯನ್ನು ಡಿಸಿಸಿ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರು ಮತ್ತು ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರು ಇವರುಗಳು ವಹಿಸತಕ್ಕದ್ದು.

vii) ಪ್ರಾಥಮಿಕ ಸಂಘಗಳು ಇಂತಹ ಸಾಲಗಳನ್ನು ತಮ್ಮ ಸಂಪನ್ಮೂಲಗಳಿಂದ ನೀಡಿದಾಗ ಅಷ್ಟರಮಟ್ಟಿಗೆ ಜಿಲ್ಲಾ ಬ್ಯಾಂಕುಗಳು ಸರ್ಕಾರದಿಂದ ಪಡೆಯುವ ಬಡ್ಡಿ ಸಹಾಯಧನವನ್ನು ಪ್ರಾಥಮಿಕ ಸಂಘಗಳಿಗೆ ಕಡ್ಡಾಯವಾಗಿ ವರ್ಗಾಯಿಸತಕ್ಕದ್ದು.

viii) ಒಂದು ಪಕ್ಷ ಪ್ರಾಥಮಿಕ ಸಂಘಗಳು ಜಿಲ್ಲಾ ಬ್ಯಾಂಕುಗಳ ಬದಲಾಗಿ ರಾಷ್ಟ್ರೀಕೃತ ಬ್ಯಾಂಕುಗಳಿಂದ ಸಾಲ ಪಡೆದಲ್ಲಿ ಬಡ್ಡಿ ಸಹಾಯಧನ ಹೊಂದಾಣಿಕೆ ವಿಷಯದಲ್ಲಿ ಮೇಲೆ ಸೂಚಿಸಿದ ನಿಯಮಗಳನ್ನೇ ಪಾಲಿಸತಕ್ಕದ್ದು.

ix) ಭಾರತ ಸರ್ಕಾರದಿಂದ ಲಭ್ಯವಾಗುವ ಸವಲತ್ತಿಗೆ ಸಂಬಂಧಪಟ್ಟಂತೆ ಬಡ್ಡಿ ಬಿಲ್ಲುಗಳನ್ನು ತಯಾರಿಸಿ ಸಂಬಂಧಪಟ್ಟ ಪತ್ತಿನ ಸಹಕಾರ ಸಂಘಗಳು/ಬ್ಯಾಂಕುಗಳು ಮಂಜೂರಾತಿಗಾಗಿ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿಗೆ ಸಲ್ಲಿಸಿದ ಪಕ್ಷದಲ್ಲಿ ಮಾತ್ರ ರಾಜ್ಯ ಸರ್ಕಾರದ ಬಡ್ಡಿ ಸಹಾಯಧನ ಬಿಡುಗಡೆ ಮಾಡಲಾಗುವುದು.

x) 2010-11ರಲ್ಲಿ ಜಿಲ್ಲಾ ಬ್ಯಾಂಕುಗಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಬಡ್ಡಿಯನ್ನು ವಸೂಲಿಸಿದ್ದಲ್ಲಿ ಆ ಮೊತ್ತವನ್ನು ತಕ್ಷಣದಲ್ಲಿ ಆಯಾ ಸಂಘಗಳಿಗೆ ಮರುಪಾವತಿಸತಕ್ಕದ್ದು.

ಆ) ಕಸ್ಕಾರ್ಡ್ ಬ್ಯಾಂಕು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳಿಗೆ ತಾನು ನಿಗದಿಪಡಿಸಿದ ಯುಕ್ತ ಬಡ್ಡಿ ದರದಲ್ಲಿ ಸಾಲ ಒದಗಿಸತಕ್ಕದ್ದು.

ಇ) ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕು ಹಾಗೂ ಪಟ್ಟಣ ಸಹಕಾರ ಬ್ಯಾಂಕುಗಳು ಶೇಕಡಾ 3ರ ಬಡ್ಡಿ ದರದಲ್ಲಿ ರೈತರಿಗೆ ಕೃಷಿ/ಕೃಷಿ ಸಂಬಂಧಿತ ಸಾಲಗಳನ್ನು ಒದಗಿಸತಕ್ಕದ್ದು.

ಉಲ್ಲೇಖ (1)ರ ಆದೇಶದಲ್ಲಿ ವಿಧಿಸಿದ ಉಳಿದ ಷರತ್ತುಗಳನ್ನು ಮುಂದುವರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಆರ್. ಎಸ್. ನೂಲಿ

ವಿಶೇಷ ಕರ್ತವ್ಯಾಧಿಕಾರಿ ಹಾಗೂ

ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,

ಸಹಕಾರ ಇಲಾಖೆ

ಪಿ.ಆರ್. 1871

ಸಹಕಾರ ಸಚಿವಾಲಯ

ವಿಷಯ : ರಾಜ್ಯದ ರೈತರಿಗೆ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳು ಶೇಕಡಾ 3ರ ಬಡ್ಡಿ ದರದಲ್ಲಿ ನೀಡಿದ ಸಾಲಗಳ ಪೈಕಿ ವಸೂಲಾಗಿರುವ ಸಾಲಗಳ ಬಡ್ಡಿಯ ವ್ಯತ್ಯಾಸದ ಸಹಾಯಧನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ: ಸಿಒ 96 ಸಿಎಲ್ಎಸ್ 2011, ದಿನಾಂಕ 11-05-2011
2. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಸಿಆರ್‌ಡಿ/4/ಕೆ.ಆರ್.ಎಫ್./2008-09, ದಿನಾಂಕ 28-06-2011.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಆದೇಶದಲ್ಲಿ ಸಹಕಾರಿ ಸಂಸ್ಥೆಗಳು ರೈತರಿಗೆ ನೀಡಿದ ಸಾಲಗಳ ಪೈಕಿ ವಸೂಲಾದ ಸಾಲಗಳ ಮೇಲಿನ ಬಡ್ಡಿ, ಸಹಾಯಧನ ಕ್ಲೇಮುಗಳ ಬಾಬ್ತು ರೂ. 7500.00 ಲಕ್ಷಗಳನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಲಾಗಿದೆ. ರೂ. 6673.02 ಲಕ್ಷಗಳು ಬಿಡುಗಡೆಗೆ ಬಾಕಿ ಇದ್ದು ಸಹಕಾರ ಪತ್ತಿನ ಸಂಸ್ಥೆಗಳಿಂದ ರೂ. 1012.40 ಲಕ್ಷಗಳ ಬಿಲ್ಲುಗಳು ಸ್ವೀಕೃತವಾಗಿದ್ದು ಒಟ್ಟಾರೆ ರೂ. 7685.42 ಲಕ್ಷಗಳು ದಿನಾಂಕ 23-06-2011ರ ವರೆಗೆ ಬಾಕಿ ಇದ್ದು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಸಹಕಾರ ಸಂಘಗಳ ನಿಬಂಧಕರು ಕೋರಿರುತ್ತಾರೆ. ಸದರಿ ಕೋರಿಕೆಯನ್ನು ಪರಿಗಣಿಸಿ ರೂ. 7500.00 ಲಕ್ಷಗಳನ್ನು ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ.

ಆದುದರಿಂದ, ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 96 ಸಿಎಲ್ಎಸ್ 2011, ಬೆಂಗಳೂರು, ದಿನಾಂಕ : 20-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸಹಕಾರಿ ಸಂಸ್ಥೆಗಳು ರೈತರಿಗೆ ನೀಡಿದ ಸಾಲಗಳ ಪೈಕಿ ವಸೂಲಾದ ಸಾಲಗಳ ಮೇಲಿನ ಬಡ್ಡಿ ಸಹಾಯಧನದ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಕ್ಲೇಮುಗಳ ಬಾಬ್ತು ಎರಡನೇ ಕಂತು ರೂ. 7500.00 ಲಕ್ಷಗಳನ್ನು (ರೂಪಾಯಿ ಏಳು ಸಾವಿರದ ಐದುನೂರು ಲಕ್ಷಗಳು ಮಾತ್ರ) ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು 2011-12ನೇ ಆಯವ್ಯಯದ ಲೆಕ್ಕಶೀರ್ಷಿಕೆ "2425-00-107-2-41-ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ (ಯೋಜನೆ)" ಅಡಿ ಭರಿಸತಕ್ಕದ್ದು.

2425-00-107-2-41-ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ-106-ಸಹಾಯಧನ	ರೂ. 7413.36 ಲಕ್ಷಗಳು
2425-00-107-2-41-ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ-422-ವಿಶೇಷ ಘಟಕ ಯೋಜನೆ	ರೂ. 22.62 ಲಕ್ಷಗಳು
2425-00-107-2-41-ಬೆಳೆ ಸಾಲಕ್ಕಾಗಿ ಬಡ್ಡಿ ಸಹಾಯಧನ-423-ಗಿರಿಜನ ಉಪಯೋಜನೆ	ರೂ. 64.02 ಲಕ್ಷಗಳು

ಈ ಹಣವನ್ನು ಸಹಕಾರ ಸಂಘಗಳ ಅಪರ ನಿಬಂಧಕರು (ಪತ್ತು), ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು ಇವರು ಹಣ ಸಂದಾಯ ರಸೀದಿ ಮೂಲಕ ಸಹಕಾರ ಸಂಘಗಳ ನಿಬಂಧಕರ ಮೇಲು ಸಹಿ ಪಡೆದು ಖಜಾನೆಯಿಂದ ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ/287/ವೆಚ್ಚ-2/2011, ದಿನಾಂಕ 11-07-2011ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಆರ್. ಎಸ್. ನೂಲಿ
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ

ಪಿ.ಆರ್. 1872

ಸಹಕಾರ ಸಚಿವಾಲಯ

ವಿಷಯ : ಕರ್ನಾಟಕ ಚಿತ್ರಕಲಾ ಪರಿಷತ್ತು (ರಿ), ಕುಮಾರಕೃಪಾ ರಸ್ತೆ, ಬೆಂಗಳೂರು ಈ ಸಂಸ್ಥೆಗೆ ನೇಮಿಸಿರುವ ಆಡಳಿತಾಧಿಕಾರಿಗಳ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :
(1) ಸರ್ಕಾರದ ಆದೇಶ ಸಂಖ್ಯೆ: ಸಇ 10 ಸಸಂನೋ 2009, ದಿನಾಂಕ 10-07-2009
(2) ಸರ್ಕಾರದ ಆದೇಶ ಸಂಖ್ಯೆ: ಸಇ 10 ಸಸಂನೋ 2009, ದಿನಾಂಕ 16-01-2010
(3) ಸರ್ಕಾರದ ಆದೇಶ ಸಂಖ್ಯೆ: ಸಇ 10 ಸಸಂನೋ 2009, ದಿನಾಂಕ 15-07-2010
(4) ಸರ್ಕಾರದ ಆದೇಶ ಸಂಖ್ಯೆ: ಸಇ 10 ಸಸಂನೋ 2009, ದಿನಾಂಕ 07-01-2011
(5) ಆಡಳಿತಾಧಿಕಾರಿಗಳು, ಕರ್ನಾಟಕ ಚಿತ್ರಕಲಾ ಪರಿಷತ್ತು (ರಿ), ಕುಮಾರಕೃಪಾ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಚಿಕಪ/7/2011/837, ದಿನಾಂಕ 01-07-2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ದಿನಾಂಕ 10-7-2009ರ ಆದೇಶದಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತು (ರಿ), ಕುಮಾರಕೃಪಾ ರಸ್ತೆ, ಬೆಂಗಳೂರು ಈ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27 (ಎ) ರನ್ವಯ ಸರ್ಕಾರಕ್ಕೆ ನಿಹಿತವಾಗಿರುವ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ. ಕೆ. ಶಂಕರಲಿಂಗೇಗೌಡ, ಭಾಆಸೇ, ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು ಇವರನ್ನು ಆಡಳಿತಾಧಿಕಾರಿಯನ್ನಾಗಿ ಆರು ತಿಂಗಳ ಅವಧಿಗೆ ನೇಮಿಸಿ ಆದೇಶಿಸಲಾಗಿರುತ್ತದೆ. ನಂತರ ಆಡಳಿತಾಧಿಕಾರಿಯವರು ಕೋರಿರುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಿಂದ (4)ರ ದಿನಾಂಕ 16-1-2010, 15-7-2010 ಮತ್ತು 7-1-2011ರ ಆದೇಶಗಳಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತು (ರಿ), ಕುಮಾರಕೃಪಾ ರಸ್ತೆ, ಬೆಂಗಳೂರು ಈ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆಡಳಿತಾಧಿಕಾರಿಯಾಗಿ ನೇಮಕವಾಗಿರುವ ಶ್ರೀ ಎಂ. ಕೆ. ಶಂಕರಲಿಂಗೇಗೌಡ, ಭಾಆಸೇ, ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು ಇವರ ಆಡಳಿತಾಧಿಕಾರಿಯ ಅವಧಿಯನ್ನು ಕ್ರಮವಾಗಿ 10-1-2010 ರಿಂದ 6 ತಿಂಗಳು ಹಾಗೂ ದಿನಾಂಕ 10-7-2010 ರಿಂದ 6 ತಿಂಗಳು ಮತ್ತು 10-1-2011 ರಿಂದ ಆರು ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5)ರ ದಿನಾಂಕ 1-7-2011ರ ಪತ್ರದಲ್ಲಿ, ಆಡಳಿತಾಧಿಕಾರಿಗಳು ಕರ್ನಾಟಕ ಚಿತ್ರಕಲಾ ಪರಿಷತ್ತು, ಕುಮಾರಕೃಪಾ ರಸ್ತೆ, ಬೆಂಗಳೂರು ರವರು ಚಿತ್ರಕಲಾ ಪರಿಷತ್ತಿನ ಬೈಲಾದಲ್ಲಿ ಅನೇಕ ನ್ಯೂನತೆಗಳಿದ್ದು, ಸಮಗ್ರ ತಿದ್ದುಪಡಿಯ ಅಗತ್ಯವಿರುತ್ತದೆ. ಸದರಿ ಸಮಗ್ರ ತಿದ್ದುಪಡಿಗಳನ್ನು ಮಾಡಬೇಕಾದಲ್ಲಿ ಹೆಚ್ಚು ಕಾಲಾವಕಾಶ ಬೇಕಾಗುತ್ತದೆ. ಕಾರಣ ಇತ್ತೀಚಿನ ಸಂಘಗಳ ನೋಂದಣಿಯ ತಿದ್ದುಪಡಿ ಹಾಗೂ ಕಾಲಮಾನಕ್ಕನುಗುಣವಾಗಿ ಸಂಸ್ಥೆಯ ಬೈಲಾ ತಿದ್ದುಪಡಿ ಮಾಡಬೇಕಾಗಿರುತ್ತದೆ. ಹಾಗೆಯೇ ಸಮಗ್ರ ತಿದ್ದುಪಡಿಯನ್ನು ಮಾಡುವ ಮೊದಲು ಸಂಸ್ಥೆಯ

ಸದಸ್ಯರ ಅಭಿಪ್ರಾಯ ಪಡೆದು ನಂತರವೇ ವಾರ್ಷಿಕ ಮಹಾಸಭೆಯನ್ನು ಕರೆದು ಸದರಿ ಸಭೆಯ ತೀರ್ಮಾನದ ನಂತರ ತಿದ್ದುಪಡಿ ಮಾಡಬೇಕಾಗಿರುವುದು ಅನಿವಾರ್ಯವಾಗಿದ್ದು, ಈ ಸಂಬಂಧ ದಿನಾಂಕ 10-6-2011ರ ಚಿತ್ರಕಲಾ ಪರಿಷತ್ ಸಭೆಯಲ್ಲಿ ನಿರ್ಣಯಿಸಿದ್ದು, ಸಮಗ್ರ ತಿದ್ದುಪಡಿಗೆ ಕನಿಷ್ಠ 6 ತಿಂಗಳ ಕಾಲಾವಕಾಶ ಬೇಕೆಂದೂ, ಅಲ್ಲದೇ ಪ್ರಸ್ತುತ ಆಡಳಿತಾಧಿಕಾರಿಗಳಾದ ಶ್ರೀ ಎಂ. ಕೆ. ಶಂಕರಲಿಂಗೇಗೌಡ, ಭಾ.ಆ.ಸೇ. ಹಾಗೂ ಮುಖ್ಯ ಆಡಳಿತಾಧಿಕಾರಿಗಳಾದ ಶ್ರೀ ಸಿ. ಎಸ್. ರುದ್ರಪ್ಪ ಇವರನ್ನು 2 ವರ್ಷ ಮುಂದುವರೆಸಬೇಕೆಂದು ಅಲ್ಲದೇ ಹಿಂದಿನ ಕಹಿ ಘಟನೆಗಳು ಹಾಗೂ ಅವಘಡಗಳ ಹಿನ್ನೆಲೆಯಲ್ಲಿ ಸದ್ಯಕ್ಕೆ ಚುನಾವಣೆ ಬೇಡವೆಂದೂ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

ರಾಜ್ಯ ಲೆಕ್ಕಪರಿಶೋಧನಾ ಇಲಾಖೆಯಿಂದ ಈ ಹಿಂದಿನ ಆಡಳಿತ ಮಂಡಳಿಯಿಂದ ಆದ ತಪ್ಪು ಹಾಗೂ ಗುರುತರ ಲೋಪದೋಷಗಳು ತಿಳಿಯಬೇಕಾದಲ್ಲಿ ಆಡಿಟ್ ವರದಿಯು ಅತ್ಯಾವಶ್ಯಕ. ಆದರೆ ಸದರಿ ಆಡಿಟ್ ವರದಿಯು ರ್‍ಾಜ್ಯ ಲೆಕ್ಕಪರಿಶೋಧನಾ ಇಲಾಖೆಯಿಂದ ದಿನಾಂಕ 21-1-2011 ರಂದು ಬಂದಿದ್ದು, ಈಗಾಗಲೇ ಸದರಿ ನ್ಯೂನತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿರುವುದರಿಂದ, ಸದರಿ ಲೋಪದೋಷಗಳನ್ನು ಸರಿಪಡಿಸಲು ಸಹ ಕನಿಷ್ಠ 5-6 ತಿಂಗಳು ಅಗತ್ಯವಿರುವ ಹಿನ್ನೆಲೆಯಲ್ಲಿ ಆಡಳಿತಾಧಿಕಾರಿಯವರ ಅವಧಿಯು ದಿನಾಂಕ 10-7-2011 ರಂದು ಪೂರ್ಣಗೊಳ್ಳಲಿರುವುದರಿಂದ, ಸಂಸ್ಥೆಯ ಸಮಗ್ರ ಬೈಲಾ ತಿದ್ದುಪಡಿ ಮತ್ತು ನೂತನ ಚಿತ್ರಕಲಾ ಮಹಾವಿದ್ಯಾಲಯದ ಕ್ಯಾಂಪಸ್‌ನ ಕಾಮಗಾರಿಯನ್ನು ಮಾನ್ಯ ಮುಖ್ಯಮಂತ್ರಿಯವರ ನಿರ್ದೇಶನದಂತೆ ಒಂದು ವರ್ಷದಲ್ಲಿ ಪೂರ್ಣಗೊಳಿಸುವ ಗುರುತರವಾದ ಜವಾಬ್ದಾರಿ ಆಡಳಿತಾಧಿಕಾರಿಯವರಿಗೆ ಇರುವುದರಿಂದ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಾಯ್ದೆ ಕಲಂ 27ಎ (1) (ಸಿ)ರ ಪ್ರಕಾರ ಪುನಃ ಆಡಳಿತಾಧಿಕಾರಿಯವರ ಅವಧಿಯನ್ನು ಮತ್ತೆ 6 ತಿಂಗಳವರೆಗೆ ವಿಸ್ತರಿಸಲು ಅವಕಾಶವಿರುವುದರಿಂದ, ಚಿತ್ರಕಲಾ ಪರಿಷತ್ತಿನ ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ ಸಂಸ್ಥೆಯ ಆಡಳಿತಾಧಿಕಾರಿಯವರು ಮತ್ತೆ 6 ತಿಂಗಳು ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ.

ಆಡಳಿತಾಧಿಕಾರಿಗಳು ಸರ್ಕಾರಕ್ಕೆ ಬರೆದಿರುವ ಪತ್ರವನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಆಡಳಿತಾಧಿಕಾರಿಗಳ ಅವಧಿಯನ್ನು ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಇ 165 ಸಸಂನೋ 2010, ಬೆಂಗಳೂರು, ದಿನಾಂಕ : 20-07-2011

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಚಿತ್ರಕಲಾ ಪರಿಷತ್ತು (ರಿ) ಕುಮಾರಕೃಪಾ ರಸ್ತೆ, ಬೆಂಗಳೂರು ಈ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27 (ಎ) ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆಡಳಿತಾಧಿಕಾರಿಯಾಗಿ ನೇಮಕವಾಗಿರುವ ಶ್ರೀ ಎಂ. ಕೆ. ಶಂಕರಲಿಂಗೇಗೌಡ, ಭಾ.ಆ.ಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು ಇವರ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ 10-7-2011 ರಿಂದ ಮತ್ತೆ ಆರು (6) ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಗಳು ಸದರಿ ಅವಧಿಯಲ್ಲಿ ಆಡಳಿತ ಮಂಡಳಿಯ ಅವ್ಯವಹಾರಗಳನ್ನು ಸರಿಪಡಿಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸುವಂತೆ ಸೂಚಿಸಿದೆ. ಆಡಳಿತಾಧಿಕಾರಿಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿಯನ್ನು ಒದಗಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ನಂಜುಂಡಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಹಕಾರ ಇಲಾಖೆ

ಪಿ.ಆರ್. 1873

ವಸತಿ ಸಚಿವಾಲಯ

ವಿಷಯ : ಬೆಂಗಳೂರು ಮಹಾನಗರ ಸರ್ಕಾರಿ ಪ್ರದೇಶಗಳಲ್ಲಿನ ಕೊಳಗೇರಿ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ಸಮಿತಿ ರಚನೆ ಕುರಿತು.

ಓದಲಾಗಿದೆ : ಮಾನ್ಯ ವಸತಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 15-06-2011ರಂದು ನಡೆದ ಸಭೆಯ ನಡವಳಿ.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 15-06-2011ರಂದು ಮಾನ್ಯ ವಸತಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬೆಂಗಳೂರು ಮಹಾನಗರದಲ್ಲಿನ ಸರ್ಕಾರಿ ಪ್ರದೇಶಗಳಲ್ಲಿನ ಕೊಳಗೇರಿ ವಾಸಿಗಳಿಗೆ ಅವರು ವಾಸ ಮಾಡುವ ಜಾಗದ ಹಕ್ಕು ಪತ್ರಗಳನ್ನು ನೀಡುವ ಸಲುವಾಗಿ ಮಾನ್ಯ ನಗರಾಭಿವೃದ್ಧಿ ಸಚಿವರು, ಮಾಜಿ ಸಚಿವರುಗಳು, ಮಾನ್ಯ ವಿಧಾನ ಸಭಾ/ವಿಧಾನ ಪರಿಷತ್ ಸದಸ್ಯರುಗಳು/ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರು/ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಕಾನೂನು ಇಲಾಖೆ, ಬೆಂಗಳೂರು/ಜಿಲ್ಲಾಧಿಕಾರಿಗಳು ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಹಾಗೂ ವಿವಿಧ ಇಲಾಖೆ/ಮಂಡಳಿ/ನಿಗಮದ ಅಧಿಕಾರಿಗಳೊಂದಿಗೆ ಚರ್ಚಿಸಿ ಕೊಳಚೆ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡುವ ಬಗ್ಗೆ ಒಂದು ತಾತ್ವಿಕವಾದ ನಿಖರವಾದ ಪ್ರಸ್ತಾವನೆಯನ್ನು ರಚಿಸಿ ಒಂದು ತಿಂಗಳೊಳಗಾಗಿ ವರದಿ ನೀಡಲು ನಿರ್ಣಯ ಕೈಗೊಳ್ಳಲಾಗಿರುತ್ತದೆ.

ಸರ್ಕಾರವು ಸದರಿ ಅಂಶವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಇ 43 ಕೊಮಂಇ 2009 (ಭಾ), ಬೆಂಗಳೂರು, ದಿನಾಂಕ : 26-07-2011

ಕೊಳಚೆ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡುವ ಬಗ್ಗೆ ಒಂದು ತಾತ್ವಿಕವಾದ ನಿಖರವಾದ ಪ್ರಸ್ತಾವನೆಯನ್ನು ರಚಿಸಿ ಒಂದು ತಿಂಗಳೊಳಗಾಗಿ ವರದಿ ನೀಡಲು ನಿರ್ದೇಶಿಸಿ, ಈ ಕೆಳಕಂಡ ಅಧಿಕಾರಿ/ಸದಸ್ಯರುಗಳನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಲಾಗಿದೆ.

1. ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ ... ಅಧ್ಯಕ್ಷರು
2. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ... ಸದಸ್ಯರು
3. ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ ... ಸದಸ್ಯರು
4. ಆಯುಕ್ತರು, ಬಿಬಿಎಂಪಿ ... ಸದಸ್ಯರು

5. ಆಯುಕ್ತರು, ಬಿ.ಡಿ.ಎ. ... ಸದಸ್ಯರು
6. ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ... ಸದಸ್ಯರು
7. ವ್ಯವಸ್ಥಾಪಕ ನಿರ್ದೇಶಕರು, ಆರ್.ಜಿ.ಆರ್.ಹೆಚ್.ಸಿ.ಎಲ್. ... ಸದಸ್ಯರು

ಸದರಿ ಸಮಿತಿಯು ಈ ಕೆಳಕಂಡ ಅಂಶಗಳ ಬಗ್ಗೆ ಪರಿಶೀಲಿಸಿ ತನ್ನ ವರದಿಯನ್ನು ಸಲ್ಲಿಸತಕ್ಕದ್ದು.

1. ಸನ್ಮಾನ್ಯ ಮುಖ್ಯ ಮಂತ್ರಿಯವರು ನೀಡಿರುವ ನಿರ್ದೇಶನದಂತೆ ಕರ್ನಾಟಕ ರಾಜ್ಯವನ್ನು ಗುಡಿಸಲು ರಹಿತ ರಾಜ್ಯವನ್ನಾಗಿ ಮಾಡುವ ಸದುದ್ದೇಶದಿಂದ ಹಾಗೂ ಅವರಿಗೆ ಹಕ್ಕು ಪತ್ರವನ್ನು ನೀಡುವ ಸಲುವಾಗಿ ಪ್ರಾರಂಭಿಕವಾಗಿ ಬೆಂಗಳೂರು ಮಹಾನಗರದಲ್ಲಿನ ಸರ್ಕಾರಿ ಪ್ರದೇಶಗಳಲ್ಲಿನ ಕೊಳಗೇರಿ ವಾಸಿಗಳಿಗೆ ಅವರು ವಾಸ ಮಾಡುವ ಜಾಗದ ಹಕ್ಕುಪತ್ರಗಳನ್ನು ನೀಡುವ ಕುರಿತು ಸಾಧಕ-ಬಾಧಕಗಳ ಬಗ್ಗೆ ವಿವರವಾಗಿ ಪರಿಶೀಲಿಸಿ ವರದಿ ನೀಡುವುದು.
2. ಕೊಳಗೇರಿ ನಿವಾಸಿಗಳು ತಾವು ವಾಸ ಮಾಡುವ ಜಾಗದ, ಕುರಿತು ಹಕ್ಕು ಪತ್ರ ಪಡೆಯಲು ಸೂಕ್ತ ಬೆಲೆಯನ್ನು ನಿಗಧಿಪಡಿಸುವ ಬಗ್ಗೆ.
3. ಹಕ್ಕು ಪತ್ರಗಳನ್ನು ನೀಡಿರುವುದನ್ನು ಪರಭಾರೆ ಮಾಡಿರುವುದನ್ನು ಪರಿಶೀಲಿಸಿ ಮೂಲ ನಿವಾಸಿಗಳಿಗೆ ನೀಡಿರುವ ಹಕ್ಕುಪತ್ರಗಳನ್ನು ರದ್ದುಪಡಿಸಿ ಕೊಳಚೆ ಪ್ರದೇಶದ ಮನೆಗಳಲ್ಲಿ ಸುಮಾರು 15-20 ವರ್ಷದಿಂದ ವಾಸ ಮಾಡುತ್ತಿರುವ ನಿವಾಸಿಗಳಿಗೆ ಮರು ಹಕ್ಕು ಪತ್ರಗಳನ್ನು ನೀಡುವ ಬಗ್ಗೆ ಹಾಗೂ ವಾಸ ಸ್ಥಳದ ಭೂ-ಒಡೆತನದ ಹಕ್ಕು ನೀಡುವ ಕುರಿತು.
4. ಇನ್ನು ಮುಂದೆ ಹೊಸ ಕೊಳಚೆ ಪ್ರದೇಶಗಳು ಉದ್ಭವಿಸುವುದನ್ನು ತಡೆಗಟ್ಟಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ.
5. ಖಾಸಗಿ ಒಡೆತನದಲ್ಲಿರುವ ಕೊಳಚೆ ಪ್ರದೇಶಗಳಲ್ಲಿನ ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಲು ಖಾಸಗಿ ಭೂಮಾಲೀಕರ ಜೊತೆಗೂಡಿ ಜಾಯಿಂಟ್ ವೆಂಚರ್ ಯೋಜನೆಯಲ್ಲಿ ಮನೆಗಳನ್ನು ನಿರ್ಮಿಸುವುದು ಅಥವಾ ಇದು ಸಾಧ್ಯವಿಲ್ಲದಿದ್ದಲ್ಲಿ ಖಾಸಗಿ ಭೂ ಮಾಲೀಕರಿಗೆ ಟಿ.ಡಿ.ಆರ್. ನೀಡುವ ಬಗ್ಗೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಜಿ. ಆರ್. ನಾಗರಾಜ
ಪೀಠಾಧಿಕಾರಿ-4,
ವಸತಿ ಇಲಾಖೆ

ಪಿ.ಆರ್. 1874

ಇಂಧನ ಸಚಿವಾಲಯ

ವಿಷಯ : ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು, ಇವರ ಅಮಾನತ್ತಿನ ಅವಧಿಯನ್ನು ಸಕ್ರಮಗೊಳಿಸುವ ಬಗ್ಗೆ.

ಓದಲಾಗಿದೆ :
1. ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ: ಲೋಕ್/ಐಎನ್‌ವಿ(ಜಿ)/ಎಂ/ಸಿಆರ್/2/2010, ಚಿಕ್ಕಮಗಳೂರು, ದಿನಾಂಕ 24-02-2010.
2) ಸರ್ಕಾರದ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010, ದಿನಾಂಕ 26-04-2010.
3) ಸರ್ಕಾರದ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010 (ಭಾಗ-1), ದಿನಾಂಕ 08-12-2010.
4) ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ: ಲೋಕ್/ಐಎನ್‌ವಿ (ಜಿ)/ಎಂ-5/ಸಿಆರ್-2/2010, ಚಿಕ್ಕಮಗಳೂರು, ದಿನಾಂಕ 11-10-2010.
5) ಸರ್ಕಾರಿ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010 (ಭಾಗ-1) ದಿನಾಂಕ04-03-2011.
6) ಮಹಾಲೇಖಪಾಲರ ಪತ್ರ ಸಂಖ್ಯೆ: GEI2/A3/11-12/21 ದಿನಾಂಕ 11-04-2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಪೊಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿಕ್ಕಮಗಳೂರು ರವರು ದಿನಾಂಕ 10-02-2010 ರಂದು ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು, ಚಿಕ್ಕಮಗಳೂರು ರವರನ್ನು ಟ್ರ್ಯಾಪ್ ಮಾಡಿದ ವರದಿಯನ್ನು ಆಧರಿಸಿ ಆರೋಪಿತರನ್ನು ಲಂಚ ನಿರೋಧ ಕಾಯ್ದೆ 1988ರ ಕಲಂ 7, 13 (1)(ಡಿ) ಜೊತೆಗೆ 13 (2)ರ ಪ್ರಕಾರ ಚಿಕ್ಕಮಗಳೂರು ಲೋಕಾಯುಕ್ತ ಠಾಣೆ ಮೊ.ನಂ. 2/2010 ರಲ್ಲಿ ಪ್ರಕರಣವನ್ನು ದಾಖಲಿಸಿ ಇವರ ಲೀನ್ (ಸ್ಥಾನವನ್ನು)ನ್ನು ಬೇರೆ ಕಡೆಗೆ ವರ್ಗಾಯಿಸುವಂತೆ ಅಪರ ಪೊಲೀಸ್ ಮಹಾನಿರ್ದೇಶಕರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ 26-04-2010ರ ಆದೇಶದಲ್ಲಿ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಕೋರಿಕೆಯ ಮೇರೆಗೆ ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು, ಚಿಕ್ಕಮಗಳೂರು ರವರನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 ರಂತೆ ಮುಂದಿನ ತನಿಖೆಯನ್ನು ಬಾಕಿಯಿಟ್ಟು ಅಮಾನತ್ತಿನಲ್ಲಿಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ 08-12-2010ರ ಆದೇಶದಲ್ಲಿ ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು, ಚಿಕ್ಕಮಗಳೂರು ಇವರ ಅಮಾನತ್ತನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 (5) (ಸಿ) ಗಳಡಿಯಲ್ಲಿ ಅಮಾನತ್ತನ್ನು ತೆರವುಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಉಪ ವಿದ್ಯುತ್ ಪರಿವೀಕ್ಷಕರ ಕಚೇರಿ, ಮಂಡ್ಯ ಇಲ್ಲಿ ಖಾಲಿ ಇರುವ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆ 1988ರ ಕಲಂ 7 13 (1)(ಡಿ) ಜೊತೆಗೆ 13 (2)ರ ಪ್ರಕಾರ ಎಸಗಿರುವ ಅಪರಾಧಕ್ಕಾಗಿ ಆರೋಪಿತರನ್ನು

ಅಭಿಯೋಜನೆಗೆ ಒಳಪಡಿಸಲು ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆ 1988ರ ಕಲಂ 19 (1) (ಬಿ) ರನ್ವಯ ಮಂಜೂರಾತಿಯನ್ನು ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆದೇಶದಲ್ಲಿ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆ 1988ರ ಕಲಂ 19 (1) (ಬಿ) ರನ್ವಯ ಆಪಾದಿತರಾದ ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು ರವರನ್ನು ಅಭಿಯೋಜನೆಗೆ ಒಳಪಡಿಸಲು ಕೋರಿದ್ದು, ಪ್ರಕರಣ ಸಂಖ್ಯೆ: 02/2010ಕ್ಕೆ ಸಂಬಂಧಿಸಿದಂತೆ ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜಿಸಲು ಮಂಜೂರಾತಿ ನೀಡಬೇಕೆಂಬ ಕರ್ನಾಟಕ ಲೋಕಾಯುಕ್ತದ ಅಪರ ಪೊಲೀಸ್ ಮಹಾನಿರ್ದೇಶಕರ ಕೋರಿಕೆಯನ್ನು ಸರ್ಕಾರವು ಕೈಬಿಟ್ಟಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಪತ್ರದಲ್ಲಿ ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು ಇವರನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010 (ಭಾಗ-1) ದಿನಾಂಕ 04-03-2011ರ ಪ್ರಕಾರ ದಿನಾಂಕ 26-04-2010 ರಿಂದ 08-12-2010 ರವರೆಗಿನ ಅಮಾನತ್ತಿನ ಅವಧಿಯನ್ನು ಸಕ್ರಮಗೊಳಿಸಲು ಕೋರಲಾಗಿದೆ.

ಮೇಲಿನ ಪ್ರಸ್ತಾವನೆಯನ್ನು ಸಮಗ್ರವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010 (ಭಾಗ-1), ಬೆಂಗಳೂರು, ದಿನಾಂಕ : 26-07-2011

ಸರ್ಕಾರಿ ಆದೇಶ ಸಂಖ್ಯೆ: ಇಎನ್ 28 ಇಬಿಎಸ್ 2010 (ಭಾಗ-1) ದಿನಾಂಕ 04-03-2011ರಲ್ಲಿ ಅಪರ ಪೊಲೀಸ್ ಮಹಾನಿದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಶ್ರೀ ಅಲ್ತಾಫ್ ಹುಸೇನ್ ಜಕಾರ್ತಿ, ಉಪ ವಿದ್ಯುತ್ ಪರಿವೀಕ್ಷಕರು, ವಿದ್ಯುತ್ ಪರಿವೀಕ್ಷಣಾಲಯ ಇವರನ್ನು ಅಭಿಯೋಜನೆಗೆ ಒಳಪಡಿಸಲು ಕೋರಿದ ಪ್ರಸ್ತಾವನೆಯನ್ನು ಸರ್ಕಾರವು ತಿರಸ್ಕರಿಸಿದೆ. ಆದ್ದರಿಂದ ಅವರ ಅಮಾನತ್ತಿನ ಅವಧಿಯನ್ನು ಸಕ್ರಮಗೊಳಿಸುವುದು ಅವಶ್ಯವಿರುವುದರಿಂದ ಮತ್ತು ಮಹಾಲೇಖಪಾಲರು ಈ ಬಗ್ಗೆ ಆದೇಶ ಕೋರಿರುವುದರಿಂದ ಕರ್ನಾಟಕ ನಾಗರಿಕ ಸೇವಾ ನಿಯಮಗಳು 100 (3)ರ ಪ್ರಕಾರ ದಿನಾಂಕ 26-04-2010 ರಿಂದ 08-12-2010 ರವರೆಗಿನ ಅವಧಿಯನ್ನು ಕರ್ತವ್ಯದ ಅವಧಿ ಎಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸುಜಾತಮ್ಮ

ಪೀಠಾಧಿಕಾರಿ

ಪಿ.ಆರ್. 1875 ಇಂಧನ ಇಲಾಖೆ

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವಾಲಯ

ವಿಷಯ : ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಗುಲ್ಬರ್ಗಾ ಇಲ್ಲಿನ ತಾತ್ಕಾಲಿಕ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ: ಯೋಇ 30 ಹೈಕಮಂ 2010, ದಿನಾಂಕ 24-06-2010

2) ಕಾರ್ಯದರ್ಶಿ, ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಗುಲ್ಬರ್ಗಾ ಇವರ ಪತ್ರ ಸಂಖ್ಯೆ: ಹೈಕಮಂ/ಸಿಬ್ಬಂದಿ/15/94-95/161, ದಿನಾಂಕ 20-04-2011.

ಪ್ರಸ್ತಾವನೆ :

ಮೇಲೆ ಓದಲಾದ (1)ರ ದಿನಾಂಕ 24-06-2010ರ ಸರ್ಕಾರದ ಆದೇಶದಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸೂಚಿಸಲಾದ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ 31-03-2011ರವರೆಗೆ ಮುಂದುವರೆಸಲು ಸರ್ಕಾರದ ಅನುಮೋದನೆ ನೀಡಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಕಾರ್ಯದರ್ಶಿ, ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಗುಲ್ಬರ್ಗಾ ಇಲ್ಲಿನ ಕಾರ್ಯಾಲಯದಲ್ಲಿ, ಇದುವರೆವಿಗೂ ಮುಂದುವರಿಸಲಾದ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ 01-04-2011ರಿಂದ 31-03-2012ರವರಗೆ ಮುಂದುವರೆಸಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಯೋಇ 26 ಹೈಕಮಂ 2011, ಬೆಂಗಳೂರು, ದಿನಾಂಕ : 27-07-2011

ಪ್ರಸ್ತಾವನೆಯಲ್ಲಿ ಹೇಳಿರುವ ಸನ್ನಿವೇಶಗಳಿಂದಾಗಿ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಸೃಜಿಸಲಾದ ಈ ಕೆಳಗೆ ನಮೂದಿಸಿದ ಎಲ್ಲಾ ತಾತ್ಕಾಲಿಕ ಹುದ್ದೆಗಳನ್ನು ದಿನಾಂಕ 01-04-2011 ರಿಂದ 31-03-2012 ರವರೆಗೆ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಿದೆ.

ಹುದ್ದೆಯ ಹೆಸರು	ಹುದ್ದೆಗಳ ಸಂಖ್ಯೆ
ಅ. ಆಡಳಿತ ವಿಭಾಗ	
1. ಅಧೀನ ಕಾರ್ಯದರ್ಶಿ	1
2. ಬೆರಳಚ್ಚುಗಾರರು	2
3. ವಾಹನ ಚಾಲಕರು	1

ಆ. ಯೋಜನಾ ವಿಭಾಗ	
1. ಜಂಟಿ ನಿರ್ದೇಶಕರು (ಯೋ)	1
2. ಸಹಾಯಕ ಸಾಂಖ್ಯಿಕ ಅಧಿಕಾರಿ	1

3. ಸಾಂಖ್ಯಿಕ ನಿರೀಕ್ಷಕರು	1
4. ಸೀನಿಯರ್ ಪ್ರೊಗ್ರಾಮರ್	1
5. ಕಂಪ್ಯೂಟರ್ ಆಪರೇಟರ್	1
ಇ. ತಾಂತ್ರಿಕ ವಿಭಾಗ	
1. ಕಾರ್ಯನಿರ್ವಾಹಕ ಅಭಿಯಂತರರು	1
2. ಸಹಾಯಕ ಅಭಿಯಂತರರು	2
3. ಶೀಘ್ರಲಿಪಿಗಾರರು	1
4. ಗ್ರೂಪ್ ಡಿ–1	1

2) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10–07–1996ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಬಿ. ಚಿಕ್ಕರಾಜು
ಸರ್ಕಾರದ ಅಧೀನ ಕಾರ್ಯದರ್ಶಿ–1 ಮತ್ತು 2,
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ

ಪಿ.ಆರ್. 1876

ಯುವಜನ ಸೇವಾ ಸಚಿವಾಲಯ

ವಿಷಯ : ಕೆ.ಎ.ಟಿ. ಅರ್ಜಿ ಸಂಖ್ಯೆ: 5889/2001ರಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿ: 27–10–2010ರಂದು ನೀಡಿದ ಆದೇಶ – ಕ್ಯಾಪ್ಟನ್ ಅಲೋಶಿಯಸ್ ಪಿಂಟೋ, ನಿವೃತ್ತ ಸಹಾಯಕ ವೈಮಾನಿಕ ತರಬೇತಿದಾರರು, ಸರ್ಕಾರಿ ವೈಮಾನಿಕ ತರಬೇತಿ ಶಾಲೆ, ಇವರ ಅಮಾನತ್ತಿನ ಅವಧಿಯನ್ನು ಇತ್ಯರ್ಥಪಡಿಸುವ ಬಗ್ಗೆ.

ಓದಲಾಗಿದೆ :
1. ದಿನಾಂಕ: 28–08–1999ರ ವಾಪ್ರಯು 182 ಯುಇಸೇ 97ನೇ ಸಂಖ್ಯೆಯ ಸರ್ಕಾರದ ಆದೇಶ.
2. ದಿನಾಂಕ: 23/12/1999ರ ವಾಪ್ರಯು 182 ಯುಇಸೇ 97ನೇ ಸಂಖ್ಯೆಯ ಸರ್ಕಾರದ ಆದೇಶ.
3. ಕೆ.ಎ.ಟಿ. ಅರ್ಜಿ ಸಂಖ್ಯೆ: 5889/2001 ಪ್ರಕರಣದಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿ: 27/10/2010ರಂದು ನೀಡಿರುವ ಆದೇಶ.
4. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು, ಇವರ ದಿನಾಂಕ: 04–12–2010ರ 17078/ಎಜಿ/ಕೆಎಟಿ/10–11ನೇ ಸಂಖ್ಯೆಯ ಪತ್ರ.
5. ದಿನಾಂಕ: 24/02/2011ರ ಯುಸೇಇ 04 ಯುರಾಸೇ 2011ನೇ ಸಂಖ್ಯೆಯ ಸರ್ಕಾರಿ ಆದೇಶ.
6. ದಿನಾಂಕ: 24/02/2011ರ ಯುಸೇಇ 04 ಯುರಾಸೇ 2011ನೇ ಸಂಖ್ಯೆಯ ನೋಟೀಸ್.
7. ದಿನಾಂಕ: 09/03/2011ರ ಕ್ಯಾ ಅಲೋಷಿಯಸ್ ಪಿಂಟೋರವರ ಪತ್ರ.

ಪ್ರಸ್ತಾವನೆ :

ಸರ್ಕಾರಿ ವೈಮಾನಿಕ ತರಬೇತಿ ಶಾಲೆಯಲ್ಲಿ ಈ ಹಿಂದೆ ಸಹಾಯಕ ವೈಮಾನಿಕ ತರಬೇತಿದಾರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ, ಕ್ಯಾಪ್ಟನ್ ಅಲೋಶಿಯಸ್ ಪಿಂಟೋರವರು ಸರ್ಕಾರಿ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಿಯಾಗಿರುವುದು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಜೊತೆ ನೇರವಾಗಿ ಪತ್ರ ವ್ಯವಹಾರ ನಡೆಸಿರುವುದು, ಇತ್ಯಾದಿ, ಅನುಚಿತ ವರ್ತನೆಗಳಿಗಾಗಿ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆದು ಮೇಲೆ (1)ರಲ್ಲಿ ಓದಲಾದ ದಿ: 28/08/1999ರ ಸರ್ಕಾರಿ ಆದೇಶದಲ್ಲಿ ಅವರಿಗೆ "ವಾಗ್ದಂಡನೆ" ವಿಧಿಸಲಾಗಿತ್ತು. ಹಾಗೂ ವಿಚಾರಣೆ ಸಂಬಂಧ ಅವರನ್ನು ದಿನಾಂಕ: 25/11/1998 ರಿಂದ 12/05/1999ರವರೆಗೆ ಅಮಾನತ್ತಿನಲ್ಲಿರಿಸಿದ ಅವಧಿಯನ್ನು " ಅಮಾನತ್ತಿನ ಅವಧಿ" ಯೆಂದು ಪರಿಗಣಿಸಿ ಮೇಲೆ(2)ರಲ್ಲಿ ಓದಲಾದ ದಿನಾಂಕ: 23/12/1999ರ ಆದೇಶವನ್ನು ಹೊರಡಿಸಲಾಯಿತು.

ಮೇಲ್ಕಂಡ ಎರಡು ಆದೇಶಗಳನ್ನು ಪ್ರಶ್ನಿಸಿ ಕ್ಯಾಪ್ಟನ್ ಅಲೋಶಿಯಸ್ ಪಿಂಟೋರವರು ಕರ್ನಾಟಕ ಆಡಳಿತ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 5889/2001 ಅನ್ನು ಸಲ್ಲಿಸಿದ್ದರು. ಕರ್ನಾಟಕ ಆಡಳಿತ ಮಂಡಳಿಯು ಮೇಲೆ (3)ರಲ್ಲಿ ಓದಲಾದ ದಿ: 27/10/2010ರಂದು ಈ ಪ್ರಕರಣದಲ್ಲಿ ಆದೇಶ ಹೊರಡಿಸಿ ದಿನಾಂಕ: 28/08/1999ರ ಆದೇಶವನ್ನು ಸ್ಥಿರೀಕರಿಸಿರುತ್ತದೆ ಮತ್ತು ಅರ್ಜಿದಾರರ ಅಮಾನತ್ತಿನ ಅವಧಿಯನ್ನು ಹಾಗೆಂದು ಪರಿಗಣಿಸುವಾಗ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 100 ರಲ್ಲಿ ನಿಗದಿಪಡಿಸಲಾಗಿರುವ ಕಾರ್ಯವಿಧಾನವನ್ನು ಅನುಸರಿಸಲಿಲ್ಲ ಎಂಬ ಆಧಾರದ ಮೇಲೆ ಇವರ ಅಮಾನತ್ತಿನ ಅವಧಿಯನ್ನು ಹಾಗೆಂದೆ ಪರಿಗಣಿಸಿದ ದಿ: 23/12/1999ರ ಸರ್ಕಾರಿ ಆದೇಶವನ್ನು ರದ್ದುಪಡಿಸಿರುತ್ತದೆ. ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 100ರಲ್ಲಿ ನಿಗದಿಪಡಿಸಿದ ಕಾರ್ಯವಿಧಾನವನ್ನು ಅನುಸರಿಸಿದ ನಂತರ ಹೊಸ ಆದೇಶವನ್ನು ಹೊರಡಿಸಬೇಕೆಂದು ನಿರ್ದೇಶಿಸಿರುತ್ತದೆ.

ಸರ್ಕಾರಿ ವಕೀಲರು ಮೇಲೆ(4)ರಲ್ಲಿ ಓದಲಾದ ದಿ: 04/12/2010ರ ಪತ್ರದಲ್ಲಿ ಈ ಪ್ರಕರಣವು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಲು ಅರ್ಹವಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಕರ್ನಾಟಕ ಆಡಳಿತ ಮಂಡಳಿಯು ಅರ್ಜಿ ಸಂಖ್ಯೆ: 5889/2001ರಲ್ಲಿ ನೀಡಿದ ದಿ: 27/10/2010ರ ಆದೇಶವನ್ನು ಅನುಷ್ಠಾನಗೊಳಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 100ರ ವಿಧಿವಿಧಾನವನ್ನು ಪಾಲಿಸಿದ ನಂತರ ಹೊಸದಾಗಿ ಆದೇಶ ಹೊರಡಿಸುವ ಪ್ರಕ್ರಿಯೆಯನ್ನು ಕಾಯ್ದಿಟ್ಟು ಶ್ರೀ ಅಲೋಶಿಯಸ್ ಪಿಂಟೋ, ನಿವೃತ್ತ ಸಹಾಯಕ ವೈಮಾನಿಕ ತರಬೇತಿದಾರರು, ಇವರ ಅಮಾನತ್ತಿನ ಅವಧಿಯನ್ನು ಹಾಗೆಂದೆ ಪರಿಗಣಿಸಿದ ದಿನಾಂಕ: 23/12/1999ರ ಸರ್ಕಾರಿ ಆದೇಶವನ್ನು ಮೇಲೆ (5)ರಲ್ಲಿ ಓದಲಾದ ದಿನಾಂಕ: 24/02/2011ರ ಸರ್ಕಾರಿ ಆದೇಶ ಮೂಲಕ ರದ್ದುಪಡಿಸಲಾಯಿತು.

ಕ್ಯಾ. ಅಲೋಶಿಯಸ್ ಪಿಂಟೋರವರಿಗೆ ಮೇಲೆ (6)ರಲ್ಲಿ ಓದಲಾದ ದಿನಾಂಕ: 24/02/2011ರ ನೋಟೀಸ್ ದಿನಾಂಕ: 25/01/1999 ರಿಂದ 12.05.1999ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು "ಕರ್ತವ್ಯದ ಮೇಲೆ ಕಳೆಯದ ಅವಧಿ" ಎಂದು ಏಕೆ ಪರಿಗಣಿಸಬಾರದೆಂಬುದಕ್ಕೆ ಅವರ ಸಮಜಾಯಿಷಿ ಕೇಳಲಾಗಿದ್ದು, ಇದು ನೋಟೀಸಿಗೆ ಕ್ಯಾ. ಅಲೋಶಿಯಸ್ ಪಿಂಟೋರವರು ಮೇಲೆ (7)ರಲ್ಲಿ ಓದಲಾದ ದಿನಾಂಕ: 09/03/2011ರ ಉತ್ತರವನ್ನು ಸಲ್ಲಿಸಿ, ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವಿಮಾನ ಬೋಧಕರಿಲ್ಲದೇ ತೊಂದರೆಯಾಗಿರುವುದನ್ನು ಪರಿಗಣಿಸಿ ಅಮಾನತ್ತನ್ನು ರದ್ದುಪಡಿಸಿ ಇವರನ್ನು ಸೇವೆಗೆ ತೆಗೆದುಕೊಂಡಿರುವ ಕಾರಣ ತಮ್ಮನ್ನು ಅಮಾನತ್ತಿನಲ್ಲಿಟ್ಟಿದ್ದು ತಪ್ಪಾಗಿದೆಯೆಂದು ತಿಳಿಸಿ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯ ನಿರ್ವಹಿಸಿದ ಅವಧಿಯೆಂದು ಪರಿಗಣಿಸಿ, ಪೂರ್ಣವೇತನ ನೀಡುವಂತೆ ಕೋರಿರುತ್ತಾರೆ. ಹಾಗೂ ಮುಖ್ಯ ವೈಮಾನಿಕ ತರಬೇತುದಾರರ ಹುದ್ದೆಯನ್ನು ನಿರಾಕರಿಸದೇ ಇದ್ದುದಕ್ಕಾಗಿ ಸಹಾಯಕ ವಿಮಾನ ಬೋಧಕರಾಗಿದ್ದ ತಮ್ಮನ್ನು ಅಮಾನತ್ತುಗೊಳಿಸಿದ್ದು ಸರಿಯಲ್ಲ ಎಂದು ಸಹ ತಿಳಿಸಿರುತ್ತಾರೆ.

ಶ್ರೀಯುತರು ತಮ್ಮ ದಿನಾಂಕ: 09/03/2011ರ ಮನವಿಯಲ್ಲಿ, ಅರ್ಜಿ ಸಂಖ್ಯೆ: 5889/01ರಲ್ಲಿ ಕೆ.ಎ.ಟಿಯು ದಿನಾಂಕ: 27/10/2010 ರಂದು ನೀಡಿದ್ದ ಆದೇಶದಂತೆ ದಿನಾಂಕ: 23/12/1999ರ ಸರ್ಕಾರ ಆದೇಶವನ್ನು ರದ್ದುಪಡಿಸಿದ ಬಗ್ಗೆ ಏನು ಕ್ರಮ ತೆಗೆದುಕೊಳ್ಳಲಿಲ್ಲ ಮತ್ತು ಈ ಬಗ್ಗೆ ತರಬೇತಿ ಶಾಲೆಗಾಗಲಿ, ಮಹಾಲೇಖಪಾಲಕರಿಗಾಗಲಿ ಹಾಗೂ ತಮಗಾಗಲಿ ಯಾವುದೆ ಮಾಹಿತಿ ಸಲ್ಲಿಸಿಲ್ಲ, ಎಂದು ತಿಳಿಸಿರುತ್ತಾರೆ. ಆದರೆ ದಿನಾಂಕ: 24/02/2011ರಂದು ಹೊರಡಿಸಿದ ಯುಸೇಇ 04 ಯುರಾಸೇ 2011ನೇ ಸಂಖ್ಯೆಯ ಸರ್ಕಾರಿ ಆದೇಶದಲ್ಲಿ, ಸರ್ಕಾರವು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ: 5889/01ರಲ್ಲಿ ನೀಡಿದ ದಿನಾಂಕ: 27/10/2010ರ ಆದೇಶವನ್ನು ಅನುಷ್ಠಾನಗೊಳಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 100 ವಿಧಿ ವಿಧಾನವನ್ನು ಪಾಲಿಸಿದ ನಂತರ ಹೊಸದಾಗಿ ಆದೇಶ ಹೊರಡಿಸುವ ಪ್ರಕ್ರಿಯೆಯನ್ನು ಕಾಯ್ದಿರಿಸಿ ಶ್ರೀ. ಅಲೋಶಿಯಸ್ ಪಿಂಟೋ, ನಿವೃತ್ತ ಸಹಾಯಕ ವೈಮಾನಿಕ ತರಬೇತಿದಾರರು, ಅವರ ಅಮಾನತ್ತಿನ ಅವಧಿಯನ್ನು ಹಾಗೆಂದೆ ಪರಿಗಣಿಸಿದ ದಿನಾಂಕ: 23/12/1999ರ ಸರ್ಕಾರಿ ಆದೇಶವನ್ನು ರದ್ದುಪಡಿಸಿ ಆದೇಶವನ್ನು ಹೊರಡಿಸಿತ್ತು.

ಮುಂದುವರೆದು ಶ್ರೀಯುತರು ತಮ್ಮ ದಿನಾಂಕ: 09/03/2011ರ ಮನವಿಯಲ್ಲಿ ಈ ಕೆಳಕಂಡ ಅಂಶಗಳನ್ನು ಸಹ ಪ್ರಸ್ತಾಪ ಮಾಡಿರುತ್ತಾರೆ.

(ಅ) ದಿನಾಂಕ: 12/05/1999ರ ವಾಪ್ರಂಯು 182 ಯುಇಸೇ 97ನೇ ಸಂಖ್ಯೆಯ ಆದೇಶದ ಮೂಲಕ ಇವರ ಅಮಾನತ್ತನ್ನು ರದ್ದುಗೊಳಿಸಿ ಇವರನ್ನು ಪುನಃ ಸ್ಥಾಪಿಸಲಾಗಿದೆಯೆಂದೂ, ಇದೇ ಸಂದರ್ಭದಲ್ಲಿ ಪುನರ್ ಸ್ಥಾಪಿಸಿದ ಅಧಿಕಾರಿಯವರು ನಿಯಮ 100ರ ವಿಧಿ ವಿಧಾನಗಳನ್ನು ಪಾಲಿಸಬೇಕಾಗಿತ್ತೆಂದು, ಪ್ರಸ್ತುತ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವಿಮಾನ ಬೋಧಕರಿಲ್ಲದೆ ತೊಂದರೆಯಾಗುವುದನ್ನು ಪರಿಗಣಿಸಿ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಸದರಿಯವರ ಅಮಾನತ್ತನ್ನು ತಕ್ಷಣ ಜಾರಿಗೆ ಬರುವಂತೆ ರದ್ದುಗೊಳಿಸುವುದರಿಂದ ಇವರನ್ನು ಅಮಾನತ್ತಿನಲ್ಲಿಟ್ಟಿದ್ದು ತಪ್ಪು ಎಂದು ಊಹಿಸಿ ಪೂರ್ತಿ ವೇತನವನ್ನು ನೀಡಲು ಆದೇಶಿಸಬೇಕೆಂದು ವಿನಂತಿಸಿರುತ್ತಾರೆ.

(ಆ) ಇವರ ಅಮಾನತ್ತಿನ ಆದೇಶವನ್ನು ತಕ್ಷಣವೇ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿರುತ್ತದೆ. ಆದ್ದರಿಂದ ಮಾನ. ಅದನ್ನು ಜಾರಿಗೆ ತರಲು ಬರುವುದಿಲ್ಲವೆಂದೂ ಮತ್ತು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿದ್ದರೂ ಇಲಾಖಾ ವಿಚಾರಣೆ ನಡೆಸಿಲ್ಲ ಎಂದು ತಿಳಿಸಿರುತ್ತಾರೆ.

ಶ್ರೀಯುತರ ಮನವಿಯಲ್ಲಿನ ಮೇಲ್ಕಂಡ ಅಂಶಗಳನ್ನು ವಿವರವಾಗಿ ಪರಿಶೀಲಿಸಲಾಗಿದೆ. ಸರ್ಕಾರಿ ವೈಮಾನಿಕ ತರಬೇತಿ ಶಾಲೆಯ ಚಟುವಟಿಕೆಗಳು ಸುಗಮವಾಗಿ ನಡೆಯಲೆಂಬ ದೃಷ್ಟಿಯಿಂದ ದಿನಾಂಕ: 12/05/1999 ರ ಆದೇಶದ ಮೂಲಕ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಇವರ ಅಮಾನತ್ತನ್ನು ರದ್ದುಗೊಳಿಸಿ ಇವರನ್ನು ಸೇವೆಗೆ ತೆಗೆದುಕೊಳ್ಳಲಾಗಿರುತ್ತದೆ. ಈ ಆದೇಶವನ್ನು ಹೊರಡಿಸುವಾಗ, ಸರ್ಕಾರಿ ವೈಮಾನಿಕ ತರಬೇತಿ ಶಾಲೆಯ ಹಾರಾಟ ಚಟುವಟಿಕೆ ಸ್ಥಗಿತಗೊಂಡಿರುವುದನ್ನು ಮತ್ತು ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ಬೋಧಕರಿಲ್ಲದೆ ತೊಂದರೆಯಾಗುತ್ತಿರುವ ಅಂಶಗಳನ್ನು ಪರಿಗಣಿಸಲಾಗಿದೆ. ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಿದ ನಂತರ ಶ್ರೀಯುತರು ಸರ್ಕಾರದ ನೀತಿ ನಿಯಮಗಳನ್ನು ಉಲ್ಲಂಘಿಸಿರುವುದು, ಹಿರಿಯ ಅಧಿಕಾರಿಗಳ ಜೊತೆ ಅಸಹಕಾರ ಮಾಡಿರುವುದು, ಕೇಂದ್ರ ಸರ್ಕಾರದ ಜೊತೆ ನೇರವಾಗಿ ಪತ್ರ ವ್ಯವಹಾರ ಮಾಡಿರುವುದು ಪ್ರಾಥಮಿಕವಾಗಿ ಸಾಬೀತಾಗಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ 12ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 28/08/1999ರ ಆದೇಶದ ಮೂಲಕ ಇವರಿಗೆ "ವಾಗ್ದಂಡನೆ" ಯನ್ನು ವಿಧಿಸಲಾಗಿರುತ್ತದೆ. ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1977ರ ನಿಯಮ 8(ii) ರನ್ವಯ ಇದು ದಂಡನೆಯಾಗುತ್ತದೆ. ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 27/10/2010ರ ಆದೇಶದಲ್ಲಿ, ಇವರಿಗೆ "ವಾಗ್ದಂಡನೆ" ವಿಧಿಸಿರುವುದನ್ನು ಎತ್ತಿ ಹಿಡಿದಿದೆ. ಆದ್ದರಿಂದ ಶ್ರೀಯುತರನ್ನು ಅಮಾನತ್ತಿನಲ್ಲಿಟ್ಟಿದ್ದು ಸರಿಯಲ್ಲವೆಂಬ ಇವರ ನಿಲುವನ್ನು ಒಪ್ಪಲಾಗುವುದಿಲ್ಲ.

ಈ ಹಿಂದೆ ಹೊರಡಿಸಲಾಗಿದ್ದ ದಿನಾಂಕ: 06/04/1998ರ ಸರ್ಕಾರಿ ಆದೇಶದಲ್ಲಿ ಶಾಲೆಯ ಎಲ್ಲಾ ವೈಮಾನಿಕ ಚಟುವಟಿಕೆಗಳನ್ನು ಉಸ್ತುವಾರಿ ಮಾಡಲು ಈ ಹಿಂದೆ ಶ್ರೀಯುತರಿಗೆ ಪೂರ್ಣ ಅಧಿಕಾರ ನೀಡಲಾಗಿತ್ತು. ಇದರ ಅರ್ಥ ವೈಮಾನಿಕ ಚಟುವಟಿಕೆ ನಡೆಸಲು ಕೈಗೊಳ್ಳಬೇಕಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ಅವರಿಗೆ ಯಾವುದೇ ಅಡ್ಡಿ ಇರಲಿಲ್ಲ. ಈ ಅಧಿಕಾರವನ್ನು ಬಳಸಿಕೊಂಡು ವೈಮಾನಿಕ ಚಟುವಟಿಕೆ ನಡೆಸಲು ಅವರು ಕ್ರಮ ಕೈಗೊಳ್ಳಬೇಕಿತ್ತು. ಅದನ್ನು ಮಾಡುವುದಕ್ಕೆ ಬದಲಾಗಿ ಕ್ಯಾ. ಅಲೋಷಿಯಸ್ ಪಿಂಟೋರವರು ಸರ್ಕಾರದ ಆದೇಶ, ಡಿ.ಜಿ.ಸಿ.ಎ ನಿಯಮಗಳನ್ನು ಪಾಲಿಸದೇ ಇರುವುದು ಮತ್ತು ಕಛೇರಿಗೆ ಗೈರು ಹಾಜರಾಗುವುದು, ರಾಜ್ಯ ಮತ್ತು ಕೇಂದ್ರ ಸರ್ಕಾರದೊಂದಿಗೆ ನೇರವಾಗಿ ಪತ್ರ ವ್ಯವಹಾರ ನಡೆಸುವುದು, ಇವುಗಳನ್ನು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತನೆ ಮಾಡಿರುವರು. ಮುಖ್ಯ ವಿಮಾನ ಬೋಧಕರ ಕೆಲಸವನ್ನು ನಿರಾಕರಿಸದೇ ಇದ್ದುದಕ್ಕಾಗಿ ಸಹಾಯಕ ವೈಮಾನಿಕ ಬೋಧಕರಾದ ಶ್ರೀಯುತರನ್ನು ಅಮಾನತ್ತುಗೊಳಿಸಿದ್ದು ಸರಿಯಲ್ಲವೆಂಬ ಇವರ ನಿಲುವು ಒಪ್ಪತಕ್ಕದ್ದಲ್ಲ. ಈ ಕಾರಣಕ್ಕಾಗಿ ಕರ್ನಾಟಕ ಆಡಳಿತ ಮಂಡಳಿಯು ದಿನಾಂಕ: 27/10/2010ರ ಆದೇಶದಲ್ಲಿ ಇವರಿಗೆ "ವಾಗ್ದಂಡನೆ" ವಿಧಿಸಿರುವುದನ್ನು ಎತ್ತಿ ಹಿಡಿದಿದೆ. ಮತ್ತು ಅಮಾನತ್ತಿನ ಅವಧಿಯನ್ನು ಪರಿಗಣಿಸುವಾಗ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 100ರಲ್ಲಿ ನಿಗದಿಪಡಿಸಿರುವ

ಕಾರ್ಯವಿಧಾನವನ್ನು ಅನುಸರಿಸಿಲ್ಲವೆಂಬ ಕಾರಣಕ್ಕಾಗಿ ಅಮಾನತ್ತಿನ ಅವಧಿಯನ್ನು ಹಾಗೆಂದೇ ಪರಿಗಣಿಸಿದ ದಿನಾಂಕ: 23/11/1999ರ ಆದೇಶವನ್ನು ರದ್ದುಪಡಿಸಿ ಕಾರ್ಯವಿಧಾನವನ್ನು ಅನುಸರಿಸಿದ ನಂತರ ಅಮಾನತ್ತಿನ ಅವಧಿ ಕುರಿತು ಹೊಸದಾಗಿ ಆದೇಶ ಹೊರಡಿಸಬಹುದೆಂದು ನಿರ್ದೇಶಿಸಿರುವ ಮೇರೆಗೆ ಅದರಂತೆ, ಕ್ಯಾ. ಅಲೋಶಿಯಸ್ ಪಿಂಟೋರವರಿಗೆ ದಿನಾಂಕ: 24/02/2011ರ ನೋಟೀಸ್ ನೀಡಲಾಗಿದೆ. ಅವರು ಸದರಿ ನೋಟೀಸಿಗೆ ನೀಡಿದ ಉತ್ತರವನ್ನು ಪರಿಶೀಲಿಸಲಾಗಿ ಅದರಲ್ಲಿ ಅವರು ಪ್ರಸ್ತಾಪಿಸಿರುವ ಅಂಶಗಳು ಅಂಗೀಕಾರಾರ್ಹವಲ್ಲ.

ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 04 ಯುರಾಸೇ 2011 (ಭಾ-1), ಬೆಂಗಳೂರು, ದಿನಾಂಕ: 25/07/2011.

ಪ್ರಸ್ತಾವನೆಯಲ್ಲಿನ ವಿವರಣೆಗಳ ಹಿನ್ನೆಲೆಯಲ್ಲಿ ಸರ್ಕಾರಿ ವೈಮಾನಿಕ ತರಬೇತಿ ಶಾಲೆಯಲ್ಲಿ ಸಹಾಯಕ ಮುಖ್ಯ ಬೋಧಕರಾಗಿ ನಿವೃತ್ತರಾಗಿರುವ ಕ್ಯಾ. ಅಲೋಶಿಯಸ್ ಪಿಂಟೋರವರು, ದಿನಾಂಕ: 25/11/1998 ರಿಂದ 12/05/1999ರ ವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು "ಕರ್ತವ್ಯದ ಮೇಲೆ ಕಳೆಯುವ ಅವಧಿ (period not spent on duty)" ಎಂದು ಪರಿಗಣಿಸಿ ಹಾಗೂ ಸದರಿ ಅವಧಿಯ ವೇತನ ಭತ್ಯೆ ಪ್ರಮಾಣವನ್ನು ಈಗಾಗಲೇ ನೀಡಲಾಗಿರುವ ಜೀವನಾಂಶ ಭತ್ಯ ಪ್ರಮಾಣಕ್ಕೆ ಸಮಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಸಿ. ಶ್ರೀನಿವಾಸ್
ಸರ್ಕಾರದ ಅಧೀನ ಕಾರ್ಯದರ್ಶಿ
ಯುವಜನ ಸೇವಾ ಇಲಾಖೆ

ಪಿ.ಆರ್. 1877

ಕಂದಾಯ ಸಚಿವಾಲಯ

ವಿಷಯ : ಹರಿಹರ ತಾಲ್ಲೂಕು ಕಛೇರಿಗೆ ನೀರಾವರಿ ನಿಗಮದ ಕಟ್ಟಡವನ್ನು ಬಾಡಿಗೆಗೆ ಪಡೆಯುವ ಬಗ್ಗೆ ಮಂಜೂರಾತಿ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ: ಕಂಇ 66 ಡಬ್ಲ್ಯೂಬಿಆರ್ 2009, ದಿನಾಂಕ: 27/03/2010
2. ಪತ್ರ ಸಂಖ್ಯೆ: ಎಡಿಎಂ/ಸಿಆರ್/29/1-12, ದಿನಾಂಕ: 06/06/2011.

ಪ್ರಸ್ತಾವನೆ :

ಹರಿಹರ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡವನ್ನು ನಿರ್ಮಾಣ ಮಾಡಲು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಂಜೂರಾತಿಯನ್ನು ನೀಡಲಾಗಿದೆ.

ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆರವರು ಮೇಲೆ (2)ರಲ್ಲಿ ಓದಲಾದ ತಮ್ಮ ಪತ್ರದಲ್ಲಿ ಹರಿಹರ ಪಟ್ಟಣದಲ್ಲಿ ಮಿನಿ ವಿಧಾನಸೌಧವನ್ನು ನಿರ್ಮಾಣ ಮಾಡಲು ತಾಲ್ಲೂಕು ಕಛೇರಿ ಮತ್ತು ಜಾಗವನ್ನು ಕರ್ನಾಟಕ ಗೃಹ ಮಂಡಳಿಗೆ ಹಸ್ತಾಂತರಿಸಲಾಗಿದೆ ಎಂದು, ಸ್ಥಳೀಯ ನೀರಾವರಿ ನಿಗಮದ ಅತಿಥಿಗೃಹ ಮತ್ತು ಗೋಡೌನ್‌ಅನ್ನು ಮಾಹೆಯಾನ ರೂ. 24,000.00ಗಳ ಬಾಡಿಗೆ ಆಧಾರದ ಮೇಲೆ ಪಡೆಯಲಾಗಿದೆಯೆಂದು, ಇದಕ್ಕೆ ದಾವಣಗೆರೆ ವಿಭಾಗದ ಕಾರ್ಯಪಾಲಕ ಅಭಿಯಂತರರು ಬಾಡಿಗೆಯನ್ನು ನಿರ್ಧರಿಸಿದ್ದಾರೆಂದು ಪ್ರಯುಕ್ತ ದಿನಾಂಕ: 17/01/2001 ರಿಂದ ಬಾಡಿಗೆಗೆ ಪಡೆದಿರುವುದಕ್ಕೆ ಮಂಜೂರಾತಿಯನ್ನು ನೀಡುವಂತೆ ಹಾಗೂ ರೂ. 2.88.000.00ಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ಎಲ್ಲಾ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಹರಿಹರ ತಾಲ್ಲೂಕು ಕಛೇರಿಗಾಗಿ ಸ್ಥಳೀಯ ನೀರಾವರಿ ನಿಗಮದ ಕಟ್ಟಡವನ್ನು ದಿನಾಂಕ: 17/01/2001 ರಿಂದ ಮಾಹೆಯಾನ ರೂ. 24,000.00 ಗಳ ಬಾಡಿಗೆಗೆ ಪಡೆದಿರುವುದಕ್ಕೆ ಮಂಜೂರಾತಿಯನ್ನು ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 28 ಎಂಎಸ್‌ಟಿ 2011 ಬೆಂಗಳೂರು, ದಿನಾಂಕ 25-07-2011

ಹರಿಹರ ತಾಲ್ಲೂಕು ಕಛೇರಿಗಾಗಿ ಸ್ಥಳೀಯ ನೀರಾವರಿ ನಿಗಮದ ಕಟ್ಟಡವನ್ನು ದಿನಾಂಕ: 17/01/2001ರಿಂದ ಮಾಹೆಯಾನ ರೂ. 24,000.00 (ರೂಪಾಯಿ ಇಪ್ಪತ್ನಾಲ್ಕು ಸಾವಿರಗಳು ಮಾತ್ರ) ಗಳ ದರದಂತೆ ಬಾಡಿಗೆಗೆ ಪಡೆದಿರುವುದಕ್ಕೆ ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2053-00-094-7-01-071 (ಕಟ್ಟಡ ವೆಚ್ಚ) (ಯೋಜನೇತರ) ಯಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಯುವಜನ ಸೇವಾ ಮತ್ತು ಕಂದಾಯ ಇಲಾಖೆಗಳ ಅವರ ಟಿಪ್ಪಣಿ ಸಂಖ್ಯೆ ಆಇ 35846 ಐಎಫ್‌ಎ 2011, ದಿನಾಂಕ: 16/07/2011ರಲ್ಲಿ ನೀಡಿರುವ ಸಹಮತಿಯೊಂದಿಗೆ ಸರ್ಕಾರದ ಆದೇಶ ಸಂಖ್ಯೆ ಆಇ 1 ಟಿಎಫ್‌ಪಿ 1996, ದಿನಾಂಕ: 10/07/1996ರ ಪ್ರತ್ಯಾಯೋಜಿತ ಅಧಿಕಾರಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ವಿ. ಶ್ರೀರಾಮರೆಡ್ಡಿ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಪಿ.ಆರ್. 1878

ಕಂದಾಯ ಸಚಿವಾಲಯ

ವಿಷಯ : ಚಿಕ್ಕಬಳ್ಳಾಪುರ ಜಿಲ್ಲಾ ಕಛೇರಿ ಸಂಕೀರ್ಣ ಕಟ್ಟಡದ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ: ಕಂಇ 33 ಡಬ್ಲ್ಯೂಬಿಆರ್ 2008, ದಿನಾಂಕ: 08/07/2009.

2. ಪತ್ರ ಸಂಖ್ಯೆ: ಎಡಿಎಂ/ಸಿಆರ್–07/2011–12, ದಿನಾಂಕ: 29/04/2011.

ಪ್ರಸ್ತಾವನೆ :

ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಕಛೇರಿ ಸಂಕೀರ್ಣ ಕಟ್ಟಡವನ್ನು ರೂ. 20.00 ಕೋಟಿಗಳ ಮತ್ತು ಅಧಿಕಾರಿ ಸಿಬ್ಬಂದಿಗಳ ವಸತಿಗೃಹಗಳನ್ನು ರೂ.5.00 ಕೋಟಿಗಳ ಅಂದಾಜು ವೆಚ್ಚದಲ್ಲಿ ನಿರ್ಮಾಣ ಮಾಡಲು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಂಜೂರಾತಿಯನ್ನು ನೀಡಲಾಗಿತ್ತು.

ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆರವರು ಮೇಲೆ (2)ರಲ್ಲಿ ಓದಲಾದ ತಮ್ಮ ಪತ್ರದಲ್ಲಿ ಜಿಲ್ಲಾ ಕಛೇರಿ ಸಂಕೀರ್ಣ ಕಟ್ಟಡ ಕಾಮಗಾರಿಯ ಮೂಲ ಅಂದಾಜುಪಟ್ಟಿಯಲ್ಲಿ ಕಟ್ಟಡದ ಬಲಬದಿ, ಎಡಬದಿ, ಹಿಂಭಾಗದಲ್ಲಿ ಕೌಂಪೌಂಡ್, ದಾಸ್ತಾನು ಮಳಿಗೆ ಮತ್ತು ಎರಡನೇ ಅಂತಸ್ತಿನಲ್ಲಿ ಹೆಚ್ಚುವರಿ ಕಟ್ಟಡ ಕಾಮಗಾರಿಗಳು ಸೇರ್ಪಡೆಯಾಗಿರುವುದಿಲ್ಲವೆಂದು, ದಿನಾಂಕ: 26/03/2011ರಂದು ಜರುಗಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸೂಚಿತವಾಗಿರುವಂತೆ ರೂ. 22,57,16,079.12ಗಳ ಕಾಮಗಾರಿ ಅಂದಾಜುಪಟ್ಟಿಯನ್ನು ತಯಾರಿಸಲಾಗಿದೆಯೆಂದು ವರದಿ ಮಾಡುತ್ತಾ, ಅದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ಎಲ್ಲಾ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣ ಮಾಡುತ್ತಿರುವ ಜಿಲ್ಲಾ ಕಛೇರಿ ಸಂಕೀರ್ಣ ಕಟ್ಟಡದ ಸುರಕ್ಷತೆ ಮತ್ತು ನಿರ್ವಹಣೆ ದೃಷ್ಟಿಯಿಂದ ಸುತ್ತುಗೋಡೆ ನಿರ್ಮಾಣ ಅವಶ್ಯವಿರುವುದರಿಂದ ರೂ. 2,57,16,079.12ಗಳ ಹೆಚ್ಚುವರಿ ಕಾಮಗಾರಿಗಳನ್ನೊಳಗೊಂಡ ರೂ. 22,57,16,079.12ಗಳ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 33 ಡಬ್ಲ್ಯೂಬಿಆರ್ 2008, ಬೆಂಗಳೂರು, ದಿನಾಂಕ: 26/07/2011

ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣ ಮಾಡುತ್ತಿರುವ ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡದ ಮೂಲ ಕಾಮಗಾರಿ ಅಂದಾಜು ರೂ.20.0 ಕೋಟಿಗಳ ಕಾಮಗಾರಿ ಅಂದಾಜಿಗಿಂತ ಹೆಚ್ಚುವರಿಯಾದ ಕಟ್ಟಡದ ಬಲಬದಿ, ಎಡಬದಿ ಮತ್ತು ಹಿಂಭಾಗಗಳಲ್ಲಿ ಕೌಂಪೌಂಡ್, ದಾಸ್ತಾನು ಮಳಿಗೆ ಮತ್ತು ಎರಡನೇ ಅಂತಸ್ತಿನ ಹೆಚ್ಚುವರಿ ಕಟ್ಟಡ ಕಾಮಗಾರಿಗಳ ರೂ. 2,57,16,079.12ಗಳನ್ನೊಳಗೊಂಡ ಒಟ್ಟು ರೂ.22,57,16,079.12 (ರೂಪಾಯಿ ಇಪ್ಪತ್ತೆರಡುಕೋಟಿ ಐವತ್ತೇಳು ಲಕ್ಷದ ಹದಿನಾರು ಸಾವಿರದ ಎಪ್ಪತ್ತೊಂಭತ್ತು ಮತ್ತು ಹನ್ನೆರಡು ಪೈಸೆ ಮಾತ್ರ)ಗಳ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಈ ಕೆಳಗಿನ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ರೂ. 2,57,16,079.12ಗಳ ಹೆಚ್ಚುವರಿ ಕಾಮಗಾರಿಗಳ ಅಂದಾಜಿಗೆ ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯನ್ನು ಪಡೆಯತಕ್ಕದ್ದು.

ಈ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಕಾಯ್ದೆ 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳು 2000 ಪ್ರಕಾರ ಮಾಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2011–12ನೇ ಸಾಲಿನ 4059–80–051–0–42–386 (ಯೋಜನೆ) ಲೆಕ್ಕಶೀರ್ಷಿಕೆ ಅಡಿಯಲ್ಲಿ ಭರಿಸತಕ್ಕದ್ದು.

ಸಕ್ಷಮ ಪ್ರಾಧಿಕಾರವು ಸದರಿ ಕಟ್ಟಡ ಕಾಮಗಾರಿಯ ಗುಣಮಟ್ಟ ಕಾಯ್ದುಕೊಳ್ಳುವಿಕೆಯನ್ನು ಕಾಲಕಾಲಕ್ಕೆ ಖಾತರಿಪಡಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ ಆಇ 157 ವೆಚ್ಚ–7/2010, ದಿನಾಂಕ: 16/07/2011ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ವಿ. ಶ್ರೀರಾಮರೆಡ್ಡಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ).

ಪಿ.ಆರ್: 1879

ಕಂದಾಯ ಸಚಿವಾಲಯ

ವಿಷಯ : ಕಂದಾಯ ಭವನ ಮತ್ತು ಜಿಲ್ಲಾಧಿಕಾರಿಗಳ ಅನೆಕ್ಸ್ ಕಟ್ಟಡದ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 25/08/2006.

2. ಸರ್ಕಾರದ ಆದೇಶ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 12/12/2006.
3. ಸರ್ಕಾರದ ಪತ್ರ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 07/01/2008.
4. ಸರ್ಕಾರದ ಪತ್ರ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 25/06/2008.
5. ಸರ್ಕಾರದ ಪತ್ರ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 22/10/2008.
6. ಸರ್ಕಾರದ ಪತ್ರ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 16/01/2009.
7. ಸರ್ಕಾರದ ಆದೇಶ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 14/01/2011.
8. ಸರ್ಕಾರದ ಆದೇಶ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ದಿನಾಂಕ: 14/02/2011.
9. ಪತ್ರ ಸಂಖ್ಯೆ: ಕಗ್ರಮಂ/ಮುಅ/ಕಂದಾಯ ಭವನ/ಜಿ.ಅ.ಕ/1590/2008–2009, ದಿನಾಂಕ: 20/03/2009.

ಪ್ರಸ್ತಾವನೆ :

ಬೆಂಗಳೂರು ನಗರದ ಕೆಂಪೇಗೌಡ ರಸ್ತೆಯಲ್ಲಿರುವ ತಾಲ್ಲೂಕು ಕಛೇರಿಯ ಆವರಣದಲ್ಲಿ ಖಾಲಿ ಇರುವ ಮೂರು ಎಕರೆ ನಾಲ್ಕು ಗುಂಟೆ ಜಮೀನಿನಲ್ಲಿ ಕಂದಾಯ ಭವನ ಕಟ್ಟಡವನ್ನು ರೂ.31.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿರ್ಮಾಣ ಮಾಡಲು ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಬೆಂಗಳೂರು ನಗರದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಕಂದಾಯ ಭವನವನ್ನು ನಿರ್ಮಿಸಲು ಕಾಮಗಾರಿ ಟೆಂಡರಿಗಿಟ್ಟ ಮೊತ್ತ ರೂ.26,90,98,107.00ಗಳ ಟೆಂಡರಿಗೆ ಕನಿಷ್ಠ ಗುತ್ತಿಗೆ ದರ ಶೇಕಡ 17.65 ಹೆಚ್ಚುವರಿಯಾದ ಮೆ॥ ದೇವಿ ಪ್ರಸಾದ್ ಕನ್‌ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್, ಕಾಮುರವರ ಸಂಧಾನದ ನಂತರ ಶೇ.14ರಷ್ಟು ಹೆಚ್ಚುವರಿಯಾದ ರೂ.30,67,71,841.00ಗಳ ಟೆಂಡರ್‌ಗೆ ಸರ್ಕಾರದ ಅನುಮೋದನೆಯನ್ನು ನೀಡಲಾಗಿತ್ತು.

ನಬಾರ್ಡ್ ಸಂಸ್ಥೆಗೆ ಜಮೀನನ್ನು ಮಾರಾಟ ಮಾಡಿದ್ದರಿಂದ ಕ್ರೋಢೀಕೃತವಾದ ರೂ.21.78 ಕೋಟಿಗಳ ಪೈಕಿ ರೂ.5.00 ಕೋಟಿಗಳ ಅನುದಾನವನ್ನು ಮೇಲೆ (3)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ರೂ.7.00 ಕೋಟಿಗಳ ಅನುದಾನವನ್ನು ಮೇಲೆ (4)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ರೂ.4.00 ಕೋಟಿಗಳ ಅನುಧಾನವನ್ನು ಮೇಲೆ (5)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಮತ್ತು ರೂ.5.00 ಕೋಟಿಗಳ ಅನುದಾನವನ್ನು ಮೇಲೆ (6)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಕರ್ನಾಟಕ ಗೃಹ ಮಂಡಳಿಗೆ ಬಿಡುಗಡೆ ಮಾಡುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿಯವರಿಗೆ ಮಂಜೂರಾತಿಯನ್ನು ನೀಡಲಾಗಿತ್ತು. ಮೇಲೆ (7)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರೂ. 100.00 ಲಕ್ಷಗಳು ಮತ್ತು ಮೇಲೆ (8)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರೂ. 100.00 ಲಕ್ಷಗಳ ಅನುದಾನವನ್ನು ಕರ್ನಾಟಕ ಗೃಹ ಮಂಡಳಿಗೆ ಸರ್ಕಾರವು ಬಿಡುಗಡೆ ಮಾಡಿರುತ್ತದೆ ಇದರಂತೆ ಒಟ್ಟು ರೂ.23.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ರವರು ಮೇಲೆ (3)ರಲ್ಲಿ ಓದಲಾದ ತಮ್ಮ ಪತ್ರದಲ್ಲಿ ಕಂದಾಯ ಭವನದ ಕಟ್ಟಡದ ರೂ.31.00 ಕೋಟಿಗಳ ಮೂಲ ಕಾಮಗಾರಿಯ ಅಂದಾಜನ್ನು ರೂ.40,39,61,907.00ಗಳಿಗೆ ಪರಿಷ್ಕರಿಸಿ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ ಮತ್ತು ಶ್ರೀ.ಬಿ.ಆರ್. ಶ್ರೀನಿವಾಸಮೂರ್ತಿ, ಪ್ರಾಧ್ಯಾಪಕರು (ನಿವೃತ್ತ) ಭಾರತೀಯ ವಿಜ್ಞಾನ ಸಂಸ್ಥೆ, ಸಲಹೆಗಾರರು ಇವರನ್ನೊಳಗೊಂಡ ತಂಡವು ಕಂದಾಯ ಭವನ ಮತ್ತು ಜಿಲ್ಲಾಧಿಕಾರಿಗಳ ಅನೆಕ್ಸ್ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿ, ಕೆಲವೊಂದು ಹೆಚ್ಚುವರಿ ಐಟಂಗಳನ್ನು ಒಪ್ಪದೇ ಉಳಿದ ರೂ.4,29,46,471.00ಗಳ ಹೆಚ್ಚುವರಿ ಐಟಂಗಳನ್ನು ಮಾತ್ರ ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಕರ್ನಾಟಕ ಗೃಹ ಮಂಡಳಿಯು ತನ್ನ ಆಡಳಿತ ವೆಚ್ಚ, ಇಲಾಖೆಗಳ ಠೇವಣಿಗಳನ್ನೊಳಗೊಂಡಂತೆ ಹೆಚ್ಚುವರಿ ಕಾಮಗಾರಿಗಳ ಮೊತ್ತ ರೂ.6.45ಕೋಟಿಗಳು ಸೇರಿ ರೂ.37.45 ಕೋಟಿಗಳ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಮಿತಿಗೊಳಿಸಿ ಅಂದಾಜುಪಟ್ಟಿಯನ್ನು ಸಲ್ಲಿಸಿರುತ್ತದೆ.

ವಿಷಯವನ್ನು ಸಂಬಂಧಿಸಿದ ಎಲ್ಲಾ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಬೆಂಗಳೂರು ನಗರದ ಕೆಂಪೇಗೌಡ ರಸ್ತೆಯಲ್ಲಿರುವ ತಾಲ್ಲೂಕು ಕಛೇರಿಯ ಆವರಣದಲ್ಲಿ ನಿರ್ಮಾಣ ಮಾಡುತ್ತಿರುವ ಕಂದಾಯ ಭವನದ ಕಟ್ಟಡದ ರೂ.31.00 ಕೋಟಿಗಳ ಕಾಮಗಾರಿ ಅಂದಾಜನ್ನು ರೂ37.45ಕೋಟಿಗಳ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿ ಈ ಅದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 72 ಡಬ್ಲ್ಯೂಬಿಆರ್ 2005, ಬೆಂಗಳೂರು, ದಿನಾಂಕ: 26/07/2011

ಬೆಂಗಳೂರು ನಗರದ ಕೆಂಪೇಗೌಡ ರಸ್ತೆಯಲ್ಲಿರುವ ತಾಲ್ಲೂಕು ಕಛೇರಿಯ ಆವರಣದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿರ್ಮಾಣ ಮಾಡುತ್ತಿರುವ ಕಂದಾಯ ಭವನ ಮತ್ತು ಜಿಲ್ಲಾಧಿಕಾರಿಗಳ ಅನೆಕ್ಸ್ ಕಟ್ಟಡದ ಕಾಮಗಾರಿ ಅಂದಾಜನ್ನು ರೂ.31.00 ಕೋಟಿ (ರೂಪಾಯಿ ಮೂವತ್ತೊಂದು ಕೋಟಿಗಳು ಮಾತ್ರ)ಗಳಿಂದ ರೂ.37.45 ಕೋಟಿ (ರೂಪಾಯಿ ಮೂವತ್ತೇಳು ಕೋಟಿ ನಲವತ್ತೈದು ಲಕ್ಷಗಳು ಮಾತ್ರ)ಗಳ ಪರಿಷ್ಕೃತ ಕಾಮಗಾರಿ ಅಂದಾಜಿಗೆ ಸರ್ಕಾರವು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

ಕಂದಾಯ ಭವನ ಮತ್ತು ಜಿಲ್ಲಾಧಿಕಾರಿಗಳ ಕಟ್ಟಡ ಕಾಮಗಾರಿಗೆ ಬಿಡುಗಡೆ ಮಾಡಬೇಕಾದ ಬಾಕಿ ಅನುದಾನ ರೂ.14.45 ಕೋಟಿಗಳನ್ನು ಕರ್ನಾಟಕ ಗೃಹ ಮಂಡಳಿಗೆ ಬಿಡುಗಡೆ ಮಾಡತಕ್ಕದ್ದು.

ಭೂಸ್ವಾಧೀನ ಠೇವಣಿ ಹಣದ ಮೇಲೆ ಸಂಗ್ರಹವಾಗಿರುವ ಬಡ್ಡಿಯ ಮೊತ್ತ ರೂ.31.71 ಕೋಟಿಗಳನ್ನು ಜಿಲ್ಲಾಧಿಕಾರಿಗಳು ಮತ್ತು ಆರಾಧಾನ ಯೋಜನೆಯಡಿ ಬಳಕೆಯಾಗದೆ ಉಳಿದಿರುವ ಮೊತ್ತ ರೂ.26.40 ಕೋಟಿಗಳನ್ನು ಸರ್ಕಾರಕ್ಕೆ ಸಂದಾಯಿಸಿದ ನಂತರವಷ್ಟೇ ಕಂದಾಯ ಭವನದ ಕಾಮಗಾರಿಗೆ ಅನುದಾನವನ್ನು ಬಿಡುಗಡೆ ಮಾಡತಕ್ಕದ್ದು.

ಈ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳು 2000ರ ಪ್ರಕಾರ ಮಾಡತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ಯುವಜನ ಸೇವಾ ಹಾಗೂ ಕಂದಾಯ ಇಲಾಖೆ ರವರ ಅನಧಿಕೃತ ಟಿಪ್ಪಣಿ ಸಂಖ್ಯೆ ಕಂಇ 37727 ಐಎಫ್‌ಎ 2011, ದಿನಾಂಕ: 23/07/2011ರ ಮತ್ತು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ ಆಇ 869 ವೆಚ್ಚ-7/2009, ದಿನಾಂಕ: 16/06/2010ರ ಸಹಮತಿಯೊಂದಿಗೆ ಮತ್ತು ಪ್ರಕರಣ ಸಂಖ್ಯೆ: ಸಿ.179/2011, ದಿನಾಂಕ: 08/07/2011ರ ಸಚಿವ ಸಂಪುಟದ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎ. ಶ್ರೀರಾಮರೆಡ್ಡಿ

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಪಿ.ಆರ್: 1880

ಕಂದಾಯ ಸಚಿವಾಲಯ

ವಿಷಯ : ಕಂದಾಯ ಇಲಾಖೆಯಲ್ಲಿ ಶಿರಸ್ತೇದಾರ್ ವೃಂದದಿಂದ ತಹಶೀಲ್ದಾರ್ ಗ್ರೇಡ್-2 ವೃಂದದಿಂದ ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ ಮುಂಬಡ್ತಿ ನೀಡಲು ಇಲಾಖಾ ಪದೋನ್ನತಿ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 330 ಎಎಸ್‌ಡಿ 2007, ದಿನಾಂಕ: 06/12/2007.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 75 ಸೆನೆನಿ 2010, ಬೆಂಗಳೂರು, ದಿನಾಂಕ: 19/05/2010.
3. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 634 ಎಎಸ್‌ಡಿ 2010, ಬೆಂಗಳೂರು, ದಿನಾಂಕ: 19/10/2010.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 06/12/2007ರ ಆದೇಶದಲ್ಲಿ ಕಂದಾಯ ಇಲಾಖೆಯ ಸೇವೆಗೆ ಸೇರಿದ ಶಿರಸ್ತೇದಾರ್ ವೃಂದದಿಂದ ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ಹಾಗೂ ತಹಶೀಲ್ದಾರ್ ಗ್ರೇಡ್-2 ವೃಂದದಿಂದ ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ ಮುಂಬಡ್ತಿ ನೀಡುವ ಸಲುವಾಗಿ ಪ್ರಕರಣಗಳನ್ನು ಪರಿಶೀಲಿಸಲು, ಈ ಕೆಳಕಂಡ ಅಧಿಕಾರಿಗಳ ನ್ನೊಳಗೊಂಡಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಲಾಗಿರುತ್ತದೆ.

1.	ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ	ಅಧ್ಯಕ್ಷರು
2.	ಸರ್ಕಾರದ ಕಾರ್ಯದರ್ಶಿಗಳು, (ವಿಪತ್ತು ನಿರ್ವಹಣೆ)	ಸದಸ್ಯರು
3.	ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ	ಸದಸ್ಯರು
4.	ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ	ಸದಸ್ಯರು
5.	ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ	ಸದಸ್ಯರು
6.	ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ	ಸದಸ್ಯರು
7.	ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ದರ್ಜೆ ಇಲ್ಲದಿರುವ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಪ್ರತಿನಿಧಿ	ಸದಸ್ಯರು
8.	ಉಪ ಕಾರ್ಯದರ್ಶಿ (ಸೇವಾ ವಿಷಯ ನಿರ್ವಹಿಸುತ್ತಿರುವ ಅಧಿಕಾರಿ)	ಸದಸ್ಯಕಾರ್ಯದರ್ಶಿ

ಮೇಲೆ ಓದಲಾದ ಕ್ರಮ ಸಂಖ್ಯೆ (2) ದಿನಾಂಕ: 19/05/2010ರ ಆದೇಶದಲ್ಲಿ ಈ ಕೆಳಕಂಡಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ಪುನರ್ ರಚಿಸಲಾಗಿದೆ.

1. ಕರ್ನಾಟಕ ಆಡಳಿತ ಸೇವೆಯ ಹಿರಿಯ ಶ್ರೇಣಿಗೆ ಸಮನಾದ ಮತ್ತು ಹೆಚ್ಚಿನ ವೇತನ ಶ್ರೇಣಿಯ 'ಎ' ಸಮೂಹದ ಹುದ್ದೆಗಳಿಗೆ ಮುಂಬಡ್ತಿ ನೀಡಲು:
   (ಅ) ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ
   (ಆ) ಸಂಬಂಧಿಸಿದ ಇಲಾಖಾ ಮುಖ್ಯಸ್ಥರು:
   (ಇ) ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ಇಲ್ಲದಿರುವ ಸಂಸದೀಯ ವ್ಯವಹಾರ ಮತ್ತು ಶಾಸನ ರಚನಾ ಇಲಾಖೆಯ ಪ್ರತಿನಿಧಿ.
2. ಕರ್ನಾಟಕ ಆಡಳಿತ ಸೇವೆಯ ಹಿರಿಯ ಶ್ರೇಣಿಗೆ ಸಮನಾದ ಹುದ್ದೆಗಳಿಗೆ ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗಳಿಗೆ ಮುಂಬಡ್ತಿ ನೀಡಲು:
   (ಅ) ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ.
   (ಆ) ಸಂಬಂಧಿಸಿದ ಇಲಾಖಾ ಮುಖ್ಯಸ್ಥರು:
   (ಇ) ಸಂಬಂಧಿಸಿದ ಸರ್ಕಾರದ ಪ್ರಧಾನ ಕಾರ್ಯದರ್ಶಿ:ಕಾರ್ಯದರ್ಶಿಯವರು ನಾಮ ನಿರ್ದೇಶನ ಮಾಡಿದ ಕರ್ನಾಟಕ ಸರ್ಕಾರದ ಸಚಿವಾಲಯ ಅಧೀನ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ಇಲ್ಲದಿರುವ ಒಬ್ಬ ಅಧಿಕಾರಿ.

ಉಲ್ಲೇಖ (3) ಮೇಲೆ ಓದಲಾದ ಕ್ರಮ ಸಂಖ್ಯೆ (3) ದಿನಾಂಕ: 19/10/2010ರ ಆದೇಶದ ಬಗ್ಗೆ ಸರ್ಕಾರವು ಇಲಾಖಾ ಪದೋನ್ನತಿ ಸಮಿತಿಯನ್ನು ಮತ್ತೊಮ್ಮೆ ಪುನರ್ ರಚಿಸಲು ತೀರ್ಮಾನಿಸಿ ಅದರಂತೆ ಈ ಕೆಳಕಂಡಂತೆ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಕಂಇ 252 ಎಎಸ್‌ಡಿ 2010, ಬೆಂಗಳೂರು, ದಿನಾಂಕ: 23/07/2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕಂದಾಯ ಇಲಾಖೆಯ ಸೇವೆಗೆ ಸೇರಿದ ಶಿರಸ್ತೇದಾರ್ ವೃಂದದಿಂದ ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ಹಾಗೂ ತಹಶೀಲ್ದಾರ್ ಗ್ರೇಡ್-2 ವೃಂದದಿಂದ ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ ಮುಂಬಡ್ತಿ ನೀಡುವ ಸಲುವಾಗಿ ಪ್ರಕರಣಗಳನ್ನು ಪರಿಶೀಲಿಸಲು ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡಂತೆ ಪರಿಷ್ಕೃತ ಇಲಾಖಾ ಮುಂಬಡ್ತಿ ಸಮಿತಿಯನ್ನು ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಹೊಸದಾಗಿ ಪುನರ್ ರಚಿಸಿ ಆದೇಶಿಸಿದೆ.

1.	ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ	ಅಧ್ಯಕ್ಷರು
2.	ಸರ್ಕಾರದ ಕಾರ್ಯದರ್ಶಿಗಳು, (ವಿಪತ್ತು ನಿರ್ವಹಣೆ)	ಉಪಾಧ್ಯಕ್ಷರು
3.	ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ (ಎಲ್ಲಾ ಪ್ರಾದೇಶಿಕ ಆಯುಕ್ತರ ಪರವಾಗಿ)	ಸದಸ್ಯರು
4.	ಅಪರ ಕಾರ್ಯದರ್ಶಿ/ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ ಸೇವಾ ನಿಯಮಗಳು (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.)(ಸೇನಿ)	ವಿಶೇಷ ಆಹ್ವಾನಿತರು
5.	ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ದರ್ಜೆ ಇಲ್ಲದಿರುವ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಪ್ರತಿನಿಧಿ	ವಿಶೇಷ ಆಹ್ವಾನಿತರು
6.	ಉಪ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ದರ್ಜೆ ಇಲ್ಲದಿರುವ ಸಮಾಜ ಕಲ್ಯಾಣ ಇಲಾಖೆ	ಸದಸ್ಯರು
7.	ಜಂಟಿ ಕಾರ್ಯದರ್ಶಿ/ಉಪ-ಕಾರ್ಯದರ್ಶಿ, ಕಂದಾಯ ಇಲಾಖೆ (ಸೇವೆಗಳು)	ಸದಸ್ಯಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಎನ್. ಗೋಪಾಲಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಸೇವೆಗಳು-3)

ಪಿ.ಆರ್. 1881

ಕಂದಾಯ ಸಚಿವಾಲಯ

ವಿಷಯ : ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ವಿಶೇಷ ತಹಶೀಲ್ದಾರ್, ಕಿತ್ತೂರು, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ಹಿಂದಿನ ಸೇವೆಯನ್ನು ಪರಿಗಣಿಸುವ ಕುರಿತು.

ಓದಲಾಗಿದೆ : 1. ಸರ್ಕಾರದ ಅಧಿಸೂಚನೆ ಸಂಖ್ಯೆ : ಕಂಇ 51 ಎಎಸ್‌ಡಿ 2008, ದಿನಾಂಕ : 23-05-2008.

2. ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ತಹಶೀಲ್ದಾರ್ ಇವರ ಪತ್ರ ದಿನಾಂಕ : 11-06-2008.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ : 11-06-2008 ರ ಅಧಿಸೂಚನೆಯನ್ವಯ ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ಇವರು ಕಂದಾಯ ಇಲಾಖೆಯ ತಹಶೀಲ್ದಾರ್, ಗುಂಪು-ಬಿ ಹುದ್ದೆಗೆ ನೇಮಕಗೊಂಡಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ : 11-06-2008ರ ಪತ್ರದಲ್ಲಿ ಸದರಿಯವರು, ಕಂದಾಯ ಇಲಾಖೆಯಲ್ಲಿ ಸೇವೆ ಪ್ರಾರಂಭಿಸುವ ಪೂರ್ವದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕಿಯಾಗಿ ದಿನಾಂಕ : 24-12-2005 ರಿಂದ ಸಲ್ಲಿಸಿರುವ ಸೇವೆಯನ್ನು ನಿವೃತ್ತಿ ವೇತನ ಸೌಲಭ್ಯಗಳಿಗೆ ಪರಿಗಣಿಸುವಂತೆ ಕೋರಿರುತ್ತಾರೆ.

ಶ್ರೀಯುತರ ಮನವಿಯನ್ನು ಹಾಗೂ ಅವರ ಸೇವಾ ಪುಸ್ತಕವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ಇವರು ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆಯ ಧಾರವಾಡ ಇವರ ಆದೇಶ ಸಂಖ್ಯೆ : ಇ1/ಸ.ಪ್ರೌ.ವೃಂದ/ಭೌ.ಶಿ/ನೇಮಕ/95/04-05, ದಿನಾಂಕ : 12-12-2005 ರನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರಾಗಿ ನೇಮಕಗೊಂಡಿದ್ದು ಇವುಗಳ ನಂತರ ಮುಖ್ಯೋಪಾಧ್ಯಾಯರು ಸರ್ಕಾರಿ ಸಂಯುಕ್ತ ಪ್ರೌಢಶಾಲೆ, ಗುಲಗಂಜಿ ಕೊಪ್ಪ, ಧಾರವಾಡ ಇವರ ಪತ್ರ ಸಂಖ್ಯೆ : ಶ್ರೀಮತಿ ಎಸ್.ಎಸ್.ಬಿ/2008-09, ದಿನಾಂಕ : 31-05-2008 ರನ್ವಯ ದಿನಾಂಕ : 07-06-2008 ರಂದು ಸದರಿ ಸೇವೆಯಿಂದ ಬಿಡುಗಡೆ ಹೊಂದಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಗಣಿಸಿ ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ವಿಶೇಷ ತಹಶೀಲ್ದಾರ್ ಕಿತ್ತೂರು, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರು ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರಾಗಿ ದಿನಾಂಕ : 24-12-2005 ರಿಂದ ದಿನಾಂಕ : 07-06-2008 ರವರೆಗಿನ ಸೇವಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 224(ಎ) ರನ್ವಯ ಪ್ರಸ್ತುತ ಸೇವೆಗೆ ನಿವೃತ್ತಿ ವೇತನ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ನಿರ್ಧರಿಸಿರುವುದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಆರ್‌ಡಿ 305 ಎಎಸ್‌ಡಿ 2008, ಬೆಂಗಳೂರು, ದಿನಾಂಕ : 22-07-2011

ಮೇಲೆ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀಮತಿ ಸೈಯಿದಾ ಆಫ್ರೀನ್ ಬಾನು ಎಸ್ ಬಳ್ಳಾರಿ, ವಿಶೇಷ ತಹಶೀಲ್ದಾರ್, ಕಿತ್ತೂರು, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಕಂದಾಯ ಇಲಾಖೆಯ ಸೇವೆಗೆ ಸೇರುವ ಪೂರ್ವದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸಹಾಯಕ ಶಿಕ್ಷಕರಾಗಿ ದಿನಾಂಕ : 24-12-2005 ರಿಂದ ದಿನಾಂಕ : 07-06-2008 ರವರೆಗೆ ಸಲ್ಲಿಸಲಾಗಿರುವ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 224(ಎ) ರೀತ್ಯ ಸದರಿ ಯವರ ಪ್ರಸ್ತುತ ತಹಶೀಲ್ದಾರ್ ಹುದ್ದೆಯ ನಿವೃತ್ತಿ ವೇತನ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ (ವೆಚ್ಚ-7) ರವರ ಟಿಪ್ಪಣಿ ಸಂಖ್ಯೆ : ಆ.ಇ. 1035 ವೆಚ್ಚ-7/2009, ದಿನಾಂಕ : 18-11-2009ರಲ್ಲಿ ನೀಡಿರುವ ಸಹಮತದೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎನ್. ಗೋಪಾಲಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಸೇವೆಗಳು-3)

ಪಿ.ಆರ್. 1882

ಕಂದಾಯ ಸಚಿವಾಲಯ

ವಿಷಯ : ಬಳ್ಳಾರಿ ತಾಲ್ಲೂಕು ಮಿಂಚೇರಿ ಮತ್ತು ಹಲಕುಂದಿ ಗ್ರಾಮಗಳ ವಿವಿಧ ಸ.ನಂ.ಗಳ ಒಟ್ಟು ವಿಸ್ತೀರ್ಣ 23.32 ಎಕರೆ ಜಮೀನನ್ನು ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸುವ ಸಲುವಾಗಿ ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ರವರಿಗೆ ಗುತ್ತಿಗೆ ನೀಡುವ ಬಗ್ಗೆ.

ಓದಲಾಗಿದೆ : 1. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಪತ್ರ ಸಂಖ್ಯೆ : ಕಂ/ಭೂಮಿ/161/09-10 ದಿನಾಂಕ : 27-10-2010.

2. ಸುತ್ತೋಲೆ ಸಂಖ್ಯೆ : ಆರ್‌ಡಿ : 78 : ಎಲ್‌ಜಿಪಿ : 2009, ದಿನಾಂಕ : 04-01-2011.

ಪ್ರಸ್ತಾವನೆ :

1. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರು ಮೇಲೆ ಓದಲಾದ ದಿನಾಂಕ : 27-10-2010ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಬಳ್ಳಾರಿ ಜಿಲ್ಲೆ, ಬಳ್ಳಾರಿ ತಾಲ್ಲೂಕು ಮಿಂಚೇರಿ ಮತ್ತು ಹಲಕುಂದಿ ಗ್ರಾಮಗಳ ವಿವಿಧ ಸ.ನಂ.ಗಳ ಒಟ್ಟು ವಿಸ್ತೀರ್ಣ 23.32 ಎಕರೆ ಜಮೀನನ್ನು

ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸುವ ಸಲುವಾಗಿ ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಬೆಂಗಳೂರು ರವರಿಗೆ ಉಪಗುತ್ತಿಗೆ ನೀಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

2. ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸುವ ಸಲುವಾಗಿ ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಬೆಂಗಳೂರು ಇವರಿಗೆ ಗುತ್ತಿಗೆ ನೀಡಲು ಪ್ರಸ್ತಾಪಿಸಿರುವ ಮಿಂಚೇರಿ ಮತ್ತು ಹಲಕುಂದಿ ಗ್ರಾಮಗಳ ಜಮೀನು ಈ ಕೆಳಕಂಡಂತೆ ಇರುತ್ತದೆ.

ಗ್ರಾಮ	ಸ.ನಂ.	ವಿಸ್ತೀರ್ಣ	ವರ್ಗೀಕರಣ
ಮಿಂಚೇರಿ	229	2.10	ಕಲ್ಲುಮಟ್ಟಿ
ಹಲಕುಂದಿ	474	16.90	ಗಯಾಳು
ಹಲಕುಂದಿ	471	04.32	ಗಯಾಳು
	ಒಟ್ಟು	**23.32**	

3. ಮೇಲ್ಕಂಡ ಜಮೀನುಗಳು ಗುತ್ತಿಗೆ ನೀಡಲು ಲಭ್ಯವಿದ್ದು, ಈ ಜಮೀನುಗಳಲ್ಲಿ ಗಾಳಿಯಂತ್ರವನ್ನು ಸ್ಥಾಪಿಸಲು ಗ್ರಾಮಸ್ಥರಿಂದ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ. ಗಾಳಿಯಂತ್ರ ಅಳವಡಿಸುವ ಉದ್ದೇಶಕ್ಕೆ ಸದರಿ ಜಮೀನು ಸೂಕ್ತವಾಗಿರುತ್ತದೆ ಎಂದು ತಿಳಿಸಿ ಹಲಕುಂದಿ ಗ್ರಾಮದ ಜಮೀನಿನ ಮಾರುಕಟ್ಟೆ ಬೆಲೆ ಎಕರೆ ಒಂದಕ್ಕೆ ರೂ. 80,107/– ಹಾಗೂ ಮಿಂಚೇರಿ ಗ್ರಾಮದ ಜಮೀನಿನ ಮಾರುಕಟ್ಟೆ ಬೆಲೆ ಎಕರೆ ಒಂದಕ್ಕೆ ರೂ. 23,136/– ಎಂಬುದಾಗಿ ವರದಿ ಮಾಡಿದ್ದಾರೆ.

4. ಇಂಧನ ಇಲಾಖೆಯವರು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ : ಇಎನ್/179/ಎನ್‌ಸಿಇ/2008 ದಿನಾಂಕ : 24–12–2008ರ ಆದೇಶದಲ್ಲಿ ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಬೆಂಗಳೂರು ಇವರಿಗೆ ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸಲು ಬಳ್ಳಾರಿ ಜಿಲ್ಲೆಯ ನೇಮಕಲ್ಲುವಿನಲ್ಲಿ ಅನುಮತಿಸಲಾದ 16 ಮೆ.ವ್ಯಾ. ಸಾಮರ್ಥ್ಯದ ಪವನ್ ವಿದ್ಯುತ್ ಯೋಜನೆಯನ್ನು 27 ಮೆಗಾ ವ್ಯಾಟ್‌ಗೆ ಹೆಚ್ಚಿಸಿ ಅನುಷ್ಠಾನ ಮಾಡಲು ಅನುಮತಿ ನೀಡಲಾಗಿದೆ.

5. ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಬೆಂಗಳೂರು ಇವರಿಗೆ ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸಲು ಗುತ್ತಿಗೆ ಆಧಾರದ ಮೇಲೆ ಮಂಜೂರಾತಿಗಾಗಿ ಪ್ರಸ್ತಾಪಿಸಿರುವ ಮಂಚೇರಿ ಗ್ರಾಮದ ಸ.ನಂ. 229 ರಲ್ಲಿನ ಕಲ್ಲು ಮಟ್ಟಿ ಬಿ **ಖರಾಬು** ಎಂದು ವರ್ಗೀಕೃತವಾಗಿರುವ 13.11 ಎ/ಗು ಹಾಗೂ ಹಲಗುಂಡಿ ಗ್ರಾಮದ ಸ.ನಂ. 474 ರಲ್ಲಿನ 3.05ಎ/ಗು ಮತ್ತು ಸ.ನಂ. 471ರಲ್ಲಿ 13.08 ಎ/ಗು **ಗಯಾಳು** ಎಂಬುದಾಗಿ ವರ್ಗೀಕೃತಗೊಂಡಿರುತ್ತದೆ. ಸದರಿ ಜಮೀನನ್ನು ಗುತ್ತಿಗೆ ಆಧಾರದ ಮೇಲೆ ನೀಡುತ್ತಿರುವುದರಿಂದ ಭೂ ಕಂದಾಯ ಕಾಯ್ದೆ ಕಲಂ 68(1)ರಂತೆ **ಬಿ ಖರಾಬು** ಶೀರ್ಷಿಕೆಯಿಂದ ವಿರಹಿತಗೊಳಿಸುವ ಅವಶ್ಯಕತೆ ಕಂಡುಬರುವುದಿಲ್ಲ ಅಲ್ಲದೆ, ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದನಾ ಘಟಕಕ್ಕೆ ಸರ್ಕಾರಿ ಜಮೀನು ಗುತ್ತಿಗೆ ಮೇಲೆ ಕೊಡುತ್ತಿರುವುದರಿಂದ, ಬಿ ಖರಾಬು ಜಮೀನುಗಳ ಲಕ್ಷಣಗಳನ್ನು ಹಾಗೆಯೇ ಉಳಿಸಿಕೊಂಡು ಈ ಸರ್ಕಾರಿ ಜಮೀನುಗಳಿಗೆ ಯಾವುದೇ ರೀತಿ ಹಾನಿಯಾಗದಂತೆ ಮತ್ತು ಒತ್ತುವರಿಯಾಗದಂತೆ ಗಾಳಿಯಂತ್ರ ಘಟಕ ಸ್ಥಾಪನೆ ಸಲುವಾಗಿ ಪ್ರಥಮವಾಗಿ 10 ವರ್ಷ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಸುತ್ತೋಲೆ ಸಂಖ್ಯೆ : ಆರ್‌ಡಿ : 78 : ಎಲ್‌ಜಿಪಿ : 2009 ದಿನಾಂಕ : 04–11–2011 ರಲ್ಲಿನ ಸೂಚನೆಗಳನ್ನು ಪಾಲಿಸಿ ಪ್ರಚಲಿತ ಮಾರುಕಟ್ಟೆ ದರದ ಶೇ 10 ರಷ್ಟು ಗುತ್ತಿಗೆ ದರ ಹಾಗೂ ಪ್ರತಿ 2 ವರ್ಷಗಳಿಗೊಮ್ಮೆ ಶೇ. 10 ರಷ್ಟು ಗುತ್ತಿಗೆ ದರ ಹೆಚ್ಚಿಸುವ ಷರತ್ತುಗೊಳಪಟ್ಟು ಮಂಜೂರು ಮಾಡಲು ತೀರ್ಮಾನಿಸಿದೆ.

6. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಕಂದಾಯ ಇಲಾಖೆಯ ಸುತ್ತೋಲೆಯಲ್ಲಿ ದಿನಾಂಕ : 03–11–2011 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಇಂಧನ ಇಲಾಖೆಯ ಕೋರಿಕೆಯಂತೆ ಇನ್ನು ಮುಂದೆ ಸರ್ಕಾರಿ ಜಮೀನುಗಳನ್ನು ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಮೂಲಕ ಮಂಜೂರು ಮಾಡುವ ಬದಲಾಗಿ ನೇರವಾಗಿ ಯೋಜನೆ ಕೈಗೊಳ್ಳುವ ಸಂಸ್ಥೆಗೆ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಲು ನಿರ್ಣಯಿಸಲಾಗಿರುತ್ತದೆ.

ಬಳ್ಳಾರಿ ಜಿಲ್ಲಾಧಿಕಾರಿಗಳ ಪ್ರಸ್ತಾವನೆಯನ್ನು ಸರ್ಕಾರ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಕಂಇ 82 ಎಲ್‌ಜಿಇ 2010, ಬೆಂಗಳೂರು, ದಿನಾಂಕ : 26-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲ್ಲೂಕು, ಮಿಂಚೇರಿ ಗ್ರಾಮದ ಸ.ನಂ. 229 ರಲ್ಲಿ 2.10 ಎ/ಗು ಹಾಗೂ ಹಲಕುಂದಿ ಗ್ರಾಮದ ಸ.ನಂ. 474 ರಲ್ಲಿ 16.90 ಎ/ಗು ಮತ್ತು ಸ.ನಂ. 471 ರಲ್ಲಿ 4.32 ಎ/ಗು ಒಟ್ಟು 23 ಎಕರೆ 32 ಗುಂಟೆ ಜಮೀನನ್ನು ಬಿ ಖರಾಬು ಜಮೀನುಗಳ ಲಕ್ಷಣಗಳನ್ನು ಹಾಗೇ ಉಳಿಸಿಕೊಂಡು ಈ ಸರ್ಕಾರಿ ಜಮೀನುಗಳಿಗೆ ಯಾವುದೇ ಹಾನಿಯಾಗದಂತೆ ಮತ್ತು ಒತ್ತುವರಿಯಾಗದಂತೆ ಸಂರಕ್ಷಿಸಿಕೊಂಡು, ಪ್ರಚಲಿತ ಮಾರುಕಟ್ಟೆ ದರದ ಶೇ. 10 ರಷ್ಟು ಗುತ್ತಿಗೆ ದರ ಹಾಗೂ ಪ್ರತಿ 2 ವರ್ಷಗಳಿಗೊಮ್ಮೆ ಶೇ. 10 ರಷ್ಟು ಗುತ್ತಿಗೆ ದರ ಹೆಚ್ಚಿಸುವ ಷರತ್ತಿಗೊಳಪಟ್ಟು ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರ ನಿಯಮ 19(3)(ಬಿ) ರನ್ವಯ ಪ್ರಥಮವಾಗಿ 10 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಗಾಳಿಯಂತ್ರದಿಂದ ವಿದ್ಯುತ್ ಉತ್ಪಾದಿಸುವ ಉದ್ದೇಶಕ್ಕಾಗಿ ಮೆ: ಸುಜಲಾನ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ ಬೆಂಗಳೂರು ಇವರಿಗೆ ಗುತ್ತಿಗೆ ನೀಡಲು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ : 480 : ವೆಚ್ಚ-7 : 2011 ದಿನಾಂಕ : 16-06-2011 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಹೆಚ್.ಜೆ. ಲಕ್ಷ್ಮೀನಾರಾಯಣ
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂ ಮಂಜೂರಾತಿ-3)

ಪಿ.ಆರ್. 1883

ಕಂದಾಯ ಸಚಿವಾಲಯ

ವಿಷಯ : ತುಮಕೂರು ಜಿಲ್ಲೆ ತುಮಕೂರು ತಾಲ್ಲೂಕು, ಕಸಬಾ ಹೋಬಳಿ, ಊರುಕೆರೆ ಗ್ರಾಮದ ಸ.ನಂ. 74 ರಲ್ಲಿ 1.15 ಎಕರೆ ಜಮೀನನ್ನು ಶ್ರೀ ಮಲ್ಲಿಕಾರ್ಜುನ ಸ್ವಾಮಿ ವಿದ್ಯಾ ಸಂಸ್ಥೆ (ರಿ) ಗವಿಮಠ ಬೆಟ್ಟದಹಳ್ಳಿ, ಗುಬ್ಬಿ ತಾಲ್ಲೂಕು ಇವರಿಗೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ : ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ರವರ ಪತ್ರ ಸಂಖ್ಯೆ : ಎಲ್ಎನ್‌ಡಿ/ಸಿಆರ್/66/10-11 ದಿನಾಂಕ : 07-09-2010.

ಪ್ರಸ್ತಾವನೆ :

1. ಮೇಲೆ ಓದಲಾದ (1)ರ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ರವರ ವರದಿಯನ್ನಾಧರಿಸಿ ತುಮಕೂರು ತಾಲ್ಲೂಕು, ಕಸಬಾ ಹೋಬಳಿ, ಊರುಕೆರೆ ಗ್ರಾಮದ ಸ.ಸಂ. 74ರಲ್ಲಿ 1.15 ಎಕರೆ ಜಮೀನು 15 ವರ್ಷಗಳಿಂದ ಸದರಿ ಸಂಸ್ಥೆಯ ಅನುಭವದಲ್ಲಿದ್ದು, ಈ ಜಮೀನಿನಲ್ಲಿ ಒಂದು ಅನಾಥ ಆಶ್ರಮವನ್ನು ತೆರೆಯಲಾಗಿದ್ದು, ಸಾವಿರಾರು ಅನಾಥ ಮಕ್ಕಳಿಗೆ ಊಟ, ವಸತಿ, ವಿದ್ಯಾಭ್ಯಾಸ ಉಚಿತವಾಗಿ ನೀಡುತ್ತಿರುವುದರಿಂದ, ಈ ಜಮೀನನ್ನು ಮಂಜೂರು ಮಾಡಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಚಂದ್ರಶೇಖರ ಸ್ವಾಮೀಜಿಗಳ ಕೋರಿಕೆಯಾಗಿರುತ್ತದೆ.

2. ಊರುಕೆರೆ ಗ್ರಾಮದ ಸ.ನಂ. 74ರಲ್ಲಿ ಒಟ್ಟು 16.25 ಎಕರೆ ಜಮೀನಿದ್ದು, ಇದು ಕಂದಾಯ ದಾಖಲೆಗಳಂತೆ ಗೋಮಾಳ ಎಂಬುದು ವರ್ಗೀಕರಣಗೊಂಡಿರುತ್ತದೆ. ಈ ಪೈಕಿ ಗ್ರಾಮ ನಿವೇಶನಕ್ಕಾಗಿ 3.12 ಎಕರೆ ಶ್ರೀ ಶನಿದೇವರ ದೇವಾಲಯ ಸಮಿತಿಗಾಗಿ 0.05 ಗುಂಟೆ, ಸಾರ್ವಜನಿಕ ಸ್ಮಶಾನಕ್ಕಾಗಿ 0.15 ಗುಂಟೆ ಹಾಗೂ ಜಿಲ್ಲಾ ತರಬೇತಿ ಸಂಸ್ಥೆ ಕಟ್ಟಡಕ್ಕಾಗಿ 3.20 ಎಕರೆ ಜಮೀನು ಮಂಜೂರಾಗಿರುತ್ತದೆ. ಇನ್ನು 1.15 ಎಕರೆ ಸಂಸ್ಥೆಯ ಸ್ವಾಧೀನದಲ್ಲಿದ್ದು, ಸಂಸ್ಥೆಯ ವತಿಯಿಂದ ಈಗಾಗಲೇ ಶಾಲಾ ಕಟ್ಟಡ ನಿರ್ಮಾಣವಾಗಿರುತ್ತದೆ. ಸಂಸ್ಥೆಯು ಸದರಿ ಜಾಗದಲ್ಲಿ ಹಿಂದಿನಿಂದಲೂ ಅನಾಥಾಶ್ರಮ ನಡೆಸಿಕೊಂಡು ಬರುತ್ತಿದೆ. ಸದರಿ ಜಮೀನು ವ್ಯವಸಾಯಕ್ಕೆ ಯೋಗ್ಯವಾದ ಜಮೀನಾಗಿರುವುದಿಲ್ಲ. ರಾಷ್ಟ್ರೀಯ ಹೆದ್ದಾರಿಯಿಂದ 3 ಕಿ.ಮಿ. ದೂರದಲ್ಲಿದೆ. ಸದರಿ ಜಮೀನಿನಲ್ಲಿ ಅಧಿಕ ವಿದ್ಯುತ್ ವಾಹಕ ತಂತಿ, ಬಂಡಿ ದಾರಿ ಸಂಪರ್ಕ ರಸ್ತೆಗಳು, ಕೆರೆ ಕಟ್ಟೆಗಳಿಗಾಗಿ ಕಾಯ್ದಿರಿಸುವ ಪ್ರದೇಶವಾಗಿರುವುದಿಲ್ಲ. ಜಮೀನನ್ನು ಈ ಸಂಸ್ಥೆಗೆ ಮಂಜೂರು ಮಾಡಲು ಸಾರ್ವಜನಿಕರ ಹಾಗೂ ಗ್ರಾಮಸ್ಥರ ತಕರಾರು ಇರುವುದಿಲ್ಲ. ಸದರಿ ಜಮೀನಿನ ಬೆಲೆ ಉಪನೋಂದಣಾಧಿಕಾರಿಗಳ ಮೌಲ್ಯ ನಿರ್ಧಾರ ಸಮಿತಿಯ ಅಭಿಪ್ರಾಯದಂತೆ ಎಕರೆ ಒಂದಕ್ಕೆ ರೂ. 1,00,000/- ಗಳಿರುತ್ತದೆಂದು ವರದಿಸಿರುತ್ತಾರೆ. ಆದರೆ ಮಾರ್ಗಸೂಚಿ ಬೆಲೆಯ ದಾಖಲೆಯಂತೆ ಖುಷ್ಕಿ ಜಮೀನು ರೂ. 4,00,000/- ಇರುತ್ತದೆಂಬುದಾಗಿ ವರದಿ ಮಾಡಿದ್ದಾರೆ.

3. ಶ್ರೀ ಮಲ್ಲಿಕಾರ್ಜುನಸ್ವಾಮಿ ವಿದ್ಯಾ ಸಂಸ್ಥೆ (ರಿ) ಗವಿಮಠ ಬೆಟ್ಟದಹಳ್ಳಿ, ಇದೊಂದು ಧಾರ್ಮಿಕ ಸಂಸ್ಥೆಯಾಗಿದ್ದು, ಈ ಸಂಸ್ಥೆಯು ಅನೇಕ ಶಿಕ್ಷಣ ಸಂಸ್ಥೆಗಳನ್ನು ಮತ್ತು ಅನಾಥಾಶ್ರಮಗಳನ್ನು ನಿರ್ವಹಿಸುತ್ತಿದ್ದು, ಅನಾಥ ಮಕ್ಕಳಿಗೆ ಯಾವುದೇ ಜಾತಿ ಬೇದವಿಲ್ಲದೆ ಉಚಿತವಾಗಿ ವಿದ್ಯಾಭ್ಯಾಸ, ಊಟ, ವಸತಿ ಸೌಕರ್ಯ ಕಲ್ಪಿಸುವ ಮೂಲಕ ಶೈಕ್ಷಣಿಕವಾಗಿ ಸಾರ್ವಜನಿಕ ಸೇವಾ ಕಾರ್ಯಗಳನ್ನು ನಿರ್ವಹಿಸುತ್ತಿದೆ. ಸದರಿ ಸಂಸ್ಥೆಯು ಸಹಕಾರ ಸಂಘಗಳ ಕಾಯ್ದೆಯಡಿಯಲ್ಲಿ ದಿನಾಂಕ : 21-10-1980 ರಂದು ನೋಂದಣಿಯಾಗಿರುತ್ತದೆ. ಸಂಸ್ಥೆಯ ಆರ್ಥಿಕ ವಹಿವಾಟಿನ ಬಗ್ಗೆ ಹಿಂದಿನ ಐದು ವರ್ಷಗಳ ಲೆಕ್ಕ ತಪಾಸಣಾ ವರದಿಯನ್ನು ಹಾಜರುಪಡಿಸಿದ್ದಾರೆ. ಶ್ರೀ ಮಲ್ಲಿಕಾರ್ಜುನಸ್ವಾಮಿ ವಿದ್ಯಾ ಸಂಸ್ಥೆಯವರಿಗೆ ಮಂಜೂರಾತಿಗಾಗಿ ಪ್ರಸ್ತಾಪಿಸಿರುವ ಜಮೀನು ಗೋಮಾಳವೆಂದು ವರ್ಗೀಕೃತಗೊಂಡಿದ್ದು, ಈ ಗ್ರಾಮದಲ್ಲಿ 303 ರಾಸುಗಳಿದ್ದು ಗ್ರಾಮದಲ್ಲಿ 8.13 ಎಕರೆ ಗೋಮಾಳವಿದ್ದು, ರಾಸುಗಳಿಗನುಗುಣವಾಗಿ ಗೋಮಾಳ ಲಭ್ಯವಿರುವುದಿಲ್ಲ. ಸದರಿ ಸಂಸ್ಥೆಯು ಉಚಿತವಾಗಿ ಅನಾಥಾಶ್ರಮ ನಡೆಸುತ್ತಿದ್ದು, ಸಾರ್ವಜನಿಕ ಉದ್ದೇಶದಿಂದ ಅನಾಥ ಮಕ್ಕಳ ಮತ್ತು ಸಾರ್ವಜನಿಕವಾಗಿ ಇನ್ನು ಹೆಚ್ಚಿನ ಸೇವಾ ಕಾರ್ಯಗಳನ್ನು ಸಲ್ಲಿಸುವ ಸಾರ್ವಜನಿಕ ಹಿತದೃಷ್ಟಿಯಿಂದ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ಸದರಿ 1.15 ಎಕರೆ ಜಮೀನನ್ನು ಕರ್ನಾಟಕ ಭೂಮಂಜೂರಾತಿ ನಿಯಮಗಳು 1969ರ ನಿಯಮ 21 ರನ್ವಯ ಸದರಿ ಜಮೀನಿನ ಮಾರುಕಟ್ಟೆ ಬೆಲೆ ಹಾಗೂ ಇತರ ಶುಲ್ಕಗಳನ್ನು ವಿಧಿಸಿ, ಮತ್ತು ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಡ ಕಟ್ಟಿರುವ ಬಗ್ಗೆ ಹಾಗೂ ಜಮೀನನ್ನು ವ್ಯವಸಾಯೇತರ ಉದ್ದೇಶಕ್ಕೆ ಬಳಸುತ್ತಿರುವ ಕುರಿತು ದಂಡ ಮತ್ತು ಭೂಪರಿವರ್ತನಾ ಶುಲ್ಕ ಪಾವತಿಸುವ ಷರತ್ತಿಗೊಳಪಡಿಸಿ, ತುಮಕೂರು ತಾಲ್ಲೂಕು ಕಸಬಾ ಹೋಬಳಿ, ಊರುಕೆರೆ ಗ್ರಾಮದ ಸ.ನಂ. 74ರಲ್ಲಿ 1.15 ಎಕರೆ ಜಮೀನನ್ನು ಶ್ರೀ ಮಲ್ಲಿಕಾರ್ಜುನಸ್ವಾಮಿ ವಿದ್ಯಾ ಸಂಸ್ಥೆಗೆ ಮಂಜೂರು ಮಾಡಲು ಕೋರಿರುತ್ತಾರೆ.

4. ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ರವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಕಂಇ 63 ಎಲ್‌ಜಿಟಿ 2010, ಬೆಂಗಳೂರು, ದಿನಾಂಕ : 23-07-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲೆ, ತುಮಕೂರು ತಾಲ್ಲೂಕು, ಕಸಬಾ ಹೋಬಳಿ, ಊರುಕೆರೆ ಗ್ರಾಮದ ಸ.ನಂ. 74ರಲ್ಲಿ 1.15 ಎಕರೆ ಜಮೀನನ್ನು ಕರ್ನಾಟಕ ಭೂಕಂದಾಯ ನಿಯಮಗಳು 1966ರ ನಿಯಮ 97(4)ರಡಿಯಲ್ಲಿನ ಅವಕಾಶದಂತೆ ಗೋಮಾಳ ಶೀರ್ಷಿಕೆಯಿಂದ ತಗ್ಗಿಸಿ, ಸದರಿ 1.15 ಎಕರೆ ಜಮೀನನ್ನು ಕರ್ನಾಟಕ ಭೂಮಂಜೂರಾತಿ ನಿಯಮಗಳು 1969ರ ನಿಯಮ 21ರನ್ವಯ ಸದರಿ ಜಮೀನಿನ ಮಾರುಕಟ್ಟೆ ಬೆಲೆ ಹಾಗೂ ಇತರ ಶುಲ್ಕಗಳನ್ನು ವಿಧಿಸಿ, ದಂಡ ಮತ್ತು ಭೂಪರಿವರ್ತನಾ ಶುಲ್ಕ ಪಾವತಿಸುವ ಷರತ್ತಿಗೊಳಪಡಿಸಿ, ಶ್ರೀ ಮಲ್ಲಿಕಾರ್ಜುನಸ್ವಾಮಿ

ವಿದ್ಯಾ ಸಂಸ್ಥೆ (ರಿ) ಗವಿಮಠ ಬೆಟ್ಟದಹಳ್ಳಿ, ಗುಬ್ಬಿ ತಾಲ್ಲೂಕು ಇವರಿಗೆ ಶೈಕ್ಷಣಿಕ ಉದ್ದೇಶ ಹಾಗೂ ಇತರೆ ಧಾರ್ಮಿಕ ಚಟುವಟಿಕೆಗಳನ್ನು ನಡೆಸುವ ಉದ್ದೇಶಕ್ಕಾಗಿ ಮಂಜೂರು ಮಾಡಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ : 888 : ವೆಚ್ಚ–7/2010 ದಿನಾಂಕ : 16–12–2010ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಹೆಚ್.ಜಿ. ಲಕ್ಷ್ಮೀನಾರಾಯಣ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1884 ಕಂದಾಯ ಇಲಾಖೆ (ಭೂ ಮಂಜೂರಾತಿ–3)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ ಅಫಜಲಪುರ ತಾಲ್ಲೂಕಿನ ಗೌಡಗಾಂವ ಗ್ರಾಮದ ಹತ್ತಿರ ಅಮರ್ಜಾ ನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್ ಅನುಮೋದಿಸುವ ಬಗ್ಗೆ.

ಓದಲಾಗಿದೆ :
1. ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ಉತ್ತರ) ವಲಯ ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವಲಯ/ಬಿಜೆಪಿ/ಪಿಬಿ–5/2011–12/3354 ದಿನಾಂಕ : 23–06–2011.
2. ಸರ್ಕಾರದ ಆದೇಶ ಸಂಖ್ಯೆ : ಸನೀಇ 236 ಮಸಾವಿ 2009(2), ದಿನಾಂಕ : 19–08–2010.

ಪ್ರಸ್ತಾವನೆ :

ಗುಲ್ಬರ್ಗಾ ಜಿಲ್ಲೆ ಅಫಜಲಪುರ ತಾಲ್ಲೂಕಿನ ಗೌಡಗಾಂವ ಗ್ರಾಮದ ಹತ್ತಿರ ಅಮರ್ಜಾ ನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಅಂದಾಜಿಗೆ ಉಲ್ಲೇಖ (2)ರಲ್ಲಿ ನಮೂದಿಸಿರುವ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರರವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ. ಈ ಕಾಮಗಾರಿಯನ್ನು ಎ.ಐ.ಬಿ.ಪಿ. ಕಾರ್ಯಕ್ರಮದಡಿ ಕೈಗೊಳ್ಳಲು ಭಾರತ ಸರ್ಕಾರದ ಅನುಮೋದನೆ ದೊರಕಿರುತ್ತದೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಗುಲ್ಬರ್ಗಾ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	18–11–2010
ಜಿಲ್ಲಾ ಟೆಂಡರ್ ಬುಲೆಟಿನ್	12–11–2010
ಕರ್ನಾಟಕ ರಾಜ್ಯ ಪತ್ರ	18–11–2010
ಪ್ರಜಾವಾಣಿ ದಿನಪತ್ರಿಕೆ	12–11–2010

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಇವರ ಪೈಕಿ ಒಬ್ಬರು ಮಾತ್ರ ಅರ್ಹತೆ ಹೊಂದಿದ್ದು, ಇವರ ಆರ್ಥಿಕ ಬಿಡ್ ಅನ್ನು ದಿನಾಂಕ : 06–06–2011 ರಂದು ತೆರೆದು ಪರಿಶೀಲಿಸಲಾಗಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,14,55,747/–	
ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,63,27,450/–	
ಕ್ರಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಸತೀಶ ವಿ. ಗುತ್ತೇದಾರ, ಪ್ರಥಮ ದರ್ಜೆ ಗುತ್ತಿಗೆದಾರರು	1,92,16,851/–	67.75 ಹೆಚ್ಚು	17.70 ಹೆಚ್ಚು

ಮೇಲ್ಕಂಡಂತೆ ಶ್ರೀ ಸತೀಶ ವಿ. ಗುತ್ತೇದಾರ, ಪ್ರಥಮ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 17.70 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರನ್ನು ಅಂಗೀಕರಿಸುವಂತೆ ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 1,63,27,450/–ಗಳ ಮೇಲೆ ಶೇ. 12.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,82,86,744/–ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 51 ಅಪಿಬಂ (ತಾಂತ್ರಿಕ) 2011, ಬೆಂಗಳೂರು, ದಿನಾಂಕ : 23–07–2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗುಲ್ಬರ್ಗಾ ಜಿಲ್ಲೆ ಅಫಜಲಪುರ ತಾಲ್ಲೂಕಿನ ಗೌಡಗಾಂವ ಗ್ರಾಮದ ಹತ್ತಿರ ಅಮರ್ಜಾ ನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದಂತೆ ಟೆಂಡರಿಗಿಡಲಾದ ಮೊತ್ತ ರೂ. 1,63,27,450/–ಗಳ ಮೇಲೆ ಶೇ. 12.00 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,82,86,744/– (ಒಂದು ಕೋಟಿ ಎಂಭತ್ತೆರಡು ಲಕ್ಷದ

ಎಂಭತ್ತಾರು ಸಾವಿರದ ಏಳು ನೂರ ನಲ್ವತ್ತನಾಲ್ಕು ರೂಪಾಯಿಗಳು ಮಾತ್ರ) ಶ್ರೀ ಸತೀಶ ವಿ. ಗುತ್ತೇದಾರ, ಪ್ರಥಮ ದರ್ಜೆ ಗುತ್ತಿಗೆದಾರರು ರವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ರುದ್ರಮೂರ್ತಿ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ.ಆರ್. 1885

ಉನ್ನತ ಶಿಕ್ಷಣ ಸಚಿವಾಲಯ

ವಿಷಯ : ಪ್ರೊ. ಸೈಯಿದ ಅಖ್ತರ್, ಪ್ರಾಧ್ಯಾಪಕರು, ಶಿಕ್ಷಣ ವಿಭಾಗ, ಗುಲ್ಬರ್ಗ ವಿಶ್ವವಿದ್ಯಾಲಯ, ಇವರ ವಿದೇಶ ಪ್ರಯಾಣದ ಬಗ್ಗೆ.

ಓದಲಾಗಿದೆ :
1. ಗುಲ್ಬರ್ಗ ವಿಶ್ವವಿದ್ಯಾಲಯದ ಪತ್ರ ಸಂಖ್ಯೆ. GUG/ADM/EST-1(T)2010-11/2147, ದಿನಾಂಕ : 21–10–2010.
2. ಸರ್ಕಾರದ ಕಾರಣ ಕೇಳುವ ನೋಟೀಸು ಸಂಖ್ಯೆ: ಇಡಿ 154 ಯುಜಿವಿ 2010, ದಿನಾಂಕ : 09–06–2011.
3. ಗುಲ್ಬರ್ಗ ವಿಶ್ವವಿದ್ಯಾಲಯದ ಪತ್ರ ಸಂಖ್ಯೆ. ಗುವಿಗು/ಆಡಳಿತ–1/2011–12/639, ದಿನಾಂಕ : 20/21–06–2011.

ಪ್ರಸ್ತಾವನೆ :

ಪ್ರೊ. ಸಯಿದಾ ಅಖ್ತರ್, ಪ್ರಾಧ್ಯಾಪಕರು, ದೈಹಿಕ ಶಿಕ್ಷಣ ವಿಭಾಗ, ಇವರು ಗುಲ್ಬರ್ಗ ವಿಶ್ವವಿದ್ಯಾಲಯಕ್ಕೆ ಮನವಿ ಸಲ್ಲಿಸಿ, ಸದರಿಯವರು ಸೌದಿ ಅರೇಬಿಯಾದ ಷಕ್ರಾ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕ ಹುದ್ದೆಗೆ ಆಯ್ಕೆಯಾಗಿರುವುದರಿಂದ, ಅಲ್ಲಿಗೆ ಕೆಲಸಕ್ಕೆ ಸೇರಿಕೊಳ್ಳಲು ಅಸಾಧಾರಣ ರಜೆಯನ್ನು ಮಂಜೂರು ಮಾಡುವಂತೆ ಕೋರಿದ್ದರ ಹಿನ್ನೆಲೆಯಲ್ಲಿ, ವಿಷಯವನ್ನು ದಿನಾಂಕ : 26–08–2010ರ ಸಿಂಡಿಕೇಟ್ ಸಭೆಯಲ್ಲಿ ಮಂಡಿಸಿ, ಸಿಂಡಿಕೇಟ್ ಸಭೆಯು ಡಾ: ಸಯಿದಾ ಅಖ್ತರ್‌ರವರಿಗೆ ಎರಡು ವರ್ಷಗಳ ಅಸಾಧಾರಣ ರಜೆಯನ್ನು ಮಂಜೂರು ಮಾಡಲು ತೀರ್ಮಾನಿಸಿದ್ದು, ಅದರಂತೆ ಅವರಿಗೆ ತಿಳಿಸಲಾಗಿದೆ ಹಾಗೂ ನಂತರ ವಿಶ್ವವಿದ್ಯಾಲಯದಿಂದ ಬಿಡುಗಡೆಗೊಳಿಸದ ಹೊರತು, ಕೇಂದ್ರ ಸ್ಥಾನವನ್ನು ಬಿಟ್ಟು ವಿದೇಶಕ್ಕೆ ಪ್ರಯಾಣ ಮಾಡಕೂಡದು ಎಂದು ಡಾ: ಸಯಿದಾ ಅಖ್ತರ್‌ರವರಿಗೆ ಅಧ್ಯಯನ ವಿಭಾಗದ ಮುಖ್ಯಸ್ಥರ ಮೂಲಕ ತಿಳಿಸಲಾಗಿತ್ತು ಎಂದು ಗುಲ್ಬರ್ಗ ವಿಶ್ವವಿದ್ಯಾಲಯವು ಮೇಲೆ ಓದಲಾದ (1)ರ ಪತ್ರದಲ್ಲಿ ವರದಿ ಮಾಡುತ್ತಾ, ಈ ಮಧ್ಯೆ, ಪ್ರೊ. ಸಯಿದಾ ಅಖ್ತರ್‌ರವರು ತಮಗೆ ವಿಶ್ವವಿದ್ಯಾಲಯವು ದಿನಾಂಕ : 11–10–2010 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅಸಾಧಾರಣ ರಜೆಯನ್ನು ಮಂಜೂರು ಮಾಡಿರುವುದರಿಂದ ವಿಶ್ವವಿದ್ಯಾಲಯದಿಂದ ಬಿಡುಗಡೆ ಹೊಂದದೆ ವಿದೇಶಕ್ಕೆ ತೆರಳಿರುವುದಾಗಿ ಪತ್ರದ ಮೂಲಕ ತಿಳಿಸಿರುತ್ತಾರಾದ್ದರಿಂದ, ಈ ವಿಷಯದಲ್ಲಿ ವಿಶ್ವವಿದ್ಯಾಲಯವು ಯಾವ ಕ್ರಮವನ್ನು ಜರುಗಿಸಬಹುದು ಎಂಬ ಬಗ್ಗೆ ಗುಲ್ಬರ್ಗ ವಿಶ್ವವಿದ್ಯಾಲಯವು ಮೇಲೆ ಓದಲಾದ (1)ರ ಪತ್ರದಲ್ಲಿ ಸರ್ಕಾರದ ಸಲಹೆಯನ್ನು ಕೋರಿರುತ್ತದೆ.

2. ಪ್ರೊ. ಸಯಿದಾ ಅಖ್ತರ್, ಪ್ರಾಧ್ಯಾಪಕರು, ಶಿಕ್ಷಣ ವಿಭಾಗ, ಗುಲ್ಬರ್ಗ ವಿಶ್ವವಿದ್ಯಾಲಯ ಇವರು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ ಇಲ್ಲಿ ಕುಲಪತಿಗಳಾಗಿದ್ದ ಅವಧಿಯಲ್ಲಿ ನಡೆಸಲಾದ ಅಕ್ರಮ/ಅವ್ಯವಹಾರಗಳ ಬಗ್ಗೆ ವಿಚಾರಣೆ ಬಾಕಿ ಇರುವಾಗ ಗುಲ್ಬರ್ಗ ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭೆಯು ದಿನಾಂಕ : 26–08–2010ರ ಸಭೆಯಲ್ಲಿ ಅಸಾಧಾರಣ ರಜೆ ಮಂಜೂರು ಮಾಡಿರುವ ನಿರ್ಣಯವು ನಿಯಮಬಾಹಿರವಾಗಿದ್ದು, ಈ ನಿರ್ಣಯವನ್ನು ಏಕೆ ರದ್ದುಗೊಳಿಸಬಾರದು ಎಂಬ ಬಗ್ಗೆ ವಿವರಣೆಯನ್ನು ಒಂದು ವಾರದೊಳಗೆ ಸರ್ಕಾರಕ್ಕೆ ಸಲ್ಲಿಸುವಂತೆಯೂ ಹಾಗೂ ಒಂದು ವೇಳೆ ನಿಗದಿತ ಅವಧಿಯೊಳಗೆ ಯಾವುದೇ ಉತ್ತರ ಬಾರದಿದ್ದರೆ ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಗುಲ್ಬರ್ಗ ವಿಶ್ವವಿದ್ಯಾಲಯಕ್ಕೆ ಮೇಲೆ ಓದಲಾದ (2)ರ ಸರ್ಕಾರಿ ಪತ್ರದಲ್ಲಿ ಕಾರಣ ಕೇಳುವ ನೋಟೀಸನ್ನು ಹೊರಡಿಸಲಾಗಿತ್ತು.

3. ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಗುಲ್ಬರ್ಗ ವಿಶ್ವವಿದ್ಯಾಲಯವು ಪ್ರೊ. ಸಯಿದಾ ಅಖ್ತರ್ ರವರು ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ ಇಲ್ಲಿ ಕುಲಪತಿಗಳಾಗಿದ್ದ ಸಮಯದಲ್ಲಿ ನಡೆಸಲಾದ ಅಕ್ರಮ/ಅವ್ಯವಹಾರಗಳ ಬಗ್ಗೆ ವಿಚಾರಣೆ ಬಾಕಿ ಇರುವ ಬಗ್ಗೆ ವಿಶ್ವವಿದ್ಯಾಲಯಕ್ಕೆ ಯಾವುದೇ ಅಧಿಕೃತ ಮಾಹಿತಿ ಇಲ್ಲದಿದ್ದುದರಿಂದ, ದಿನಾಂಕ : 26–08–2011ರ ಸಿಂಡಿಕೇಟ್ ಸಭೆಯಲ್ಲಿ ಸದರಿಯವರಿಗೆ ಎರಡು ವರ್ಷಗಳ ಅಸಾಧಾರಣ ರಜೆಯನ್ನು ಮಂಜೂರು ಮಾಡಲು ನಿರ್ಣಯಿಸಿದ್ದು, ಈ ನಿರ್ಣಯವು ನಿಯಮಬಾಹಿರವಾಗಿದ್ದಲ್ಲಿ ಸರ್ಕಾರವು ರದ್ದುಗೊಳಿಸಬಹುದು ಎಂದು ವರದಿ ಮಾಡಿದೆ. ಅದರಂತೆ, ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ ಇಡಿ 154 ಯುಜಿವಿ 2010, ಬೆಂಗಳೂರು, ದಿನಾಂಕ : 29–07–2011

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದಾಗಿ ಪ್ರೊ. ಸಯಿದಾ ಅಖ್ತರ್, ಪ್ರಾಧ್ಯಾಪಕರು, ದೈಹಿಕ ಶಿಕ್ಷಣ ವಿಭಾಗ, ಗುಲ್ಬರ್ಗ ವಿಶ್ವವಿದ್ಯಾಲಯ ಇವರ ವಿರುದ್ಧದ ವಿಚಾರಣೆ ಬಾಕಿ ಇರುವಾಗ ಇವರಿಗೆ ಎರಡು ವರ್ಷಗಳ ಅಸಾಧಾರಣ ರಜೆಯನ್ನು ಮಂಜೂರು ಮಾಡಲು ದಿನಾಂಕ :

26-08-2010ರ ಸಭೆಯಲ್ಲಿ ಗುಲ್ಬರ್ಗ ವಿಶ್ವವಿದ್ಯಾಲಯದ ಸಿಂಡಿಕೇಟ್ ಕೈಗೊಂಡಿರುವ ನಿರ್ಣಯವು ನಿಯಮಬಾಹಿರವಾಗಿದ್ದು, ಸದರಿ ನಿರ್ಣಯವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ನಿಯಮ 10(1)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಯು.ಬಿ. ಉಳವಿ
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)

ಪಿ.ಆರ್. 1886

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಎಫ್. ಆರ್. ಪಾಟೀಲ್, ನಿವೃತ್ತ ಸಹಾಯಕ ಅಭಿಯೋಗ ನಿರ್ದೇಶಕರು, ಆರಕ್ಷಕ ಅಧೀಕ್ಷಕರ ಕಛೇರಿ, ಗುಲ್ಬರ್ಗ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247 (ಎ)(1)ರ ಸೌಲಭ್ಯಕ್ಕೆ ಪರಿಗಣಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ-II ಸಂ : ಲಾ 161 ಪಿಪಿಇ 86, ದಿನಾಂಕ : 24-07-1989.
2. ಸರ್ಕಾರದ ಪತ್ರ ಸಂಖ್ಯೆ : ಲಾ 90 ಪಿಪಿಇ 91, ದಿನಾಂಕ : 20-11-1991.
3. ಶ್ರೀ ಎಫ್.ಆರ್. ಪಾಟೀಲ್ ಇವರ ಮನವಿಯ ದಿನಾಂಕ : 06-03-2009.
4. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂ : ಡಿಪಿಎನ್/ಲೆಕ್ಕ-1/432/2008-09, ದಿನಾಂಕ : 13-04-2009.

ಪ್ರಸ್ತಾವನೆ :

ಮೇಲೆ (4)ರಲ್ಲಿ ಓದಲಾದ ದಿನಾಂಕ : 13-04-2009ರ ಪತ್ರದಲ್ಲಿ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರುರವರು ಮೇಲೆ (1)ರಲ್ಲಿ ಓದಲಾದ ದಿನಾಂಕ : 24-07-1989ರ ಸರ್ಕಾರದ ಅಧಿಸೂಚನೆ-IIರ ಕ್ರ.ಸಂ.52ರ ಅನ್ವಯ ಶ್ರೀ ಎಫ್. ಆರ್. ಪಾಟೀಲ್, ನಿವೃತ್ತ ಸಹಾಯಕ ಅಭಿಯೋಗ ನಿರ್ದೇಶಕರು, ಆರಕ್ಷಕ ಅಧೀಕ್ಷಕರ ಕಛೇರಿ, ಗುಲ್ಬರ್ಗ,ಇವರು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗೆ ನೇರ ನೇಮಕಾತಿ ಹೊಂದಿ, ದಿನಾಂಕ : 04-08-1989ರ ಅಪರಾಹ್ನ ಹುದ್ದೆಯ ಕರ್ತವ್ಯಕ್ಕೆ ವರದಿ ಮಡಿಕೊಂಡಿರುತ್ತಾರೆ. ಮೇಲೆ (2)ರಲ್ಲಿ ಓದಲಾದ ದಿನಾಂಕ : 20-11-1991ರ ಸರ್ಕಾರದ ಪತ್ರದನ್ವಯ ಸದರಿ ನಿವೃತ್ತ ಅಧಿಕಾರಿಯ ಜನ್ಮ ದಿನಾಂಕವನ್ನು 01-06-1951 ಎಂದು ಒಪ್ಪಲಾಗಿದೆ. ಮೇಲೆ (3)ರಲ್ಲಿ ಓದಲಾದ ಮನವಿಯಲ್ಲಿ ಶ್ರೀ ಎಫ್.ಆರ್.ಪಾಟೀಲ್ ರವರು 38 ವರ್ಷ 2 ತಿಂಗಳು 03 ದಿನಗಳ ವಯಸ್ಸಿನಲ್ಲಿ ಸರ್ಕಾರಿ ಸೇವೆಗೆ ಸೇರಿದಂತೆ ಆಗುವುದರಿಂದ, ನಿಯಮಾನುಸಾರ 4 ವರ್ಷಗಳ ಹೆಚ್ಚುವರಿ ಸೇವಾ ಸೌಲಭ್ಯಕ್ಕೆ ಅವರು ಅರ್ಹರಿದ್ದು ಪರಿಗಣಿಸುವಂತೆ ಕೋರಿರುತ್ತಾರೆ. ಸದರಿಯವರು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247(ಎ)(1) ರನ್ವಯ ಅರ್ಹರಿರುವುದರಿಂದ ಈ ಬಗ್ಗೆ ಆದೇಶವನ್ನು ಹೊರಡಿಸುವಂತೆ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 223 ಪಿಪಿಇ 2009, ಬೆಂಗಳೂರು, ದಿನಾಂಕ : 30-07-2011

ಮೇಲಿನ ವಿವರಗಳ ಹಿನ್ನೆಲೆಯಲ್ಲಿ, ಶ್ರೀ ಎಫ್. ಆರ್. ಪಾಟೀಲ್, ನಿವೃತ್ತ ಸಹಾಯಕ ಅಭಿಯೋಗ ನಿರ್ದೇಶಕರು, ಆರಕ್ಷಕ ಅಧೀಕ್ಷಕರ ಕಛೇರಿ, ಗುಲ್ಬರ್ಗ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ)(1)ರ ರೀತ್ಯ ಗರಿಷ್ಠ ಮಿತಿಯಾದ 04 ವರ್ಷಗಳ ಅಧಿಕ ಸೇವಾವಧಿಯನ್ನು ಅವರ ಪಿಂಚಣಿ ಸೌಲಭ್ಯಗಳಿಗೆ ಮಾತ್ರ ಹೆಚ್ಚುವರಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಆದೇಶಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ : ಆಇ 598 ಸೇ-3/2011, ದಿನಾಂಕ : 01-07-2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಹೆಚ್.ಕೆ. ನಿಂಗಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು-ಬಿ)

ಪಿ.ಆರ್. 1887

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ದಿವಂಗತ ಐ.ಆರ್.ಬೆಡಸೂರ, ಹಿಂದಿನ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಿ.ಜೆ.ಎಂ. ನ್ಯಾಯಾಲಯ, ಗುಲ್ಬರ್ಗ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247 (ಎ)(1)ರ ಸೌಲಭ್ಯಕ್ಕೆ ಪರಿಗಣಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ- II ಸಂ : ಲಾ 161 ಪಿಪಿಇ 86, ದಿನಾಂಕ : 24-07-1989.
2. ಸರ್ಕಾರದ ಪತ್ರ ಸಂಖ್ಯೆ : ಲಾ 200 ಪಿಪಿಇ 91, ದಿನಾಂಕ : 05-12-1991.
3. ಶ್ರೀ ಐ.ಆರ್. ಬೆಡಸೂರ ಇವರ ಮನವಿಯ ದಿನಾಂಕ : 18-08-2008.

4. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂ : ಡಿಪಿಎನ್/ಲೆಕ್ಕ-1/206/2008-09, ದಿನಾಂಕ : 28-06-2011.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 24-07-1989ರ ಸರ್ಕಾರದ ಅಧಿಸೂಚನೆ-11ಯ ಕ್ರಸಂ.67ರ ಅನ್ವಯ ದಿವಂಗತ ಐ.ಆರ್.ಬೆಡಸೂರ, ಹಿಂದಿನ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಿ.ಜೆ.ಎಂ. ನ್ಯಾಯಾಲಯ, ಗುಲ್ಬರ್ಗ,ಇವರು ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗೆ ನೇರ ನೇಮಕಾತಿ ಹೊಂದಿ, ದಿನಾಂಕ : 05-08-1989ರ ಅಪರಾಹ್ನ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಮೇಲೆ (2)ರಲ್ಲಿ ಓದಲಾದ ದಿನಾಂಕ : 05-12-1991ರ ಸರ್ಕಾರದ ಪತ್ರದನ್ವಯ ಸದರಿ ಅಧಿಕಾರಿಯ ಜನ್ಮ ದಿನಾಂಕವನ್ನು 01-06-1954 ಎಂದು ಒಪ್ಪಲಾಗಿದೆ. ಮೇಲೆ (3)ರಲ್ಲಿ ಓದಲಾದ ದಿನಾಂಕ : 18-08-2008ರ ಮನವಿಯಲ್ಲಿ ದಿವಂಗತ ಐ.ಆರ್.ಬೆಡ್ಡಸೂರ ರವರು ಅವರಿಗೆ 35 ವರ್ಷ 02 ತಿಂಗಳಾಗಿದ್ದಾಗ ಸರ್ಕಾರಿ ಸೇವೆಗೆ ಸೇರಿದ್ದು, ನಿಯಮಾನುಸಾರ ಗರಿಷ್ಠ ಮಿತಿಯಾದ ನಾಲ್ಕು ವರ್ಷಗಳ ಹೆಚ್ಚುವರಿ ಸೇವಾ ಸೌಲಭ್ಯಕ್ಕೆ ಅವರು ಅರ್ಹರಿರುವುದರಿಂದ ಪರಿಗಣಿಸುವಂತೆ ಕೋರಿದ್ದು, ಮೇಲೆ (4)ರಲ್ಲಿ ಓದಲಾದ ದಿನಾಂಕ : 28-06-2011ರ ಪತ್ರದಲ್ಲಿ ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು ರವರು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247(ಎ)(1) ರನ್ವಯ ಸದರಿಯವರು ಗರಿಷ್ಠ ಮಿತಿಯಾದ ನಾಲ್ಕು ವರ್ಷಗಳ ಹೆಚ್ಚುವರಿ ಸೇವಾ ಸೌಲಭ್ಯಕ್ಕೆ ಅರ್ಹರಿರುವುದರಿಂದ ಈ ಬಗ್ಗೆ ಆದೇಶವನ್ನು ಹೊರಡಿಸುವಂತೆ ಸರ್ಕಾರಕ್ಕೆ ಶಿಫಾರಸ್ಸನ್ನು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 277 ಪಿಪಿಇ 2011, ಬೆಂಗಳೂರು, ದಿನಾಂಕ : 30-07-2011

ಮೇಲಿನ ವಿವರಗಳ ಹಿನ್ನೆಲೆಯಲ್ಲಿ, ದಿವಂಗತ ಐ.ಆರ್.ಬೆಡಸೂರ, ಹಿಂದಿನ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಿ.ಜೆ.ಎಂ. ನ್ಯಾಯಾಲಯ, ಗುಲ್ಬರ್ಗ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247(ಎ)(1)ರ ಅನ್ವಯ ಗರಿಷ್ಠ ಮಿತಿಯಾದ ನಾಲ್ಕು ವರ್ಷಗಳ ಅಧಿಕ ಸೇವಾವಧಿಯನ್ನು ದಿವಂಗತರ ನಿವೃತ್ತಿ ವೇತನ ಸೌಲಭ್ಯಗಳಿಗೆ ಮಾತ್ರ ಹೆಚ್ಚುವರಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಆದೇಶಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ : ಆಇ 805 ಸೇ-3/2011, ದಿನಾಂಕ : 21-07-2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಹೆಚ್.ಕೆ. ನಿಂಗಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು-ಬಿ)

ಪಿ.ಆರ್. 1888

ನಗರಾಭಿವೃದ್ಧಿ ಸಚಿವಾಲಯ

ವಿಷಯ : ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಸಂಪರ್ಕ ಕಲ್ಪಿಸಲು ಮೈಸೂರು ರಸ್ತೆ ಮತ್ತು ಮಾಗಡಿ ರಸ್ತೆ ನಡುವಿನ ರಸ್ತೆ ನಿರ್ಮಾಣದ ಬಗ್ಗೆ ಫೆರಿಫೆರಲ್ ರಿಂಗ್ ರಸ್ತೆ ಭಾಗ-2ರ ಯೋಜನೆಗೆ ಮಂಜೂರಾತಿ ನೀಡಿ ಆಡಳಿತಾತ್ಮಕ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ : ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ : ಬೆಂಅಪ್ರಾ/ಅಭೂಸ್ವಾಅ/308/2010-11, ದಿನಾಂಕ : 14-02-2011.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರು ಬೆಂಗಳೂರಿನ ಹೊರವಲಯದಲ್ಲಿ ಫೆರಿಫೆರಲ್ ರಿಂಗ್ ರಸ್ತೆಯನ್ನು ನಿರ್ಮಾಣ ಮಾಡುವ ಯೋಜನೆಯನ್ನು 2 ಭಾಗಗಳಾಗಿ ವಿಂಗಡಿಸಿ ಕೈಗೆತ್ತಿಕೊಂಡಿದ್ದು, ಹೊಸೂರು ರಸ್ತೆಯಿಂದ ಬನ್ನೇರುಘಟ್ಟ ರಸ್ತೆ, ಕನಕಪುರ ರಸ್ತೆ, ಮೈಸೂರು ರಸ್ತೆ ಮಾಗಡಿ ರಸ್ತೆ ಮಾರ್ಗವಾಗಿ ತುಮಕೂರು ರಸ್ತೆವರೆಗಿನ 51 ಕಿ.ಮೀ. ರಸ್ತೆಯನ್ನು ಫೆರಿಫೆರಲ್ ರಿಂಗ್ ರಸ್ತೆ ಭಾಗ-2 ಎಂದು ಗುರುತಿಸಲಾಗಿರುತ್ತದೆ. ಪಿ.ಆರ್.ಆರ್. ಭಾಗ-2ರ ಪೈಕಿ ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಸಂಪರ್ಕ ಕಲ್ಪಿಸಲು ಮೈಸೂರು ರಸ್ತೆ ಮತ್ತು ಮಾಗಡಿ ರಸ್ತೆ ನಡುವಿನ ರಸ್ತೆ ನಿರ್ಮಾಣ ಮಾಡುವ ಬಗ್ಗೆ ಯೋಜನೆಯನ್ನು ಕೈಗೆತ್ತಿಕೊಳ್ಳುವುದು ತುಂಬಾ ಅವಶ್ಯವಿರುವುದರಿಂದ ರಿಂಗ್ ರೋಡ್ ಫೇಸ್-2ರ ಕಿ.ಮೀ. 97.97 ರಿಂದ 108.72 ಕಿ.ಮೀ. ರವರೆಗೆ (10.75 ಕಿ.ಮೀ.) ರಸ್ತೆ ನಿರ್ಮಾಣ ಮಾಡಲು ಪ್ರಾಧಿಕಾರವು ಸಂಖ್ಯೆ : BDA/Commr/DC(LA)/SALAO/115/2005-06, ದಿನಾಂಕ : 12-12-2005 ಹಾಗೂ 15-11-2006 ರಂದು ಪ್ರಾರಂಭಿಕ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆಯೆಂದು ವರದಿ ಮಾಡಿರುತ್ತದೆ.

ಮುಂದುವರೆದು, ಪ್ರಾಧಿಕಾರದ ಸಭೆ ದಿನಾಂಕ : 17-01-2011ರ ವಿಷಯ ಸಂಖ್ಯೆ : 26/11 ರಲ್ಲಿ ಚರ್ಚಿಸಿದಂತೆ ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಸಂಪರ್ಕ ಕಲ್ಪಿಸಲು ಮೈಸೂರು ರಸ್ತೆ ಮತ್ತು ಮಾಗಡಿ ರಸ್ತೆ ನಡುವಿನ ರಸ್ತೆ ನಿರ್ಮಾಣದ ಬಗ್ಗೆ ಫೆರಿಫೆರಲ್ ವರ್ತುಲ ರಸ್ತೆ, ಭಾಗ-2 ರ ಯೋಜನೆಗೆ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಚಳ್ಳಘಟ್ಟ, ಕೆ.ಕೃಷ್ಣಸಾಗರ, ಭೀಮನಕುಪ್ಪೆ, ಕೊಮ್ಮಘಟ್ಟ, ಸೂಲಿಕೆರೆ ಮತ್ತು

ಕೆಂಚನಪುರ ಹಾಗೂ ಬೆಂಗಳೂರು ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ, ಕನ್ನಲ್ಲಿ, ಶೀಗೇಹಳ್ಳಿ, ಕೂಡಿಗೇಹಳ್ಳಿ ಮತ್ತು ದಾಸನಪುರ ಹೋಬಳಿ ಮಾಚೋಹಳ್ಳಿ ಗ್ರಾಮಗಳಲ್ಲಿನ ಒಟ್ಟು 344 ಎಕರೆ 03 ಗುಂಟೆ ಜಮೀನುಗಳಿಗೆ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸಲು ತೀರ್ಮಾನಿಸಿದ್ದು, ಈ ಪೈಕಿ ಚಳ್ಳಘಟ್ಟ ಗ್ರಾಮದ ಸರ್ವೆ ನಂ. 10 ಮತ್ತು 19/2ರ ಒಟ್ಟು ವಿಸ್ತೀರ್ಣ 22 ಎಕರೆ 33 ಗುಂಟೆ ಜಮೀನುಗಳು ಈಗಾಗಲೇ ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಹೊರಡಿಸಲಾದ ಅಂತಿಮ ಅಧಿಸೂಚನೆ ಸಂಖ್ಯೆ : ಯುಡಿಡಿ 51 ಎಂಎನ್‌ಎಕ್ಸ್ 2010, ದಿನಾಂಕ : 18–02–2010 ರಲ್ಲಿ ಒಳಗೊಂಡಿರುವುದರಿಂದ ಇವುಗಳನ್ನು ಹೊರತುಪಡಿಸಿ ಉಳಿದ 321 ಎಕರೆ 10 ಗುಂಟೆ ಜಮೀನಿಗೆ ಅಂತಿಮ ಅಧಿಸೂಚನೆ ಹೊರಡಿಸುವುದು ಅವಶ್ಯವಿರುವುದರಿಂದ ಹಾಗೂ ಇದರ ಮೊತ್ತ ರೂ. 349.00 ಕೋಟಿಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1976 ಕಲಂ 18(3)ರ ಪ್ರಕಾರ ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಹಾಗೂ ಸದರಿ ಕಾಯ್ದೆ ಕಲಂ 19(1)ರ ಪ್ರಕಾರ ಅಂತಿಮ ಅಧಿಸೂಚನೆ ಹೊರಡಿಸುವಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಕೋರಿರುತ್ತಾರೆ. ಸರ್ಕಾರವು ಈ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 169 ಬೆಂಭೂಸ್ವಾ 2011, ಬೆಂಗಳೂರು, ದಿನಾಂಕ : 22–07–2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಸನ್ನಿವೇಶಗಳ ಹಿನ್ನೆಲೆಯಲ್ಲಿ, ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಸಂಪರ್ಕ ಕಲ್ಪಿಸಲು ಮೈಸೂರು ರಸ್ತೆ ಮತ್ತು ಮಾಗಡಿ ರಸ್ತೆ ನಡುವಿನ ರಸ್ತೆ ನಿರ್ಮಾಣದ ಬಗ್ಗೆ ಫೆರಿಫೆರಲ್ ವರ್ತುಲ ರಸ್ತೆ, ಭಾಗ–2ರ ಯೋಜನೆಗೆ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕಂಬೀಪುರ ಚಳ್ಳಘಟ್ಟ, ಕೆ.ಕೃಷ್ಣಸಾಗರ, ಭೀಮನಕುಪ್ಪೆ, ಕೊಮ್ಮಘಟ್ಟ, ಸೂಲಿಕೆರೆ ಮತ್ತು ಕೆಂಚನಪುರ ಹಾಗೂ ಬೆಂಗಳೂರು ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ, ಕನ್ನಲ್ಲಿ, ಶೀಗೇಹಳ್ಳಿ, ಕೊಡಿಗೆಹಳ್ಳಿ ಮತ್ತು ದಾಸನಪುರ ಹೋಬಳಿ ಮಾಚೋಹಳ್ಳಿ ಗ್ರಾಮಗಳಲ್ಲಿನ ಒಟ್ಟು 344 ಎಕರೆ 03 ಗುಂಟೆ ಜಮೀನುಗಳ ಪೈಕಿ ಚಳ್ಳಘಟ್ಟ ಗ್ರಾಮದ ಸರ್ವೆ ನಂ. 10 ಮತ್ತು 19/2ರ ಜಮೀನುಗಳ ಒಟ್ಟು ವಿಸ್ತೀರ್ಣ 22 ಎಕರೆ 33 ಗುಂಟೆ ಜಮೀನುಗಳನ್ನು ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಹೊರಡಿಸಲಾದ ಅಂತಿಮ ಅಧಿಸೂಚನೆ ಸಂಖ್ಯೆ : ಯುಡಿಡಿ 51 ಎಂಎನ್‌ಎಕ್ಸ್ 2010, ದಿನಾಂಕ : 18–02–2010 ರಲ್ಲಿ ಒಳಗೊಂಡಿರುವುದನ್ನು ಹೊರತುಪಡಿಸಿ ಉಳಿದ 321 ಎಕರೆ 10 ಗುಂಟೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ 1976 ಕಲಂ 18(3)ರ ಪ್ರಕಾರ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ಕಾಮಗಾರಿಗೆ ತಗಲುವ ಅಂದಾಜು ರೂ. 349.00 ಕೋಟಿ (ಮೂರು ನೂರ ನಲವತ್ತೊಂಬತ್ತು ಕೋಟಿ) ವೆಚ್ಚವನ್ನು ಪ್ರಾಧಿಕಾರದ ಸಂಪನ್ಮೂಲಗಳಿಂದಲೇ ಭರಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಎಂ.ಎಸ್. ಪ್ರೇಮಚಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 1889

PERSONNEL AND ADMINISTRATIVE REFORMS SECRETARIAT

Sub : IFS cadre of Karnataka-Amendment to the list of IFS cadre posts kept in abeyance.

Read : G. O. No. DPAR/31/SFP/2010, dated : 28-4-2011.

Preamble:

As per the State Government order read above, sanction was accorded to keep 14 IFS cadre posts of Deputy Conservator of Forests in abeyance for a period of six months as per powers vested with the State Government under rule 10 of IFS (Cadre) Rules.

The State Government has decided to delete IFS cadre post of Deputy Conservator of Forests, Territorial, Koppal Division from the list of posts kept in abeyance in the G.O. dated : 28-4-2011 as per the powers vested with the State Government in terms of proviso to Rule 9(1) (a) of IFS (Cadre) rules. Accordingly, the following orders are issued.

GOVERNMENT ORDER NO. DPAR 31 SFP 2011, BANGALORE, DATED 28-7-2011.

The Government hereby orders that the IFS cadre post of Deputy Conservator of Forests, Territorial, Koppal Division appearing at Sl. No. 2 in the list of 14 IFS cadre posts kept in abeyance vide G.O. of even No. dated : 28-4-2011, be deleted from the list and thereby the cadre post of Deputy Conservator of Forests, Territorial, Koppal Division stands revived.

By Order and in the name of the Governor of Karnataka,
A.P. ATRE
Under Secretary to Government,
DPAR (Services-IV).

P.R. No. 1890

ಜಲಸಂಪನ್ಮೂಲ ಸಚಿವಾಲಯ

ವಿಷಯ : ಶಿವಮೊಗ್ಗ ಜಿಲ್ಲೆ, ಸಾಗರ ತಾಲ್ಲೂಕು ಗಿಳಾಲಗುಂಡಿ ಕೊಳ್ಳಿಬಚ್ಚಲು ಹಳ್ಳಕ್ಕೆ ಹೊಸಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರ ಪತ್ರ ಸಂಖ್ಯೆ : ಮುಸದ/ಲೆಶಾಖೆ/ಲೆಸ–1/3/ಭೂಸ್ವಾಧೀನ/11-12/1533 ದಿನಾಂಕ : 8–7–2011.

ಪ್ರಸ್ತಾವನೆ :

ಶಿವಮೊಗ್ಗ ಜಿಲ್ಲೆ, ಸಾಗರ ತಾಲ್ಲೂಕು ಗಿಳಾಲಗುಂಡಿ ಕೊಳ್ಳಿಬಚ್ಚಲುಹಳ್ಳಕ್ಕೆ ಹೊಸಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಶಿಕಾರಿಪುರ ತಾಲ್ಲೂಕು ಕುಂಸಿ ಹೋಬಳಿ, ಕುಣಿಹೊಸೂರು ಗ್ರಾಮದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಹೆಚ್ಚುವರಿ ಪರಿಹಾರ ಮೊತ್ತ ರೂ. 68,26,772–00 ಗಳನ್ನು ಬಿಡುಗಡೆ ಮಾಡಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ : 8–7–11ರ ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರ ಅಧಿಸೂಚನೆ ದಿನಾಂಕ : 30–6–2005 ರ ಪ್ರಕಾರ ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ದಿನಾಂಕ : 23–11–2008 ರಂದು ರಚಿಸಿದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಶಿವಮೊಗ್ಗ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ) ದಲ್ಲಿ ದಾಖಲಿಸಿದ್ದ ಎಲ್.ಎ.ಸಿ. ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಪ್ರತಿ ಎಕರೆ ತರಿ ಜಮೀನಿಗೆ ರೂ. 1.00 ಲಕ್ಷ, ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ ರೂ. 5.00 ಲಕ್ಷ ಹಾಗೂ ಜಮೀನಿನಲ್ಲಿದ್ದ ಗಿಡಗಳಿಗೆ ರೂ. 10.00 ಲಕ್ಷಗಳನ್ನು ನಿಗದಿಪಡಿಸಿದೆ. ಅದರಂತೆ, ಪಾವತಿಸಬೇಕಾದ ಮೊತ್ತದ ವಿವರ ಕೆಳಕಂಡಂತಿದೆ :

ಕ್ರ. ಸಂ.	ಎಲ್‌ಎಸಿ ಸಂಖ್ಯೆ	ಕುಣಿಹೊಸೂರು ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	11/09	43,44,46	7–35	68,26,772–00
		ಒಟ್ಟು		68,26,772–00

ಸಿವಿಲ್ ನ್ಯಾಯಾಲಯದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಪತ್ರ ಸಂಖ್ಯೆ : ಆರ್‌ಡಿ 807 ಎಲ್‌ಸಿಎ 2010, ದಿನಾಂಕ : 19–1–11 ರಂದು ಅಭಿಪ್ರಾಯ ನೀಡಿದೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 87 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ : 30ನೇ ಜುಲೈ 2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶಿವಮೊಗ್ಗ ಜಿಲ್ಲೆ, ಸಾಗರ ತಾಲ್ಲೂಕು ಗಿಳಾಲಗುಂಡಿ ಕೊಳ್ಳಿಬಚ್ಚಲು ಹಳ್ಳಕ್ಕೆ ಹೊಸಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಶಿಕಾರಿಪುರ ತಾಲ್ಲೂಕು ಕುಂಸಿ ಹೋಬಳಿ, ಕುಣಿಹೊಸೂರು ಗ್ರಾಮದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ ಪ್ರಕರಣದಲ್ಲಿ ನೀಡಿರುವ ಆದೇಶದಂತೆ ರೂ. 68,26,772–00 ಗಳನ್ನು (ಅರವತ್ತೆಂಟು ಲಕ್ಷದ ಇಪ್ಪತ್ತಾರು ಸಾವಿರದ ಏಳುನೂರ ಎಪ್ಪತ್ತೆರಡು ರೂ.ಗಳು ಮಾತ್ರ) ಗಳ ಪರಿಹಾರವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಸರ್ಕಾರದ ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2011–12ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ರೂ. 68,26,772/– ಗಳನ್ನು ಹಂಚಿಕೆ ಮಾಡಿ, ಬಿಡುಗಡೆ ಮಾಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ : 20–10–2010 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ.ಸಿ. ಸಿದ್ದಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್.ನಂ. 1891 ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗದಗ್ ಜಿಲ್ಲೆ ಮತ್ತು ತಾಲ್ಲೂಕು ಸಿಂಗಟರಾಯನಕೇರಿ ಮತ್ತು ಪಾಪನಾಶಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಧನ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ : 30–6–11 ರ ಪತ್ರ ಸಂಖ್ಯೆ : ಮುಇಂ/ಸನೀ(ಉ)/ಭೂಸ್ವಾಪ್ರ/2011–12/3538.

ಪ್ರಸ್ತಾವನೆ :

ಗದಗ್ ಜಿಲ್ಲೆ, ಮತ್ತು ತಾಲ್ಲೂಕು ಸಿಂಗಟರಾಯನಕೇರಿ ಮತ್ತು ಪಾಪನಾಶಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಸಿಂಗಟರಾಯನಕೇರಿ ಮತ್ತು ಪಾಪನಾಶಿ ಗ್ರಾಮದ ಜಮೀನುಗಳಿಗೆ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ : 30–6–11ರ ಪತ್ರದಲ್ಲಿ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ :

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ : 11–10–2003

- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ : 13-6-2005

ಭೂಸ್ವಾಧೀನಾಧಿಕಾರಿಗಳ ಐತೀರ್ಪಿನಂತೆ ಪರಿಹಾರ ಧನ ಪಡೆದ ಭೂಮಾಲೀಕರು ಹೆಚ್ಚಿನ ಪರಿಹಾರ ಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1) ರಡಿ ಗದಗ್ ಸಿವಿಲ್ (ಹಿರಿಯ ವಿಭಾಗ) ನ್ಯಾಯಾಲಯದಲ್ಲಿ ಎಲ್.ಎ.ಸಿ. ಪ್ರಕರಣಗಳನ್ನು ದಾಖಲಿಸಿದ್ದು, ನ್ಯಾಯಾಲಯವು ಪ್ರತಿ ಎಕರೆ ಖುಷ್ಕಿ ಜಮೀನಿಗೆ ರೂ. 48,000/- ಗಳು, ಅರೆ ನೀರಾವರಿ ಜಮೀನಿಗೆ ರೂ. 1,00,000/- ಗಳನ್ನು ನಿಗದಿಪಡಿಸಿ ಆದೇಶಿಸಿದೆ.

ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಪತ್ರ ಸಂಖ್ಯೆ : ಆರ್‌ಡಿ 69 ಎಲ್‌ಸಿಬಿ 2009, ದಿನಾಂಕ : 6-4-10 ರಂದು ಅಭಿಪ್ರಾಯ ನೀಡಿದೆ.

ಪಾವತಿಸಬೇಕಾದ ಪರಿಹಾರದ ವಿವರ ಕೆಳಕಂಡಂತಿದೆ :

ಕ್ರ. ಸಂ.	ಎಲ್‌ಎಸಿ ಸಂಖ್ಯೆ	ಸ.ನಂ.	ಗ್ರಾಮ	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	50/05	36/4	ಪಾಪನಾಶಿ	3-31	174491
2	51/05	36/2	ಪಾಪನಾಶಿ	4-00	184892
3	52/05	36/3	ಪಾಪನಾಶಿ	4-00	184892
4	53/05	36/1	ಪಾಪನಾಶಿ	4-00	308153
5	54/05	37ಎ/6ಎ	ಪಾಪನಾಶಿ	0-30	34667
6	55/05	35ಬಿ/2ಬಿ	ಪಾಪನಾಶಿ	0-32	36978
7	56/05	37/ಎ/5	ಪಾಪನಾಶಿ	0-04	4622
8	57/05	87/3ಬಿ	ಶಿಂಗಟರಾಯನಕೇರಿ	0-07	14830
	ಒಟ್ಟು				943525

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 77 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ : 30ನೇ ಜುಲೈ 2011.

ಗದಗ್ ಜಿಲ್ಲೆ, ಮತ್ತು ತಾಲ್ಲೂಕು ಸಿಂಗಟರಾಯನಕೇರಿ ಮತ್ತು ಪಾಪನಾಶಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಶಿಂಗಟರಾಯನಕೇರಿ ಮತ್ತು ಪಾಪನಾಶಿ ಗ್ರಾಮಕ್ಕೆ ಸೇರಿದ ವಿವಿಧ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ. 9,43,525-00ಗಳನ್ನು (ಒಂಭತ್ತು ಲಕ್ಷದ ನಲವತ್ಮೂರು ಸಾವಿರದ ಐನೂರ ಇಪ್ಪತ್ತೈದು ರೂ.ಗಳು ಮಾತ್ರ) ಪಾವತಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2011-12ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ರೂ. 9,43,525/- ಗಳನ್ನು ಹಂಚಿಕೆ ಮಾಡಿ, ಬಿಡುಗಡೆ ಮಾಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ : 20-10-2010 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ.ಸಿ. ಸಿದ್ದಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್.ನಂ. 1892

ENERGY SECRETARIAT

Sub : Extension of time limit to implement the wind power project in favour M/s RSR Power Pvt. Ltd.-reg.

Read : 1. Government Order No. EN 432 NCE 2010, dated : 16-12-2010.

2. Letter No. RSR/Shirgoan/12/2011 dated : 21-7-2011.

Preamble:

In the Government Order read at (1) above approval has been accorded for enhancement of wind power capacity from 7.00 MW to 30.60 MW at Shirgaon, Naghral and Girgaon of Belgaum District in favour of M/s RSR Power Private limited subject to condition that the company shall commission the project by 31-3-2011 and supply 25.00 MW power to State Grid.

In the letter read at (2) above the developer has stated that due to certain procedural delay, they are unable to Commission the project and they are confident to implement the project by December 2011 and requested to extend the time limit for implementing the project and permission to sign the Wheeling and Banking Agreement.

The proposal has been examined in detail and issued following Order :-

GOVERNMENT ORDER NO. EN 318 NCE 2011, BANGALORE, DATED 26-7-2011.

Government accords approval for the extension of time limit for implementing the wind power project in favour of M/s RSR Power Pvt. Ltd upto 31-12-2011.

By Order and in the name of the Governor of Karnataka,

SURESH. B. KRISHNAPPANAVAR

Under Secretary to Government,

Energy Department.

P.R. No. 1893

ENERGY SECRETARIAT

Sub : Transfer of Commissioned 0.6 MW Wind Power Capacity in favour of M/s. Goutham Ladkat-reg.

Read :
1. KREDL OM No. KRED/08/BML/2003/929 dated 23-6-2003.
2. Death Certificate of in respect of Sri. Balasaheb M. Ladkat dated 30-1-2010 issued by Pune, Municipal Corporation.
3. KREDL Letter No. KRED/08/BML/2010/3366 dated 4/13-12-2010 and KRED/08/BML/2011/1906 dated 28-6-2011/1-7-2011.

Preamble:

In the O.M. read at (1) above, KREDL has permitted to transfer of wind power project of 0.6 MW capacity at Horakeredevarapura in Jogimatti wind Zone, Chitradurga District to Sri. Balasaheb M. Ladkat from the 81.6 MW capacity allotted to M/s Enercon (India) Ltd.

Due to the demise of Sri Balasaheb M. Ladkat as per the death certificate issued by Pune Municipal Corporation read at (2) above, KREDL has recommended for the transfer of 0.6 MW wind power capacity in favour of M/s. Goutham Ladkat vide letters read at (3) above.

The proposal has been examined in detail and hence the following order :-

GOVERNMENT ORDER NO. EN 488 NCE 2010, BANGALORE, DATED 27-7-2011.

Government is pleased to accord approval for change of ownership from Late Balasaheb M. Ladkat to his son M/s Goutham Ladkat Commissioned capacity of 0.6 MW Wind Power project at Horakeredevarapura in Jogimatti wind zone, Chitradurga District.

1. M/s Goutham Ladkat shall execute an agreement with Government within 45 (forty five) day from the date of issue of this Order.
2. M/s. Goutham Ladkat is permitted to have to PPA with the concerned ESCOM/KPTCL.
3. The Government reserves the right to Cancel/modify this Order.

The terms and conditions of the O.M. read at (1) above shall IPSO FACTO applicable.

By Order and in the name of the Governor of Karnataka,

SURESH. B. KRISHNAPPANAVAR

Under Secretary to Government,

Energy Department.

P.R. No. 1894

ENERGY SECRETARIAT

Sub : Enhancement of wind power capacity from 77.4 MW to 216 MW in favour of M/s Sarjan Realities Limited-reg.

Read : 1. Government Order No. EN 60 NCE 2005, dated 22-3-2005.

2. Letter No. KRED/08/SRL-Vol-IV/2010/1755 dated 8/10-6-2010.
3. Letter No. KRED/08/SRL-Vol-IV/2010/2860 dated 8-10-2010 received from the Managing Director, Karnataka Renewable Energy Development Limited, Bangalore.
4. Government Order No. EN 246 NCE 2010 dated : 15-2-2011.
5. Government Letters No. EN 246 NCE 2010 dated 11/26-4-2011.
6. Letter No. KRED/08/SRC.VOL-IV/2011/1569 dated 3/4-6-2011 received from the Managing Director, Karnataka Renewable Energy Development Limited, Bangalore.

Preamble:

In the Government Order read at (1) above, sanction has been accorded for implementation of 34.8 MW capacipy wind power project at Bellary, Chitradurga and Davangere Districts in favour of M/s Sarjan Realities Limited.

The Managing Director, Karnataka Renewable Energy Development Limited, Bangalore vide his letters read at (2) above, has recommended to enhance the wind power capacity from 20.4 MW to 216 MW at Gurushanthanahalli, Kamabatarahalli, Jittinakatti, North RF, Chikka Thanda, Balenahalli (Jittinakatti South RF), Kanchikeri, Chinnapura (Uchangidurga RF) in Davanagere District.

The Managing Director, Karnataka Renewable Energy Development Limited, Bangalore vide his letter read at (3) above, has partially modified the earlier recommendation and recommended for enhancement of wind power capacity from 6 MW to 77.4 MW at Machinahalli, Harapanahalli, Kambatrahalli, Gundagthi villages (4.8 MW) and Jittinakatti village (1.2 MW) of Davangere District in favour of M/s Sarjan Realities Limited.

In the Government Order read at (4) above, enhancement of wind power capacity was accorded from 6.00 MW (4.8 + 1.2 =6MW part capacity of 34.8 MW) to 77.4 MW at Machinahalli, Harapanahalli, Kambatrahalli, Gundagthi Villages (4.8 MW) and Jittinakatti Village (1.2 MW) of Davangere District in favour of M/s Sarjan Realities Limited.

In the Government letters read at (5) above, Government has requested Karnataka Renewable Energy Development Limited to obtain the progress report in implementing the above 2 enhanced projects and submit report to Government.

In the letter read at (6) above, Managing Director, Karnataka Renewable Energy Development has recommended to enhance the balance capacity of 138.60 MW as against the 216 MW capacity wind power project.

The proposal has been examined in detail and issued following Orders :-

GOVERNMENT ORDER NO. EN 246 NCE 2010, BANGALORE, DATED 25-7-2011.

Government accords approval for enhancement of wind power capacity from 77.4 MW to 216 MW at Advihalli (Uchangidurga RF) in Davanagere District in favour of M/s Sarjan Realities Limited as detailed below.

Sl. No.	Geographical Area details	Sanctioned capacity in MW	Enhancement proposed in Stage-I	No. of WTGs	Sy. No. & villages	Total capacity including proposed enhancement in MW
1	A non-contiguous plateau is sorrunded by village located on South, East and North viz Advimallapur, Nichcha, Vanahalli and Kanaranahalli. The area is narrated as open scrup and is in Jittinakatti North reserved forest. The area is having 693, 698, 679 & 729m elevations. The entire area is covered in the following geographical co-ordinates : Latitude : 14 39.4"45'N Longitude : 76 0-3.'37"E Ridge peaks : 693, 698, 679 & 729m elevation. Toposheet No. 57B/2	6.00	61.2	32x2.1 MW	Adavihalli Sy. No. 379/A	67.2
2	A non-cotiguous circular ridges are located on the S-E of Kankikeri and are in Uchchungi Durga RF and has 711 in peak. The area is covered in the following geographical co-ordinates : Latitude : 14 33'51"36 34'N Longitude : 75 58' 54"-76 E Ridge peaks : 711 elevation. Toposheet No. 48N/14	1.80	21.3	11x2.1MW	Uchchungi Durga RF	23.1
3	a) The North-South oriented plateau located on S-W of Uchchungi Durga RF	6.60	41.7	23x2.1 MW	Uchchungi Durga RF	48.3

	and is narrated as Uchchungi Durga RF with open scrub and has 807, 683 & 670m peaks. Latitude : 14 0'-33 48'N Longitude : 76 1' 32"-3 27"E Ridge peaks : 807, 683 & 670m elevation. Toposheet No. 57B/2 b) And another plateau located on the S-W of Channapur and is narrated as Uchchungi Durga RF and has 699m peak. The entire area is covered in the following geographical co-ordinates : Latitude : 14 33 48"-35 57' Longitude : 76 -2' 22" E Ridge peaks : 699 elevation. Toposheet No. 57B/2					
		Total				138.6

The Government reserves the right to Cancel/Modify this order.

The other terms and Conditions of the allotment Order read at (1) above shall continue as it is.

By Order and in the name of the Governor of Karnataka,

P.R. No. 1895

SURESH. B. KRISHNAPPANAVAR

Under Secretary to Government,

Energy Department.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಸುತ್ತೋಲೆ

ಸಂಖ್ಯೆ : ಗ್ರಾಅಪ 63 ಜೈಅಯೋ 2011 ಬೆಂಗಳೂರು, ದಿನಾಂಕ : 28-07-2011

ವಿಷಯ : ಕರ್ನಾಟಕ ರಾಜ್ಯದಲ್ಲಿ ಪ್ರತಿ ವರ್ಷ ಆಗಸ್ಟ್ 10 ರಂದು "ಅಂತಾರಾಷ್ಟ್ರೀಯ ಜೈವಿಕ ಇಂಧನ ದಿನ" ಆಚರಿಸುವ – ಕುರಿತು.

ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯ ಮಂತ್ರಿಗಳ ಪರಿಕಲ್ಪನೆಯಂತೆ ರಚಿತಗೊಂಡ ರಾಜ್ಯ ಜೈವಿಕ ಇಂಧನ ನೀತಿ ಇಡೀ ರಾಷ್ಟ್ರಕ್ಕೆ ಮಾದರಿಯನಿಸಿದ್ದು, ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳುತ್ತಿರುವ ಜೈವಿಕ ಇಂಧನ ಸಸಿನೆಡುವ ಕಾರ್ಯಕ್ರಮಗಳಾದ "ಹಸಿರುಹೊನ್ನು", "ಬರಡು ಬಂಗಾರ" ಕಾರ್ಯಕ್ರಮ ಬಹು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತುತ "ಸುವರ್ಣ ಭೂಮಿ" ಯೋಜನೆಯಡಿ ಜೈವಿಕ ಇಂಧನ ಕಾರ್ಯಕ್ರಮ ರಾಜ್ಯದ ಜನತೆಗೆ ಇನ್ನೂ ಹೆಚ್ಚಿನ ಪ್ರಯೋಜನ ನೀಡಲು ಸರ್ಕಾರ ಪ್ರಯತ್ನಿಸುತ್ತಿದೆ, ಇದಕ್ಕೆ ಜನ ಜಾಗೃತಿ ಅಗತ್ಯವಿರುತ್ತದೆ.

ಜೈವಿಕ ಇಂಧನ ಜಾಗೃತಿ ಕುರಿತು ವಿಶ್ವದಾದ್ಯಂತ ಆಗಸ್ಟ್ 10 ರಂದು "ಅಂತಾರಾಷ್ಟ್ರೀಯ ಜೈವಿಕ ಇಂಧನ ದಿನ" ಆಚರಿಸಲಾಗುತ್ತಿದೆ. ರಾಜ್ಯದಲ್ಲಿ ಜೈವಿಕ ಇಂಧನ ಬಳಕೆ ಹಾಗೂ ಅಭಿವೃದ್ಧಿಗಾಗಿ ಎಲ್ಲಾ ಜಿಲ್ಲೆಗಳಲ್ಲಿ ವಿಶೇಷ ತಿಳುವಳಿಕೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಕ್ರಮ ಕೈಗೊಳ್ಳಬೇಕಿದೆ. ಇದಕ್ಕೆ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಮಾರ್ಗದರ್ಶನ ನೀಡುತ್ತದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಹಾಗೂ ಅರಣ್ಯ ಇಲಾಖೆಗಳ ಸಹಯೋಗದೊಂದಿಗೆ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯಕ್ರಮ ಕೈಗೊಳ್ಳಬೇಕಿದ್ದು, ಇದರ ಅಂಗವಾಗಿ ಪ್ರತಿ ವರ್ಷ ಆಗಸ್ಟ್ 10 ರಂದು ಈ ಕೆಳಗಿನ ಚಟುವಟಿಕೆಗಳನ್ನು ಕೈಗೊಳ್ಳುವ ಮೂಲಕ ಒಂದು ವಾರ ಜೈವಿಕ ಇಂಧನ ಸಪ್ತಾಹ ಆಚರಿಸತಕ್ಕದ್ದು.

1. ಜೈವಿಕ ಇಂಧನ ಸಸಿಗಳ ಪ್ರದರ್ಶನ, ಸಸಿ ನೆಡುವ ಕಾರ್ಯಕ್ರಮ, ಶಾಲಾ ಕಾಲೇಜುಗಳಲ್ಲಿ ಉಪನ್ಯಾಸ ಏರ್ಪಡಿಸುವುದು, ಕರಪತ್ರ ಹಂಚುವುದು, ಜೈವಿಕ ಇಂಧನ ಉಪಯೋಗ ಕುರಿತು ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಏರ್ಪಡಿಸುವುದು.
2. ಅರಣ್ಯ ಇಲಾಖೆಯಿಂದ ಹೊಂಗೆ, ಬೇವು ಹಿಪ್ಪೆ, ಸಿಮರೂಬ, ಸುರಹೊನ್ನೆ, ಇತ್ಯಾದಿ ಜೈವಿಕ ಇಂಧನ ಸಸಿಗಳ ವಿತರಣೆ, ಸರ್ಕಾರದ ಜೈವಿಕ ಇಂಧನ ಕಾರ್ಯಕ್ರಮಗಳ ಬಗ್ಗೆ ರೈತರಿಗೆ, ಸ್ವಯಂ/ಸೇವಾ ಸಂಸ್ಥೆಗಳಿಗೆ, ಮಹಿಳಾ ಸ್ವ-ಸಹಾಯ ಗುಂಪುಗಳಿಗೆ, ಅನುಷ್ಠಾನಾಧಿಕಾರಿಗಳಿಗೆ ಕಾರ್ಯಾಗಾರ ಏರ್ಪಡಿಸುವುದು.
3. ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಸೈಕಲ್ ಜಾಥಾ, ಭಿತ್ತಿಚಿತ್ರ ಮೆರವಣಿಗೆ ಹಾಗೂ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಜೈವಿಕ ಇಂಧನ (ಡೀಸೆಲ್) ಚಾಲಿತ ಬಸ್ಸಿನಿಂದ ನಗರ ಪ್ರದಕ್ಷಿಣೆ ಏರ್ಪಡಿಸುವುದು. ಪ್ರಚಾರಕ್ಕಾಗಿ ಅಗತ್ಯವಿರುವ ಬ್ಯಾನರ್ಸ್, ಬಂಟಿಂಗ್ಸ್, ಕರಪತ್ರ ಇತ್ಯಾದಿ ಪ್ರಚಾರ ಸಾಮಗ್ರಿಗಳನ್ನು ಮುದ್ರಿಸಿ ವಿತರಿಸುವುದು.

4. ಜೈವಿಕ ಇಂಧನ ಬಳಕೆ ಹಾಗೂ ಉಪಯೋಗ ಕುರಿತು ವಾರ್ತಾ ಮತ್ತು ಪ್ರಚಾರ ಇಲಾಖೆ, ದೂರದರ್ಶನ, ದಿನಪತ್ರಿಕೆಗಳ ಮೂಲಕ ಪ್ರಚಾರ ಕೈಗೊಳ್ಳುವುದು. ಈಗಾಗಲೇ ಜಿಲ್ಲೆಗಳಲ್ಲಿ ಲಭ್ಯವಿರುವ "ಹಸಿರು ಹೊನ್ನು" ಡಿವಿಡಿಯನ್ನು ಜಿಲ್ಲೆಗಳಲ್ಲಿ ವ್ಯಾಪಕವಾಗಿ ಪ್ರದರ್ಶಿಸುವುದು.
5. ಎಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಹಾಗೂ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರುಗಳ ಡೀಸೆಲ್ ಚಾಲಿತ ಸರ್ಕಾರಿ ವಾಹನಕ್ಕೆ (ಕನಿಷ್ಠ) 1 ಲೀಟರ್ ಜೈವಿಕ ಇಂಧನ ಉಪಯೋಗಿಸುವುದರೊಂದಿಗೆ ಆಚರಿಸುವುದು (ಕೋರಿಕೆ ಮೇರೆಗೆ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯಿಂದ ಜೈವಿಕ ಡೀಸೆಲ್ ಪೂರೈಸಲಾಗುವುದು)

ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ಜರುಗಿಸಿ, ಒಂದು ವಾರದವರೆಗೆ ರಾಜ್ಯದ ಎಲ್ಲಾ ತಾಲ್ಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಚರಣೆಗೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕ ಸಹಭಾಗಿತ್ವ, ಸ್ಥಳೀಯ ಗಣ್ಯರ ಸಹಯೋಗದೊಂದಿಗೆ ಜಾಗೃತಿ ಕಾರ್ಯ ಆಂದೋಲನದ ರೂಪಾದಿಯಲ್ಲಿ ಕೈಗೊಂಡು ಜೈವಿಕ ಇಂಧನ ಜನಪ್ರಿಯವಾಗುವಂತೆ ಮಾಡಲು ಕ್ರಮ ಕೈಗೊಳ್ಳಲು ಸೂಚಿಸಿದೆ.

ಎಸ್. ವಿ. ರಂಗನಾಥ್

ಪಿ.ಆರ್.1896 ಸರ್ಕಾರದ ಮುಖ್ಯಕಾರ್ಯದರ್ಶಿ,

INFRASTRUCTURE DEVELOPMENT SECRETARIAT

Sub : Engaging the services of MC & A as Branding and Communication Agency of Infrastructure Development Department.

Read : 1. Proposal from Managing Director, Marketing Consultants & Agencies Ltd. Bangalore dated 06-06-2011.
2. Notification No. FD 549 Exp. 12/11, dated 11-07-2011.

Preamble:

Marketing Consultants & Agencies Ltd., in their proposal dated : 06-06-2011 (referred to at (i) above) have stated that MC & A was incorporated in 1972 to serve as Marketing Consultancy & Advertising arm of the Government of Karnataka. Since then MC & A has maintained an impeccable track record of providing professional communication services to all the Government Departments, Government Undertakings and reputed organizations from the Private Sector. MC & A now has nearly four decades of experience in devising and executing communication strategies for a wide range of products and services.

They have also stated that MC & A offers a wide range of services all under one roof including the whole range of advertising, brand image building, media services, ideation and creative strategy, market studies, event planning and management etc. MC & A has formed a team of experienced professionals with capabilities to handle these services. MC&A with its unique understanding, insight and unmatched experience of working with the Government coupled with the expertise available would be able to provide the quality of service as expected by Infrastructure Development Department. For servicing the Infrastructure Development Department MC&A would be able to provide a core dedicated team of professionals supplemented by expert world class Brand Building. The expert consultants would be selected for this assignment after due approval from Infrastructure Development Department.

Finance Department have given exemption under column 4(g) of KTTP Act 1999 for utilizing MC&A's services till the Global Investors Meet 2012. MC&A will be paid Rs. 2.00 lakhs as "Consultancy Retainer Fee" (inclusive of all taxes). Hence the following order.

Government Order No. IDD 138 IDM 2011, Bangalore, Dated 28th July 2011.

The proposal of MC&A is examined in detail and the Government are pleased to accord sanction for engaging the services of MC&A Ltd. as Branding and Communication Agency of Infrastructure Development Department with a view to project various activities of the department before the Global Investors Meet 2012.

The services to be provided by MC&A are;

1. Development of a Branding Strategy.
2. Brand/Image Building – Vision and Implementation.
3. Ideation and Creative Design.
4. Electronic Media Projection – Radio/Television Advertisements, Films etc.
5. Website design, development and online marketing communications.
6. Event Management.

MC&A shall nominate the nodal officer to interact with the Government and also provide a core dedicated team of professionals with Expertise World Class Brand Building.

The services will be for a ;period from 01-08-2011 and till the closing date of Global Investors Meet 2012.

MC&A will be paid Consultancy Retainer Fee of Rs. 2.00 lakhs per month (inclusive of all taxes). The expenditure will be met out Head of Account "3451-00-090-1-06-059-Infrastructure Preliminary Studies – Other Expenditure" (plan) 2011-12.

The Managing Director, MC&A, Bangalore is authorized to draw this amount on a payees receipt duly counter signed by the Under Secretary to Govt., IDD from State Huzoor Treasury, Bangalore.

This order is issued in accordance with the delegation of powers to the PRS/Secy. To Govt. vide GO No. FD 01 TFP 2008, dated : 16-05-2008.

By Order and in the name of the Governor of Karnataka,

R. Shivalingaiah

PR. 1897

Under Secretary to Government,
Infrastructure Development Department

HORTICULTURE SECRETARIAT

Sub : "Scheme for Integrated Farming in Coconut for Productivity/Improvement with Coconut Development Board Assistance (100% CDB)" – Release of funds – reg.

Read : 1. Government Order No. HCD 108 HPP 2011 dated 12-05-2011.
2. Government Order No. HCD 100 HPP 2011 dated 13-05-2011.
3. CDB letter No. 505/2006-DEV (Karnataka) dated 16-06-2011.
4. CDB letter No. 505/2006-DEV (Karnataka) dated 30-06-2011.
5. Letter of Director of Horticulture No. ತೋಇ/ತೋಬೆ/ಸತೋಅ–2/03/2011–2012 dated 16-07-2011.

Preamble:

(ಸಿ) ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್ ಮತ್ತು ಲೋಯರ್ ವಿಷಯಗಳ ಪರೀಕ್ಷೆಯಲ್ಲಿ " ಉದ್ಯೋಗ ಮತ್ತು ತರಬೇತಿ ಮಹಾ ನಿರ್ದೇಶನಾಲಯ ನವದೆಹಲಿ ಇವರು ಪ್ರಕಟಿಸಿರುವ **ಎಂಪ್ಲಾಯ್‌ಮೆಂಟ್ ಸರ್ವೀಸ್ ಮ್ಯಾನ್ಯುಯಲ್**" ಪುಸ್ತಕವನ್ನು ಉಪಯೋಗಿಸಲು ಅನುಮತಿ ನೀಡಲಾಗಿದೆ.

8. **ಈ ಕೆಳಕಂಡ ಪರೀಕ್ಷೆಗಳನ್ನು ಬೆಂಗಳೂರು ಕೇಂದ್ರದಲ್ಲಿ ಮಾತ್ರವೇ ನಡೆಸಲಾಗುವುದು:**

ಕ್ರಮ ಸಂಖ್ಯೆ	ವಿಷಯ	ವಿಷಯ ಸಂಕೇತ
1	ಖಜಾನೆ ಅಕೌಂಟ್ಸ್.	64, 65
2	ಸಬಾರ್ಡಿನೇಟ್ ಅಕೌಂಟ್ಸ್ ಸರ್ವೀಸ್.	61, 62, 63
3	ಎಲೆಕ್ಟ್ರಿಸಿಟಿ	66, 67, 68, 70
4	ಅಖಿಲ ಭಾರತಸೇವಾ (ಐಎಎಸ್, ಐಪಿಎಸ್ ಮತ್ತು ಐಎಫ್‌ಎಸ್) ಅಧಿಕಾರಿಗಳಿಗೆ ಕನ್ನಡ ಭಾಷಾ ಪರೀಕ್ಷೆಗಳು.	72
5	ಸಚಿವಾಲಯದ ಕೈಪಿಡಿ ಪರೀಕ್ಷೆ.	54, 55
6	ಭಾಷಾಂತರ ಇಲಾಖೆಯ ಭಾಷಾಂತರ ಪರೀಕ್ಷೆ .	58
7	ಭಾರತದ ಕರಾರು ಅಧಿನಿಯಮ.	51
8	ವಿಶೇಷ ಕಾನೂನು ಮತ್ತು ಸೇವಾ ಪರೀಕ್ಷೆಗಳು.	56
9	ಕರ್ನಾಟಕ ಲೋಕಸೇವಾ ಆಯೋಗದ ಕೈಪಿಡಿ.	52
10	ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ನಿಯಮಗಳ ಪರೀಕ್ಷೆಗಳು.	53
11	ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯೂನಲ್.	71

(1) ಸಬಾರ್ಡಿನೇಟ್ ಅಕೌಂಟ್ಸ್ ಸೇವಾ(ಎಸ್.ಎ.ಎಸ್) ಪರೀಕ್ಷೆಗಳನ್ನು ತೆಗೆದುಕೊಳ್ಳಬೇಕಾಗುವ ನೌಕರರು ಪ್ರಥಮ ದರ್ಜೆ/ದ್ವಿತೀಯ ದರ್ಜೆ ಸಹಾಯಕರಾಗಿದ್ದಲ್ಲಿ ಅವರು ಸೇವೆಗೆ ನೇಮಕಗೊಂಡ ದಿನಾಂಕದಿಂದ ಪ್ರಥಮ ದರ್ಜೆ ಸಹಾಯಕರಾಗಿ ಮೂರು ವರ್ಷಗಳಿಗಿಂತ ಕಡಿಮೆ ಇರದ ಅಥವಾ ದ್ವಿತೀಯ ದರ್ಜೆ ಸಹಾಯಕರಾಗಿ ಆರು ವರ್ಷಗಳಿಗಿಂತ ಕಡಿಮೆ ಇರದ ಅವಧಿಯ ಸೇವೆ ಸಲ್ಲಿಸಿದ್ದು ಅಕೌಂಟ್ಸ್ ಹೈಯರ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕಡ್ಡಾಯವಾಗಿ ತೇರ್ಗಡೆಯಾಗಿದ್ದಲ್ಲಿಮಾತ್ರ ಸದರಿ ಪರೀಕ್ಷೆಗೆ ಕುಳಿತುಕೊಳ್ಳಲು ಅರ್ಹರಾಗಿರುತ್ತಾರೆ. ಅಂತಹ ಅಭ್ಯರ್ಥಿಗಳು ಅವರ ಸೇವಾ ಅವಧಿಯನ್ನು ಮತ್ತು ಅಕೌಂಟ್ಸ್ ಹೈಯರ್ ಅಥವಾ ತತ್ಸಮಾನ

ಪರೀಕ್ಷೆಯಲ್ಲಿ ತೇರ್ಗಡೆಯಾದ ಬಗ್ಗೆ ವಿವರಗಳನ್ನು ಆನ್‌ಲೈನ್ ಅರ್ಜಿಯ ಸಂಬಂಧಿಸಿದ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು.

(2) ಆಯೋಗದ ಆದೇಶ ಸಂಖ್ಯೆ ಇ.ಪ(2)3774/94–95/ಪಿಎಸ್‌ಸಿ ದಿನಾಂಕ 18ನೇ, ಫೆಬ್ರವರಿ 1995ರ ಮೇರೆಗೆ ಬ್ಯಾಟರಿ ಚಾಲಿತ ಪ್ರೋಗ್ರಾಮ್ ಮಾಡದೆ ಇರುವಂತಹ ಕ್ಯಾಲುಕ್ಯುಲೇಟರ್‌ಗಳನ್ನು ಎಸ್.ಎ.ಎಸ್ ಪರೀಕ್ಷೆಗಳಲ್ಲಿ ಉಪಯೋಗಿಸಲು ಅಭ್ಯರ್ಥಿಗಳಿಗೆ ಅನುಮತಿ ನೀಡಲಾಗಿದೆ.

9. ಉಳಿದಂತೆ ಇತರೆ ಪರೀಕ್ಷೆಗಳು ಈ ಕೆಳಕಂಡ ಜಿಲ್ಲಾ ಕೇಂದ್ರಗಳಲ್ಲಿ ನಡೆಯಲಿದ್ದು, ಜಿಲ್ಲಾ ಸಂಕೇತ ಸಂಖ್ಯೆಗಳನ್ನು ಅವುಗಳ ಎದುರಿಗೆ ನೀಡಿದೆ. **ಈ ಸಂಕೇತ ಸಂಖ್ಯೆಗಳನ್ನು ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು:–**

ಜಿಲ್ಲೆ	ಸಂಕೇತ	ಜಿಲ್ಲೆ	ಸಂಕೇತ
ಬೆಂಗಳೂರು	01	ಕಾರವಾರ	17
ಬೆಳಗಾವಿ	02	ಕೋಲಾರ	18
ಬಳ್ಳಾರಿ	03	ಕೊಪ್ಪಳ	19
ಬೀದರ್	04	ಮಂಡ್ಯ	20
ಬಿಜಾಪುರ	05	ಮಂಗಳೂರು	21
ಬಾಗಲಕೋಟೆ	06	ಮಡಿಕೇರಿ	22
ಚಾಮರಾಜನಗರ	07	ಮೈಸೂರು	23
ಚಿಕ್ಕಬಳ್ಳಾಪುರ	08	ರಾಮನಗರ	24
ಚಿಕ್ಕಮಗಳೂರು	09	ರಾಯಚೂರು	25
ಚಿತ್ರದುರ್ಗ	10	ಶಿವಮೊಗ್ಗ	26
ಧಾರವಾಡ	11	ತುಮಕೂರು	27
ದಾವಣಗೆರೆ	12	ಉಡುಪಿ	28
ಗುಲ್ಬರ್ಗಾ	13	ನವದೆಹಲಿ	29
ಗದಗ	14	ಮಸ್ಕಿ	30
ಹಾಸನ	15	ಯಾದಗಿರಿ	31
ಹಾವೇರಿ	16		

10. **ಪರೀಕ್ಷಾ ಕೇಂದ್ರಗಳು:** ಪ್ರತಿಯೊಬ್ಬ ಅಭ್ಯರ್ಥಿಯು ಪ್ರಸ್ತುತ ಆತನು ಕೆಲಸ ಮಾಡುತ್ತಿರುವ ಜಿಲ್ಲಾ ಕೇಂದ್ರದಲ್ಲಿಯೇ ಪರೀಕ್ಷೆಗೆ ಕುಳಿತುಕೊಳ್ಳತಕ್ಕದ್ದು. ಆದರೆ, ಯಾವುದೇ ಒಬ್ಬ ಅಭ್ಯರ್ಥಿಯು ಅನಂತರ ಇತರ ಕೇಂದ್ರಕ್ಕೆ ವರ್ಗಾವಣೆಯಾದಲ್ಲಿ ಅಥವಾ ಅವನು ತನ್ನ ಕೇಂದ್ರ ಕಾರ್ಯಸ್ಥಾನದ ಹೊರಗೆ ಗಳಿಕೆ ರಜೆಯ ಮೇಲಿರುವುದು ಮುಂತಾದ ನಿರ್ದಿಷ್ಟ ವಿಶೇಷ ಕಾರಣಗಳಿದ್ದಲ್ಲಿ ಅಂತಹ ಅಭ್ಯರ್ಥಿಗಳು ಈ ಬಗ್ಗೆ ಲಿಖಿತ ರೂಪದಲ್ಲಿ ಆಯೋಗದ ಗಮನಕ್ಕೆ ತರತಕ್ಕದ್ದು, ಹಾಗೂ ಸಂಬಂಧಿಸಿದ ಮಾಹಿತಿ/ದಾಖಲೆಗಳನ್ನು ಒದಗಿಸತಕ್ಕದ್ದು. ಆಯೋಗವು ಅಂತಹ ಅಭ್ಯರ್ಥಿಗಳಿಗೆ ಬೇರೆ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗುವುದಕ್ಕೆ ಕ್ರಮತೆಗೆದುಕೊಳ್ಳಲಾಗುವುದು. ಆದಾಗ್ಯೂ ಆಯೋಗದ ನಿರ್ದಿಷ್ಟ ಅನುಮತಿ ಇಲ್ಲದೆ ಅಭ್ಯರ್ಥಿಗಳು ಬೇರೆ ಕೇಂದ್ರದಲ್ಲಿ ಪರೀಕ್ಷೆಗಳನ್ನು ತೆಗೆದುಕೊಳ್ಳುವಂತಿಲ್ಲ. ಆ ರೀತಿ ಮಾಡಿದ ಅಭ್ಯರ್ಥಿಗಳು ಆಯೋಗ ತೆಗೆದುಕೊಳ್ಳುವ ಕ್ರಮಕ್ಕೆ ಹೊಣೆಯಾಗುವರು.

11. ಪರೀಕ್ಷಾ ಕೇಂದ್ರದ ಬದಲಾವಣೆ:

ಪರೀಕ್ಷಾ ಕೇಂದ್ರದ ಬದಲಾವಣೆಗೆ ಸಲ್ಲಿಸುವ ಕೋರಿಕೆಗಳನ್ನು ಪರೀಕ್ಷೆ ಪ್ರಾರಂಭವಾಗುವ ಕನಿಷ್ಠ 15 ದಿನಗಳ ಮೊದಲು ಸಲ್ಲಿಸತಕ್ಕದ್ದು. ಆ ದಿನಾಂಕದ ತರುವಾಯ ಸಲ್ಲಿಸಲ್ಪಡುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಧಿಕೃತ ಕಾರಣಗಳ ಮೇಲೆ ಕೇಂದ್ರ ಬದಲಾವಣೆಗೆ ಅರ್ಜಿ ಸಲ್ಲಿಸುವ ನೌಕರರು ವರ್ಗಾವಣೆಯ ಅಥವಾ ಸ್ಥಳ ನಿಯುಕ್ತಿಯ ಆದೇಶಗಳ ದೃಢೀಕೃತ ನಕಲನ್ನು ಅಥವಾ ಸಂದರ್ಭಾನುಸಾರ ಗಳಿಕೆರಜೆ ಮಂಜೂರು ಮಾಡಲಾದ ಅಧಿಕೃತ ಜ್ಞಾಪನಪತ್ರದ ದೃಢೀಕೃತ ನಕಲಿನೊಂದಿಗೆ ಆ ಬಗ್ಗೆ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು. ಸ್ವವಿಳಾಸ ಬರೆದ ಹಾಗೂ ಅವಶ್ಯಕ ಅಂಚೆಚೀಟಿ ಹಚ್ಚಲಾದ ಲಕೋಟೆಯನ್ನು ಪತ್ರ ವ್ಯವಹಾರಕ್ಕಾಗಿ ಲಗತ್ತಿಸತಕ್ಕದ್ದು. (ರಿಜಿಸ್ಟರ್ಡ್ ಅಂಚೆಯಲ್ಲಿ ಕಳುಹಿಸಬೇಕಾದರೆ ಅದಕ್ಕೆ ತಗಲುವ ಮೊತ್ತದ ಅಂಚೆಚೀಟಿ ಹಚ್ಚಿರಬೇಕು). ಆದಾಗ್ಯೂ ಆಯೋಗದಿಂದ ನಿರ್ದಿಷ್ಟ ಅನುಮತಿ ಇಲ್ಲದೆ ಬೇರೆ ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ತೆಗೆದುಕೊಳ್ಳಬಾರದು.

ಎ) ವಿವರಣಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಸೇವಾ ಪರೀಕ್ಷೆಗಳನ್ನು ಆಂಗ್ಲಭಾಷೆಯಲ್ಲಿ ಅಥವಾ ಕನ್ನಡದಲ್ಲಿ ಉತ್ತರಿಸಲು ಅನುಮತಿಸಲಾಗುವುದು.

ಬಿ) ಅಭ್ಯರ್ಥಿಯು ಉತ್ತರಗಳನ್ನು ಬರೆಯಲು ಆಂಗ್ಲ ಅಥವಾ ಕನ್ನಡದ ಯಾವುದೇ ಒಂದು ಮಾಧ್ಯಮವನ್ನು ಮಾತ್ರ ಆಯ್ಕೆ ಮಾಡಿಕೊಳ್ಳತಕ್ಕದ್ದು. ಅರ್ಧ ಆಂಗ್ಲಭಾಷೆಯಲ್ಲಿ ಮತ್ತು ಅರ್ಧ ಕನ್ನಡದಲ್ಲಿ ಉತ್ತರಿಸಿದಲ್ಲಿ ಅಂತಹ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ.

12. ವಿನಾಯಿತಿ ಪಡೆದ ಬಗ್ಗೆ ನಮೂದಿಸುವುದು:

ಅಭ್ಯರ್ಥಿಗಳು ಪ್ರಸ್ತುತ ಅರ್ಜಿಸಲ್ಲಿಸಿರುವ ವಿಷಯಗಳಲ್ಲಿನ ಯಾವುದಾದರೂ ಪತ್ರಿಕೆಯಲ್ಲಿ ಹಿಂದಿನ ಎರಡು ವರ್ಷಗಳ ಅವಧಿಯೊಳಗಿನ ಅಧಿವೇಶನಗಳಲ್ಲಿ ಫಲಿತಾಂಶ ಪ್ರಕಟಗೊಂಡ ದಿನಾಂಕದಿಂದ ಶೇಕಡ 60ಕ್ಕಿಂತ ಹೆಚ್ಚು ಅಂಕಗಳಿಸಿ ವಿನಾಯಿತಿ ಹೊಂದಿದ್ದಲ್ಲಿ ಮಾತ್ರ ಆ ಪತ್ರಿಕೆಗೆ ವಿನಾಯಿತಿ ಪಡೆಯಲು ಅರ್ಹರಾಗುತ್ತಾರೆ. ಅವರು ವಿನಾಯಿತಿ ಪಡೆದ ವಿಷಯ, ವಿಷಯಸಂಕೇತ, ಪತ್ರಿಕೆ, ನೋಂದಣಿ ಸಂಖ್ಯೆ, ಅಧಿವೇಶನ ಮತ್ತು ಪರೀಕ್ಷಾಕೇಂದ್ರ ಇತ್ಯಾದಿಗಳನ್ನು **ಆನ್‌ಲೈನ್ ಅರ್ಜಿಯಲ್ಲಿ ನಿಗದಿಪಡಿಸಿದ ಅಂಕಣದಲ್ಲಿ** ನಿರ್ದಿಷ್ಟವಾಗಿ ನಮೂದಿಸಬೇಕು. ಇಲ್ಲವಾದಲ್ಲಿ ಫಲಿತಾಂಶವನ್ನು ಸಿದ್ಧಪಡಿಸುವಾಗ ಹಿಂದೆ ಪಡೆದ ವಿನಾಯಿತಿಯನ್ನು ಪರಿಗಣಿಸಲಾಗುವುದಿಲ್ಲ. ಕನ್ನಡಭಾಷಾ ಪರೀಕ್ಷೆ ಪತ್ರಿಕೆ–1 ಮತ್ತು ಪತ್ರಿಕೆ–2 ರಲ್ಲಿ ವಿನಾಯಿತಿ ಪಡೆದಿದ್ದಲ್ಲಿ ಮೌಖಿಕ ಸಂದರ್ಶನಕ್ಕೆ ಹಾಜರಾಗಲು, ಸದರಿ ಅಧಿವೇಶನಕ್ಕೆ ಅರ್ಜಿ ಸಲ್ಲಿಸಿ ವಿನಾಯಿತಿ ಪಡೆದ ಬಗ್ಗೆ ವಿವರಗಳನ್ನು ಆನ್‌ಲೈನ್ ಅರ್ಜಿಯ ಸಂಬಂಧಿಸಿದ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸಬೇಕು. ಹಾಗೂ ನಿಗದಿತ **ಪರೀಕ್ಷಾ ಶುಲ್ಕ ರೂ. 100/–**ಗಳನ್ನು ಪಾವತಿಸಬೇಕು ಇಲ್ಲದಿದ್ದಲ್ಲಿ ವಿನಾಯಿತಿಯನ್ನು ಪರಿಗಣಿಸುವುದಿಲ್ಲ.

13. ವಿನಾಯಿತಿ:

ಎ) ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾಲಯದ ಎಲ್.ಎಲ್.ಬಿ., ಅಥವಾ ಬಿ.ಎಲ್ ಪದವಿ ಪಡೆದಂತಹ ಕಾನೂನು ಪದವೀಧರರಿಗೆ ಜನರಲ್ ಲಾ ಭಾಗ–1ರ ಪತ್ರಿಕೆ–(1) ಕ್ಕೂ ಮತ್ತು ಜನರಲ್ ಲಾ ಭಾಗ–2 ಕ್ಕೂ ಹಾಗೂ ಬಿ.ಕಾಂ. ಅಥವಾ ಐ.ಕಾಂ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಯಲ್ ಅಕೌಂಟೆನ್ಸಿ ವಿಷಯದಲ್ಲಿ ತೇರ್ಗಡೆಯಾದವರಿಗೆ ಕಮರ್ಷಿಯಲ್ ಟ್ಯಾಕ್ಸ್ ಹೈಯರ್ ವಿಷಯದ ಪತ್ರಿಕೆ–3ಕ್ಕೂ, ಕೋ–ಆಪರೇಷನ್ ವಿಷಯದ ಪತ್ರಿಕೆ–2ಕ್ಕೂ ಹಾಗೂ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಷಿಯಲ್ ಅಕೌಂಟೆನ್ಸಿ ಓದಿ ಬಿ.ಕಾಂ., ಬಿ.ಬಿ.ಎಂ. ಅಥವಾ ತತ್ಸಮಾನ ಪದವಿ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಕೋ–ಆಪರೇಟಿವ್ ಆಡಿಟ್ ಪರೀಕ್ಷೆಯ 2ನೇ ಪತ್ರಿಕೆಗೆ ವಿನಾಯಿತಿ ಇದೆ. ಹಾಗೆಯೇ ಅಡ್ವಾನ್ಸ್‌ಡ್ ಅಕೌಂಟೆನ್ಸಿ ಅಥವಾ ಫೈನಾನ್ಸಿಷಿಯಲ್ ಅಕೌಂಟೆನ್ಸಿ ವಿಷಯವನ್ನು ಓದಿರುವ ಬಿ.ಕಾಂ. ಪದವೀಧರರಿಗೆ ಎಸ್.ಎ.ಎಸ್. ಭಾಗ–3ರ ಪತ್ರಿಕೆ–1 ಕ್ಕೂ ಹಾಗೂ ಟ್ರೆಜರಿ ಅಕೌಂಟ್ಸ್ ಭಾಗ–2ರ ಪತ್ರಿಕೆ–1ಕ್ಕೂ ವಿನಾಯಿತಿ ಇರುತ್ತದೆ. ವಿನಾಯಿತಿ ಕೋರುವ ಅಭ್ಯರ್ಥಿಗಳು ಈ ತತ್ಸಂಬಂಧ ವಿಷಯಗಳನ್ನು ಅಭ್ಯಸಿಸಿದ್ದ ಬಗ್ಗೆ ಬಿ.ಕಾಂ., ಎಲ್.ಎಲ್.ಬಿ. ಅಥವಾ ತತ್ಸಮಾನ ಪದವಿಯ ದೃಢೀಕೃತ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರಗಳನ್ನು ಆಯೋಗದ ಕಛೇರಿಗೆ ರವಾನಿಸತಕ್ಕದ್ದು. ಸದರಿ ಪ್ರಮಾಣ ಪತ್ರಗಳನ್ನು ರವಾನಿಸುವ ಪತ್ರದಲ್ಲಿ ಅಭ್ಯರ್ಥಿಯು ಆನ್‌ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯ **ID (Applicaton ID)** ಯನ್ನು ಮತ್ತು ಆಯ್ದುಕೊಂಡ ಪರೀಕ್ಷಾಕೇಂದ್ರವನ್ನು ಉಲ್ಲೇಖಿಸತಕ್ಕದ್ದು. ಆನ್‌ಲೈನ್ ಅರ್ಜಿಗೆ ಸಂಬಂಧಿಸಿದ ಅಂಕಣದಲ್ಲಿ ಅಭ್ಯರ್ಥಿಯು ಪಡೆದಿರುವ ಪದವಿಯ ಬಗ್ಗೆ ಕಡ್ಡಾಯವಾಗಿ ನಮೂದಿಸತಕ್ಕದ್ದು. ತಪ್ಪಿದಲ್ಲಿ ಅಂತಹ ವಿನಾಯಿತಿಗಳನ್ನು ಪರಿಗಣಿಸಲಾಗುವುದಿಲ್ಲ.

(ಬಿ) Karnataka Civil Services (Service and Kannada Language Examinations) Rules, 1974

(1) A Government servant who has passed-

(a) the Secondary School Leaving Certificate Examination or any examination declared as equivalent thereto by the State Government, or any examination higher than the Secondary School Leaving Certificate Examination,

(i) in which the question papers on different subjects are answered in Kannada Language; or

(ii) in which Kannada is the main language, Second Language or an optional subject, but not one of the subject in a composite paper ,or

(aa) Diploma Course/Certificate Course in Kannada conducted by a University established by Law in India, or " Kavya", " Jana" or "Rathna" examinations conducted by Kannada Sahitya Parishat.

(ab) Correspondence course in Kannada conducted by the Central Institute of Indian Languages, Mysore.

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 3 ಸೆಸೆನಿ 2010, ಬೆಂಗಳೂರು, ದಿನಾಂಕ:02–02–2011.

"(ಎಸಿ) ಕರ್ನಾಟಕ ಸಿವಿಲ್ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006ರಲ್ಲಿ ನಿಗದಿಪಡಿಸಿರುವಂತೆ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಗೆ, ಆಯ್ಕೆ ಪರೀಕ್ಷೆಯ ಒಂದು ಭಾಗವಾಗಿ ಲೋಕಸೇವಾ ಆಯೋಗ ಅಥವಾ ಇತರೆ ಯಾವುದೇ ಆಯ್ಕೆ ಪ್ರಾಧಿಕಾರ ನಡೆಸುವ ಕನ್ನಡಭಾಷಾ ಪರೀಕ್ಷೆ".

(b) any examination specified in Schedule III as equivalent to the Kannada Language Examination, or who has won a prize in Kannada essay competition conducted by any University established by law, shall on obtaining a cetificate of exemption under sub-rule (5) be deemed to have passed the Kannada Language Examination under these rules.

(ಸಿ) ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 76, ದಿನಾಂಕ 10ನೇ ಜನವರಿ 1987ರ ಅನುಸಾರವಾಗಿ ಸರ್ಕಾರಿ ಆದೇಶ ಸಂಖ್ಯೆ 649 ಇಎನ್ ಟಿ 57, ದಿನಾಂಕ 23ನೇ/25ನೇ ಫೆಬ್ರವರಿ 1959ರ ಅನುಸಾರವಾಗಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯಿಂದ ನಡೆಸಲಾದ ಅರಣ್ಯ ಇಲಾಖಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಅರಣ್ಯ ಪರೀಕ್ಷೆಯ ಪತ್ರಿಕೆ–2 ರಲ್ಲಿ ತೇರ್ಗಡೆಯಾಗುವುದರಿಂದ ವಿನಾಯಿತಿ ನೀಡಲಾಗಿದೆ.

(ಡಿ) ಯಾವುದೇ ಪರೀಕ್ಷೆಯು ಒಂದಕ್ಕಿಂತ ಹೆಚ್ಚು ಪತ್ರಿಕೆಗಳನ್ನೊಳಗೊಂಡಿದ್ದು ಅಭ್ಯರ್ಥಿಯು ಆ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೂ ಅದೇ ವಿಷಯದ ಯಾವುದಾದರೂ ಪತ್ರಿಕೆಗಳಲ್ಲಿ ಆ ಪತ್ರಿಕೆಗೆ ನಿರ್ದಿಷ್ಟಪಡಿಸಲಾದ ಗರಿಷ್ಟ ಅಂಕಗಳಲ್ಲಿ ಶೇಕಡಾ 60ಕ್ಕಿಂತ ಕಡಿಮೆ ಇರದಷ್ಟು ಅಂಕಗಳನ್ನು ಪಡೆದಿದ್ದಲ್ಲಿ ಅಂತಹವರನ್ನು ಆ ಪತ್ರಿಕೆಯಲ್ಲಿ ವಿನಾಯಿತಿ ಹೊಂದಿರುವರೆಂದು ಪರಿಗಣಿಸಲಾಗುವುದು. ಅಂತಹವರು ನಿಯಾಮಾನುಸಾರ ಪರೀಕ್ಷೆಗಳ ಫಲಿತಾಂಶ ಘೋಷಿಸಿದ ದಿನಾಂಕದಿಂದ ಎರಡು ವರ್ಷಗಳೊಳಗೆ ಆ ಪರೀಕ್ಷೆಯ ಉಳಿದ ಪತ್ರಿಕೆಗಳಲ್ಲಿ ತೇರ್ಗಡೆಯಾಗಲು ಅವಶ್ಯವಿರುವಷ್ಟು ಅಂಕಗಳನ್ನು ಪಡೆದು ತೇರ್ಗಡೆಯಾಗತಕ್ಕದು. ಇಲ್ಲದಿದ್ದಲ್ಲಿ ಅಂತಹ ವಿನಾಯ್ತಿಯು ರದ್ದಾಗುವುದು.

14. ಪ್ರವೇಶ ಪತ್ರ:

ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸುತ್ತಿರುವುದರಿಂದ ಪ್ರವೇಶಪತ್ರಗಳನ್ನು ಅಂಚೆ ಮೂಲಕ ಕಳುಹಿಸಲಾಗುವುದಿಲ್ಲ.

ವೇಳಾ ಪಟ್ಟಿಯನ್ನೊಳಗೊಂಡ ಪ್ರವೇಶಪತ್ರವನ್ನು ಪರೀಕ್ಷೆಗೆ ಮೊದಲು ಆಯೋಗದ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗುತ್ತದೆ. ಅಭ್ಯರ್ಥಿಗಳು ಪ್ರವೇಶಪತ್ರಗಳನ್ನು **Down load** ಮಾಡಿಕೊಂಡು ನಿಗದಿತ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ವೇಳೆಯಲ್ಲಿ ಪ್ರವೇಶಪತ್ರವನ್ನು ಹಾಜರುಪಡಿಸತಕ್ಕದ್ದು. ಸದರಿ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳು ಜೋಪಾನವಾಗಿಟ್ಟಿರಬೇಕು ಮತ್ತು ಅವುಗಳನ್ನು ತಮ್ಮ ಸೇವಾ ದಾಖಲೆಗಳಲ್ಲಿ ನಮೂದು ಮಾಡುವುದಕ್ಕಾಗಿ ಆಯೋಗದಿಂದ ನೀಡಲಾದ ತೇರ್ಗಡೆ ಪ್ರಮಾಣ ಪತ್ರದೊಂದಿಗೆ ಸಕ್ಷಮ ಪ್ರಾಧಿಕಾರಿಯ ಮುಂದೆ ಹಾಜರುಪಡಿಸತಕ್ಕದ್ದು. ಯಾವುದೇ ಸಂದರ್ಭದಲ್ಲಿ ಪರೀಕ್ಷೆಗಳು ಮುಗಿದ ನಂತರ ಪ್ರವೇಶ ಪತ್ರದ ನಕಲನ್ನು ನೀಡಲಾಗುವುದಿಲ್ಲ.

15. ಪಠ್ಯಪುಸ್ತಕಗಳು:

ಪಠ್ಯಪುಸ್ತಕಗಳನ್ನು ಉಪಯೋಗಿಸಿ ಪರೀಕ್ಷೆ ಬರೆಯಬಹುದಾದ ಪತ್ರಿಕೆಗಳಿಗೆ ಅಭ್ಯರ್ಥಿಗಳು ಸರ್ಕಾರದಿಂದ ಪ್ರಕಾಶಿಸಲ್ಪಟ್ಟ ಪಠ್ಯಪುಸ್ತಕಗಳನ್ನು ಮತ್ತು ಖಾಸಗಿ ಪ್ರಕಾಶಕರಿಂದ ಪ್ರಕಾಶಿಸಲ್ಪಟ್ಟ ಪುಸ್ತಕಗಳನ್ನು ಸರ್ಕಾರಿ ಪ್ರಕಾಶಿತ ಪುಸ್ತಕಗಳ ಮಾದರಿಗೆ ಯಾವುದೇ ರೀತಿಯ ತದ್ವಿರುದ್ಧವಾಗಿಲ್ಲದಿದ್ದರೆ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ 3ನೇ ಡಿಸೆಂಬರ್ 1991ರ ಆದೇಶಕ್ಕೆ ಅನುಗುಣವಾಗಿದ್ದರೆ ಅಂತಹ ಪಠ್ಯ ಪುಸ್ತಕಗಳನ್ನು ಮಾತ್ರ ಪರೀಕ್ಷಾ ಕೇಂದ್ರಗಳಲ್ಲಿ ಉಪಯೋಗಿಸಬಹುದಾಗಿರುತ್ತದೆ. ಇತರೇ ಯಾವುದೇ ಖಾಸಗಿ ಪ್ರಕಾಶಕರ ಗೈಡ್‌ಗಳನ್ನು ನಿಷೇಧಿಸಲಾಗಿದೆ.

16. ತೇರ್ಗಡೆಗೆ ಗಳಿಸಬೇಕಾದ ಅಂಕಗಳು:

ಎ) ಯಾವುದೇ ಸೇವಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಲು ಒಂದು ಪತ್ರಿಕೆಯ ಪರೀಕ್ಷೆಗೆ ಕನಿಷ್ಠ ಶೇಕಡ 40 ಅಂಕಗಳನ್ನು ಪಡೆದಿರಬೇಕು. ಒಂದಕ್ಕಿಂತ ಹೆಚ್ಚು ಪತ್ರಿಕೆಗಳಿದ್ದಲ್ಲಿ ಪ್ರತಿ ಪತ್ರಿಕೆಯಲ್ಲಿ ಕನಿಷ್ಠ ಶೇಕಡಾ 35 ಮತ್ತು ಒಟ್ಟು ಎಲ್ಲಾ ಪತ್ರಿಕೆಗಳಿಂದ ಕನಿಷ್ಠ ಶೇಕಡಾ 40 ಅಂಕಗಳನ್ನು ಪಡೆದಿರಬೇಕು. ವಿನಾಯಿತಿ ಕೋರಿದ ಬಿ.ಕಾಂ., ಬಿ.ಬಿ.ಎಂ., ಹಾಗೂ ಕಾನೂನು ಪದವೀಧರರು, ಹಾಜರಾಗುವ ವಿಷಯದ ಪ್ರತಿ ಪತ್ರಿಕೆಗಳಲ್ಲಿ ಕನಿಷ್ಠ ಶೇಕಡ 35 ಅಂಕಗಳನ್ನು ಹಾಗೂ ಪ್ರತಿ ವಿಷಯದ ಎಲ್ಲಾ ಪತ್ರಿಕೆಗಳ ಸರಾಸರಿ 40 ಅಂಕಗಳನ್ನು ಗಳಿಸಿರಬೇಕು.

ಬಿ) ಯಾವುದೇ ಪರೀಕ್ಷೆಯಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳಲ್ಲಿ ಶೇಕಡ 60ಕ್ಕಿಂತ ಕಡಿಮೆ ಇರದಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾದಂತಹ ಅಭ್ಯರ್ಥಿಗಳನ್ನು ಪ್ರಥಮ ದರ್ಜೆ ಯಲ್ಲಿ ಉತ್ತೀರ್ಣರಾಗಿರುವುದಾಗಿ ಫಲಿತಾಂಶ ಘೋಷಿಸಲಾಗುವುದು.

17. ಹಾಜರಿ ಪ್ರಮಾಣ ಪತ್ರಗಳು:

ಪರೀಕ್ಷೆಗೆ ಹಾಜರಾದ ಬಗ್ಗೆ ಹಾಜರಾತಿ ಪ್ರಮಾಣಪತ್ರ ಪಡೆಯಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಪರೀಕ್ಷಾಕೇಂದ್ರದ ಮೇಲ್ವಿಚಾರಕರಿಂದ ಅದನ್ನು ಪರೀಕ್ಷಾ ದಿನದಂದೇ ಪಡೆಯತಕ್ಕದ್ದು. ಹಾಜರಿ ಪ್ರಮಾಣಪತ್ರವನ್ನು ಆಯೋಗದ ಕಛೇರಿಯಿಂದ ಯಾವುದೇ ಸಂದರ್ಭದಲ್ಲೂ ನೀಡಲಾಗುವುದಿಲ್ಲ.

18. ಕನ್ನಡಭಾಷಾ ಲಿಖಿತ ಪರೀಕ್ಷೆಗೆ ಮೌಖಿಕ ಪರೀಕ್ಷೆ:

(1) ಕನ್ನಡ ಭಾಷಾ ವಿಷಯದ ಲಿಖಿತ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯನ್ನು ಆಯೋಗದ ಕೇಂದ್ರಕಛೇರಿ, ಉದ್ಯೋಗ ಸೌಧ, ಪಾರ್ಕ್‌ಹೌಸ್, ಬೆಂಗಳೂರು–560001 ಇಲ್ಲಿ ಹಾಗೂ ಆಯೋಗದ ಪ್ರಾಂತೀಯ ಕಛೇರಿಗಳಾದ ಬೆಳಗಾಂ, ಗುಲ್ಬರ್ಗಾ, ಮೈಸೂರು ಹಾಗೂ ಶಿವಮೊಗ್ಗ ಕೇಂದ್ರಗಳಲ್ಲಿ ನಡೆಸಲಾಗುವುದು ಹಾಗೂ ಆಯೋಗದ ತೀರ್ಮಾನದಂತೆ ಇತರೆ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಗುವುದು.

<u>ಸೂಚನೆ:</u> (1) ಯಾವುದೇ ಸರ್ಕಾರಿ ನೌಕರನು/ನೌಕರಳು ಕನ್ನಡಭಾಷಾ ಲಿಖಿತ ಪರೀಕ್ಷೆಯಲ್ಲಿ ತೇರ್ಗಡೆಯಾಗದ ಹೊರತು ಕನ್ನಡ ಮೌಖಿಕ ಪರೀಕ್ಷೆಗೆ ಅರ್ಹರಾಗುವುದಿಲ್ಲ.

(2) ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 81 ಎಸ್‌ಎಸ್‌ಆರ್ 81, ದಿನಾಂಕ 6ನೇ ಜೂನ್ 1981ರ ಮೇರೆಗೆ ಗೃಹರಕ್ಷಕ ಸಂಸ್ಥೆಯ ಸೈನಿಕರು ಕನ್ನಡ ಭಾಷಾ, ಮೌಖಿಕ ಪರೀಕ್ಷೆಯಲ್ಲಿ ಮಾತ್ರ ತೇರ್ಗಡೆಯಾಗತಕ್ಕದ್ದು. ವೇತನ ಮುಂಬಡ್ತಿ ಪಡೆಯುವ ಮತ್ತು ಸೇವಾ ಸ್ಥಿರೀಕರಣದ ಉದ್ದೇಶಗಳಿಗೆ ಕನ್ನಡ ಭಾಷಾ ಲಿಖಿತ ಪರೀಕ್ಷೆಯ ಬದಲಾಗಿ ಗರಿಷ್ಠ 50 ಅಂಕಗಳನ್ನು ನಿಗದಿಪಡಿಸಿರುವ ಕನ್ನಡ ಮೌಖಿಕ ಪರೀಕ್ಷೆಯಲ್ಲಿ ಮಾತ್ರ ಅವರು ತೇರ್ಗಡೆ ಹೊಂದಬೇಕಾಗಿರುತ್ತದೆ.

(3) ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 3 ಎಸ್‌ಎಸ್‌ಆರ್ 82, ದಿನಾಂಕ 30ನೇ ಆಗಸ್ಟ್ 1982ರ ಮೇರೆಗೆ ಅಂಧರಾಗಿರುವ ಮತ್ತು ಕೆಲಸಕ್ಕೆ ಓದುವುದು ಮತ್ತು ಬರೆಯುವುದು ಅವಶ್ಯವಿಲ್ಲದ ಸರ್ಕಾರಿ ನೌಕರರಿಗೆ ಸ್ಥಿರೀಕರಣದ ಮತ್ತು ವಾರ್ಷಿಕ ವೇತನ ಮುಂಬಡ್ತಿಗಳನ್ನು ಪಡೆಯುವ ಉದ್ದೇಶಗಳಿಗಾಗಿ ಕನ್ನಡ ಭಾಷಾ ಲಿಖಿತ ಸೇವಾ ಪರೀಕ್ಷೆಯಲ್ಲಿ ತೇರ್ಗಡೆಯಾಗುವುದರಿಂದ ವಿನಾಯಿತಿಸಲಾಗಿದೆ. ಆದರೆ ಅವರು ಕನ್ನಡ ಭಾಷಾ ಮೌಖಿಕ ಪರೀಕ್ಷೆಯಲ್ಲಿ ತೇರ್ಗಡೆಯಾಗತಕ್ಕದ್ದು.

19. ತೇರ್ಗಡೆ ಪ್ರಮಾಣ ಪತ್ರಗಳು:

ಪ್ರತಿಯೊಂದು ವಿಷಯಕ್ಕೆ ತೇರ್ಗಡೆ ಪ್ರಮಾಣಪತ್ರವನ್ನು ಆಯೋಗದಿಂದ ಫಲಿತಾಂಶವು ಅಧಿಕೃತವಾಗಿ ರಾಜ್ಯಪತ್ರದಲ್ಲಿ ಪ್ರಕಟವಾದ ನಂತರ ಅಭ್ಯರ್ಥಿಗಳಿಗೆ ಕಳುಹಿಸಲಾಗುವುದು. ಪ್ರಮಾಣ ಪತ್ರದಲ್ಲಿ ಮುದ್ರಿತವಾದ ಹೆಸರು ಅಥವಾ ಇನ್ನಾವುದೇ ರೀತಿಯ ತಪ್ಪುಗಳು ಕಂಡುಬಂದಲ್ಲಿ ಅಭ್ಯರ್ಥಿಗಳು ಕೂಡಲೇ ತಿದ್ದುಪಡಿಗಾಗಿ ಸೂಕ್ತ ದಾಖಲೆಗಳೊಂದಿಗೆ ಆಯೋಗದ ಕಛೇರಿಯನ್ನು ಸಂಪರ್ಕಿಸುವುದು.

(ಸೂಚನೆ: ಪರೀಕ್ಷೆಯ ಪ್ರತಿಭಾಗವನ್ನು ಈ ಉದ್ದೇಶಕ್ಕೆ ಒಂದು ಪ್ರತ್ಯೇಕ ಪರೀಕ್ಷೆ ಎಂದು ಪರಿಗಣಿಸಲಾಗುವುದು)

20. ಅಂಕಪಟ್ಟಿಗಳು: ಇಲಾಖಾ ಪರೀಕ್ಷೆಯ ಎಲ್ಲಾ ಅಭ್ಯರ್ಥಿಗಳ ಅಂಕಗಳನ್ನು ಆಯೋಗದ ವೆಬ್ ಸೈಟ್ <u>http://kpsc.kar.nic.in</u> ನಲ್ಲಿ ಫಲಿತಾಂಶ ಪ್ರಕಟವಾದ ದಿನಾಂಕದಂದೇ ಪ್ರಕಟಿಸಲಾಗುವುದು ಪ್ರತ್ಯೇಕವಾಗಿ ಅಂಕಪಟ್ಟಿಗಳನ್ನು ನೀಡಲಾಗುವುದಿಲ್ಲ.

21. ಅಂಕಗಳ ಮರು ಎಣಿಕೆ:

ಎ) ಯಾವುದೇ ಪರೀಕ್ಷೆಯಲ್ಲಿ ಅನುತ್ತೀರ್ಣನಾದ ಅಭ್ಯರ್ಥಿಯು ಫಲಿತಾಂಶ ಪ್ರಕಟವಾದ ದಿನಾಂಕದಿಂದ 30 ದಿನಗಳೊಳಗಾಗಿ ಸದರಿ ಪರೀಕ್ಷೆಯ ಎಲ್ಲಾ ಪತ್ರಿಕೆಗಳ ಅಥವಾ ಯಾವುದೇ ಪತ್ರಿಕೆಯ ಅಂಕಗಳ ಮರು ಎಣಿಕೆಗಾಗಿ ಆಯೋಗಕ್ಕೆ ಅರ್ಜಿ ಸಲ್ಲಿಸಬಹುದು, ಅಂತಹ ಅರ್ಜಿ ಸಲ್ಲಿಸುವ ಪ್ರತಿಯೊಬ್ಬ ಅಭ್ಯರ್ಥಿಯು **<u>ಪ್ರತಿ</u>** **<u>ವಿಷಯಕ್ಕೆ ರೂ. 100/–</u>** ಗಳನ್ನು ಕಾರ್ಯದರ್ಶಿ ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರಿಗೆ ಸಂದಾಯವಾಗುವಂತೆ ಪಡೆದ ಡಿಡಿ/ಐಪಿಓ ಮೂಲಕ ಸಂದಾಯ ಮಾಡತಕ್ಕದ್ದು ಮತ್ತು ಅಂತಹ ಮೊತ್ತವನ್ನು ಸಂದಾಯ ಮಾಡಿದ ಪುರಾವೆಯನ್ನು, ತನ್ನ ಹೆಸರು, ನೋಂದಣಿ ಸಂಖ್ಯೆ ಮತ್ತು ಮರು ಎಣಿಕೆ ಮಾಡಬೇಕಾದ ವಿಷಯದ ವಿವರಗಳನ್ನು ಅರ್ಜಿಯೊಂದಿಗೆ ಒದಗಿಸತಕ್ಕದ್ದು.

ಬಿ) ಅಭ್ಯರ್ಥಿಯು ಪಡೆದ ಅಂಕಗಳ ಮರು ಎಣಿಕೆಯ ಸಂಬಂಧದಲ್ಲಿ ಆಯೋಗದ ನಿರ್ಣಯವೇ ಅಂತಿಮವಾಗಿರುತ್ತದೆ.

22. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 69 ಎಸ್‌ಎಸ್‌ಆರ್ 76, ದಿನಾಂಕ 16ನೇ ಜುಲೈ 1977ರ ಅನುಸಾರವಾಗಿ ನವದೆಹಲಿಯ ಕರ್ನಾಟಕ ಭವನದಲ್ಲಿ ಕೆಲಸ ಮಾಡುತ್ತಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಇಲಾಖಾ ಪರೀಕ್ಷೆಗಳನ್ನು ಆಯೋಗದಿಂದ ಉಪನಿವಾಸ ಆಯುಕ್ತರು, ಕರ್ನಾಟಕ ಭವನದ ನಿವಾಸ ಆಯುಕ್ತರ ಕಛೇರಿ, ನವದೆಹಲಿ ಇವರ ನಿಯಂತ್ರಣದಲ್ಲಿ ನಡೆಸಲಾಗುವುದು.

23. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 3 ಎಸ್‌ಎಸ್‌ಸಿ 83, ದಿನಾಂಕ 12ನೇ ಅಕ್ಟೋಬರ್ 1983 ಇದರ ಅನುಸಾರವಾಗಿ ಮಸ್ಸೂರಿಯಲ್ಲಿ ತರಬೇತಿ ಪಡೆಯುತ್ತಿರುವ ಕರ್ನಾಟಕ ರಾಜ್ಯದ ಐ.ಎ.ಎಸ್, ಐ.ಪಿ.ಎಸ್, ಮತ್ತು ಐ.ಎಫ್.ಎಸ್ ಪ್ರೊಬೇಷನರುಗಳಿಗೆ ಇಲಾಖಾ ಪರೀಕ್ಷೆ ಗಳನ್ನು ಆಯೋಗವು ಪರೀಕ್ಷೆಗಳ ನಿಯಂತ್ರಣಾಧಿಕಾರಿ, ಲಾಲ್‌ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಪ್ರಕಾಶನ ಅಕಾಡೆಮಿ, ಮಸ್ಸೂರಿ, ಇವರ ನಿಯಂತ್ರಣದಲ್ಲಿ ನಡೆಸಲಾಗುವುದು.

24. ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 19 ಎಸ್‌ಎಸ್‌ಸಿ 75, ದಿನಾಂಕ 5ನೇ ಜುಲೈ 1978ರ ಅನುಸಾರವಾಗಿ ಅಂಧರಾಗಿರುವ ಅಥವಾ ತನ್ನ ಸ್ವಂತ ಕೈಯಿಂದ ಬರೆಯಲು ಅಸಮರ್ಥರಾದ ಅಭ್ಯರ್ಥಿಗಳಿಗೆ ಈ ಮುಂದಿನ ಷರತ್ತುಗಳಿಗೊಳಪಟ್ಟು ಒಬ್ಬ ಅನುಲೇಖಕನ ಸಹಾಯವನ್ನು ಪಡೆಯುವುದಕ್ಕೆ ಅನುಮತಿಸಲಾಗಿದೆ:

1. ಅನುಲೇಖಕನ ಸಹಾಯವನ್ನು ಬಯಸುವ ಅಭ್ಯರ್ಥಿಯು ಅರ್ಜಿಯ ಜೊತೆಗೆ **ಸರ್ಕಾರಿ ಆಸ್ಪತ್ರೆಯ** ವೈದ್ಯರಿಂದ ನೀಡಲಾದ ಒಂದು ಪ್ರಮಾಣ ಪತ್ರದೊಂದಿಗೆ ಅವನ ಮೇಲಧಿಕಾರಿಯ ಮೂಲಕ ಕಳುಹಿಸತಕ್ಕದ್ದು.
2. ಮೇಲಧಿಕಾರಿಯು ವೈದ್ಯಕೀಯ ಪ್ರಮಾಣಪತ್ರವನ್ನು ಆಯೋಗಕ್ಕೆ ಕಳುಹಿಸುವ ಮೊದಲು ಅಭ್ಯರ್ಥಿಯು ನಿಜವಾಗಿ ಅಸಮರ್ಥನಾಗಿರುವನೆ ಮತ್ತು ಅವನಿಗೆ ಅನುಲೇಖಕನ ಸಹಾಯ ಅವಶ್ಯವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
3. ಆಯೋಗವು ಅನುಲೇಖಕನ ಸಹಾಯಕ್ಕೆ ಮಂಜೂರಾತಿ ನೀಡಿದ್ದಾಗ ಸಂಬಂಧಪಟ್ಟ ಕೇಂದ್ರದ ಮೇಲ್ವಿಚಾರಕರು ಅಭ್ಯರ್ಥಿಗೆ ಒಬ್ಬ ಅನುಲೇಖಕನನ್ನು ನೇಮಕ ಮಾಡತಕ್ಕದ್ದು ಮತ್ತು ಅದನ್ನು ಕಾರ್ಯದರ್ಶಿ ಮತ್ತು ಇಲಾಖಾ ಪರೀಕ್ಷೆಯ ನಿಯಂತ್ರಣಾಧಿಕಾರಿಗೆ ತಿಳಿಸತಕ್ಕದ್ದು.
4. ಹಾಗೆ ನೇಮಕ ಮಾಡಲಾದ ಅನುಲೇಖಕನು ಅಭ್ಯರ್ಥಿಗಿಂತ ಕೆಳಗಿನ ದರ್ಜೆಯವನು ಅಥವಾ ಕಡಿಮೆ ಶಿಕ್ಷಣ ಪಡೆದವನು ಆಗಿರತಕ್ಕದ್ದು ಮತ್ತು ಅವನು ಅಭ್ಯರ್ಥಿಯ ಸಂಬಂಧಿಕನಾಗಿರಬಾರದು.
5. ಅಭ್ಯರ್ಥಿಗಳು ಪರೀಕ್ಷೆಯ ಪ್ರತಿಯೊಂದು ಪತ್ರಿಕೆಗೆ **ರೂ. 5/–(ಐದು ರೂಪಾಯಿಗಳು)** ಮೊತ್ತವನ್ನು ಮುಂಗಡವಾಗಿ ಸಂದಾಯ ಮಾಡತಕ್ಕದ್ದು ಮತ್ತು ಸದರಿ ಮೊತ್ತವನ್ನು ಪರೀಕ್ಷೆಯ ಪತ್ರಿಕೆ ಮುಗಿದ ಕೂಡಲೇ ಅನುಲೇಖಕನಿಗೆ ಸಂದಾಯ ಮಾಡತಕ್ಕದ್ದು.
6. ಅನುಲೇಖಕನನ್ನು ನೇಮಕ ಮಾಡಲಾಗಿದ್ದರೆ ಅಭ್ಯರ್ಥಿಗೆ ಹದಿನೈದು ನಿಮಿಷಗಳ ಹೆಚ್ಚಿನ ಕಾಲಾವಕಾಶವನ್ನು ನೀಡಲಾಗುವುದು.
7. ಅನುಲೇಖಕನ ಸಹಾಯ ಬಯಸುವ ಅಭ್ಯರ್ಥಿಗಳು ಅವಶ್ಯಕ ವೈದ್ಯಕೀಯ ಪ್ರಮಾಣ ಪತ್ರ ಮತ್ತು ಮೇಲಧಿಕಾರಿಗಳ ದೃಢೀಕರಣವನ್ನು ತಮ್ಮ ಅರ್ಜಿಯ ಭಾಗ–Iರ ಪ್ರತಿಯೊಂದಿಗೆ ಆಯೋಗಕ್ಕೆ ಮನವಿಯ ಜೊತೆಯಲ್ಲಿಯೇ ಲಗತ್ತಿಸಿ ಅಂಚೆಯ ಮೂಲಕ ಕಳುಹಿಸತಕ್ಕದ್ದು. ಅರ್ಜಿಯ ಮನವಿಯನ್ನು ಸಲ್ಲಿಸದಂತಹ ಕೋರಿಕೆಯನ್ನು ಅನಿವಾರ್ಯ ಹಾಗೂ ಸಕಾರಣವಿಲ್ಲದ ಹೊರತು ಇತರ ಯಾವುದೇ ಸಂದರ್ಭಗಳಲ್ಲೂ ನಿಗದಿಪಡಿಸಲಾದ ಕಡೆಯ ದಿನಾಂಕದ ನಂತರ ಪರಿಗಣಿಸಲಾಗುವುದಿಲ್ಲ.
8. ಅಭ್ಯರ್ಥಿಗಳು ಅನುಲೇಖಕನ ಸಹಾಯ ಕೋರಿ ಸಲ್ಲಿಸುವ ವೈದ್ಯಕೀಯ ಪ್ರಮಾಣ ಪತ್ರವನ್ನು ಅನುಮಾನಾಸ್ಪದ ಸಂದರ್ಭದಲ್ಲಿ ಮಾತ್ರ ವೈದ್ಯಕೀಯ ಮಂಡಳಿಗೆ ಪರಿಶೀಲನೆಗಾಗಿ ಕಳುಹಿಸಲಾಗುವುದು. ಹಾಗೂ ಕೆಲವೊಂದು ಸಂದರ್ಭಗಳಲ್ಲಿ ಅವಶ್ಯಕವೆನಿಸಿದರೆ ಅಂತಹವರನ್ನು ವೈದ್ಯಕೀಯ ಪರಿಶೀಲನೆಗೂ ಗುರಿಪಡಿಸಲಾಗುವುದು. ಸುಳ್ಳು ಪ್ರಮಾಣಪತ್ರ ಹಾಜರುಪಡಿಸಿದ್ದು ಅದು ಸಾಬೀತಾದ ಸಂದರ್ಭಗಳಲ್ಲಿ ಅಂತಹ ಅಭ್ಯರ್ಥಿಗಳ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ಜರುಗಿಸಲಾಗುವುದಲ್ಲದೆ ಅಂತಹವರ ಇಲಾಖಾ ಪರೀಕ್ಷೆಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

25. ಅಖಿಲ ಭಾರತ ಸೇವಾ ಅಧಿಕಾರಿಗಳಿಗೆ ಕನ್ನಡಭಾಷಾ ವಿಷಯದ ಇಲಾಖಾ ಪರೀಕ್ಷೆ ಅಭ್ಯರ್ಥಿಗಳಿಗೆ ಸರ್ಕಾರವು ತನ್ನ ಆದೇಶ ಸಂಖ್ಯೆ.ಡಿಪಿಎಆರ್168 ಎಸ್‌ಎಂಇ 94, ದಿನಾಂಕ:12–07–1995ರಲ್ಲಿ ನಿಗದಿಪಡಿಸಲಾಗಿದ್ದ ಕನ್ನಡ ಪತ್ರಿಕೆ–Iರಲ್ಲಿ 10ನೇ ತರಗತಿಯ ಪಠ್ಯಪುಸ್ತಕ "ಸಾಹಿತ್ಯ ಮಂಜರಿ–3" ಪುಸ್ತಕದ ಬದಲಾಗಿ 10ನೇ ತರಗತಿಯ ಕನ್ನಡ ದ್ವಿತೀಯ ಹಾಗೂ ತೃತೀಯ ಭಾಷಾಪುಸ್ತಕ **"ತಿಳಿಗನ್ನಡ–6"** ಎಂಬ ಪುಸ್ತಕವನ್ನು ನಿಗದಿ ಪಡಿಸಲಾಗಿದೆ.

ಅಖಿಲ ಭಾರತ ಸೇವಾ ಅಧಿಕಾರಿಗಳನ್ನು ಹೊರತು ಪಡಿಸಿ ಇಲಾಖಾ ಪರೀಕ್ಷೆ ಅಭ್ಯರ್ಥಿಗಳಿಗೆ:

(a) **" Sannakathegalu " - serial no. 138-commencing with a lesson " Satyakke belekotta geleyaru " written by different authors and published by the Karnataka Adult Education Council. Mysore.**

(b) **" Kannada Kastoory aarane taragathiya kannada pustaka (the Kannada Reader for Higher Primary VI Standard)**

26. ನಕಲು ಪ್ರಮಾಣ ಪತ್ರ:

ನಕಲು ಪ್ರಮಾಣಪತ್ರ ಪಡೆಯಬಯಸುವ ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ ಪ್ರಮಾಣಪತ್ರವು ಲಭ್ಯವಿಲ್ಲದ ಬಗ್ಗೆ ರೂ. 20/–ಗಳ [illegible] ಮೇಲೆ ನೋಟರಿಯವರ ಮುಂದೆ ಪ್ರಮಾಣ ಮಾಡಿರುವ "ಅಫಿಡೆವಿಟ್" ಹಾಗೂ ಪ್ರವೇಶಪತ್ರ ನೆರಳಚ್ಚು (ಜೆರಾಕ್ಸ್) [illegible] ನೋಂದಣಿ ಸಂಖ್ಯೆ, ಅಧಿವೇಶನ, ಪರೀಕ್ಷಾಕೇಂದ್ರ, ಇತ್ಯಾದಿ ವಿವರಗಳನ್ನೊಳಗೊಂಡ ಸೇವಾ ಪುಸ್ತಕದ ಭಾಗ–Iರ ಉದ್ಧೃತಭಾಗವನ್ನು [illegible] ದೃಢೀಕರಿಸಿ ಲಗತ್ತಿಸಬೇಕು ಹಾಗೂ [illegible] ಅವಧಿಯ ಇಲಾಖಾ ಪರೀಕ್ಷೆಯ ಪ್ರತಿಯೊಂದು ವಿಷಯದ ಪ್ರಮಾಣಪತ್ರಕ್ಕೆ ರೂ

100 ರೂ.ಗಳ ಶುಲ್ಕವನ್ನು ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರಿಗೆ ಸಂದಾಯವಾಗುವಂತೆ ಪಡೆದ ಬ್ಯಾಂಕ್ ಡಿ.ಡಿ/ಐ.ಪಿ.ಒ ಅನ್ನು ಲಗತ್ತಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

ಶಾಖೆಗಳು	ದೂರವಾಣಿ ಸಂಖ್ಯೆಗಳು
ಮಾಹಿತಿ ಕೇಂದ್ರ	**080–30574957**
ಇಲಾಖಾ ಪರೀಕ್ಷಾ ಶಾಖೆ–1	**080–30574944**
ಇಲಾಖಾ ಪರೀಕ್ಷಾ ಶಾಖೆ–2	**080–30574945**
ಪ್ರಾಂತೀಯ ಕಛೇರಿ ಮೈಸೂರು	**0821–2545956**
ಪ್ರಾಂತೀಯ ಕಛೇರಿ ಬೆಳಗಾವಿ	**0831–2475345**
ಪ್ರಾಂತೀಯ ಕಛೇರಿ ಗುಲ್ಬರ್ಗಾ	**08472–227944**
ಪ್ರಾಂತೀಯ ಕಛೇರಿ ಶಿವಮೊಗ್ಗ	**08182–228099**
ಸಹಾಯವಾಣಿ	**080–30574913**

27. **ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು:–**

1. ಸೇವಾ ಪರೀಕ್ಷೆಗಳಿಗೆ ಸಂಬಂಧಪಟ್ಟ ಎಲ್ಲಾ ಪತ್ರ ವ್ಯವಹಾರವನ್ನು ಕಾರ್ಯದರ್ಶಿ ಹಾಗೂ ನಿಯಂತ್ರಕರು, ಇಲಾಖಾ ಪರೀಕ್ಷೆಗಳು ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001 ಈ ವಿಳಾಸಕ್ಕೆ ಮಾಡತಕ್ಕದ್ದು.
2. ಪರೀಕ್ಷೆಗಳ ಸಂಬಂಧದಲ್ಲಿ ಯಾವುದೇ ಮಾಹಿತಿ ಕೋರುವ ಅಭ್ಯರ್ಥಿಗಳು ಮನವಿಯಲ್ಲಿ ಎಲ್ಲಾ ಮಾಹಿತಿ ನೀಡಿ ಅದರೊಂದಿಗೆ ಸಾಕಷ್ಟು ಅಂಚೆ ಚೀಟಿಗಳನ್ನು ಹಚ್ಚಿದ ಸ್ವವಿಳಾಸ ಬರೆದ ಒಂದು ಲಕೋಟೆಯನ್ನು ಲಗತ್ತಿಸಿದರೆ ಆಯೋಗದ ಉತ್ತರವು ಅಡಚಣೆ ಆಗದೇ ಬೇಗ ತಲುಪುವುದು.
3. ಮಾಹಿತಿಗಾಗಿ ಅಭ್ಯರ್ಥಿಗಳು ಆಯೋಗಕ್ಕೆ ಸಲ್ಲಿಸುವ ಮನವಿಗಳಲ್ಲಿ ನೋಂದಣಿ ಸಂಖ್ಯೆ, ಅಧಿವೇಶನ, ವಿಷಯ ಮತ್ತು ಪರೀಕ್ಷಾ ಕೇಂದ್ರ ಮುಂತಾದ ಸ್ಪಷ್ಟ ವಿವರಗಳನ್ನು ಸೂಚಿಸದಿದ್ದಲ್ಲಿ ಅಂತಹವುಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ಪೊಲೀಸ್ ಸಮವಸ್ತ್ರವನ್ನು ಧರಿಸಿ ಪರೀಕ್ಷೆ ಬರೆಯುವುದನ್ನು ನಿಷೇಧಿಸಲಾಗಿದೆ.
5. ಅಭ್ಯರ್ಥಿಗಳು ತಮ್ಮ ಸಹ ನೌಕರರನ್ನು/ಇತರರನ್ನು ಕರೆತರುವುದನ್ನು ಮತ್ತು ಪರೀಕ್ಷೆ ನಡೆಯುತ್ತಿರುವಾಗ ಅವರನ್ನು ಭೇಟಿ ಮಾಡಲು ಕೋರುವುದನ್ನು ನಿಷೇಧಿಸಲಾಗಿದೆ.
6. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಮೊಬೈಲ್ ಪೋನ್ ತರುವುದನ್ನು ಮತ್ತು ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
7. ಅಭ್ಯರ್ಥಿಗಳು ತಮಗೆ ಕಾಯ್ದಿರಿಸಿದ ಸ್ಥಳದಲ್ಲಿ ಮಾತ್ರ ಕುಳಿತು ಪರೀಕ್ಷೆ ಬರೆಯತಕ್ಕದ್ದು. ತಪ್ಪಿದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು.
8. ಅಭ್ಯರ್ಥಿಯು ತನ್ನ ಹುದ್ದೆಗೆ ಸಂಬಂಧಿಸಿದಂತೆ 1974ರ ಕ.ಸ.ಸೇ (ಸೇವಾ ಮತ್ತು ಕನ್ನಡಭಾಷಾ) ನಿಯಮಾವಳಿ ರೀತ್ಯಾ ಕಡ್ಡಾಯಗೊಳಿಸಿದ ವಿಷಯಗಳಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.
9. **ಯಾವುದೇ ಹುದ್ದೆಗೆ ಕಡ್ಡಾಯಗೊಳಿಸಿದ ವಿಷಯಗಳ ಪೈಕಿ ಈ ಅಧಿಸೂಚನೆಯೊಂದಿಗೆ ಪ್ರಕಟಿಸಿದ ವೇಳಾಪಟ್ಟಿಯಲ್ಲಿ ಒಂದಕ್ಕಿಂತ ಹೆಚ್ಚು ವಿಷಯಗಳು ಒಂದೇ ದಿನ, ಒಂದೇ ಸಮಯದಲ್ಲಿ ನಡೆಯುವಂತಿದ್ದರೆ, ಅವುಗಳಲ್ಲಿ ಒಂದಕ್ಕೆ ಮಾತ್ರ ಅರ್ಜಿ ಸಲ್ಲಿಸಿ ಪರೀಕ್ಷೆಗೆ ಹಾಜರಾಗತಕ್ಕದ್ದು.**
10. ಪಠ್ಯ ಕ್ರಮಕ್ಕಾಗಿ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವೆಗಳು (ಸೇವಾ ಮತ್ತು ಕನ್ನಡಭಾಷಾ ಪರೀಕ್ಷೆಗಳು) ನಿಯಮಗಳು 1974 ಮತ್ತು ಅದಕ್ಕೆ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗಿರುವ ತಿದ್ದುಪಡಿಗಳನ್ನು ನೋಡಬಹುದು.

28. ದುರ್ವರ್ತನೆ:

ಯಾವುದೇ ಒಬ್ಬ ಅಭ್ಯರ್ಥಿಯು ಸೇವಾ ಪರೀಕ್ಷೆಗಳಿಗೆ ಸಂಬಂಧಪಟ್ಟಂತೆ ಕೃತ್ರಿಮ ದಸ್ತಾವೇಜನ್ನು ಅಥವಾ ಅಕ್ರಮವಾಗಿ ತಿದ್ದಿದ ದಸ್ತಾವೇಜುಗಳನ್ನು ಸಲ್ಲಿಸಿದ ಅಥವಾ ಸರಿಯಲ್ಲದ ಅಥವಾ ಸುಳ್ಳು ವಿವರಣೆಯನ್ನು ನೀಡಿದ ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿದ ಅಥವಾ ಪರೀಕ್ಷೆಯಲ್ಲಿ ಅಕ್ರಮ ವಿಧಾನವನ್ನು ಅನುಸರಿಸಲು ಪ್ರಯತ್ನಿಸಿದ ಅಥವಾ ಬೇರೆ ರೀತಿಯಲ್ಲಿ ಇತರೆ ಯಾವುದೇ ಅಕ್ರಮ ಅನುಚಿತ ಮಾರ್ಗವನ್ನನುಸರಿಸಿದ ಅಪರಾಧವನ್ನು ಮಾಡಿರುವುದಾಗಿ ಆಯೋಗಕ್ಕೆ ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗೆ ಗುರಿಪಡಿಸುವುದಲ್ಲದೆ (ಎ)

ಅಭ್ಯರ್ಥಿಯ ಆಯ್ಕೆಗಾಗಿ ಆಯೋಗದಿಂದ ನಡೆಸಲಾಗುವ ಯಾವುದೇ ಪರೀಕ್ಷೆಗೆ ಪ್ರವೇಶ ನೀಡುವುದಕ್ಕೆ ಅಥವಾ ಯಾವುದೇ ಸಂದರ್ಶನಕ್ಕೆ ಹಾಜರಾಗುವುದಕ್ಕೆ ಖಾಯಂ ಆಗಿ ಅಥವಾ ಒಂದು ನಿರ್ದಿಷ್ಟ ಅವಧಿಗೆ ಅನರ್ಹಗೊಳಿಸಲಾಗುವುದು ಮತ್ತು (ಬಿ) ಶಿಸ್ತಿನ ಕ್ರಮಕ್ಕೆ ಒಳಪಡಿಸಲಾಗುವುದು.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಸಂವೀಕ್ಷಕರು/ಮೇಲ್ವಿಚಾರಕರು ನೀಡುವ ಸೂಚನೆಗಳನ್ನು ತಪ್ಪದೇ ಪಾಲಿಸುವುದು ತಪ್ಪಿದಲ್ಲಿ ಅದನ್ನು ದುರ್ವರ್ತನೆಯನ್ನಾಗಿ ಪರಿಗಣಿಸಲಾಗುವುದು ಮತ್ತು ಈ ಬಗ್ಗೆ ಶಿಸ್ತಿನ ಕಾರ್ಯವಿಧಾನಗಳಿಗೆ ಒಳಪಡಿಸಲಾಗುವುದು.

ಡಾ: ಡಿ.ಎಸ್. ವಿಶ್ವನಾಥ್,
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು,
ಕರ್ನಾಟಕ ಲೋಕಸೇವಾ ಆಯೋಗ.

ಕರ್ನಾಟಕ ಲೋಕಸೇವಾ ಆಯೋಗ,"ಉದ್ಯೋಗ ಸೌಧ", ಬೆಂಗಳೂರು–560001.
ಅಧಿಸೂಚನೆ ಸಂಖ್ಯೆ ಇ.ಪ.(1)1098/2011–12/ಪಿಎಸ್‌ಸಿ, ದಿನಾಂಕ: 07–10–2011
ಅನುಬಂಧ– " ಎ "
2011ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳು
ಬೆಂಗಳೂರು, ಕೇಂದ್ರದಲ್ಲಿ ಮಾತ್ರ ನಡೆಯಲಿರುವ ಪರೀಕ್ಷೆಗಳ ವೇಳಾಪಟ್ಟಿ.

ಕ್ರ. ಸಂ	ವಾರ	ದಿನಾಂಕ	ವೇಳೆ	ವಿಷಯ
1	2	3	4	5
1.	ಸೋಮವಾರ	26–12–2011	ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 1.00 ಗಂಟೆ ಮೇಲಿನಂತೆ ಮೇಲಿನಂತೆ ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 12.00 ಗಂಟೆ ಮೇಲಿನಂತೆ ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ ಮೇಲಿನಂತೆ ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆ ಮೇಲಿನಂತೆ ಮೇಲಿನಂತೆ	ಎಸ್.ಎ.ಎಸ್.ಭಾಗ– I, ಪತ್ರಿಕೆ–1 ಮತ್ತು ಎಲೆಕ್ಟ್ರಿಸಿಟಿ ಆಡಿಟ್ ಅಂಡ್ ಅಕೌಂಟ್‌ಲಾಸ್ (ಹೈಯರ್) ಭಾಗ– II (ಎರಡಕ್ಕೂ ಒಂದೇ ಪ್ರಶ್ನೆ ಪತ್ರಿಕೆ) (ಪುಸ್ತಕಗಳಿಲ್ಲದೆ) ಟ್ರೆಜರಿ ಅಕೌಂಟ್ಸ್ ಭಾಗ– I ಪತ್ರಿಕೆ–1 (ಪುಸ್ತಕಗಳಿಲ್ಲದೆ) ಕನ್ನಡ ಪತ್ರಿಕೆ–1(ಐಎಎಸ್.ಐಪಿಎಸ್ ಮತ್ತು ಐಎಫ್‌ಎಸ್ ಅಧಿಕಾರಿಗಳಿಗೆ ಮಾತ್ರ) (ಪುಸ್ತಕಗಳಿಲ್ಲದೆ) ಸ್ಪೆಷಲ್ ಲಾಸ್ ಅಂಡ್ ಸರ್ವೀಸ್ ರೂಲ್ಸ್ ಕರ್ನಾಟಕ ಅಡ್ಮಿನಿಸ್ಟ್ರೇಟಿವ್ ಟ್ರಿಬ್ಯುನಲ್ ಎಕಾಮಿನೇಷನ್ ಎಸ್.ಎ.ಎಸ್.ಭಾಗ– I ಪತ್ರಿಕೆ–2 (ಪುಸ್ತಗಳಿಲ್ಲದೆ) ಟ್ರೆಜರಿ ಅಕೌಂಟ್ಸ್ ಭಾಗ– I ಪತ್ರಿಕೆ–2 (ಪುಸಕಗಳಿಲ್ಲದೆ) ಸೆಕ್ರೆಟೇರಿಯಟ್ ಮ್ಯಾನುಯಲ್ ಭಾಗ– II ಟ್ರಾನ್ಸ್‌ಲೇಶನ್ ಟೆಸ್ಟ್ (ಪುಸಕಗಳಿಲ್ಲದೆ) ಕನ್ನಡ ಪತ್ರಿಕೆ–2 (ಐಎಎಸ್. ಐಪಿಎಸ್ ಮತ್ತು ಐಎಫ್‌ಎಸ್ ಅಧಿಕಾರಿಗಳಿಗೆ ಮಾತ್ರ) (ಪುಸಕಗಳಿಲ್ಲದೆ)
2.	ಮಂಗಳವಾರ	27–12–2011	ಬೆಳಿಗ್ಗೆ 10.00 ರಿಂದ 12.00 ಗಂಟೆ ಮೇಲಿನಂತೆ ಮಧ್ಯಾಹ್ನ 2–00 ರಿಂದ ಸಂಜೆ 4–00ಗಂಟೆ ಮೇಲಿನಂತೆ	ಎಸ್.ಎ.ಎಸ್. ಭಾಗ– I ಪತ್ರಿಕೆ–3 ಟ್ರೆಜರಿ ಅಕೌಂಟ್ಸ್ ಭಾಗ– I ಪತ್ರಿಕೆ–3 ಎಸ್.ಎ.ಎಸ್. ಭಾಗ– II ಪತ್ರಿಕೆ–1 (ಪುಸ್ತಕಗಳಿಲ್ಲದೆ) ಟ್ರೆಜರಿ ಅಕೌಂಟ್ಸ್ ಭಾಗ– II ಪತ್ರಿಕೆ–1 (ಎಲಿಮೆಂಟರಿ ಬುಕ್ ಕೀಪಿಂಗ್)
3	ಬುಧವಾರ	28–12–2011	ಬೆಳಿಗ್ಗೆ 10.00 ರಿಂದ 12.00 ಗಂಟೆ ಮೇಲಿನಂತೆ ಮೇಲಿನಂತೆ ಮಧ್ಯಾಹ್ನ 2–00 ರಿಂದ ಸಂಜೆ 4–00ಗಂಟೆ ಮೇಲಿನಂತೆ ಮೇಲಿನಂತೆ	ಎಸ್.ಎ.ಎಸ್. ಭಾಗ– II ಪತ್ರಿಕೆ–2 ಎಲೆಕ್ಟ್ರಿಸಿಟಿ ಲಾಸ್ ಪರೀಕ್ಷೆ ಪತ್ರಿಕೆ–1 ಟ್ರೆಜರಿ ಅಕೌಂಟ್ ಭಾಗ– II ಪತ್ರಿಕೆ–2 (ಪುಸಕಗಳಿಲ್ಲದೆ) ಎಲೆಕ್ಟ್ರಿಸಿಟಿ ಲಾಸ್ ಪರೀಕ್ಷೆ ಪತ್ರಿಕೆ–2 ಎಸ್.ಎ.ಎಸ್ ಭಾಗ– II ಪತ್ರಿಕೆ–3 ಟ್ರೆಜರಿ ಅಕೌಂಟ್ ಭಾಗ– II ಪತ್ರಿಕೆ–3
4.	ಗುರುವಾರ	29–12–2011	ಬೆಳಿಗ್ಗೆ 10.00 ರಿಂದ 12.00 ಗಂಟೆ ಮಧ್ಯಾಹ್ನ 2–00 ರಿಂದ ಸಂಜೆ 4–00ಗಂಟೆ	ಎಸ್.ಎ.ಎಸ್. ಭಾಗ– III ಪತ್ರಿಕೆ–1 ಎಸ್.ಎ.ಎಸ್. ಭಾಗ– III ಪತ್ರಿಕೆ–2 (ಪುಸ್ತಕಗಳಿಲ್ಲದೆ)
5.	ಶುಕ್ರವಾರ	30–12–2011	ಬೆಳಿಗ್ಗೆ 10.00 ರಿಂದ 12.00 ಗಂಟೆ ಮಧ್ಯಾಹ್ನ 2–00 ರಿಂದ ಸಂಜೆ 4–00ಗಂಟೆ ಮೇಲಿನಂತೆ	ಎಸ್.ಎ.ಎಸ್. ಭಾಗ– III ಪತ್ರಿಕೆ–3 ಎಸ್.ಎ.ಎಸ್. ಭಾಗ– III ಪತ್ರಿಕೆ–4 (ಪುಸ್ತಕಗಳಿಲ್ಲದೆ) ಎಲೆಕ್ಟ್ರಿಸಿಟಿ(ಆಡಿಟ್ ಅಂಡ್ ಅಕೌಂಟ್ಸ್) ಲಾಸ್ ಲೋಯರ್ ಪರೀಕ್ಷೆ

ಕ್ರ ಸಂ.	ವಾರ	ದಿನಾಂಕ	ವೇಳೆ	ವಿಷಯ
1	2	3	4	5
6.	ಶನಿವಾರ	31–12–2011	ಬೆಳಿಗ್ಗೆ 10.00 ರಿಂದ 12.00 ಗಂಟೆ	ಎಲೆಕ್ಟಿಸಿಟಿ (ಆಡಿಟ್ ಅಂಡ್ ಅಕೌಂಟ್ಸ್) ಲಾಸ್ ಹೈಯರ್ ಪರೀಕ್ಷೆ ಭಾಗ– I
			ಮೇಲಿನಂತೆ	ಎಸ್.ಎ.ಎಸ್ ಭಾಗ– III ಪತ್ರಿಕೆ–5
			ಮೇಲಿನಂತೆ	ಸೆಕ್ರೇಟೇರಿಯೆಟ್ ಮ್ಯಾನ್ಯುಯಲ್ ಭಾಗ– I ಪತ್ರಿಕೆ–1
			ಮೇಲಿನಂತೆ	ಇಂಡಿಯನ್ ಕಾಂಟ್ರಾಕ್ಟ್ ಆಕ್ಟ್
			ಮೇಲಿನಂತೆ	ಕರ್ನಾಟಕ ಲೋಕಸೇವಾ ಆಯೋಗ ಮ್ಯಾನ್ಯುಯಲ್
			ಮಧ್ಯಾಹ್ನ 2–00 ರಿಂದ ಸಂಜೆ 4–00ಗಂಟೆ	ಸೆಕ್ರೇಟೇರಿಯೆಟ್ ಮ್ಯಾನ್ಯುಯಲ್ ಭಾಗ– I ಪತ್ರಿಕೆ–2
			ಮೇಲಿನಂತೆ	ಕರ್ನಾಟಕ ಲೋಕಸೇವಾ ಆಯೋಗ ರಿಕ್ರೂಟ್‌ಮೆಂಟ್ ರೂಲ್ಸ್

ಡಾ: ಡಿ.ಎಸ್. ವಿಶ್ವನಾಥ್,
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು
ಕರ್ನಾಟಕ ಲೋಕಸೇವಾ ಆಯೋಗ.

ಕರ್ನಾಟಕ ಲೋಕಸೇವಾ ಆಯೋಗ," ಉದ್ಯೋಗ ಸೌಧ", ಬೆಂಗಳೂರು–560001.

ಅಧಿಸೂಚನೆ ಸಂಖ್ಯೆ ಇ.ಪ.(1)1098/2011–12/ಪಿಎಸ್‌ಸಿ, ದಿನಾಂಕ: 07–10–2011
ಅನುಬಂಧ " ಬಿ "

2011ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳು

ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಯಲಿರುವ ಪರೀಕ್ಷೆಗಳ ವೇಳಾಪಟ್ಟಿ

ಕ್ರ ಸಂ.	ವಾರ	ದಿನಾಂಕ	ವೇಳೆ	ವಿಷಯ
1	2	3	4	5
1.	ಬುಧವಾರ	**04–01–2012**	ಬೆಳಿಗ್ಗೆ 10.00 ರಿಂದ 12–00 ಗಂಟೆ	ಅಕೌಂಟ್ಸ್ ಲೋಯರ್
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಜನರಲ್ ಲಾ ಭಾಗ– II
2	ಗುರುವಾರ	**05–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಜನರಲ್ ಲಾ ಭಾಗ– I ಪತ್ರಿಕೆ– 1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಜನರಲ್ ಲಾ ಭಾಗ– I ಪತ್ರಿಕೆ– 2
3.	ಶುಕ್ರವಾರ	**06–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಅಕೌಂಟ್ಸ್ ಹೈಯರ್ ಪತ್ರಿಕೆ–1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಅಕೌಂಟ್ಸ್ ಹೈಯರ್ ಪತ್ರಿಕೆ–2
4.	ಶನಿವಾರ	**07–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಕನ್ನಡ ಪತ್ರಿಕೆ–1 (ಪುಸ್ತಕಗಳಿಲ್ಲದೆ)
			ಮಧ್ಯಾಹ್ನ 2.00 ರಿಂದ ಸಂಜೆ 3.00 ಗಂಟೆ	ಕನ್ನಡ ಪತ್ರಿಕೆ–2 (ಪುಸ್ತಕಗಳಿಲ್ಲದೆ)
5.	ಭಾನುವಾರ	**08–01–2012**	ಬೆಳಿಗ್ಗೆ 10.00 ರಿಂದ 1.00 ಗಂಟೆ	ಇನ್ಸೂರೆನ್ಸ್ ಹೈಯರ್ ಪತ್ರಿಕೆ–2 (ಪುಸ್ತಕಗಳಿಲ್ಲದೆ)
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– I ಪತ್ರಿಕೆ–1, (ಪುಸ್ತಕಗಳಿಲ್ಲದೆ)
			ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆ	ಇನ್ಸೂರೆನ್ಸ್ ಲೋಯರ್ ಪತ್ರಿಕೆ–2 {ಪುಸ್ತಕಗಳಿಲ್ಲದೆ}
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಹೈಯರ್ ಪತ್ರಿಕೆ–2,
6	ಸೋಮವಾರ	**09–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಲೇಬರ್ ಪತ್ರಿಕೆ–1
			ಮೇಲಿನಂತೆ	ಪ್ರಿಸನ್ಸ್
			ಮೇಲಿನಂತೆ	ಎಕ್ಸೈಸ್
			ಮೇಲಿನಂತೆ	ಮೋಟಾರ್ ವೆಹಿಕಲ್ಸ್
			ಮೇಲಿನಂತೆ	ರೆವಿನ್ಯೂ ಹೈಯರ್ ಭಾಗ– I ಪತ್ರಿಕೆ–1
			ಮೇಲಿನಂತೆ	ಇನ್ಸೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–1

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
1	2	3	4	5
			ಮಧ್ಯಾಹ್ನ 2.00 ರಿಂದ ಸಂಜೆ 4.00ಗಂಟೆ	ಲೇಬರ್ ಪತ್ರಿಕೆ–2
			ಮೇಲಿನಂತೆ	ಇನ್ಶೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–2
			ಮೇಲಿನಂತೆ	ರೆವಿನ್ಯೂ ಹೈಯರ್ ಭಾಗ– I ಪತ್ರಿಕೆ–2.
7.	ಮಂಗಳವಾರ	**10–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ರೆವಿನ್ಯೂ ಹೈಯರ್ ಭಾಗ– II ಪತ್ರಿಕೆ–1
			ಮೇಲಿನಂತೆ	ರಿಜಿಸ್ಟ್ರೇಷನ್ ಪತ್ರಿಕೆ–1
			ಮೇಲಿನಂತೆ	ಕಮರ್ಷಿಯಲ್‌ಟ್ಯಾಕ್ಸ್ ಭಾಗ– I ಪತ್ರಿಕೆ–1
			ಮೇಲಿನಂತೆ	ಇನ್ಶೂರೆನ್ಸ್ ಅಡ್ವಾನ್ಸಡ್ ಪತ್ರಿಕೆ–3
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ರೆವಿನ್ಯೂ ಹೈಯರ್ ಭಾಗ– II ಪತ್ರಿಕೆ–2
			ಮೇಲಿನಂತೆ	ರಿಜಿಸ್ಟ್ರೇಷನ್ ಪತ್ರಿಕೆ–2
			ಮೇಲಿನಂತೆ	ಕಮರ್ಷಿಯಲ್‌ಟ್ಯಾಕ್ಸ್ ಭಾಗ– I, ಪತ್ರಿಕೆ–2
			ಮೇಲಿನಂತೆ	ಇನ್ಶೂರೆನ್ಸ್ ಹೈಯರ್ ಪತ್ರಿಕೆ–1
8.	ಬುಧವಾರ	**11–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಪೊಲೀಸ್ ಮ್ಯಾನ್ಯುಯಲ್
			ಮೇಲಿನಂತೆ	ಕೋ–ಆಪರೇಷನ್ ಪತ್ರಿಕೆ–1
			ಮೇಲಿನಂತೆ	ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಹೈಯರ್
			ಮೇಲಿನಂತೆ	ಮಾರ್ಕೆಟಿಂಗ್ ಪತ್ರಿಕೆ–1
			ಮೇಲಿನಂತೆ	ಮೈನಿಂಗ್ ಭಾಗ– I
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– I, ಪತ್ರಿಕೆ–3 ಮತ್ತು – ಕೋ–ಆಪರೇಷನ್ ಪತ್ರಿಕೆ–2 (ಎರಡಕ್ಕೂ ಒಂದೇ ಪ್ರಶ್ನೆ ಪತ್ರಿಕೆ)
			ಮೇಲಿನಂತೆ	ಇನ್ಶೂರೆನ್ಸ್ ಹೈಯರ್ ಪತ್ರಿಕೆ–3
			ಮೇಲಿನಂತೆ	ಎಂಪ್ಲಾಯ್‌ಮೆಂಟ್ ಎಕ್ಸ್‌ಚೇಂಜ್ ಪ್ರೊಸೀಜರ್ ಲೋಯರ್
			ಮೇಲಿನಂತೆ	ಮಾರ್ಕೆಟಿಂಗ್ ಪತ್ರಿಕೆ–2
			ಮೇಲಿನಂತೆ	ಮೈನಿಂಗ್ ಭಾಗ– II
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–2
9.	ಗುರುವಾರ	**12–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಸಿರಿಕಲ್ಚರ್ ಪತ್ರಿಕೆ–1
			ಮೇಲಿನಂತೆ	ಕಮ್ಯೂನಿಟಿ ಡೆವಲಪ್‌ಮೆಂಟ್ ಭಾಗ– I
			ಮೇಲಿನಂತೆ	ರೆವಿನ್ಯೂ ಲೋಯರ್ ಪತ್ರಿಕೆ–3
			ಮೇಲಿನಂತೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– II ಪತ್ರಿಕೆ–1
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಹೈಯರ್ ಪತ್ರಿಕೆ–1
			ಮೇಲಿನಂತೆ	ಲೋಕಲ್ ಲಾಸ್ ಅಂಡ್ ಕಮರ್ಷಿಯಲ್ ಬುಕ್ ಕೀಪಿಂಗ್ ಪತ್ರಿಕೆ–1
			ಮೇಲಿನಂತೆ	ಪೋರ್ಟ್ಸ್ ಹೈಯರ್
			ಮೇಲಿನಂತೆ	ಇನ್ಶೂರೆನ್ಸ್ ಲೋಯರ್ ಪತ್ರಿಕೆ–1
			ಮೇಲಿನಂತೆ	ಯೂಥ್ ಸರ್ವೀಸಸ್ ಮ್ಯಾನ್ಯುಯಲ್
			ಮಧ್ಯಾಹ್ನ 2.00ರ ರಿಂದ ಸಂಜೆ 4.00 ಗಂಟೆ	ಸಿರಿಕಲ್ಚರ್ ಪತ್ರಿಕೆ–2
			ಮೇಲಿನಂತೆ	ಪಿ.ಡಬ್ಲ್ಯೂ.ಡಿ ಹೈಯರ್ ಭಾಗ– I.ಪತ್ರಿಕೆ–2
			ಮೇಲಿನಂತೆ	ಲೋಕಲ್ ಲಾಸ್ ಅಂಡ್ ಕಮರ್ಷಿಯಲ್ ಬುಕ್ ಕೀಪಿಂಗ್ ಪತ್ರಿಕೆ–2
			ಮೇಲಿನಂತೆ	ಕಮ್ಯುನಿಟಿ ಡೆವಲಪ್‌ಮೆಂಟ್ ಭಾಗ– II
			ಮೇಲಿನಂತೆ	ಕಮರ್ಷಿಯಲ್ ಟ್ಯಾಕ್ಸ್ ಭಾಗ– II ಪತ್ರಿಕೆ–2
			ಮೇಲಿನಂತೆ	ಪೋರ್ಟ್ಸ್ ಲೋಯರ್

ಕ್ರ. ಸಂ.	ವಾರ	ದಿನಾಂಕ	ವೇಳೆ	ವಿಷಯ
1	2	3	4	5
10	ಶುಕ್ರವಾರ	**13–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಫ್ಯಾಕ್ಟರೀಸ್ ಅಂಡ್ ಬಾಯ್ಲರ್ಸ್ ಲಾಸ್ ಪತ್ರಿಕೆ–1
			ಮೇಲಿನಂತೆ	ಇನ್ಶೂರೆನ್ಸ್ ಲೋಯರ್ ಪತ್ರಿಕೆ–3
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– II, ಪತ್ರಿಕೆ–1
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಲೋಯರ್ ಪತ್ರಿಕೆ–1
			ಮೇಲಿನಂತೆ	ಆಕ್ಟ್ಸ್ ಅಂಡ್ ರೂಲ್ಸ್ ರಿಲೇಟಿಂಗ್ ಟು ವಿಮೆನ್ ಅಂಡ್ ಚೈಲ್ಡ್ ಡೆವೆಲಪ್‌ಮೆಂಟ್
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಫ್ಯಾಕ್ಟರೀಸ್ ಅಂಡ್ ಬಾಯ್ಲರ್ಸ್ ಲಾಸ್ ಪತ್ರಿಕೆ–2
			ಮೇಲಿನಂತೆ	ಪಿ.ಡಬ್ಲ್ಯೂಡಿ ಹೈಯರ್ ಭಾಗ– II, ಪತ್ರಿಕೆ–2
			ಮೇಲಿನಂತೆ	ಪ್ರೆಸ್ ಮ್ಯಾನ್ಯುಯಲ್ ಲೋಯರ್ ಪತ್ರಿಕೆ–2
			ಮೇಲಿನಂತೆ	ಕೋ–ಆಪರೇಟಿವ್ ಆಡಿಟ್ ಎಕ್ಸಾಮಿನೇಷನ್ ಪತ್ರಿಕೆ–1
11	ಸೋಮವಾರ	**16–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಪಿ.ಡಬ್ಲ್ಯೂ.ಡಿ. ಲೋಯರ್ ಪತ್ರಿಕೆ–1
			ಮೇಲಿನಂತೆ	ಸೋಶಿಯಲ್ ವೆಲ್‌ಫೇರ್ ಅಂಡ್ ಬ್ಯಾಕ್ ವರ್ಡ್‌ಕ್ಲಾಸಸ್ ಮ್ಯಾನ್ಯುಯಲ್ ಅಂಡ್ ಕ್ಲಾಸಿಫಿಕೇಶನ್ ರಿಜರ್‌ವೇಶನ್ ಫಾರ್ ಬ್ಯಾಕ್‌ವರ್ಡ್ ಕ್ಲಾಸಸ್ ಭಾಗ– I
			ಮೇಲಿನಂತೆ	ಫಾರೆಸ್ಟ್ ಪತ್ರಿಕೆ–1
			ಮೇಲಿನಂತೆ	ಕೋ–ಆಪರೇಟಿವ್ ಆಡಿಟ್ ಎಕ್ಸಾಮಿನೇಶನ್ ಪತ್ರಿಕೆ–2
			ಮೇಲಿನಂತೆ	ಫುಡ್ ಅಂಡ್ ಸಿವಿಲ್ ಸಪ್ಲೈಸ್ ಪತ್ರಿಕೆ–1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಹೋಂ ಗಾರ್ಡ್ಸ್ ಮ್ಯಾನ್ಯುಯಲ್
			ಮೇಲಿನಂತೆ	ಸೋಶಿಯಲ್ ವೆಲ್‌ಫೇರ್ ಅಂಡ್ ಬ್ಯಾಕ್ ವರ್ಡ್‌ಕ್ಲಾಸಸ್ ಮ್ಯಾನ್ಯುಯಲ್ ಅಂಡ್ ಕ್ಲಾಸಿಫಿಕೇಶನ್ ರಿಜರ್‌ವೇಶನ್ ಫಾರ್ ಬ್ಯಾಕ್‌ವರ್ಡ್ ಕ್ಲಾಸಸ್ ಭಾಗ– II
			ಮೇಲಿನಂತೆ	ಪಿ.ಡಬ್ಲ್ಯೂ.ಡಿ. ಲೋಯರ್ ಪತ್ರಿಕೆ–2
			ಮೇಲಿನಂತೆ	ಫಾರೆಸ್ಟ್ ಪತ್ರಿಕೆ–2
			ಮೇಲಿನಂತೆ	ಕೋ–ಆಪರೇಟಿವ್ ಆಡಿಟ್ ಎಕ್ಸಾಮಿನೇಷನ್ ಪತ್ರಿಕೆ–3
			ಮೇಲಿನಂತೆ	ಫುಡ್ ಅಂಡ್ ಸಿವಿಲ್ ಸಪ್ಲೈಸ್ ಪತ್ರಿಕೆ–2
12	ಮಂಗಳವಾರ	**17–01–2012**	ಬೆಳಿಗ್ಗೆ 10.00 ರಿಂದ 12.00 ಗಂಟೆ	ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪತ್ರಿಕೆ–1
			ಮೇಲಿನಂತೆ	ಕರ್ನಾಟಕ ಕನ್‌ಸ್ಯೂಮರ್ ಪ್ರೋಟೆಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಷನ್, ಪತ್ರಿಕೆ–1
			ಮಧ್ಯಾಹ್ನ 2.00 ರಿಂದ ಸಂಜೆ 4.00 ಗಂಟೆ	ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪತ್ರಿಕೆ–2
			ಮೇಲಿನಂತೆ	ಕರ್ನಾಟಕ ಕನ್‌ಸ್ಯೂಮರ್ ಪ್ರೋಟೆಕ್ಷನ್ಸ್ ಸ್ಟೇಟ್ ಕಮಿಷನ್ ಅಂಡ್ ಡಿಸ್ಟ್ರಿಕ್ ಫೋರಮ್ ಸರ್ವಿಸ್ ಎಕ್ಸಾಮಿನೇಷನ್, ಪತ್ರಿಕೆ–2

ಡಾ: ಡಿ.ಎಸ್. ವಿಶ್ವನಾಥ್,
ಕಾರ್ಯದರ್ಶಿ ಹಾಗೂ ನಿಯಂತ್ರಕರು,
ಇಲಾಖಾ ಪರೀಕ್ಷೆಗಳು
ಕರ್ನಾಟಕ ಲೋಕಸೇವಾ ಆಯೋಗ ಬೆಂಗಳೂರು.

ಪಿ.ಆರ್. 299

WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಅಕ್ಟೋಬರ್ ೨೦, ೨೦೧೧ (ಆಶ್ವಯುಜ ೨೮, ಶಕ ವರ್ಷ ೧೯೩೩)	ಸಂಚಿಕೆ ೪೧

ಭಾಗ–೬

ಬೆಂಗಳೂರು ವಿಭಾಗಕ್ಕೆ ಮತ್ತು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು

ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ

ಸೆಕ್ಷನ್ 16(2)ರ ಅನ್ವಯ ಅಧಿಸೂಚನೆ

ಕ್ರಮಾಂಕ: ಎಲ್‌ಎಕ್ಯೂ.ಎಸ್‌ಆರ್:6/09–10, ದಿನಾಂಕ:22.07.2011

ರಾಜ್ಯ ಸರ್ಕಾರದ ಭೂ ಸ್ವಾಧೀನ ಕಾಯ್ದೆ ಕಲಂ 16ರ ಪ್ರಕರಣ(2)ರ ಉಪ ಪ್ರಕರಣದ ಮೇರೆಗೆ ಈ ಮುಂದಿನ ಅನುಸೂಚಿಯಲ್ಲಿ ಸೂಚಿಸಿರುವ ಜಮೀನುಗಳನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ ಅರ್ಕಾವತಿ ಜಲಾಶಯ ಯೋಜನೆಯ ಏತನೀರಾವರಿ ನಾಲೆಗಾಗಿ ಭೂಸ್ವಾಧೀನಪಡಿಸಿಕೊಂಡಿದ್ದು ಸದರಿ ಜಮೀನುಗಳನ್ನು ಅಧಿಕೃತವಾಗಿ ವಶಪಡಿಸಿಕೊಂಡು ಈ ಅಧಿಸೂಚನೆ ಹೊರಡಿಸಲಾಗಿದೆ.

ಅನುಸೂಚಿ

ಜಿಲ್ಲೆ: ರಾಮನಗರ — **ತಾಲ್ಲೂಕು: ಕನಕಪುರ**

ಹೋಬಳಿ: ಉಯ್ಯಂಬಳ್ಳಿ — **ಗ್ರಾಮ: ಮಹಿಮನಹಳ್ಳಿ**

ಕ್ರ ಸಂ.	ಸರ್ವೆ ನಂಬರ್	ತರಹೆ	ವಿಸ್ತೀರ್ಣ ಎ.ಗುಂ.	ಭೂಸ್ವಾಧೀನಪಡಿಸಿಕೊಂಡ ದಿನಾಂಕ
1	2	3	4	5
1.	3/4	ಖುಷ್ಕಿ	0–15	19–06–10
2.	171/1	ಖುಷ್ಕಿ	0–16	19–06–10
3.	171/5	ಖುಷ್ಕಿ	0–07	19–06–10

ಡಿ. ಪಿ. ವೆಂಕಟೇಶ ಕ.ಆ.ಸೇ.,
ವಿಶೇಷ ಭೂಸ್ವಾಧೀನಾಧಿಕಾರಿಗಳು,
ರಾಮನಗರ ಜಿಲ್ಲೆ, ರಾಮನಗರ.

ಪಿ.ಆರ್.330

VI-F-1 B/B

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:36/11-12, ದಿನಾಂಕ: 03.09.2011

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಮಾರತ್‌ಹಳ್ಳಿ ಗ್ರಾಮದ ಮಂಜುನಾಥನಗರ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 567 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು, ಘೋಷಿಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ನಿರ್ಮೂಲನೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಮಾರತ್‌ಹಳ್ಳಿ ಗ್ರಾಮದ ಮಂಜುನಾಥನಗರ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ ಸಂ.	ಕೊಳಚೆ ನಿರ್ಮೂಲನೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ನಿರ್ಮೂಲನೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಮಾರತ್‌ಹಳ್ಳಿ ಮಂಜುನಾಥನಗರ	ಹೆಚ್.ಎ.ಎಲ್.	40	4-06	ಸ.ನಂ.39	ಓಣಿ ರಸ್ತೆ	ರಸ್ತೆ	ರಸ್ತೆ & ಸ.ನಂ.41
			41	0-16	ಸ.ನಂ.40ರ ಜಮೀನು	ರಸ್ತೆ, ಓಣಿ	ರಸ್ತೆ	ಸ.ನಂ.41ರ ಜಮೀನು
			ಒಟ್ಟು	5-00				

ಪಿ.ಆರ್. 384

ಎಂ.ಕೆ. ಅಯ್ಯಪ್ಪ
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:30/11-12, ದಿನಾಂಕ: 05.09.2011

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಬಿಳಿಶಿವಾಲೆ ಗ್ರಾಮದ ಬಿಳಿಶಿವಾಲೆ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 36 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು, ಘೋಷಿಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ನಿರ್ಮೂಲನೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಬಿಳಿಶಿವಾಲೆ ಗ್ರಾಮದ, ಬಿಳಿಶಿವಾಲೆ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ ಸಂ.	ಕೊಳಚೆ ನಿರ್ಮೂಲನೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ನಿರ್ಮೂಲನೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಬಿಳಿಶಿವಾಲೆ	ಸರ್ಕಾರಿ ಗೋಮಾಳ	9	1-00	ಕ್ಯಾಲಸನಹಳ್ಳಿ	ಕೊತ್ತನೂರು	ಕಣ್ಣೂರು	ಬೈರತಿ ಅಮಾನಿಖಾನೆ
			ಒಟ್ಟು	1-00				

ಎಂ.ಕೆ. ಅಯ್ಯಪ್ಪ
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪಿ.ಆರ್. 385

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:41/11-12, ದಿನಾಂಕ: 03.09.2011

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಹರಳೂರು ಗ್ರಾಮದ ಹರಳೂರು ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 42 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು, ಘೋಷಿಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆ ನಿರ್ಮೂಲನೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷೆನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ನಿರ್ಮೂಲನೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಹರಳೂರು ಗ್ರಾಮದ, ಹರಳೂರು ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ. ಸಂ.	ಕೊಳಚೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಹರಳೂರು	ಗ್ರಾಮಠಾಣ	ಗ್ರಾಮಠಾಣ	2-25	ಖಾಸಗಿ ಸ್ವತ್ತು	ಅಂಗನವಾಡಿ ಕೇಂದ್ರ ಮತ್ತು ರಸ್ತೆ	ಖಾಸಗಿ ಸ್ವತ್ತು	ರಸ್ತೆ
			ಒಟ್ಟು	2-25				

ಎಂ.ಕೆ. ಅಯ್ಯಪ್ಪ
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪಿ.ಆರ್. 386

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಪ್ರಿಲಿಮಿನರಿ ಅಧಿಸೂಚನೆ

ಸಂ.ಕೆ.ಎಸ್.ಎ.:ಸಿಆರ್:27/11-12, ದಿನಾಂಕ: 03.09.2011

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಮುನ್ನೇಕೊಳಲು ಗ್ರಾಮದ ಮುನ್ನೇಕೊಳಲು ಗಾಂಧಿನಗರ ವೆಂಕಟಪ್ಪ ಕಾಲೋನಿ ಕೊಳಚೆ ಪ್ರದೇಶದ ಈ ಕೆಳಕಂಡ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶದಲ್ಲಿ 83 ಕುಟುಂಬಗಳು ವಾಸವಾಗಿದ್ದು, ಈ ಪ್ರದೇಶದಲ್ಲಿ ಹಿಂದಿನ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸ್ವಲ್ಪಮಟ್ಟಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದ್ದರೂ ಸಹಾ ಈಗಲೂ ಇದು ಕೊಳಚೆ ಪ್ರದೇಶದ ಗುಣಲಕ್ಷಣಗಳನ್ನು ಹೊಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ದಿನಾಂಕ:16.01.2007 ರಿಂದ ಅಸ್ತಿತ್ವಕ್ಕೆ ಬಂದಿರುವ ಹಿನ್ನಲೆಯಲ್ಲಿ ಸದರಿ ಕೊಳಚೆ ಪ್ರದೇಶದಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಸರ್ಕಾರ ತೀರ್ಮಾನಿಸಿರುವುದರಿಂದ, ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್ 3 ರಡಿಯಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶವೆಂದು ಘೋಷಿಸಲು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಇವರಿಂದ ವರದಿ ಸಲ್ಲಿಸಲ್ಪಟ್ಟಿರುತ್ತದೆ. ಈ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷನ್ 3 ರಡಿ ಕೊಳಚೆನಿರ್ಮೂಲನೆ ಪ್ರದೇಶವೆಂದು, ಘೋಷಿಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಏತನ್ಮಧ್ಯೆ ಸರ್ಕಾರದ ಸುತ್ತೋಲೆ ಸಂ.71 ಕೊಮಂಇ 2009, ದಿನಾಂಕ:24.02.2010ರಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಕಲಂ 3 ಮತ್ತು 11ರಡಿಯಲ್ಲಿ ಜಿಲ್ಲಾಧಿಕಾರಿಗಳು, ಕೊಳಚೆ ಪ್ರದೇಶಗಳನ್ನು ಕೊಳಚೆನಿರ್ಮೂಲನೆ ಪ್ರದೇಶಗಳೆಂದು ಘೋಷಿಸಿ ಅಧಿಸೂಚನೆ ಹೊರಡಿಸುವ ಮುನ್ನ ವಸತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಯವರ ಅನುಮೋದನೆ ಪಡೆಯತಕ್ಕದ್ದೆಂದು ಸೂಚನೆಯಿದ್ದು, ಆ ಪ್ರಕಾರವಾಗಿ ಕೊಳಚೆನಿರ್ಮೂಲನೆ ಪ್ರದೇಶಗಳೆಂದು ಘೋಷಣೆ ಮಾಡಬೇಕಾದ ಪ್ರಸ್ತಾವನೆಗಳನ್ನು ಈ ಕಛೇರಿಯಿಂದ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ತದನಂತರದಲ್ಲಿ ಸರ್ಕಾರದ ಪತ್ರ ಸಂ.ವಇ 71 ಕೊಮಂಇ 2009, ದಿನಾಂಕ:12.07.2010ರ ಪತ್ರದಲ್ಲಿ ಕೊಳಚೆ ನಿರ್ಮೂಲನೆ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬದಲು ದಿನಾಂಕ:02.07.2010ರಲ್ಲಿನ ಸೂಚನೆಯಂತೆ ಮತ್ತು ಹಾಲಿ ಅಸ್ತಿತ್ವದಲ್ಲಿರುವ ನಿಯಮಗಳಡಿಯ ಕಾರ್ಯವಿಧಾನವನ್ನನುಸರಿಸಿದಂತೆ ಕ್ರಮವಹಿಸಿ, ಅಧಿಸೂಚನೆ ಸಂಖ್ಯೆ: ವಇ 73 ಕೊಮಂಇ 2001, ದಿನಾಂಕ:26.06.2002ರಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತ ಮಾಡಲಾಗಿರುವ ಅಧಿಕಾರ ವ್ಯಾಪ್ತಿಯಲ್ಲಿ ಘೋಷಣೆಗೆ ಕ್ರಮವಹಿಸುವುದು ಎಂದು ಸರ್ಕಾರವು ನಿರ್ದೇಶನ ನೀಡಿ ಪ್ರಸ್ತಾವನೆಗಳನ್ನು ಹಿಂದಿರುಗಿಸಲ್ಪಟ್ಟಿರುತ್ತದೆ ಮತ್ತು ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಅವರಿಗೆ ಹಿಂದಿನಂತೆ ತಮ್ಮ ಕಛೇರಿಯ ಹಂತದಲ್ಲಿಯೇ ಕೊಳಚೆ ಪ್ರದೇಶಗಳ ಘೋಷಣೆಯನ್ನು ಮಾಡಲು ನಿರ್ದೇಶನ ನೀಡಿರುತ್ತದೆ.

ಆದ್ದರಿಂದ ಈ ಕೆಳ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಪ್ರದೇಶವನ್ನು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನಾ) ಕಾಯ್ದೆ 1973ರ ಸೆಕ್ಷೆನ್ 3ರಡಿ ಜಿಲ್ಲಾಧಿಕಾರಿಗಳಿಗೆ ದತ್ತವಾಗಿರುವ ಅಧಿಕಾರದಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ರವರು 'ಕೊಳಚೆ ನಿರ್ಮೂಲನೆ ಪ್ರದೇಶ' ವೆಂದು ಘೋಷಿಸಲು ಉದ್ದೇಶಿಸಿರುತ್ತಾರೆ.

ಮೇಲ್ಕಂಡ ಈ ಕ್ರಮದ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿಪುರ, ಬೆಂಗಳೂರು-20 ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ (15) ಹದಿನೈದು ದಿವಸಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಷೆಡ್ಯೂಲ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವ್ಯಾಪ್ತಿಯಲ್ಲಿ ಬರುವ ಮುನ್ನೇಕೊಳಲು ಗ್ರಾಮದ. ಮುನ್ನೇಕೊಳಲು ಗಾಂಧಿನಗರ ವೆಂಕಟಪ್ಪ ಕಾಲೋನಿ ಕೊಳಚೆ ಪ್ರದೇಶದ ಚಕ್ಕುಬಂದಿ ಮತ್ತು ಹದ್ದುಬಸ್ತು ತಃಖ್ತೆ.

ಕ್ರ ಸಂ.	ಕೊಳಚೆ ನಿರ್ಮೂಲನೆ ಪ್ರದೇಶದ ಹೆಸರು ಮತ್ತು ಸ್ಥಳ	ಕೊಳಚೆ ನಿರ್ಮೂಲನೆ ಪ್ರದೇಶದಲ್ಲಿರುವ ಜಮೀನಿನ ಮಾಲೀಕರ ಹೆಸರು	ಸರ್ವೆ ನಂ.	ವಿಸ್ತೀರ್ಣ ಎ.ಗುಂ.	ಚೆಕ್ಕುಬಂದಿಗಳು			
					ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
1	2	3	4	5	6	7	8	9
1.	ಮುನ್ನೇಕೊಳಲು ಗಾಂಧಿನಗರ ವೆಂಕಟಪ್ಪ ಕಾಲೋನಿ	ಸರ್ಕಾರಿ ಗೋಮಾಳ	98	1-20	ರಸ್ತೆ	ರಸ್ತೆ	ಖಾಸಗಿ ಸ್ವತ್ತು	ಸರ್ಕಾರಿ ಮೋರಿ
			29	1-20				
			ಒಟ್ಟು	3-00				

ಎಂ.ಕೆ. ಅಯ್ಯಪ್ಪ
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪಿ.ಆರ್. 387

ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆರವರ ಕಾರ್ಯಾಲಯ.

ಭೂ ಅರ್ಜನೆ ತುರ್ತು ಅಧಿನಿಯಮದ 17(1)(4) ಮತ್ತು 4(1) ನೇ ಪ್ರಕರಣದ ಮೇರೆಗಿನ ಅಧಿಸೂಚನೆ.

ಪ್ರಕರಣ ಸಂಖ್ಯೆ: ಎಲ್.ಎ.ಕ್ಯೂ/ವಿವ/44/11–12 ದಿನಾಂಕ:04.10.2011

ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಭೂಮಿಗಳು ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ, ಜಗಳೂರಿನಲ್ಲಿ ನ್ಯಾಯಾಲಯದ ಕಟ್ಟಡ ಹಾಗೂ ನ್ಯಾಯಾಧೀಶರ ವಸತಿ ಗೃಹ ನಿರ್ಮಿಸುವ ಉದ್ದೇಶಕ್ಕಾಗಿ ಭೂ ಸ್ವಾಧೀನ ಅಗತ್ಯವಾಗಿದೆಯೆಂದು ಕರ್ನಾಟಕ ಸರ್ಕಾರಕ್ಕೆ ಕಂಡುಬಂದಿರುವುದರಿಂದ,

ಕರ್ನಾಟಕ ಅಧಿನಿಯಮದ 1961 ರ 33 ರ ಮೂಲಕ ತಿದ್ದುಪಡಿಯಾದ ಭೂ ಅರ್ಜನೆ ನಿಯಮ, 1894 (ಕೇಂದ್ರ ಅಧಿನಿಯಮ ಸಂಖ್ಯೆ: 1894) ಪ್ರಕರಣದ (1) ನೇ ಉಪ ಪ್ರಕರಣದ ಅನುಬಂಧಗಳ ಅನುಸಾರವಾಗಿ ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಆ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ. ಹಾಗೂ ಕರ್ನಾಟಕ ಸರ್ಕಾರವು ಆ ಅಧಿನಿಯಮ 4(2) ರ ಪ್ರಕರಣದ ಮೂಲಕ ದತ್ತವಾದ ಅಧಿಕಾರಗಳನ್ನು ಚಲಾಯಿಸಲು ಉಪ ವಿಭಾಗಾಧಿಕಾರಿಗಳು ಹಾಗೂ ಭೂ ಸ್ವಾಧೀನಾಧಿಕಾರಿಗಳು, ಹರಪನಹಳ್ಳಿ ಉಪ ವಿಭಾಗ, ಹರಪನಹಳ್ಳಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡುತ್ತದೆ.

ಭೂ ಸ್ವಾಧೀನ ಕಾಯ್ದೆಯ ಪ್ರಕರಣದ 17 ಉಪ ಪ್ರಕರಣ (1)(4) ರಲ್ಲಿ ವಿಧಿವತ್ತಾಗಿರುವ ಅಧಿಕಾರದ ಪ್ರಕಾರ ಕರ್ನಾಟಕ ಸರ್ಕಾರದಿಂದ ತುರ್ತು ಶಾಸನ ರೀತ್ಯಾ 5(ಎ) ರ ಕಟ್ಟುಪಾಡು ಅನ್ವಯಿಸುವುದಿಲ್ಲವೆಂದು ಸರ್ಕಾರದ ಆದೇಶ ಸಂಖ್ಯೆ: ಕಂ.ಇ.119/ಭೂ.ಸ್ವಾಜ/2011 ದಿನಾಂಕ 26.9.2011 ರಲ್ಲಿ ಅನುಮತಿಯನ್ನು ಪಡೆಯಲಾಗಿದೆ.

ಸದರಿ ಅರ್ಜನೆ ಉದ್ದೇಶಕ್ಕಾಗಿ ಸದರಿ ಜಮೀನುಗಳ ಮೇಲೆ ನಿಯೋಜಿತವಾದ ಯಾವುದೇ ಮೋಜಣಿದಾರ ಅಥವಾ ಇತರೆ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯಗಳಲ್ಲಿ ಹಸ್ತಕ್ಷೇಪ ಮಾಡಬಾರದೆಂದು, ಸದರಿ ಭೂಮಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದಿಂದ ದಾವಣಗೆರೆ ಜಿಲ್ಲಾಧಿಕಾರಿಯವರ ಅನುಮತಿಯಿಲ್ಲದೇ, ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿ ಮೂಲಕ ಸದರಿ ಭೂಮಿಗಳ ವಿಲೇಗಾಗಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಅರ್ಜನೆ ಮಾಡಿಕೊಳ್ಳಲಾಗುವುದು. ಸದರಿ ಭೂಮಿಗಳ ಅಂತಹ ಭಾಗಗಳಿಗೆ ಪರಿಹಾರಕ್ಕಾಗಿ ನಿರ್ಧರಣೆ ಮಾಡುವ ಅಧಿಕಾರಿಯು ಸದರಿ ಅಧಿನಿಯಮದ (7ನೇ ಖಂಡದ) (2)ನೆಯ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ಉಪ ವಿಭಾಗಾಧಿಕಾರಿಗಳು, ಹರಪನಹಳ್ಳಿ ಉಪ ವಿಭಾಗ, ಹರಪನಹಳ್ಳಿ ಇವರ ಕಛೇರಿಯಲ್ಲಿ ಭೂಮಿಗಳ ಸ್ಥೂಲ ನಕಾಶೆಯನ್ನು ಪರಿಶೀಲನೆಗಾಗಿ ಇಡಲಾಗಿದೆ.

ಅನುಸೂಚಿ

ಜಿಲ್ಲೆ: ದಾವಣಗೆರೆ. **ತಾಲ್ಲೂಕು: ಜಗಳೂರು.** **ಹೋಬಳಿ: ಕಸಬಾ** **ಗ್ರಾಮ: ಜಗಳೂರು.**

ಕ್ರ ಸಂ.	ಖಾತೆದಾರರ–ಅನುಭವದಾರರ – ಹಿತಾಸಕ್ತಿ ಹೊಂದಿರುವವರ ಹೆಸರು	ತರಹೆ	ಸರ್ವೆ ನಂ	ಚೆಕ್ಕು ಬಂದಿ				ಅಗತ್ಯವಾದ ಅಂದಾಜು ವಿಸ್ತೀರ್ಣ ಎ. ಗುಂ.	ಆಕಾರ ರೂ. ಪೈ.
				ಪೂರ್ವ ಸ.ನಂ	ಪಶ್ಚಿಮ ಸ.ನಂ	ಉತ್ತರ ಸ.ನಂ	ದಕ್ಷಿಣ ಸ.ನಂ		
1	2	3	4	5	6	7	8	9	10
1	ಜ್ಯೋತಿ ಶ್ರೀಕಾಂತ್ ಕೋಂ ಮುತ್ಯಾಲ ಶ್ರೀಕಾಂತ್	ಖುಷ್ಕಿ	104/2	104/1&2	104/3	104/1	ಅಗ್ನಿಶಾಮಕ ಠಾಣೆ.	3–00	0.66
2	ಕೆ.ಎಂ.ಸರಸ್ವತಿಬಾಯಿ ಕೋಂ ಡಿ. ಮನೋಹರ್‌ರಾವ್	ಖುಷ್ಕಿ	102/8	104	102/8	104	ದಾವಣಗೆರೆ–ಜಗಳೂರು ಮುಖ್ಯರಸ್ತೆ	0–06	0.03
							ಒಟ್ಟು	3–06	

ಜಿಲ್ಲಾಧಿಕಾರಿಗಳು,
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್.414

ಕಂದಾಯ ಸಚಿವಾಲಯ, ಬೆಂಗಳೂರು

ಭೂಸ್ವಾಧೀನ ಅಧಿನಿಯಮದ 6(1)ನೇ ಪ್ರಕರಣದ ಮೇರೆಗೆ ಘೋಷಣೆ

ಕ್ರಮಾಂಕ:ಕಂಇ22 ಭೂಸ್ವಾತು 2011, ದಿನಾಂಕ:19.08.2011

ಇವರ ಅನುಸೂಚಿಯಲ್ಲಿ ನಿರ್ದಿಷ್ಟ ಪಡಿಸಿರುವ ಭೂಮಿಗಳು ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ ಹೇಮಾವತಿ ನಾಲೆಗಾಗಿ ಅಗತ್ಯವಾಗಿದ್ದವು ಎಂದು ತುಮಕೂರು ಜಿಲ್ಲೆಯ ಜಿಲ್ಲಾಧಿಕಾರಿಯವರು ಭೂಸ್ವಾಧೀನ ಕಾಯ್ದೆ 1894 ರ ಕಲಂ 4(1) ರ ಮೇರೆಗೆ ಅಧಿಸೂಚನೆ ಕ್ರಮಾಂಕಃ ಎಲ್‌ಎಕ್ಯೂ ಎಸ್‌ಆರ್:30/09-10, ದಿನಾಂಕ 22.10.2009 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾಗಿದ್ದುದರಿಂದ,

ಮತ್ತು ಕರ್ನಾಟಕ ಕಾಯ್ದೆ 33/1991 ರನ್ವಯ ತಿದ್ದುಪಡಿಯಾದ ಭೂ ಅರ್ಜನೆ ಅಧಿನಿಯಮ 1894 ರ (ಕೇಂದ್ರ ಅಧಿನಿಯಮ 1894) (1) 5ಎ ಪ್ರಕರಣದ (2) ನೇ ಉಪಪ್ರಕರಣದ ಮತ್ತು 6(1ಎ) ಪ್ರಕರಣದ ಮೇರೆಗೆ ಜಿಲ್ಲಾಧಿಕಾರಿಯವರು ನೀಡಿರುವ ವರದಿಯನ್ನು ಪರಿಶೀಲಿಸಿದ ನಂತರ ಮೇಲೆ ನಿರ್ದಿಷ್ಟ ಪಡಿಸಿದ ಉದ್ದೇಶಕ್ಕಾಗಿ ಸದರಿ ಭೂಮಿಗಳನ್ನು ಅರ್ಜನೆ ಮಾಡಿಕೊಳ್ಳುವ ಆಗತ್ಯವಿದೆ ಎಂದು ಕರ್ನಾಟಕ ಸರ್ಕಾರಕ್ಕೆ ಮನವರಿಕೆಯಾಗಿರುವುದರಿಂದ ಮೇಲೆ ತಿಳಿಸಿದ ಉದ್ದೇಶಕ್ಕಾಗಿ ಭೂಮಿಗಳು ಅಗತ್ಯವಾಗಿವೆ ಎಂದು ಸದರಿ ಅಧಿನಿಯಮ 6(1) ನೇ ಪ್ರಕರಣದ ಮೇರೆಗೆ ಈ ಮೂಲಕ ಘೋಷಿಸಲಾಗಿದೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಹೇಮಾವತಿ ನಾಲಾ ವಲಯ, ತುಮಕೂರು ಇವರನ್ನು ಸದರಿ ಭೂಮಿಗಳಿಗೆ ಸಂಬಂಧಿಸಿದಂತೆ ಇನ್ನು ಮುಂದೆ ಕೈಗೊಳ್ಳುವ ಎಲ್ಲಾ ವ್ಯವಹಾರಗಳ ಕುರಿತಂತೆ ಜಿಲ್ಲಾಧಿಕಾರಿಯವರ ಪ್ರಕಾರ್ಯಗಳನ್ನು ನಿರ್ವಹಿಸುವ ಸಲುವಾಗಿ ಸದರಿ ಭೂ ಅರ್ಜನೆ ಅಧಿನಿಯಮದ 3ನೇ ಪ್ರಕರಣದ (ಸಿ) ಖಂಡದ ಮೇರೆಗೆ ಈ ಮೂಲಕ ನೇಮಕ ಮಾಡಲಾಗಿದೆ ಹಾಗೂ ಸದರಿ ಭೂಮಿಯ ಅರ್ಜನೆಗೆ ಸಂಬಂಧಿಸಿದ ಆದೇಶವನ್ನು ಪಡೆದುಕೊಳ್ಳಲು ಸದರಿ ಅಧಿನಿಯಮದ 7ನೇ ಪ್ರಕರಣದ ಮೇರೆಗೆ ನಿರ್ದೇಶನ ನೀಡಲಾಗಿದೆ.

ಸದರಿ ಭೂಮಿಗಳ ನಕಾಶೆಯನ್ನು ಪರಿವೀಕ್ಷಣೆಗಾಗಿ ವಿಶೇಷ ಭೂಸ್ವಾಧೀನಾಧಿಕಾರಿಗಳು, ಹೇಮಾವತಿ ನಾಲಾ ವಲಯ, ತುಮಕೂರು ಇವರ ಕಛೇರಿಯಲ್ಲಿ ಇಡಲಾಗಿದೆ.

ಅನುಸೂಚಿ

ಜಿಲ್ಲೆ : ತುಮಕೂರು — ತಾಲ್ಲೂಕು : ಗುಬ್ಬಿ — ಹೋಬಳಿ : ಸಿ.ಎಸ್.ಪುರ. — ಗ್ರಾಮ : ಹುಲ್ಲೇಕೆರೆ,

